ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 307, ಪುಟಗಳು: 8, ಬುಧವಾರ, 14 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


ವೇಣು ಸಾರಥ್ಯದಲ್ಲಿ...

**ಸುಭಾಷಿತ**

ನಾಲಿಗೆಯು ಹರಿತವಾದ ಚಾಕು ಇದ್ದಂತೆ.. ರಕ್ತವನ್ನು ಹರಿಸದೇ ಕೊಲ್ಲಬಲ್ಲದು.
। ಗೌತಮ ಬುದ್ಧ

**ಪಂಚಾಂಗ**

(ಬುಧವಾರ 14, ಆಗಸ್ಟ್-2024)
- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ, ಶುಕ್ಲ ಪಕ್ಷ,
- ವಾರ : ಬುಧವಾರ, ತಿಥಿ: ನವಮಿ
- ನಕ್ಷತ್ರ : ಅನುರಾಧ
- ರಾಹುಕಾಲ: 12.27 ರಿಂದ 2.01
- ಗುಳಿಕಕಾಲ: 10.53 ರಿಂದ 12.27
- ಯಮಗಂಡಕಾಲ: 7.45 ರಿಂದ 9.19

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

## ಸಂಕ್ಷಿಪ್ತ ಸುದ್ದಿ

### ಅಯೋಧ್ಯೆಯ ರಾಮಪಥ, ಭಕ್ತಿಪಥದಲ್ಲಿ 50 ಲಕ್ಷ ಮೌಲ್ಯದ ದೀಪಗಳ ಕಳ್ಳತನ



**ಲಕ್ನೋ:** ಅಯೋಧ್ಯೆಯ ರಾಮಮಂದಿರದ ಪ್ರಮುಖ ಮಾರ್ಗಗಳಾದ ಭಕ್ತಿಪಥ ಮತ್ತು ರಾಮಪಥದಲ್ಲಿ 50 ಲಕ್ಷ ಮೌಲ್ಯದ ದೀಪಗಳನ್ನು ಕಳ್ಳತನ ಮಾಡಲಾಗಿದೆ. ಸುಮಾರು 3,800 ಬಿದಿರಿನ ದೀಪಗಳು ಮತ್ತು 36 ಗೋಬೋ ಪ್ರೊಜೆಕ್ಟರ್‌ಗಳು ಕಾಣೆಯಾಗಿವೆ.

ಖಾಸಗಿ ಸಂಸ್ಥೆಗಳಾದ ಯಶ್ ಎಂಟರ್‌ಪ್ರೈಸಸ್ ಮತ್ತು ಕೃಷ್ಣಾ ಆಟೋಮೊಬೈಲ್ಸ್ ರಾಮಪಥದಲ್ಲಿ 6,400 ಬಿದಿರಿನ ದೀಪಗಳು ಮತ್ತು ಭಕ್ತಿಪಥದಲ್ಲಿ 96 ಗೋಬೋ ಪ್ರೊಜೆಕ್ಟರ್ ದೀಪಗಳನ್ನು ಅಳವಡಿಸಿವೆ. ಭಕ್ತಿಪಥವು ಅಯೋಧ್ಯೆಯ ರಾಮಮಂದಿರಕ್ಕೆ ಹೋಗುವ ಮುಖ್ಯ ರಸ್ತೆಯಾಗಿದ್ದು, ಶೃಂಗಾರ್ ಘಾಟ್ ಅನ್ನು ಹನುಮಾನ್ ಗರ್ಹಿ ಮತ್ತು ಅಂತಿಮವಾಗಿ ದೇವಸ್ಥಾನಕ್ಕೆ ಸಂಪರ್ಕಿಸುತ್ತದೆ. ಅಯೋಧ್ಯೆಯ ಮತ್ತೊಂದು ಪ್ರಮುಖ ಮಾರ್ಗವಾದ ರಾಮಪಥ, ಪುಟ 2

### 4 ದಿನದ ಅವಳಿ ಶಿಶುಗಳ ಜನನ ಪ್ರಮಾಣಪತ್ರ ಮಾಡಿಸಲು ಹೋದಾಗ ಬಾಂಬ್ ಸ್ಫೋಟ



**ಗಾಜಾ:** ನಾಲ್ಕು ದಿನದ ಅವಳಿ ಶಿಶುಗಳ ಜನನ ಪ್ರಮಾಣಪತ್ರ ಮಾಡಿಸುತ್ತಿದ್ದಾಗ ಬಾಂಬ್ ಸ್ಫೋಟಗೊಂಡು ಇಬ್ಬರು ಮಕ್ಕಳು ಸಾವನ್ನಪ್ಪಿರುವ ಹೃದಯ ವಿದ್ರಾವಕ ಘಟನೆ ಗಾಜಾದಲ್ಲಿ ನಡೆದಿದೆ. ಇಬ್ಬರು ಮಕ್ಕಳ ಜನನವನ್ನು ನೋಂದಾಯಿಸಲು ಅವರು ಸರ್ಕಾರಿ ಕಚೇರಿಗೆ ತೆರಳಿದ್ದರು, ಅಲ್ಲಿ ಇಸ್ರೇಲ್ ವೈಮಾನಿಕ ದಾಳಿ ನಡೆಸಿದ್ದು, ಮೊಹಮ್ಮದ್ ಅಬು ಅಲ್ ಕುಮ್ಸನ್ ಅವರ ಎರಡು ಶಿಶುಗಳು, ಪತ್ನಿ, ಅತ್ತೆ, ಮಗ ಅಸ್ರ್, ಮಗಳು ಐಸಲ್ ಕೂಡ ಮೃತಪಟ್ಟಿದ್ದಾರೆ. ಪುಟ 2

## ಪ್ರಧಾನಿ ನರೇಂದ್ರ ಮೋದಿಗೆ ಟೀಕೆ
# ವ್ಯಕ್ತಿಗೆ ಹಿಗ್ಗಾಮುಗ್ಗಾ ಥಳಿತ

**ಬೆಂಗಳೂರು:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರನ್ನು ಅವಾಚ್ಯವಾಗಿ ಟೀಕಿಸಿದ ವ್ಯಕ್ತಿಯೊಬ್ಬನನ್ನು ಗುಂಪೊಂದು ಹಿಗ್ಗಾಮುಗ್ಗಾ ಥಳಿಸಿರುವ ಘಟನೆ ಬೆಂಗಳೂರಿನ ಮೆಜೆಸ್ಟಿಕ್ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ನಡೆದಿದೆ. ಈ ಘಟನೆಯ ವಿಡಿಯೋ ವೈರಲ್ ಆಗಿದೆ.

ಹದಿನೈದು ಜನರ ಗುಂಪು ಯುವಕನ ಮೇಲೆ ಹಲ್ಲೆ ನಡೆಸಿದೆ. ಯುವಕನೊಬ್ಬ ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸಿದ್ದಲ್ಲದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಾಡಿ ಹೊಗಳಿದ್ದ ಎನ್ನಲಾಗಿದೆ. ಈ ಯುವಕನ ಮೇಲೆ ರೊಚ್ಚಿಗೆದ್ದ ಗುಂಪು ಹಲ್ಲೆ ಮಾಡಿ ಮೋದಿ, ಮೋದಿ ಎಂದು ಕೂಗು ಎಂದು ಬಲವಂತ



ಮಾಡಿದೆ. ಆದರೆ ಯುವಕ ಇದಕ್ಕೆ ಒಪ್ಪದಿದ್ದಾಗ ಮತ್ತಷ್ಟು ಹಲ್ಲೆ ಮಾಡಿದೆ.

ಸುಮಾರು ಹದಿನೈದು ಜನರ ಯುವಕರ ಗುಂಪು ಯುವಕನ ಮೇಲೆ ಹಲ್ಲೆ ನಡೆಸಿದೆ. ಮಾತ್ರವಲ್ಲ, ನೀನು ಮೋದಿಗೆ ಬೈಯ್ಯುವ ಹಾಗಿಲ್ಲ, ನೀನು ಸಿದ್ದರಾಮಯ್ಯ ಫಾಲೋವರ್ ಆಗಿದ್ದರೆ ನಿಮ್ಮ ಮನೆಯಲ್ಲಿ ಇಟ್ಟುಕೊ ಎಂದು ಎಚ್ಚರಿಸಿದೆ. ಅಲ್ಲದೆ, ಮೋದಿ ಎಂದು ಹೆಸರು ಹೇಳು ಎಂದು ಹಲ್ಲೆ ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ವೈರಲ್ ಆಗುತ್ತಿದೆ. ಈ ಗುಂಪು ಯುವಕನ ಮೇಲೆ ಹಲ್ಲೆ ನಡೆಸಿರುವ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಸದ್ಯ ಯುವಕನನ್ನು ಉಪ್ಪಾರಪೇಟೆ ಉಪ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಲಾಗಿದೆ. ಘಟನೆ ಸಂಬಂಧ ಇದುವರೆಗೆ ಯಾವುದೇ ಪ್ರಕರಣ ದಾಖಲಾಗಿಲ್ಲ. ಪುಟ 2

## ಆತ್ಮಾಹುತಿ ಬಾಂಬ್ ದಾಳಿ ಭೀತಿ
# ರಾಜಧಾನಿಯಲ್ಲಿ ಹೈ ಅಲರ್ಟ್

**ನವದೆಹಲಿ:** ಜಮ್ಮು ಕಾಶ್ಮೀರದಿಂದ ಕಾರ್ಯಾನಿರ್ವಹಿಸುತ್ತಿರುವ ಎರಡು ಭಯೋತ್ಪಾದಕ ಗುಂಪುಗಳು ಸ್ವಾತಂತ್ರ ದಿನಾಚರಣೆಯ ವೇಳೆ ದೇಶದಲ್ಲಿ ವಿಧ್ವಂಸಕ ಕೃತ್ಯ ನಡೆಸಲು ಸಂಚು ರೂಪಿಸಿರುವ ಬಗ್ಗೆ ಗುಪ್ತಚರ ಇಲಾಖೆಗೆ ಮಾಹಿತಿ ಬಂದಿದ್ದು, ಈ ಹಿನ್ನೆಲೆಯಲ್ಲಿ ಸ್ವಾತಂತ್ರ ದಿನಾಚರಣೆಯ ಮುನ್ನಾದಿನ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಎಂದಿನಂತೆ ಇರುವ ಬಿಗಿ ಭದ್ರತೆಯನ್ನು ಇನ್ನಷ್ಟು ಹೆಚ್ಚಿಸಲಾಗಿದ್ದು, ತೀವ್ರ ಕಟ್ಟೆಚ್ಚರ ವಹಿಸಲಾಗಿದೆ. ಸ್ವಾತಂತ್ರ ದಿನಾಚರಣೆಯ ಸಂದರ್ಭದಲ್ಲಿ ದೆಹಲಿ ಅಥವಾ ಪಂಜಾಬ್‌ನಲ್ಲಿ ಆತ್ಮಾಹುತಿ ದಾಳಿ ನಡೆಸುವ ಸಾಧ್ಯತೆ ಇದೆ ಎಂಬ ಗುಪ್ತಚರ ಮಾಹಿತಿ ಬಂದ ಹಿನ್ನೆಲೆಯಲ್ಲಿ ಭದ್ರತೆಯನ್ನು ಮತ್ತಷ್ಟು ತೀವ್ರಗೊಳಿಸಲಾಗಿದೆ.

ಸ್ವಾತಂತ್ರ ದಿನಾಚರಣೆಯಂದು ಸಾಮಾನ್ಯವಾಗಿ ಭದ್ರತೆ ಎಂದೆಂದಿಗಿಂತಲೂ ಹೆಚ್ಚಾಗಿರುವುದರಿಂದ ಆ ದಿನದ



ಹಿಂದುಮುಂದಾಗಿ ದಾಳಿ ನಡೆಸುವ ಬಗ್ಗೆ ಉಗ್ರರು ಸಂಚು ರೂಪಿಸಿದ್ದಾರೆ ಎಂದು ಉಗ್ರರ ನಡುವಿನ ಮಾತುಕತೆ ಆಧರಿಸಿ ಗುಪ್ತಚರ ಇಲಾಖೆ ವರದಿ ಮಾಡಿದೆ. ಪುಟ 2

## ಭಾರತ ವಿಭಜನೆಯ ಕರಾಳ ದಿನ, ಇದು ಜನರ ಧೈರ್ಯಕ್ಕೆ ಗೌರವ ಸಲ್ಲಿಸುವ ದಿನ
# ಕರಾಳ ದಿನ ನೆನೆದ ಮೋದಿ

**ನವದೆಹಲಿ:** ಭಾರತ ವಿಭಜನೆಯ ಕರಾಳ ದಿನವನ್ನು ನೆನೆದ ಪ್ರಧಾನಿ ಮೋದಿ ಜನರ ಧೈರ್ಯಕ್ಕೆ ಗೌರವ ಸಲ್ಲಿಸುವ ದಿನವಿದು ಎಂದು ಹೇಳಿದರು. ವಿಭಜನಾ ಕರಾಳ ದಿನದ ಸಂದರ್ಭದಲ್ಲಿ ನಾವು ವಿಭಜನೆಯ ಭೀಕರತೆಯಿಂದ ನೊಂದವರನ್ನು ಮತ್ತು ಸಾಕಷ್ಟು ನೋವನ್ನು ಅನುಭವಿಸಿದವರನ್ನು ಸ್ಮರಿಸುತ್ತಿದ್ದೇವೆ.

ವಿಭಜನೆಯಿಂದ ಬಾಧಿತರಾದ ಅನೇಕ ಜನರು ತಮ್ಮ ಜೀವನವನ್ನು ಪುನರಾರಂಭಿಸಿದ್ದಾರೆ. ಮತ್ತು ಇದು ನಮ್ಮ ದೇಶದಲ್ಲಿ ಏಕತೆ ಮತ್ತು ಭ್ರಾತೃತ್ವದ ಬಾಂಧವ್ಯವನ್ನು ಯಾವಾಗಲೂ ರಕ್ಷಿಸುವ ನಮ್ಮ ಬದ್ಧತೆಯನ್ನು ಇದು ತೋರಿಸುತ್ತದೆ ಎಂದರು. ಇತಿಹಾಸವನ್ನು ನೆನಪಿಸಿಕೊಳ್ಳುವ ರಾಷ್ಟ್ರವು ತನ್ನ ಭವಿಷ್ಯವನ್ನು ನಿರ್ಮಿಸುವುದರೊಂದಿಗೆ ಪ್ರಬಲ ದೇಶವಾಗಿ ಹೊರಹೊಮ್ಮಬಹುದು ಎಂದು ಅಮಿತ್ ಶಾ ಹೇಳಿದ್ದಾರೆ.

1947 ರಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ವಿಭಜನೆಯಾದಾಗ ಈ ದಿನ ಅನೇಕ ಜನರು ಸಹಿಸಲಾಗದ ನೋವನ್ನು ಅನುಭವಿಸಿದರು. 15 ಮಿಲಿಯನ್ ಜನರು ತಮ್ಮ ಮನೆಗಳನ್ನು ಬಿಟ್ಟು ಪಲಾಯನ ಮಾಡಬೇಕಾಯಿತು. ಪಂಜಾಬ್, ಸಾಂಸ್ಕೃತಿಕ ವೈವಿಧ್ಯತೆಯಲ್ಲಿ ಸಮೃದ್ಧವಾಗಿರುವ ಪ್ರದೇಶವು ವಿಶೇಷವಾಗಿ ಕಷ್ಟಕರವಾಗಿತ್ತು, ಭೂಮಿ ಮತ್ತು ಸಂಪನ್ಮೂಲಗಳ ವಿಭಜನೆಯು ದುಃಖವನ್ನು ಉಲ್ಬಣಗೊಳಿಸಿತು. ಪುಟ 2



## ಚನ್ನಪಟ್ಟಣ ಉಪ ಚುನಾವಣೆ
# ಕುಮಾರಸ್ವಾಮಿ ನಿರ್ಧಾರದ ಮೇಲೆ ಯೋಗೇಶ್ವರ್ ಭವಿಷ್ಯ

**ನವದೆಹಲಿ:** ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರ ರಾಜೀನಾಮೆಯಿಂದ ತೆರವಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ಪರ್ಧಿಸಲು ಬಿಜೆಪಿ ಟಿಕೆಟ್‌ಗಾಗಿ ಸಿಪಿ ಯೋಗೇಶ್ವರ್ ಪಟ್ಟು ಹಿಡಿದಿದ್ದಾರೆ. ಈ ವಿಚಾರವಾಗಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ದೆಹಲಿಗೆ ತೆರಳಿದ್ದ ಅವರು ಇದೀಗ ಬೆಂಗಳೂರಿಗೆ ವಾಪಸಾಗಿದ್ದಾರೆ. ಈ ಮಧ್ಯೆ, ಕುಮಾರಸ್ವಾಮಿ ನಿರ್ಧಾರದ ಮೇಲೆ ಸಿಪಿ ಯೋಗೇಶ್ವರ್ ಭವಿಷ್ಯ ನಿಂತಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.



ಕುಮಾರಸ್ವಾಮಿ ಒಪ್ಪಿದ್ರೆ ಮಾತ್ರ ಯೋಗೇಶ್ವರ್ ಎನ್‌ಡಿಎಯಿಂದ ಸ್ಪರ್ಧೆ ಮಾಡಲಿದ್ದಾರೆ ಎಂದು ಬಿಜೆಪಿ ಮೂಲಗಳು ಹೇಳಿವೆ. ಈ ಮಧ್ಯೆ, ಬಿಜೆಪಿ ಚಿಹ್ನೆಯಿಂದಲೇ ಸ್ಪರ್ಧಿಸಲು ಯೋಗೇಶ್ವರ್ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.

ಜೆಡಿಎಸ್ ಚಿಹ್ನೆಯಲ್ಲಿ ಸ್ಪರ್ಧೆಗೆ ಧೈರ್ಯ ಮಾಡದ ಯೋಗೇಶ್ವರ್, ಟಿಕೆಟ್‌ಗಾಗಿ ದೆಹಲಿಯಲ್ಲಿ ಕಸರತ್ತು ನಡೆಸಿದ್ದಾರೆ. ಪುಟ 2

## ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿ ಸೌಮ್ಯ ರೆಡ್ಡಿ
# ನೇಮಕ

**ಬೆಂಗಳೂರು:** ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಸೌಮ್ಯ ರೆಡ್ಡಿ ಅರವನ್ನು ನೂತನ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯನ್ನಾಗಿ ಕಾಂಗ್ರೆಸ್ ಹೈಕಮಾಂಡ್ ನೇಮಕ ಮಾಡಿದೆ.



ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು ಸೌಮ್ಯ ರೆಡ್ಡಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಕರ್ನಾಟಕದ ಜೊತೆಗೆ ಚಂಢೀಗಡ ಮತ್ತು ಅರುಣಾಚಲ ಪ್ರದೇಶ ಮಹಿಳಾ ಅಧ್ಯಕ್ಷರನ್ನು ನೇಮಕ ಮಾಡಲಾಗಿದೆ. ಪುಟ 2

## ಪವಿತ್ರಾಗೌಡ ಚಪ್ಪಲಿಯಲ್ಲೂ
# ರಕ್ತದ ಕಲೆ ಪತ್ತೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿ ಪವಿತ್ರಾಗೌಡಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ನಟಿಯ ಚಪ್ಪಲಿಯಲ್ಲಿ ರೇಣುಕಾಸ್ವಾಮಿ ರಕ್ತದ ಕಲೆ ಪತ್ತೆಯಾಗಿದೆ.



ಪವಿತ್ರಾಗೌಡ ಮನೆಯಲ್ಲಿ ಕೊಲೆ ದಿನ ಆಕೆ ಧರಿಸಿದ್ದ ಚಪ್ಪಲಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಅದನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿತ್ತು. ಚಪ್ಪಲಿ ಮೇಲೆ ರೇಣುಕಾಸ್ವಾಮಿ ರಕ್ತದ ಕಲೆ ಇರುವುದು ಪತ್ತೆಯಾಗಿದೆ. ಪವಿತ್ರಾಗೌಡ ವಿರುದ್ಧ ಈ ಚಪ್ಪಲಿ ಪ್ರಬಲ ಸಾಕ್ಷಿಯಾಗಲಿದೆ. ಪಟ್ಟಣಗೆರೆ ಶೆಡ್‌ಗೆ ಹೋಗಿ ರೇಣುಕಾಸ್ವಾಮಿಗೆ ಚಪ್ಪಲಿಯಲ್ಲಿ ಹೊಡೆದಿದ್ದ ಆರೋಪ ನಟಿ ಮೇಲಿತ್ತು. ಈಗ ಅದೇ ಚಪ್ಪಲಿ ಮೇಲೆ ಕೊಲೆಯಾದ ವ್ಯಕ್ತಿಯ ರಕ್ತದ ಕಲೆ ಇರುವುದು ತಿಳಿದುಬಂದಿದೆ. ಪುಟ 2

## ವಾಲ್ಮೀಕಿ ನಿಗಮ ಹಗರಣ ಪ್ರಕರಣ
# ಎಸ್‌ಐಟಿಯಿಂದ ಚಾರ್ಜ್‌ಶೀಟ್

**ಬೆಂಗಳೂರು:** ವಾಲ್ಮೀಕಿ ನಿಗಮದ ಬಹುಕೋಟಿ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿರುವ ಎಸ್‌ಐಟಿ ದೋಷಾರೋಪ ಪಟ್ಟಿ ಸಿದ್ಧಪಡಿಸಿದೆ.

ಕೋಟಿ ಕೋಟಿ ಲೂಟಿ ಮಾಡಿದ ಗ್ಯಾಂಗ್‌ನಲ್ಲಿ ನಾಗೇಂದ್ರ ಮತ್ತು ಬಸನಗೌಡ ದದ್ದಲ್ ಜಾಗವಿಲ್ಲ. ದೋಷಾರೋಪ ಪಟ್ಟಿಯಲ್ಲಿ ಇಬ್ಬರ ಹೇಳಿಕೆಗಳನ್ನು ದಾಖಲಿಸಿಲ್ಲ. ಪ್ರಕರಣದಲ್ಲಿ ಈ 12 ಜನ ಆರೋಪಿಗಳು ಮತ್ಯಾರ ಮೇಲೂ ಅನುಮಾನ ಇಲ್ಲ ಎಂದಿದ್ದಾರೆಂದು ಉಲ್ಲೇಖಿಸಲಾಗಿದೆ.



ವಾಲ್ಮೀಕಿ ನಿಗಮದ ಹಣ ಕೊಳ್ಳೆ ಹೊಡೆಯಲು ಅಕ್ಟೋಬರ್ 2023ರಲ್ಲೇ ಪ್ಲಾನ್ ನಡೆದಿತ್ತು. ಮಾನ್ಯತಾ ಟೆಕ್ ಪಾರ್ಕ್ನ ಫ್ಲಾಟ್‌ನಲ್ಲಿ ಮೊದಲ ಡೀಲಿಂಗ್ ಆಗಿತ್ತು. 89 ಕೋಟಿ ಹೇಗೆಲ್ಲಾ ಹೊಡೆಯಬೇಕು, ನಕಲಿ ದಾಖಲಾತಿ ಸೃಷ್ಟಿಸಲು ಯೋಜನೆ ರೂಪಿಸಲಾಗಿತ್ತು. ನಾಗೇಂದ್ರ ಆಪ್ತ ನೆಕ್ಕುಂಟಿ ನಾಗಾರಾಜ್ ಬಳಸಿ ಹಣ ಹೊಡೆಯಲು ಚಿಂತನೆ ಮಾಡಲಾಗಿತ್ತು.

ವಾಲ್ಮೀಕಿ ನಿಗಮದ ಎಂಡಿ ಪದ್ಮನಾಭ್ ಪರಿಚಯ ಮಾಡಿಕೊಂಡ ಸತ್ಯನಾರಾಯಣ ವರ್ಮಾ, ಪರ್ಸಂಟೇಜ್ ಲೆಕ್ಕದಲ್ಲಿ ಕೋಟಿ ಕೋಟಿ ಹಣ ಕೊಡಿಸೋದಾಗಿ ವಂಚನೆ ಮಾಡಲಾಗಿದೆ. ಸಾಯಿತೇಜ ಶಿವಕುಮಾರ್ ವ್ಯಕ್ತಿಯನ್ನು ನಕಲಿ ಬ್ಯಾಂಕ್ ಸಿಬ್ಬಂದಿಯ ಹಾಗೇ ಬಿಂಬಿಸಲಾಗಿದೆ. ಪದ್ಮನಾಭ್, ಪರುಶರಾಮ್ ನಕಲಿ ಸಿಬ್ಬಂದಿಗೆ ಸಹಾಯ ಮಾಡಿದ್ದಾರೆ.

94.73 ಕೋಟಿ ಹಣವನ್ನು ಕೂಡ ಫಸ್ಟ್ ಫೈನಾನ್ಸ್ ಬ್ಯಾಂಕ್‌ಗೆ ವರ್ಗಾಯಿಸಲಾಗಿದೆ. ಫಸ್ಟ್ ಫಿನಾನ್ಸ್ ಬ್ಯಾಂಕ್‌ನಿಂದ 18 ನಕಲಿ ಕಂಪನಿ ಅಕೌಂಟ್‌ಗೆ ವರ್ಗಾವಣೆಯಾಗಿದೆ. ಆರೋಪಿಗಳು 94 ಕೋಟಿ ಹಣ ವರ್ಗಾವಣೆ ಮಾಡಿಕೊಂಡಿದ್ದರು ಎಂದು ತಿಳಿದುಬಂದಿದೆ.

## ಚಾರ್ಮಾಡಿ ಘಾಟಿಯಲ್ಲಿ ಬಾಯ್ತೆರೆದು ಕೂತಿವೆ ಬಂಡೆಕಲ್ಲು
# ವಾಹನ ಸವಾರರೇ ಎಚ್ಚರ

**ಚಿಕ್ಕಮಗಳೂರು:** ಜಿಲ್ಲೆಯ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟಿಯಲ್ಲಿ ಸಂಚಾರ ಮಾಡುವ ಸವಾರರು ಅತ್ಯಂತ ಎಚ್ಚರ ಹಾಗೂ ಜಾಗರೂಕರಾಗಿ ವಾಹನ ಚಾಲನೆ ಮಾಡಬೇಕಿದೆ. ಏಕೆಂದರೆ, ಚಾರ್ಮಾಡಿ ಘಾಟಿಯ ಅಣ್ಣಪ್ಪಸ್ವಾಮಿ ದೇಗುಲದಿಂದ ತುಸು ದೂರದಲ್ಲೇ 2 ಬೃಹತ್ ಬಂಡೆಗಳು ಅನಾಹುತಕ್ಕೆ ಬಾಯ್ತೆರೆದು ಕೂತಿವೆ.

ಬೃಹತ್ ಬಂಡೆಗಳ ಕೆಳಭಾಗದ ಮಣ್ಣು ಭಾರೀ ಮಳೆಗೆ ಕೊಚ್ಚಿ ಹೋಗಿದ್ದು ಎರಡು ಬಂಡೆಗಳು ಕೂದಲೆಳೆ ಅಂತರದಲ್ಲಿ ನಿಂತಂತಿದೆ. ಮತ್ತೆ ಮಳೆಯಾದರೇ ಅಥವಾ ಬಿರುಗಾಳಿಗೆ ಬಂಡೆಗಳು ಕುಸಿದು ಬೀಳುವ ಸಾಧ್ಯತೆ ಹೆಚ್ಚಿದೆ. ಒಂದು ವೇಳೆ ಆ ಕಿರಿದಾದ ರಸ್ತೆಯಲ್ಲಿ ಬಂಡೆಗಳು ಕುಸಿದು ಬಿದ್ದರೆ ಮತ್ತೊಂದು ಬದಿ ಪ್ರಪಾತವಿರುವುದರಿಂದ ರಸ್ತೆಯೇ ಕುಸಿಯುವ ಸಾಧ್ಯತೆ ಇದೆ ಎಂದು ಸಾರ್ವಜನಿಕರು ಆತಂಕಪಟ್ಟಿದ್ದಾರೆ.

ಒಂದು ವೇಳೆ ಟ್ರಾಫಿಕ್ ಜಾಮ್, ಸೆಲ್ಫಿ ಕ್ರೇಜ್, ಇನ್ನ್ಯಾವುದೋ ಕಾರಣಕ್ಕೆ ಟ್ರಾಫಿಕ್ ಜಾಮ್ ಆದ ಸಂದರ್ಭದಲ್ಲಿ ಕೆಳಗಡೆ ವಾಹನಗಳು ಇದ್ದರೇ ದೊಡ್ಡ ಅನಾಹುತವೇ ಸಂಭವಿಸುವ ಸಾಧ್ಯತೆಯೂ ಇದೆ. ಹಾಗಾಗಿ, ಈ ಮಾರ್ಗದಲ್ಲಿ ಸಂಚರಿಸುವ ವಾಹನ ಸವಾರರು ಅತ್ಯಂತ



ಎಚ್ಚರದಿಂದಿರುವಂತೆ ಅಲ್ಲಿನ ಸ್ಥಳೀಯರೇ ಮನವಿ ಮಾಡುತ್ತಿದ್ದಾರೆ.

ಅಲ್ಲದೇ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಅನಾಹುತ ಸಂಭವಿಸುವ ಮೊದಲೇ ಕಲ್ಲುಗಳನ್ನ ಸ್ಥಳಾಂತರಿಸಿದರೇ ಅಥವಾ ಕೆಳಗೆ ಇಳಿಸಿದ್ರೆ ಮುಂದಾಗುವ ಅನಾಹುತ ತಪ್ಪಿಸಬಹುದು ಎಂದು ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

# ತುಂಗಭದ್ರಾ ಡ್ಯಾಂ ಕ್ರಸ್ಟ್ ಗೇಟ್ ಅಳವಡಿಕೆಗೆ ಮಳೆ ಭೀತಿ

**ಕೊಪ್ಪಳ:** ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಅಳವಡಿಕೆಗೆ ಮಳೆ ಭೀತಿ ಎದುರಾಗಿದೆ. ಆಗಸ್ಟ್ 17ರಿಂದ ಜಲಾನಯನ, ಮಲೆನಾಡಿನಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ಕೊಟ್ಟಿದೆ.

ಮಳೆ ಬಂದರೆ ತುಂಗಭದ್ರಾ ಜಲಾಶಯಕ್ಕೆ ಮತ್ತೆ ಒಳಹರಿವು ಹೆಚ್ಚಳವಾಗಲಿದೆ. ತುಂಗಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದ ನೀರು ಹರಿದು ಬಂದರೆ ಗೇಟ್ ಅಳವಡಿಕೆ ಸವಾಲಿನ ಕೆಲಸ ಆಗಲಿದೆ. ಮಳೆ ಮುನ್ಸೂಚನೆಯಿಂದ ಟಿಬಿ ಡ್ಯಾಂ ಬೋರ್ಡ್ ಮತ್ತು ತಜ್ಞರು ಚಿಂತಿತರಾಗಿದ್ದಾರೆ. ಆ.16 ರ ಒಳಗೆ ಕೆಲಸ ಮುಗಿಸಲು ಪ್ಲಾನ್ ಮಾಡಲಾಗಿತ್ತು. ಎರಡು ದಿನಗಳಲ್ಲಿ ಕೆಲಸ ಪೂರ್ಣಗೊಳಿಸಲು ಶತಪ್ರಯತ್ನ ಮಾಡಲಾಗಿತ್ತು. ಈಗಾಗಲೇ ತುಂಗಭದ್ರಾ ಜಲಾಶಯದ 19 ನೇ ಕ್ರಸ್ಟ್ ಗೇಟ್ ಅಳವಡಿಕೆಗೆ ಸಿದ್ಧವಾಗಿದೆ. ಪುಟ 2



## ವರ್ಕ್ ಫ್ರಂ ಹೋಮ್ ನೀಡುವಂತೆ ಕಂಪನಿಗಳಿಗೆ ಪೊಲೀಸರ ಮನವಿ!
# ಮಳೆ ಮುನ್ಸೂಚನೆ

**ಬೆಂಗಳೂರು:** ಬೆಂಗಳೂರು ನಗರದಲ್ಲಿ ಭಾರಿ ಮಳೆಯ ಮುನ್ಸೂಚನೆ ಇರುವ ಕಾರಣ ಔಟರ್ ರಿಂಗ್ ರಸ್ತೆಯ ಕಂಪನಿಗಳು ಉದ್ಯೋಗಿಗಳಿಗೆ ವರ್ಕ್ ಫ್ರಂ ಹೋಂ (ಮನೆಯಿಂದಲೇ ಕೆಲಸ) ಅವಕಾಶ ನೀಡುವಂತೆ ಸಂಚಾರಿ ಪೊಲೀಸರು ಮನವಿ ಮಾಡಿದ್ದಾರೆ. ಮಳೆಯಿಂದ ಆಗಬಹುದಾದ ಅವಾಂತರ ತಪ್ಪಿಸುವುದಕ್ಕೆ ಪ್ರಯತ್ನಿಸಲಾಗುತ್ತಿದೆ. ಆ ನಿಟ್ಟಿನಲ್ಲಿ ಇಂದು ಸಿಬ್ಬಂದಿಗೆ ವರ್ಕ್ ಫ್ರಮ್ ಹೊಮ್ ನೀಡುವಂತೆ ಸಂಚಾರಿ ಜಂಟಿ ಆಯುಕ್ತ ಎಂಎನ್ ಅನುಚೇತ್ ಮನವಿ ಮಾಡಿದ್ದಾರೆ. ದೀರ್ಘ ವಾರಾಂತ್ಯದ ಜೊತೆಗೆ ನಿರೀಕ್ಷಿತ ಭಾರೀ ಮಳೆ ಸಾಧ್ಯತೆ ಇದೆ. ಹೀಗಾಗಿ ಆಗಸ್ಟ್ 14ರಂದು ಭಾರೀ ಸಂಚಾರ ದಟ್ಟಣೆಯನ್ನು ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದ್ದಾರೆ.



ಈ ಅಡೆತಡೆಗಳನ್ನು ಕಡಿಮೆ ಮಾಡಲು ಮತ್ತು ಅನಗತ್ಯ ವಿಳಂಬಗಳನ್ನು ತಪ್ಪಿಸಲು 14ರಂದು ತಮ್ಮ ಉದ್ಯೋಗಿಗಳಿಗೆ ಮನೆಯಿಂದ ಕೆಲಸ ಮಾಡಲು ಸೂಚಿಸಬೇಕು ಎಂದು ಅನುಚೇತ್ ಮನವಿ ಮಾಡಿದ್ದಾರೆ. ಹೀಗೆ ಮಾಡುವುದರಿಂದ ರಸ್ತೆಯಲ್ಲಿ ವಾಹನಗಳ ಸಂಖ್ಯೆ ಕಡಿಮೆಯಾಗುತ್ತದೆ. ಪ್ರಯಾಣಿಸಬೇಕಾದ ಎಲ್ಲರಿಗೂ ಸುಗಮ ಪ್ರಯಾಣವನ್ನು ಖಚಿತಪಡಿಸುತ್ತದೆ. ಪುಟ 2

## ಉಪ ಚುನಾವಣೆಯಲ್ಲಿ ನಿಖಿಲ್ ಸ್ಪರ್ಧಿಸಲ್ಲ

**ಮೈಸೂರು:** ಚನ್ನಪಟ್ಟಣ ಉಪ ಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸಲು ತಯಾರಿಲ್ಲ ಎಂದು ಮಾಜಿ ಸಚಿವ ಸಾರಾ ಮಹೇಶ್ ಹೇಳಿದ್ದಾರೆ.ಮೈಸೂರಿನಲ್ಲಿ ಅವರು ಮಾತನಾಡಿದ್ದಾರೆ. ಈ ವೇಳೆ, ನಾನು ಚುನಾವಣೆಗೆ ಸ್ಪರ್ಧೆ ಮಾಡಲ್ಲ ಎಂದು ನಿಖಿಲ್ ಸ್ಪಷ್ಟಪಡಿಸಿದ್ದಾರೆ. ದೇವೇಗೌಡರು, ಕುಮಾರಸ್ವಾಮಿ ಮತ್ತು ಅನಿತಾ ಕುಮಾರಸ್ವಾಮಿ ಅಭಿಪ್ರಾಯ ಕೂಡ ಇದೇ ಆಗಿದೆ ಎಂದು ತಿಳಿಸಿದ್ದಾರೆ. ನಿಖಿಲ್ ಮೇಲೆ ಚುನಾವಣೆಗೆ ಸ್ಪರ್ಧಿಸುವಂತೆ ಒತ್ತಡವಿದೆ. ಆದರೆ ಅವರು ಯಾವ ಒತ್ತಡಕ್ಕೂ ಮಣಿಯುವ ಸ್ಥಿತಿಯಲ್ಲಿ ಇಲ್ಲ ಎಂದು ತಿಳಿಸಿದ್ದಾರೆ. ಇನ್ನೂ ಚನ್ನಪಟ್ಟಣ ಉಪಚುನಾವಣೆಗೆ ಸ್ಪರ್ಧಿಸುವುದಾಗಿ ಸಿ.ಪಿ ಯೋಗೇಶ್ವರ್ ಘೋಷಿಸಿಕೊಂಡಿದ್ದಾರೆ. ಪಕ್ಷ ಟಿಕೆಟ್ ನೀಡದಿದ್ದಲ್ಲಿ ಸ್ವತಂತ್ರವಾಗಿ ಸ್ಪರ್ಧಿಸುವುದಾಗಿ ಅವರು ಹೇಳಿದ್ದಾರೆ. ಇದರ ಬೆನ್ನಲ್ಲೇ ಮೈತ್ರಿ ಪಕ್ಷಗಳಲ್ಲಿ ಚರ್ಚೆಗಳು ನಡೆದಿದ್ದವು. ಈ ವಿಚಾರ ಮೈಸೂರು ಚಲೋ ಪಾದಯಾತ್ರೆ ವೇಳೆ ಸಹ ಸುದ್ದಿ ಮಾಡಿತ್ತು. ಈ ವೇಳೆ ನಾವು ಟಿಕೆಟ್ ಹಂಚಿಕೆಗೆ ಸೇರಿಲ್ಲ ಎಂದು ಕುಮಾರಸ್ವಾಮಿಯವರು ಪ್ರತಿಕ್ರಿಯಿಸಿದ್ದರು.



## ಈಗ ನೀರು ಹರಿಸಿದ್ರೂ ಅಕ್ಟೋಬರ್ ವೇಳೆಗೆ ಡ್ಯಾಂ ತುಂಬುವ ಸಾಧ್ಯತೆಯಿದೆ

**ಕೊಪ್ಪಳ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ, 19ನೇ ಕ್ರಸ್ಟ್ ಗೇಟ್ ವೀಕ್ಷಣೆ ಮಾಡಿದರು. ಸಿಎಂ ಆಗಮನದ ಹಿನ್ನೆಲೆ ಜಲಾಶಯದ ಬಳಿ ಬಿಗಿ ಬಂದೋಬಸ್ತ್ ನಿಯೋಜಿಸಲಾಗಿತ್ತು. ಒಬ್ಬರು ಎಸ್ಪಿ, ಇಬ್ಬರು ಅಡಿಷನಲ್ ಎಸ್ಪಿ ಸೇರಿದಂತೆ 400ಕ್ಕೂ ಸಿಬ್ಬಂದಿಯನ್ನ ನಿಯೋಜಿಸಲಾಗಿತ್ತು. ಟಿಬಿ ಡ್ಯಾಂನ 19ನೇ ಕ್ರಸ್ಟ್‌ಗೇಟ್ ವೀಕ್ಷಣೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತುಂಗಭದ್ರಾ ಜಲಾಶಯ 1952-53ರಲ್ಲಿ ಪೂರ್ಣಗೊಂಡಿತ್ತು. ಆಗಿನಿಂದ ಏನೂ ತೊಂದರೆ ಆಗಿರಲಿಲ್ಲ. ಈಗ ತೊಂದರೆಯಾಗಿದೆ. 19ನೇ ಕ್ರಸ್ಟ್ ಗೇಟ್ ಚೈನ್ ಕಟ್ಟಾಗಿದ್ದರಿಂದ ಸಮಸ್ಯೆಯಾಗಿದೆ. ಈಗ ಗೇಟ್ ರಿಪೇರಿ ಮಾಡೋದಕ್ಕೆ ಸುಮಾರು 60 ಟಿಎಂಸಿನಷ್ಟು ನೀರನ್ನ ಹೊರಗೆ ಬಿಡಬೇಕು. ಆದ್ರೆ ಇನ್ನೂ ಅಕ್ಟೋಬರ್ ವರೆಗೆ ಮಳೆ ಇರೋದ್ರಿಂದ ಈಗ ಹೊರಗೆ ಹೋದಷ್ಟು ನೀರು ತುಂಬುವ ಸಾಧ್ಯತೆ ಇದೆ. ಈ ವಿಶ್ವಾಸವನ್ನು ನಾವೆಲ್ಲರೂ ಇಟ್ಟುಕೊಳ್ಳೋಣ ಎಂದು ನುಡಿದರು. ಈಗ ಕ್ರಸ್ಟ್ ಗೇಟ್ ರಿಪೇರಿ ಮಾಡಬೇಕು ಅಂದ್ರೆ, ನೀರು ಹೊರಕ್ಕೆ ಬಿಡಬೇಕು. ಇದರಿಂದ ರೈತರಿಗೆ ಮೊದಲ ಬೆಳೆಗೆ ಯಾವುದೇ ತೊಂದರೆ ಆಗಲ್ಲ. ಅಲ್ಲದೇ ಹವಾಮಾನ ಮುನ್ಸೂಚನೆ ಪ್ರಕಾರ ಅಕ್ಟೋಬರ್ ವರೆಗೆ ಮಳೆ ಇರುವುದರಿಂದ ಈಗ ಹರಿದಷ್ಟು ನೀರು ಡ್ಯಾಂಗೆ ತುಂಬುವ ಸಾಧ್ಯತೆಯಿದೆ. ನಮ್ಮದು ರೈತಪರ ಸರ್ಕಾರ, ರೈತರಿಗೆ ತೊಂದರೆಯಾಗೋದಕ್ಕೆ ಬಿಡಲ್ಲ ಅಂತ ಸಿಎಂ ಆಶ್ವಾಸನೆ ನೀಡಿದರು. ಇದೇ ವೇಳೆ ಬಿಜೆಪಿ ನಾಯಕರ ಟೀಕೆಗೆ ತಿರುಗೇಟು ನೀಡಿದ ಸಿಎಂ, ಜಲಾಶಯಗಳ ನಿರ್ವಹಣೆಗೆ ಒಂದು ಬೋರ್ಡ್ ಇದೆ. ಅದು ಕೇಂದ್ರದ ಸುಪರ್ದಿಗೆ ಬರುತ್ತೆ. ಈ ಬೋರ್ಡ್‌ನಲ್ಲಿ ತೆಲಂಗಾಣ, ಆಂಧ್ರ ಪ್ರದೇಶ ಹಾಗೂ ಕರ್ನಾಟಕದ ಅಧಿಕಾರಿಗಳು ಇದ್ದಾರೆ. ಆದ್ರೆ ಈ ವಿಚಾರದಲ್ಲಿ ನಾನು ರಾಜಕೀಯ ಮಾಡಲ್ಲ. ಯಾರ ಮೇಲೂ ತಪ್ಪು ಹೊರಿಸಲ್ಲ. ಸರಿಪಡಿಸುವ ಕೆಲಸ ಆಗುತ್ತೆ ಎಂದರು. ಮುಂದುವರಿದು, ಬಿಜೆಪಿಯವರು ರಾಜಕೀಯವಾಗಿ ಟೀಕೆ ಮಾಡ್ತಿದ್ದಾರೆ. ಕ್ರಸ್ಟ್ ಗೇಟ್ ಕಟ್ಟಾಗಿ ನೀರು ಹೊರಗೆ ಹೋಗ್ತಿದೆ. ಸರ್ಕಾರದ ಹೊಣೆಗೇಡಿತನ ಅಂದ್ರೆ ಏನರ್ಥ? ಬಿಜೆಪಿಯವರಿಗೆ ಗೂಬೆ ಕೂರಿಸುವುದೇ ಕಸುಬು, ನಾವು ರೈತರ ಪರವಾಗಿದ್ದೇವೆ. ರೈತರಿಗೆ ತೊಂದರೆ ಆಗದಂತೆ ನೋಡಿಕೊಳ್ತೇವೆ ಎಂದು ಭರವಸೆ ನೀಡಿದರು.

### ವಯಸ್ಸಾಗ್ತಿದೆ ಅಂತ ಆತುರಪಟ್ರೆ ಮಕ್ಮಲ್ ಟೋಪಿ

# 3 ವರ್ಷದಲ್ಲಿ 5 ಮದ್ವೆಯಾಗಿದ್ದ ಐನಾತಿ ಮಹಿಳೆ ಅರೆಸ್ಟ್



**ತುಮಕೂರು:** ಇದು ಮದುವೆ ಆಲೋಚನೆಯಲ್ಲಿರೋ ಅವಿವಾಹಿತರು ನೋಡಲೇಬೇಕಾದ ಸ್ಟೋರಿ. ಸಿಕ್ಕಿದ್ದೇ ಸೀರುಂಡೆ ಅಂತ ಕಣ್ಮುಚ್ಚಿಕೊಂಡು ಹೆಣ್ಣು ಒಪ್ಪಿಕೊಳ್ಳುವುದಕ್ಕೂ ಮುನ್ನ ಈ ಸ್ಟೋರಿಯನ್ನೊಮ್ಮೆ ನೋಡಿಬಿಡಿ. ವಯಸ್ಸು ಮೀರಿ ಹೋಗ್ತಿದೆ ಅಂತ ಆತುರಪಟ್ಟರೇ ಮಕ್ಮಲ್ ಟೋಪಿ ಗ್ಯಾರಂಟಿ. ಇದಕ್ಕೆ ತಾಜಾ ಉದಾಹರಣೆ ಅನ್ನೋದಕ್ಕೆ ತುಮಕೂರಿನಲ್ಲಿ ನಡೆದ ಘಟನೆಯೊಂದು ಸಾಕ್ಷಿಯಾಗಿದೆ. ಅಷ್ಟಕ್ಕೂ ಆ ಅಸಲಿ ಮದುವೆ.. ನಕಲಿ ಹೆಣ್ಣು.. ಪಾಪದ ಹುಡುಗನ ಕಹಾನಿ ಏನು ಅಂತೀರಾ? ಮುಂದೆ ಓದಿ?

ಹೌದು. ವಯಸ್ಸು ಮೀರಿದ ಯುವಕರನ್ನೇ ಟಾರ್ಗೆಟ್ ಮಾಡಿ ದೋಖಾ ಮಾಡ್ತಿದ್ದ ಗ್ಯಾಂಗ್ ಈಗ ಪೊಲೀಸರಿಗೆ ಅತಿಥಿಯಾಗಿದೆ. ಯುವಕರಿಗೆ ಮದುವೆ ಮಾಡಿಸುವುದಾಗಿ ಹೇಳಿ, ನಂತರ ಅವರಿಂದ ಹಣ, ಒಡವೆ ದೋಚಿ ಪರಾರಿಯಾಗುತ್ತಿದ್ದ ಖತರ್ನಾಕ್ ಗ್ಯಾಂಗ್‌ವೊಂದನ್ನ ತುಮಕೂರಿನ ಗುಬ್ಬಿ ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ. ರಾಜ್ಯದ ಹಲವೆಡೆ ಯುವಕರನ್ನ ಯಾಮಾರಾರಿ ಮದುವೆ ಮಾಡಿಕೊಂಡಿದ್ದ ಐನಾತಿಯೂ ತಗಲಾಕ್ಕೊಂಡಿದ್ದಾಳೆ.

**ಏನಿದು ಪ್ರಕರಣ?:** ಇದು ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ಅತ್ತಿಗಟ್ಟೆ ಗ್ರಾಮದಲ್ಲಿ ನಡೆದಿದ್ದ ಕಥೆ. ಗ್ರಾಮದ ಪಾಲಾಕ್ಷಯ್ಯ ಎಂಬುವವರು ತಮ್ಮ ಮಗನಿಗೆ ಹೆಣ್ಣು ಸಿಗದೇ ಪರದಾಡಿದ್ರು. ಮಗ ದಯಾನಂದಮೂರ್ತಿಗೆ 37 ವರ್ಷ ದಾಟಿದ್ರೂ ಹೆಣ್ಣು ಸಿಗದೇ ಕುಟುಂಬಸ್ಥರು ನೊಂದಿದ್ದರು. ನೂರಾರು ಹೆಣ್ಣು ಹುಡುಕಿದ್ರೂ ಕಂಕಣ ಭಾಗ್ಯ ಕೂಡಿಬಂದಿರಲಿಲ್ಲ. ಹತ್ತಾರು ಮದುವೆ ಬ್ರೋಕರ್‌ಗಳ ಮೂಲಕ ಹೆಣ್ಣು ಹುಡುಕಿಸಿದ್ದರೂ ಪ್ರಯೋಜನವಾಗಲಿಲ್ಲ.

ಈ ಸಂದರ್ಭದಲ್ಲೇ ಕುಷ್ಟಗಿ ಮೂಲದ ಬಸವರಾಜು ಎಂಬವರ ಮೂಲಕ ಹುಬ್ಬಳಿಯ ಲಕ್ಷ್ಮಿ ಎಂಬಾಕೆಯ ಪರಿಚಯವಾಗಿತ್ತು. ಮದುವೆ ಬ್ರೋಕರ್ ಕೆಲಸ ಮಾಡುತ್ತಿದ್ದ ಲಕ್ಷ್ಮಿ ಬಳಿ ಮಗನಿಗೆ ಹೆಣ್ಣು ತೋರಿಸುವಂತೆ ಪಾಲಾಕ್ಷಯ್ಯ ಕೇಳಿಕೊಂಡಿದ್ದರು. ಇವರ ಪರಿಸ್ಥಿತಿಯನ್ನು ಚೆನ್ನಾಗಿ ಬಳಸಿಕೊಂಡ ಲಕ್ಷ್ಮಿ ಹುಬ್ಬಳ್ಳಿಯಲ್ಲೊಬ್ಬಳು ಒಳ್ಳೆ ಹುಡುಗಿ ಇದ್ದಾಳೆ, ಆಕೆಗೆ ತಂದೆ-ತಾಯಿ ಇಲ್ಲ ನೀವೇ ಮದುವೆ ಮಾಡಿಕೊಳ್ಳಬೇಕೆಂದು ಕಥೆ ಕಟ್ಟಿದ್ದಳು. ಕೋಮಲಾ ಎಂಬ ಹೆಸರಿನಲ್ಲಿ ಹುಡುಗಿಯ ಫೋಟೋ ಕಳುಹಿಸಿ, ಆಕೆಯನ್ನೂ ಗಂಡಿನ ಮನೆಗೆ ಕರೆದುಕೊಂಡು ಬಂದಿದ್ದಳು. ಕೋಮಲಾ ಜೊತೆಗೆ ಆಕೆಯ ಸಂಬಂಧಿಕರು ಅಂತ ಹೇಳಿಕೊಂಡು ಇನ್ನೂ ಐದಾರು ಜನ ಬಂದಿದ್ದರು.

**ಮಾತುಕತೆ ಮರುದಿನವೇ ಮದುವೆ:** ಕಳೆದ ವರ್ಷ ನವೆಂಬರ್ 11ರಂದು ಅತ್ತಿಗಟ್ಟೆಗೆ ಬಂದಿದ್ದ ನಕಲಿ ಕುಟುಂಬ ಪಾಲಾಕ್ಷಯ ಕುಟುಂಬಸ್ಥರೊಂದಿಗೆ ಮದುವೆ ಮಾತುಕತೆಯನ್ನೂ ನಡೆಸಿದ್ದರು. ಹೆಣ್ಣು ಸಿಕ್ಕ ಖುಷಿಯಲ್ಲಿ ಹಿಂದೆಮುಂದೆ ಯೋಚಿಸದೇ ಪಾಲಾಕ್ಷಯ್ಯ ಮಾತುಕತೆ ನಡೆಸಿದ್ದ ಮರುದಿನವೇ ಗ್ರಾಮದ ದೇವಸ್ಥಾನದಲ್ಲೇ ಮದುವೆ ಮಾಡಿ ಮುಗಿಸಿದ್ದರು. ಮದುವೆ 200ಕ್ಕೂ ಹೆಚ್ಚು ಮಂದಿ ಆಗಮಿಸಿದ್ದರು. ಅಲ್ಲದೇ ಹೆಣ್ಣಿಗೆ ಚಿನ್ನದ ಸರ, ತಾಳಿ, ಕಿವಿಗೆ ಓಲೆ ಸೇರಿ 25 ಗ್ರಾಂ ಚಿನ್ನಾಭರಣ ಸಹ ಹಾಕಿದ್ದರು. ಮದುವೆ ಮುಗಿಯುತ್ತಿದ್ದಂತೆ ಹೆಣ್ಣು ತೋರಿಸಿದ ಬ್ರೋಕರ್ ಲಕ್ಷ್ಮಿಗೆ 1.5 ಲಕ್ಷ ಹಣ ನೀಡಿದ್ದರು. ಹೆಣ್ಣಿನ ಕಡೆಯವರು ಅಂತ 8 ಜನರನ್ನ ಕರೆ ತಂದಿದ್ದ ಬ್ರೋಕರ್ ಲಕ್ಷ್ಮಿ, ಮದುವೆ ಮುಗಿದ ಎರಡು ದಿನದ ನಂತರ ಯುವತಿಯೊಬ್ಬಳನ್ನೇ ವಾಪಸ್ ಕರೆದುಕೊಂಡ ಹೋಗಿದ್ದಳು.

ಸಂಪ್ರದಾಯದ ಕಾರಣ ನೀಡಿ ಯುವತಿಯನ್ನ ಮಾತ್ರ ಕರೆದುಕೊಂಡು ಹೋಗಿದ್ದ ಲಕ್ಷ್ಮಿ, ಹಣ-ಚಿನ್ನದ ಒಡವೆ ಸಹಿತ ಮದುಮಗಳನ್ನ ಕರೆದುಕೊಂಡು ಹೋಗಿದ್ದಳು. ವಾರ ಕಳೆದರೂ ವಾಪಸ್ ಬರದೇ ಇದ್ದಾಗ ಆತಂಕಗೊಂಡ ಪಾಲಾಕ್ಷಯ್ಯ ಹುಬ್ಬಳ್ಳಿಗೆ ಹೋಗಿ ವಿಚಾರಿಸಿದಾಗ ಸತ್ಯ ಬಯಲಾಗಿದೆ. ನಡೆದದ್ದು ನಕಲಿ ಮದುವೆ, ಬಂದವರು ದೋಖಾ ಗಿರಾಕಿಗಳು ಎಂಬ ಸತ್ಯ ಬಯಲಾಗಿದೆ. ವಾಪಸ್ ಗುಬ್ಬಿಗೆ ಬಂದ ಪಾಲಾಕ್ಷಯ್ಯ ಎಲ್ಲರ ವಿರುದ್ಧ ದೂರು ನೀಡಿದ್ದರು.

ಪ್ರಕರಣ ದಾಖಲಿಸಿಕೊಂಡ ಗುಬ್ಬಿ ಪೊಲೀಸರು ನಿರಂತರ ತನಿಖೆ ನಡೆಸಿದ್ದರು. ಸತತ 1 ವರ್ಷದ ಬಳಿಕ ದೋಖಾ ಗಿರಾಕಿಗಳು ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ. ಮಹಾರಾಷ್ಟ್ರ, ಹುಬ್ಬಳ್ಳಿಯಲ್ಲಿ ನಾಲ್ವರನ್ನ ಗುಬ್ಬಿ ಪೊಲೀಸರು ಬಂಧಿಸಿದ್ದಾರೆ. ಮದುಮಗಳು ಕೋಮಲಾ ಅಲಿಯಾಸ್ ಲಕ್ಷ್ಮಿ ಬಾಳಸಾಬ್ ಜನಕರ, ಚಿಕ್ಕಪ್ಪ ಪಾತ್ರಧಾರಿ ಸಿದ್ದಪ್ಪ, ಚಿಕ್ಕಮ್ಮ ಪಾತ್ರಧಾರಿ ಲಕ್ಷ್ಮೀಬಾಯಿ, ಬ್ರೋಕರ್ ಲಕ್ಷ್ಮಿ ಬಂಧಿತರು.

## ಜಲಾಶಯ ನಿರ್ವಹಣೆಗೆ ಕೇಂದ್ರ ಸಮಿತಿ ಸಲಹೆ ಧಿಕ್ಕರಿಸಿದೆ ರಾಜ್ಯ ಸರ್ಕಾರ

**ಹುಬ್ಬಳ್ಳಿ:** ಜಲಾಶಯಗಳ ಸಮರ್ಪಕ ನಿರ್ವಹಣೆಗೆ ಕೇಂದ್ರ ಸಮಿತಿ ನೀಡಿದ ಸಲಹೆಗಳನ್ನು ರಾಜ್ಯ ಸರ್ಕಾರ ಧಿಕ್ಕರಿಸಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆರೋಪಿಸಿದ್ದಾರೆ.

ತುಂಗಭದ್ರಾ ಡ್ಯಾಂ ಕ್ರಸ್ಟ್ ಗೇಟ್ ಬಿರುಕು ಬಿಟ್ಟು ಆತಂಕ ಸೃಷ್ಟಿಸಿರುವ ಬಗ್ಗೆ ಪ್ರತಿಕ್ರಿಯಿಸಿರುವ ಸಚಿವರು, ಜಲಾಶಯಗಳ ನಿರ್ವಹಣೆಯನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದ್ದಾರೆ.

ಬೇಸಿಗೆಯಲ್ಲಿ ಜಲಾಶಯ ಖಾಲಿ ಇದ್ದಾಗಲೆ ನಿರ್ವಹಣೆ ಕಾರ್ಯ ಕೈಗೊಳ್ಳಬೇಕಿತ್ತು. ಆದರೆ, ರಾಜ್ಯ ಸರ್ಕಾರ ಉದಾಸೀನ ತೋರಿದೆ. ಈಗದರ ಪರಿಣಾಮ ಎದುರಿಸುವಂತಾಗಿದೆ. ಕಳೆದ ಆರು ತಿಂಗಳ ಕಾಲ ಜಲಾಶಯ ಖಾಲಿ ಆಗಿತ್ತು. ರಾಜ್ಯ ಸರ್ಕಾರ ಆಗಲೇ ಸಮರ್ಪಕ ನಿರ್ವಹಣೆ ಕೈಗೊಳ್ಳಬೇಕಿತ್ತು. ಆದ್ರೆ ಅದನ್ನ ಮಾಡಲಿಲ್ಲ, ಕೇಂದ್ರ ಸರ್ಕಾರದ ಸಲಹೆಗಳನ್ನೂ ಪಾಲಿಸದೇ ಧಿಕ್ಕರಿಸಿತು. ಸರ್ಕಾರ ಮತ್ತು ನಿರ್ವಹಣೆ ಹೊಣೆ ಹೊತ್ತವರ ತೀವ್ರ ನಿರ್ಲಕ್ಷ ತೋರಿದ್ದರಿಂದಲೇ ಈ ಅವಘಡ ಸಂಭವಿಸಿದೆ ಎಂದು ಜೋಶಿ ಆರೋಪಿಸಿದ್ದಾರೆ.

**ರಸ್ತೆ ರಿಪೇರಿಗೂ ಹಣವಿಲ್ಲ:** ರಾಜ್ಯ ಸರ್ಕಾರದ ಬಳಿ ರಸ್ತೆ ರಿಪೇರಿಗೂ ಹಣವಿಲ್ಲ. ಇನ್ನು ಸಮಾನಾಂತರ ಜಲಾಶಯ ಹೇಗೆ ನಿರ್ಮಾಣ ಮಾಡುತ್ತಾರೆ? ಎಂದು ಸಚಿವ ಜೋಶಿ ಪ್ರಶ್ನಿಸಿದ್ದಾರೆ.

ಬೇಕಾಬಿಟ್ಟಿ ಆಡಳಿತ, ಭ್ರಷ್ಟಾಚಾರದ ಫಲವಾಗಿ ರಾಜ್ಯ ಸರ್ಕಾರ ದಿವಾಳಿಯಾಗಿದೆ. ಹಾಗಾಗಿ ಜಲಾಶಯಗಳ ವ್ಯವಸ್ಥಿತ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದೆ ಎಂದು ಆರೋಪಿಸಿದ್ದಾರೆ.



**10 ಸಾವಿರ ಕೋಟಿ ಎಲ್ಲಿ?:** ಹಿಂದೆ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿದ್ದಾಗ ಜಲಾಶಯಗಳ ನಿರ್ವಹಣೆಗೆ ಪ್ರತಿ ವರ್ಷ 10,000 ಕೋಟಿ ವೆಚ್ಚ ಮಾಡುವುದಾಗಿ ಹೇಳಿದ್ದರು. ಆದರೆ, ಪ್ರತಿ ವರ್ಷವಲ್ಲ ಆಡಳಿತದ 5 ವರ್ಷವೂ ಹತ್ತು ಸಾವಿರ ಕೋಟಿ ಖರ್ಚು ಮಾಡಲಿಲ್ಲ ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರ ಇನ್ನಾದರೂ ತುಂಗಭದ್ರಾ ಡ್ಯಾಂ ಸೇರಿದಂತೆ ರಾಜ್ಯದ ಎಲ್ಲಾ ಜಲಾಶಯಗಳ ನಿರ್ವಹಣೆಗೆ ಗಮನ ಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

**ರೈತರಿಗೆ ಅನುಕೂಲ ಕಲ್ಪಿಸಲಿ:** ರಾಜ್ಯ ಸರ್ಕಾರ ಕೂಡಲೇ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸರಿಪಡಿಸಲು ಮುಂದಾಗಬೇಕು. ಈ ಮೂಲಕ ರೈತರಿಗೆ ಬೆಳೆ ಬೆಳೆಯಲು ಅನುಕೂಲ ಮಾಡಿಕೊಡಬೇಕು ಎಂದು ಸಚಿವ ಪ್ರಹ್ಲಾದ್ ಜೋಶಿ ಆಗ್ರಹಿಸಿದ್ದಾರೆ.

## ಚನ್ನಪಟ್ಟಣ ಕ್ಷೇತ್ರದ ಅಭ್ಯರ್ಥಿ ಕುರಿತು ದೆಹಲಿ ಮಟ್ಟದಲ್ಲಿ ಚರ್ಚಿಸಿ ನಿರ್ಧಾರ- ವಿಜಯೇಂದ್ರ

**ಬೆಂಗಳೂರು:** ಚನ್ನಪಟ್ಟಣ ಕ್ಷೇತ್ರದ ಅಭ್ಯರ್ಥಿ ಕುರಿತು ಎರಡೂ ಪಕ್ಷಗಳ ವರಿಷ್ಠರು ದೆಹಲಿ ಮಟ್ಟದಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು.



ನಗರದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ರಾಜ್ಯಾಧ್ಯಕ್ಷನಾಗಿ ಪ್ರತಿಯೊಬ್ಬರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವುದು ನನ್ನ ಆದ್ಯ ಕರ್ತವ್ಯ. ಇದನ್ನು ಸತತವಾಗಿ ಮಾಡಿಕೊಂಡು ಬಂದಿದ್ದೇನೆ. ಪಕ್ಷಕ್ಕೆ ಶಕ್ತಿ ಸಿಗುವುದಾದರೆ ಕೆಲವರು ಮಾಡಬಯಸಿದ ಪಾದಯಾತ್ರೆಗೆ ವರಿಷ್ಠರು ಸಮ್ಮತಿ ಕೊಡುತ್ತಾರೆ. ನಮ್ಮದು ಈ ವಿಚಾರಕ್ಕೆ ಯಾವುದೇ ರೀತಿಯ ತಕರಾರಿಲ್ಲ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು.

ಕೇಂದ್ರದ ವರಿಷ್ಠರ ಭೇಟಿಯೂ ಪಕ್ಷದ ಸಂಘಟನೆಗೆ ಲಾಭ ತರಬೇಕು ಎಂಬ ಸದುದ್ದೇಶವನ್ನು ಹೊಂದಿರಲಿ ಎಂದು ಆಶಿಸಿದರು. ಚನ್ನಪಟ್ಟಣದಲ್ಲಿ ತಾವೂ ಸ್ಪರ್ಧಾಕಾಂಕ್ಷಿ ಎಂದು ಯೋಗೇಶ್ವರ್ ಅವರು ಹೇಳಿದ್ದು, ಅದು ತಪ್ಪೆನ್ನುವುದಿಲ್ಲ. ಚನ್ನಪಟ್ಟಣ ಕ್ಷೇತ್ರದಲ್ಲಿ ಅವರಿಗೆ ಅವರದೇ ಆದ ಹಿಡಿತ, ಬೆಂಬಲ ಇದೆ. ಆದರೆ, ಬಿಜೆಪಿ- ಜೆಡಿಎಸ್ ಪಕ್ಷಗಳು ಒಟ್ಟಾಗಿ ಹೋಗುವ ಸಂದರ್ಭ ಇದು. ಅಲ್ಲಿ ಕುಮಾರಸ್ವಾಮಿ ಅವರು ಆಯ್ಕೆ ಆಗಿದ್ದರು. ಎರಡೂ ಪಕ್ಷಗಳ ವರಿಷ್ಠರು ದೆಹಲಿ ಮಟ್ಟದಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳುತ್ತಾರೆ ಎಂದು ವಿವರಿಸಿದರು.

ಬಿಜೆಪಿ- ಜೆಡಿಎಸ್ ಪಕ್ಷಗಳು ಲೋಕಸಭಾ ಚುನಾವಣೆಯನ್ನು ಒಟ್ಟಾಗಿ ಎದುರಿಸಿದ್ದೇವೆ. ವಿಧಾನಸಭಾ ಉಪ ಚುನಾವಣೆ ಅಭ್ಯರ್ಥಿ ಆಯ್ಕೆ ಸಂಬಂಧ ಸಮಿತಿ ರಚಿಸಿ ಅಭಿಪ್ರಾಯ ಪಡೆದಿದ್ದೇವೆ. ಅಶ್ವತ್ಥನಾರಾಯಣ್ ಅವರ ಸಮಿತಿಯ ವರದಿ ಬಗ್ಗೆ ಮಾಹಿತಿ ಇಲ್ಲ. ನಾನು ಕೂಡ ಅಶ್ವತ್ಥನಾರಾಯಣ್ ಜೊತೆ ಚರ್ಚೆ ಮಾಡುವೆ. ವರಿಷ್ಠರ ಗಮನಕ್ಕೆ ತರುವೆ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು. ಜಲ ಸಂಪನ್ಮೂಲ ಸಚಿವರು ಸಂಪನ್ಮೂಲದ ಬಗ್ಗೆ ಹೆಚ್ಚು ತಲೆ ಕೆಡಿಸಿಕೊಂಡ ಹಾಗಿದೆ. ಜಲ, ಜನ, ರೈತರ ಬಗ್ಗೆ ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ಅವರು ಟೀಕಿಸಿದರು. ಪ್ರಾಣ ಕಳಕೊಂಡ ಎಸ್‌ಐ ಪರಶುರಾಮ್ ಅವರ ಕುಟುಂಬಕ್ಕೆ ಪರಿಹಾರ ಕೊಟ್ಟಿಲ್ಲ. ರಾಜ್ಯ ಸರಕಾರದ ಆದ್ಯತೆ ಏನೆಂದು ಜನರು ಪ್ರಶ್ನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

## ಯುವತಿ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ

**ನೆಲಮಂಗಲ:** ಪ್ರೇಮ ವೈಫಲ್ಯಕ್ಕೆ ಮನನೊಂದು ಯುವತಿ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆಂಗಳೂರು ಉತ್ತರ ತಾಲೂಕಿನ ಸೋಲದೇವನಹಳ್ಳಿ ರೈಲ್ವೆ ನಿಲ್ದಾಣದ ಬಳಿ ನಡೆದಿದೆ. ಡಾರ್ಜಿಲಿಂಗ್ ಮೂಲದ ಲಿಖಿತ ಜಾಸ್ಮೀನ್(24) ಮೃತ ದುರ್ದೈವಿ. 10 ದಿನಗಳ ಹಿಂದೆ ತನ್ನ ಅಕ್ಕ ಕೃತಿಕ ಜಾಸ್ಮೀನ್ ಮನೆಗೆ ಬಂದಿದ್ದ ಯುವತಿ ಇಂದು ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.



ಲಿಖಿತ ಜಾಸ್ಮೀನ್ ಬಿಹಾರಿ ಮೂಲದ ಯುವಕನನ್ನು ಎರಡು ವರ್ಷಗಳಿಂದ ಪ್ರೀತಿಸುತ್ತಿದ್ದಳು. ಇಬ್ಬರ ಪ್ರೇಮ ಚನ್ನಾಗಿಯೇ ಇತ್ತು. ಆದರೆ ಇತ್ತೀಚೆಗೆ ಕ್ಷುಲ್ಲಕ ಕಾರಣಗಳಿಗಾಗಿ ಲವ್ ಬ್ರೇಕ್ ಅಪ್ ಆಗಿತ್ತು. ಇದರಿಂದ ಲಿಖಿತ ಜಾಸ್ಮೀನ್ ಮನನೊಂದಿದ್ದಳು. ಸಾಯುವ ಮಾತಗಳನ್ನಾಡುತ್ತಿದ್ದಳು. ತಂಗಿ ಒಬ್ಬಳೇ ಇದ್ದರೆ ಏನಾದ್ರು ಮಾಡಿಕೊಳ್ಳುತ್ತಾಳೆಂದು ಭಯಪಟ್ಟು ಲಿಖಿತ ಅಕ್ಕ ಕೃತಿಕ ತಂಗಿಯ ನೋವು ಮರೆಸುವ ಸಲುವಾಗಿ ಬೆಂಗಳೂರಿನ ಸೋಲದೇವನಹಳ್ಳಿಯಲ್ಲಿದ್ದ ತನ್ನ ಮನೆಗೆ ಕರೆದುಕೊಂಡು ಬಂದು ಇರಿಸಿಕೊಂಡಿದ್ದರು. ಆದರೆ ಇಂದು ಬೆಳಿಗ್ಗೆ 9ಗಂಟೆ ಸುಮಾರಿಗೆ ಇದ್ದಕ್ಕಿದ್ದಂತೆ ಮನೆಯಿಂದ ಆಚೆ ಬಂದ ಲಿಖಿತ ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ರೈಲ್ವೆ ಪೊಲೀಸರು ಸ್ಥಳ ಮಹಜರು ಕಾರ್ಯ ನಡೆಸಿದ್ದು ಯಶವಂತಪುರ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹಿಗ್ಗಾಮುಗ್ಗಾ ಥಳಿತ

ಹಲ್ಲೆ ನಡೆಸಿದವರನ್ನು ಪೊಲೀಸರು ಶೋಧಿಸುತ್ತಿದ್ದಾರೆ. ವಿಡಿಯೋವನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗುತ್ತಿದೆ.

### ರಾಜಧಾನಿಯಲ್ಲಿ ಹೈ ಅಲರ್ಟ್

ಇದಕ್ಕೆ ಪುಷ್ಠಿ ನೀಡುವಂತೆ ಜಮ್ಮು ಕಾಶ್ಮೀರದ ಕಥುವಾದಲ್ಲಿ ಇಬ್ಬರು ಅಪರಿಚಿತರು ಸಶ್ತಾಸ್ತ್ರಗಳೊಂದಿಗೆ ಅನುಮಾನಾಸ್ಪದವಾಗಿ ತಿರುಗಾಡುತ್ತಿದ್ದ ಬಗ್ಗೆ ಮಾಹಿತಿ ಸಿಕ್ಕಿದೆ. ಅವರು ಸಮೀಪದ ನಗರವಾದ ಪಠಾಣ್‌ಕೋಟ್‌ಗೆ ಹೋಗಿರುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ ಎಂದು ಗುಪ್ತಚರ ಇಲಾಖೆಯ ಮಾಹಿತಿಯನ್ನು ಆಧರಿಸಿ ಮೂಲವೊಂದು ವರದಿ ಮಾಡಿದೆ.

ಪಂಜಾಬ್ ಹಾಗೂ ಜಮ್ಮು ಕಾಶ್ಮೀರ ಭಾಗದಲ್ಲಿ ಸಕ್ರಿಯವಾಗಿರುವ ಗ್ಯಾಂಗ್‌ಸ್ಟರ್‌ಗಳು, ಮೂಲಭೂತವಾದಿಗಳು, ಭಯೋತ್ಪಾದಕರು ಸ್ವಾತಂತ್ರ್ಯದಿನಾಚರಣೆ ಹಾಗು ಈಗ ನಡೆಯುತ್ತಿರುವ ಅಮರನಾಥ ಯಾತ್ರೆಗೆ ಅಡ್ಡಿಪಡಿಸಲು ಯತ್ನಿಸುತ್ತಿವೆ. ಆಗಸ್ಟ್ 15ರ ಹಿಂದೆ ಮುಂದಿನ ದಿನಗಳಲ್ಲಿ ದೊಡ್ಡ ಕಾರ್ಯಕ್ರಮಗಳನ್ನು ಗುರಿಯಾಗಿಸಿ ಐಇಡಿಯನ್ನು ಬಳಸಿ ದಾಳಿ ಮಾಡಬಹುದು ಎಂದು ವರದಿಯಾಗಿದೆ.

### ಕರಾಳ ದಿನ ನೆನೆದ ಮೋದಿ

ವಿಭಜನೆಯಿಂದಾಗಿ, ಅನೇಕ ಗಲಭೆಗಳೂ ನಡೆದವು. ಈ ಗಲಭೆಗಳಿಂದಾಗಿ ಲಕ್ಷಾಂತರ ಜನರು ಮತ್ತೊಮ್ಮೆ ಹೊಸ ನಗರಗಳು ಮತ್ತು ಹೊಸ ಸ್ಥಳಗಳಿಗೆ ಸ್ಥಳಾಂತರಗೊಳ್ಳಬೇಕಾಯಿತು. ಈ ಅವಧಿಯಲ್ಲಿ ಹಲವು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.

2021 ರಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಈ ದಿನದಂದು ಪ್ರಾಣ ಕಳೆದುಕೊಂಡ ಜನರನ್ನು ಸ್ಮರಿಸಲು ಪ್ರತಿ ವರ್ಷ ಆಗಸ್ಟ್ 14 ಅನ್ನು ವಿಭಜನೆಯ ಕರಾಳ ದಿನವನ್ನಾಗಿ ಆಚರಿಸಲು ಘೋಷಿಸಿದ್ದರು.

ಆ ಎಲ್ಲ ಜನರ ಹೋರಾಟ ಮತ್ತು ತ್ಯಾಗವನ್ನು ಸ್ಮರಿಸಿ ಪ್ರತಿ ವರ್ಷ ಆಗಸ್ಟ್ 14 ರಂದು ಈ ದಿನವನ್ನು ಆಚರಿಸಲಾಗುವುದು ಎಂದು ಪ್ರಧಾನಿ ಘೋಷಿಸಿದ್ದರು. ವಿಭಜನೆಯ ನೋವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದ್ದರು.

### ಯೋಗೇಶ್ವರ್ ಭವಿಷ್ಯ

ಪ್ರಲ್ಹಾದ್ ಜೋಶಿ ಮೂಲಕ ಹೈಕಮಾಂಡ್ ನಾಯಕರ ಭೇಟಿಗೆ ಪ್ರಯತ್ನಪಟ್ಟಿದ್ದಾರೆ. ಅಷ್ಟೇ ಅಲ್ಲದೆ, ರಾಜ್ಯ ನಾಯಕರು ಟಿಕೆಟ್ ವಿಚಾರದಲ್ಲಿ ನನ್ನ ಬೆಂಬಲಕ್ಕೆ ನಿಲ್ಲಬೇಕು ಎಂದು ಮನವಿ ಮಾಡಿದ್ದಾರೆ.

ಆಗಸ್ಟ್ 16ರ ಬಳಿಕ ದೆಹಲಿಗೆ ಬರುವುದಾಗಿ ಕೆಲ ನಾಯಕರು ಯೋಗೇಶ್ವರ್‌ಗೆ ಭರವಸೆ ನೀಡಿದ್ದಾರೆ ಎನ್ನಲಾಗಿದೆ. ಆಗಸ್ಟ್ 16ರ ಬಳಿಕ ದೆಹಲಿಗೆ ಬಂದು ಕುಮಾರಸ್ವಾಮಿ ಜತೆ ಚರ್ಚೆ ಮಾಡಲಿದ್ದೇವೆ. ಆಗಸ್ಟ್ 18ರ ಬಳಿಕ ದೆಹಲಿಯಲ್ಲೇ ಕುಮಾರಸ್ವಾಮಿ ಜತೆ ಸಭೆ ನಿಗದಿ ಮಾಡುವುದಾಗಿ ಭರವಸೆ ನೀಡಿದ್ದಾರೆ. ಆಗಸ್ಟ್ 18ರ ಬಳಿಕ ದೆಹಲಿಗೆ ಬರುವಂತೆ ಯೋಗೇಶ್ವರ್‌ಗೆ ಹೈಕಮಾಂಡ್ ನಾಯಕರು ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮಂಗಳವಾರವಷ್ಟೇ ಸಿಪಿ ಯೋಗೇಶ್ವರ್ ಕೆಲವು ಮಂದಿ ಹೈಕಮಾಂಡ್ ನಾಯಕರನ್ನು ಭೇಟಿಯಾಗಿದ್ದರು. ಸದ್ಯ ಅವರು ದೆಹಲಿಯಿಂದ ಬೆಂಗಳೂರಿಗೆ ಮರಳಿದ್ದಾರೆ.

### ರಕ್ತದ ಕಲೆ ಪತ್ತೆ

ಇನ್ನು, ಕೊಲೆ ಪ್ರಕರಣ ಸಂಬಂಧ ದರ್ಶನ್ ಆಪ್ತ ಬಳಗದ ಮತ್ತೊಬ್ಬ ನಟನ ಸಾಕ್ಷಿ ಹೇಳಿಕೆಯನ್ನು ನ್ಯಾಯಾಲಯದಲ್ಲಿ ಸಿಆರ್‌ಪಿಸಿ 164ರಡಿ ಪೊಲೀಸರು ದಾಖಲಿಸಿದ್ದಾರೆ. ಹತ್ಯೆಗೂ ಮುನ್ನ ದರ್ಶನ್ ಜೊತೆ ಭೋಜನ ಕೂಟದಲ್ಲಿದ್ದ ಕಾರಣಕ್ಕೆ ನಟ ಯಶಸ್ ಅವರನ್ನು ಸಾಕ್ಷಿಯಾಗಿ ಪರಿಗಣಿಸಿ ಪೊಲೀಸರು ಹೇಳಿಕೆ ಪಡೆದಿದ್ದಾರೆ.

### ನೇಮಕ

ಜಯನಗರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕಿಯಾಗಿರುವ ಸೌಮ್ಯಾ ರೆಡ್ಡಿ ಅವರು ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದರು.

ಸದ್ಯ ಪುಷ್ಪಾ ಅಮರನಾಥ್ ಅವರು ರಾಜ್ಯ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆಯಾಗಿದ್ದರು.

ಮೊದಲನೇ ಪುಟದಿಂದ...

### ಮಳೆ ಮುನ್ಸೂಚನೆ

ಈ ವಿಷಯದಲ್ಲಿ ನಿಮ್ಮ ಸಹಕಾರವನ್ನು ನಾವು ಪ್ರಶಂಸಿಸುತ್ತೇವೆ. ಬೆಂಗಳೂರಿನಲ್ಲಿ ಟ್ರಾಫಿಕ್ ನಿರ್ವಹಿಸುವಲ್ಲಿ ನಿಮ್ಮ ಬೆಂಬಲ ಅಗತ್ಯ ಎಂದು ಪತ್ರ ಮುಖೇನ ಅನುಚೇತ್ ಮನವಿ ಮಾಡಿದ್ದಾರೆ.

**ದೀರ್ಘ ವಾರಾಂತ್ಯ:** ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಕಂಪನಿಗಳಿಗೆ ರಜೆ ಇದೆ. ಶುಕ್ರವಾರ ಒಂದು ದಿನ ರಜೆ ಮಾಡಿದರಂತೂ ನಾಲ್ಕು ದಿನ ರಜೆ ಸಿಗಲಿದೆ. ಹೀಗಾಗಿ ಇಂದು ಕಚೇರಿಯಿಂದ ಮನೆಗೆ ತೆರಳುವವರು, ನಂತರ ಊರಿಗೆ ತೆರಳುವವರ ಸಂಖ್ಯೆ ಗಣನೀಯವಾಗಿ ಹೆಚ್ಚಿರಲಿದೆ. ಪರಿಣಾಮವಾಗಿ ಸಂಚಾರ ದಟ್ಟಣೆ ನಿರೀಕ್ಷಿಸಲಾಗಿದೆ. ಅದರಲ್ಲಿಯೂ ಔಟರ್ ರಿಂಗ್ ರಸ್ತೆಯಲ್ಲಿ ಟ್ರಾಫಿಕ್ ವಿಪರೀತ ಹೆಚ್ಚಾಗುವ ಸಾಧ್ಯತೆ ಇದೆ. ಮಳೆ ಬಂದರಂತೂ ಸಂಚಾರ ದಟ್ಟಣೆ ಹೆಚ್ಚಾಗುತ್ತದೆ. ಹೀಗಾಗಿ ಸಂಚಾರ ಪೊಲೀಸರು ಔಟರ್ ರಿಂಗ್ ರಸ್ತೆಯ ವ್ಯಾಪ್ತಿಯ ಕಂಪನಿಗಳಿಗೆ ಮನವಿ ಮಾಡಿದ್ದಾರೆ.

### ಮಳೆ ಭೀತಿ

ಅಧಿಕಾರಿಗಳು ನಿನ್ನೆ ಸಂಜೆಯಿಂದಲೇ ಗೇಟ್‌ಗಳ ಬಿಡಿ ಭಾಗಗಳನ್ನು ಜಲಾಶಯಕ್ಕೆ ಸಾಗಿಸಿದ್ದಾರೆ. ತಜ್ಞ ಕನ್ನಯ್ಯನಾಯ್ಡು ನೇತೃತ್ವದಲ್ಲಿ ಗೇಟ್ ಅಳವಡಿಕೆ ಕಾರ್ಯ ನಡೆಯಲಿದೆ. ಇಂದು ಬೆಳಗ್ಗೆಯೇ ತಜ್ಞರು ಮತ್ತು ಕಾರ್ಮಿಕರು ಜಲಾಶಯಕ್ಕೆ ಬಂದಿದ್ದಾರೆ. ಇಂದಿನಿಂದ ಗೇಟ್ ಅಳವಡಿಕೆಗೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ.

### ಕಳ್ಳತನ

13 ಕಿಮೀ ಉದ್ದದ ಹೆದ್ದಾರಿಯಾಗಿದ್ದು, ಅದು ಸದಾತ್‌ಗಂಜ್ ಅನ್ನು ನಯಾ ಘಾಟ್‌ಗೆ ಸಂಪರ್ಕಿಸುತ್ತದೆ. ಪ್ರಯಾಣಿಕರು ನೇರವಾಗಿ ರಾಮಮಂದಿರಕ್ಕೆ ಪ್ರಯಾಣಿಸಲು ಅನುವು ಮಾಡಿಕೊಡುತ್ತದೆ.

ಖಾಸಗಿ ಸಂಸ್ಥೆಗಳು ಅಯೋಧ್ಯೆಯ ಅತ್ಯಂತ ಭದ್ರತಾ ಪ್ರದೇಶದಲ್ಲಿರುವ ಭಕ್ತಿಪಥ ಮತ್ತು ರಾಮಪಥದಲ್ಲಿ ಅಳವಡಿಸಲಾದ 50 ಲಕ್ಷಕ್ಕೂ ಹೆಚ್ಚು ಮೌಲ್ಯದ 3,800 ಬಿದಿರು ಮತ್ತು 36 ಪ್ರೊಜೆಕ್ಟರ್ ಲೈಟ್‌ಗಳನ್ನು ಸ್ಥಾಪಿಸಲಾಗಿದ್ದು, ಕಳ್ಳತನವಾಗಿದೆ ಎಂದು ಆ.9 ರಂದು ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ.

ಮಾರ್ಗಗಳಲ್ಲಿ ದೀಪಗಳನ್ನು ಅಳವಡಿಸಿದ ಸಂಸ್ಥೆಗಳ ಪ್ರತಿನಿಧಿ, ರಾಮಜನ್ಮಭೂಮಿ ಪೊಲೀಸ್ ಠಾಣೆಯಲ್ಲಿ ನೀಡಿದ ದೂರು ಆಧರಿಸಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಅಯೋಧ್ಯೆ ಅಭಿವೃದ್ಧಿ ಪ್ರಾಧಿಕಾರದಿಂದ ಮಾರ್ಗಗಳಲ್ಲಿ ದೀಪಗಳನ್ನು ಅಳವಡಿಸುವ ಗುತ್ತಿಗೆಯನ್ನು ಇಬ್ಬರಿಗೆ ನೀಡಲಾಯಿತು.

### ಬಾಂಬ್ ಸ್ಫೋಟ

ಕುಮ್ಸನ್ ಸರ್ಕಾರಿ ಕಚೇರಿಯಲ್ಲಿದ್ದಾಗ ಅಕ್ಕಪಕ್ಕದ ಮನೆಯವರು ಕರೆ ಮಾಡಿ ಬಾಲಾಹ್‌ನಲ್ಲಿರುವ ನಿಮ್ಮ ಮನೆಯ ಮೇಲೆ ಬಾಂಬ್ ದಾಳಿ ನಡೆದಿದೆ ಎನ್ನುವ ವಿಚಾರ ಕೇಳಿದಾಗ ಅವರು ಅಲ್ಲೇ ಕುಸಿದು ಬಿದ್ದಿದ್ದಾರೆ.

ಇಸ್ರೇಲ್-ಹಮಾಸ್ ಯುದ್ಧದಲ್ಲಿ 115 ನವಜಾತ ಶಿಶುಗಳು ಸಾವನ್ನಪ್ಪಿವೆ. ಕುಮ್ಸನ್ ಮನೆಯ ಮೇಲೆ ಶೆಲ್ ಬಿದ್ದಿದೆ. ಯುದ್ಧದ ಆರಂಭಿಕ ವಾರಗಳಲ್ಲಿ, ಕುಮ್ಸನ್ ಹಿಂದೆ ವಾಸಿಸುತ್ತಿದ್ದ ಸ್ಥಳವನ್ನು ಬಿಟ್ಟು ಬೇರೆಡೆಗೆ ಬಂದಿದ್ದರು. ಇಸ್ರೇಲಿ ಸೇನೆಯ ಸೂಚನೆ ಮೇರೆಗೆ ಗಾಜಾ ಪಟ್ಟಿಯ ಕೇಂದ್ರ ಭಾಗದಲ್ಲಿ ಆಶ್ರಯ ಪಡೆದರು.

ಗಾಜಾ ನಗರದಲ್ಲಿ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯಾದವರಿಗೆ ಆಶ್ರಯ ನೀಡುವ ಶಾಲೆಯ ಮೇಲೆ ದಾಳಿ ನಡೆಸಲಾಯಿತು. ಈ ಇಸ್ರೇಲ್ ವೈಮಾನಿಕ ದಾಳಿಯಲ್ಲಿ 70 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದರು. ಈ ಶಾಲೆಯು ಹಮಾಸ್‌ನ ಸಕ್ರಿಯ ಸೇನಾ ಕೇಂದ್ರವಾಗಿದೆ ಎಂದು ಇಸ್ರೇಲಿ ಮಿಲಿಟರಿ ವಕ್ತಾರರು ತಿಳಿಸಿದ್ದಾರೆ. ಆದರೆ, ಹಮಾಸ್ ಇದನ್ನು ನಿರಾಕರಿಸಿದೆ.

ಅಕ್ಟೋಬರ್ 7, 2023 ರಂದು, ಹಮಾಸ್ ದಕ್ಷಿಣ ಇಸ್ರೇಲ್ ಮೇಲೆ ದಾಳಿ ಮಾಡಿತು. ಮತ್ತು ಸರಿಸುಮಾರು 1,200 ಜನರನ್ನು ಕೊಂದರು. ಅವರಲ್ಲಿ ಹೆಚ್ಚಿನವರು ನಾಗರಿಕರು ಮತ್ತು ಸುಮಾರು 250 ಜನರನ್ನು ಅಪಹರಿಸಲಾಯಿತು. ಇದು ಯುದ್ಧದ ಆರಂಭವಾಗಿತ್ತು.

## ಡ್ಯಾಂ ವಿಚಾರದಲ್ಲಿ ರಾಜಕೀಯ ಬೆರಸಬಾರದು

**ಕಲಬುರಗಿ:** ಬಿಜೆಪಿಯವರು ಡ್ಯಾಂ ವಿಚಾರದಲ್ಲಿ ರಾಜಕೀಯ ಬೆರಸಬಾರದು. ಬಿಜೆಪಿಯವರು ತಮ್ಮ ಆಡಳಿತ ಅವಧಿಯಲ್ಲಿ ಎಷ್ಟು ಡ್ಯಾಂಗಳ ಸ್ಟಂತ್ ಪರಿಶೀಲನೆ ಮಾಡಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದ್ದಾರೆ.



ಕಲಬುರಗಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಣೆಕಟ್ಟು ಬಹಳ ಹಳೆಯದಾಗಿ ಕ್ರಸ್ಟ್ ಗೇಟ್ ಕಳಚಿರಬಹುದು, ಬಿಜೆಪಿಯವರು ತಮ್ಮ ಆಡಳಿತ ಅವಧಿಯಲ್ಲಿ ಎಷ್ಟು ಡ್ಯಾಂಗಳ ಸ್ಟಂತ್ ಪರಿಶೀಲನೆ ಮಾಡಿದ್ದಾರೆ? ಅದರ ವರದಿಯ ದಾಖಲೆ ಕೊಡಲಿ. ಅವರ ವರದಿಯನ್ನು ನಾವು ನಿರ್ಲಕ್ಷ್ಯ ಮಾಡಿದ್ದರೆ ಆರೋಪ ಮಾಡಲಿ ಎಂದು ತಿರುಗೇಟು ನೀಡಿದ್ದಾರೆ.

ನವಲಿ ಸಮಾನಾಂತರ ಜಲಾಯಶಕ್ಕೆ ಇನ್ನು ಮುಂದೆ ಗಮನ ಹರಿಸುತ್ತೇವೆ. ಅದರ ಬಗ್ಗೆ ನಮ್ಮ ಸರ್ಕಾರ ಯೋಚನೆ ಮಾಡುತ್ತದೆ. ರಾಜ್ಯದ ಎಲ್ಲಾ ಡ್ಯಾಂಗಳ ಸ್ಟಂತ್ ಬಗ್ಗೆ ಪರೀಶಿಲನೆ ಮಾಡುತ್ತೇವೆ. ಮುಡಾ ಕೇಸ್ ನಲ್ಲಿ ಸ್ಪಷ್ಟವಾಗಿ ರಾಜಕೀಯ ದುರುದ್ದೇಶವಿದೆ. ರಾಜ್ಯಪಾಲರ ಕಚೇರಿಯನ್ನ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಪ್ರದಾನಿ ನರೇಂದ್ರ ಮೋದಿ, ಗೃಹಸಚಿವ ಅಮಿತ್ ಶಾ ಸೇರಿ ರಾಜ್ಯಪಾಲರ ಕಚೇರಿ ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಕೇರಳ, ಪಶ್ಚಿಮ ಬಂಗಾಳ ಸೇರಿದಂತೆ ಅನೇಕ ಕಡೆ ದುರುಪಯೋಗ ಮಾಡಿದ್ದಾರೆ.ನಾವು ಸ್ಪಷ್ಟನೆ ನೀಡಿದರೂ 24 ಗಂಟೆಯೊಳಗೆ ಯಾರೋ ದೂರು ಕೊಟ್ಟಿದ್ದಾರೆ ಎಂದು ನೋಟಿಸ್ ನೀಡಿದ್ದಾರೆ ಎಂದು ಕಲಬುರಗಿಯಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ ನೀಡಿದ್ದಾರೆ.

ಇನ್ನೂ ಮುಡಾ ಹಗರಣ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಮುಡಾ ಕೇಸ್ ಪಿಸಿ ಆಕ್ಟ್‌ನಲ್ಲಿಯೇ ಬರುವುದಿಲ್ಲ, ಆದರೂ ರಾಜ್ಯಪಾಲರು ನೋಟಿಸ್ ನೀಡಿದ್ದಾರೆ. ರಾಜ್ಯಪಾಲರು ಅವರ ಕೈಗೊಂಬೆಯಾಗಿದ್ದಾರೆ ಎಂದು ಇದರಿಂದ ಸ್ಪಷ್ಟವಾಗಿ ತಿಳಿಯುತ್ತದೆ. ರಾಜ್ಯದಲ್ಲಿ ಬಿಜೆಪಿ ಬಿಜೆಪಿಯಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಅಶೋಕ ನಾಯಕತ್ವ ಒಪ್ಪುತ್ತಿಲ್ಲ. ಬಿಜೆಪಿಯವರೇ ಅವರ ನಾಯಕತ್ವ ಒಪ್ಪುತ್ತಿಲ್ಲ. ಬಿಜೆಪಿಯವರು ದೆಹಲಿ ಚಲೋ ಮಾಡಿದರೆ ಒಳ್ಳೆಯದಾಗುತ್ತದೆ ಎಂದು ಕುಟುಕಿದ್ದಾರೆ. ಜುಲೈ 27 ರಂದು ಪಿಎಸ್‌ಐ ಪರಶುರಾಮ ನನನ್ನು ಭೇಟಿಯಾಗಿದ್ದು ನಿಜ. ಯಾದಗಿರಿ ಆಗುವುದಿಲ್ಲವೆಂದರೆ ನಮ್ಮಲ್ಲಿ ಬನ್ನಿ ಎಂದಿದ್ದರು. ನಾನು ಆ ಶಾಸಕರಿಗೆ ಮನವಿ ಮಾಡಿದ್ದೆ. ಆದರೆ ನಾವು ಬೇರೆಯವರ ಕ್ಷೇತ್ರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ, ಪಿಎಸ್‌ಐ ಸಾವಿನ ಬಗ್ಗೆ ನಿಷ್ಪಕ್ಷಪಾತ ತನಿಖೆ ಮಾಡುತ್ತಿದ್ದೆವೆ ಎಂದರು.

## ಅರಕೆರೆ ಶೆಡ್‌ನಲ್ಲಿ ದರ್ಶನ್ ಕಿರಿಕ್

### ಯೂತ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಕ್ಕಾಗಿ ನಡುರಸ್ತೆಯಲ್ಲೇ ಫೈಟ್



**ಬೆಂಗಳೂರು:** ಪಟ್ಟಣಗೆರೆ ಶೆಡ್ ನಂತರ ಮತ್ತೊಂದು ಶೆಡ್‌ನಲ್ಲಿ ಗಲಾಟೆ ನಡೆದಿರುವುದು ಕಂಡುಬಂದಿದೆ. ಬೊಮ್ಮನಹಳ್ಳಿ ಯೂತ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಕ್ಕಾಗಿ ಗಲಾಟೆ ನಡೆದಿದ್ದು, ಒಂದೇ ಬಣದ ಎರಡು ಗುಂಪುಗಳು ಕೈ ಕೈ ಮಿಲಾಯಿಸಿಕೊಂಡಿವೆ.

ಬೊಮ್ಮನಹಳ್ಳಿ ಯೂತ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಬೊಮ್ಮನಹಳ್ಳಿಯ ಮಿಥುನ್ ಮತ್ತು ಮಂಜಪ್ಪ ಸ್ಪರ್ಧೆ ಮಾಡುತ್ತಿದ್ದಾರೆ. ಇದೇ ವಿಚಾರಕ್ಕೆ ಕೆಪಿಸಿಸಿ ಮಾಜಿ ಸದಸ್ಯ ಶ್ರೀನಿವಾಸ್ ಮೂರ್ತಿ ಹಾಗೂ ಮತ್ತೊಬ್ಬ ಪ್ರಭಾವಿ ನಾಯಕನ ನಡುವೆ ಜಿದ್ದಾಜಿದ್ದಿ ನಡೆದಿದೆ. ಹುಳಿಮಾವು ಮಂಜಪ್ಪ ಪರ ಶ್ರೀನಿವಾಸ್ ಮೂರ್ತಿ ಆ್ಯಂಡ್ ಸನ್ಸ್ ಬ್ಯಾಟಿಂಗ್ ಮಾಡಿದ್ದಾರೆ.

ಯುವ ನಾಯಕ ಮಿಥುನ್ ಪರ ಬಿಜೆಪಿಯ ನಿಖಿಲ್, ಮಧು, ಅಂಬರೀಷ್ ಅಖಾಡಕ್ಕೆ ಇಳಿದು, ಪ್ರಚಾರ ಮಾಡಲು ಶೆಡ್‌ನಲ್ಲಿ ಪಾರ್ಟಿ ಆಯೋಜಿಸಿದ್ದರು. ಅಂಬರೀಶ್ ಬರ್ತಡೇ ನೆಪದಲ್ಲಿ ಮಿಥುನ್ ಪರ ವೋಟ್ ಮಾಡುವಂತೆ ಪಾರ್ಟಿ ಆಯೋಜನೆ ಮಾಡಲಾಗಿತ್ತು. ಪಾರ್ಟಿಯಲ್ಲಿ ಶ್ರೀನಿವಾಸ್ ಮೂರ್ತಿ ಮಗ ದರ್ಶನ್, ನಿಖಿಲ್ ನಡುವೆ ಗಲಾಟೆ ನಡೆದಿದೆ. ಮಂಜಪ್ಪ ಪರವಾಗಿ ಪ್ರಚಾರ ಮಾಡಬೇಕೆಂದು ದರ್ಶನ್ ಆವಾಜ್ ಹಾಕಿದ್ದಾನೆ. ನಂತರ ಶೆಡ್‌ನಿಂದ ದರ್ಶನ್ ಗ್ಯಾಂಗ್ ಮನೆಗೆ ಹೊರಟಿದೆ. ಇದಾದ ಬಳಿಕ ಮನೆ ಬಳಿ ಕೇಳಲು ಹೋದ ನಿಖಿಲ್, ಮಿಥುನ್, ಅಂಬರೀಶ್ ಮೇಲೆ ಮಾರಕಾಸ್ತ್ರಗಳನ್ನು ಹಿಡಿದು ದರ್ಶನ್ ಗ್ಯಾಂಗ್ ಹಲ್ಲೆಗೆ ಯತ್ನಿಸಿದೆ. ಈ ವೇಳೆ ಎರಡು ಬಣಗಳ ಯುವಕರ ನಡುವೆ ಗಲಾಟೆ ನಡೆದಿದೆ.

ಸ್ಥಳಕ್ಕೆ ಬಂದ ಪೋಲಿಸರು, ಅಂಬರೀಶ್‌ನನ್ನು ಮಾತ್ರ ವಶಕ್ಕೆ ಪಡೆದಿದ್ದಾರೆ. ಅಂಬರೀಶ್ ಹುಳಿಮಾವು ಠಾಣೆಯ ರೌಡಿಶೀಟರ್ ಎನ್ನಲಾಗಿದೆ. ಅಂಬರೀಶ್‌ನ ಠಾಣೆಗೆ ಕರೆದೊಯ್ದು ಮುಚ್ಚಳಿಕೆ ಬರೆಸಿಕೊಂಡು ಕಳುಹಿಸಲಾಗಿದೆ. ಆದರೆ ದರ್ಶನ್ ಗ್ಯಾಂಗ್‌ಗೆ ಪೋಲಿಸರು ವಾರ್ನಿಂಗ್ ಕೊಟ್ಟು ಕಳುಹಿಸಿದ್ದಾರೆ ಎನ್ನಲಾಗಿದೆ.

## ಮೈಸೂರು ಅರಮನೆ ನೋಡಲು ಕ್ಯೂನಲ್ಲಿ ನಿಲ್ಲಬೇಕಿಲ್ಲ; ವಾಟ್ಸಾಪ್ ನಲ್ಲೇ ಸಿಗುತ್ತೆ ಟಿಕೆಟ್

**ಮೈಸೂರು:** ವಿಶ್ವವಿಖ್ಯಾತ ನಾಡ ಹಬ್ಬ ಮೈಸೂರು ದಸರಾ ಮಹೋತ್ಸವ ಅ.3 ರಿಂದ ಅ.12 ರ ವರೆಗೆ ಜರುಗಲಿದೆ. ಇದಕ್ಕಾಗಿ ಈಗಾಗಲೇ ತಯಾರಿ ಶುರುವಾಗಿದೆ. ಇನ್ನು ಮತ್ತೊಂದೆಡೆ ಇಂದಿನಿಂದ ಮೈಸೂರು ಅರಮನೆ ವೀಕ್ಷಣಗೆ ವಾಟ್ಸಾಪ್ ಟಿಕೆಟ್ ನೀಡಲಾಗುತ್ತಿದೆ. ಮೈಸೂರು ಅರಮನೆ ನೋಡಲು ಬರುವ ಪ್ರವಾಸಿಗರಿಗೆ ಅನುಕೂಲ ಮಾಡುವ ನಿಟ್ಟಿನಲ್ಲಿ ಇಆಅಖ ಮೊಬೈಲ್ ಒನ್ ಯೋಜನೆಯ ಮೂಲಕ ಟಿಕೆಟ್ ಖರೀದಿಗೆ ಅವಕಾಶ ಮಾಡಿಕೊಡಲಾಗುತ್ತಿದೆ.



ಪ್ರವಾಸಿಗರು ಸರ್ಕಾರದ ಇಡಿಸಿಎಸ್ ಮೊಬೈಲ್ ಒನ್ ಯೋಜನೆಯ ಮೂಲಕ ಮೊಬೈಲ್‌ನಲ್ಲೇ ಅರಮನೆ ವೀಕ್ಷಣೆಗೆ ಟಿಕೆಟ್ ಖರೀದಿ ಮಾಡಬಹುದು. ವಾಟ್ಸಾಪ್‌ನಲ್ಲಿ 8884160088 ನಂಬರ್‌ಗೆ ಎಜಿ ಎಂದು ಟೈಪ್ ಮಾಡಿ ಸಂದೇಶ ಕಳಿಸುವ ಮೂಲಕ ಟಿಕೆಟ್ ಪಡೆಯಬಹುದು. ವಾಟ್ಸಾಪ್‌ನಲ್ಲಿ ಖರೀದಿಸಿದ ಟಿಕೆಟ್ 5 ದಿನದವರೆಗೆ ಮಾನ್ಯತೆ ಇರುತ್ತದೆ. ಇದರಿಂದ ಸರತಿ ಸಾಲಿನಲ್ಲಿ ಬಂದು ಟಿಕೆಟ್ ಖರೀದಿಸುವ ಸಮಯ ಸೇವ್ ಆಗಲಿದೆ.

**ಮೈಸೂರು ದಸರಾಗೆ ಕ್ಷಣಗಣನೆ:** ಅಕ್ಟೋಬರ್ 3 ರಂದು ದಸರಾ ಉದ್ಘಾಟನೆಯಾಗಲಿದ್ದು ಅ.12 ರಂದು ಜಂಬೂಸವಾರಿ ನಡೆಯಲಿದೆ. ಈ ಬಾರಿ ದಸರಾವನ್ನ ವಿಜೃಂಭಣೆಯಿಂದ, ಆಕರ್ಷಣೆಯಾಗಿ, ಅರ್ಥಪೂರ್ಣವಾಗಿ ಆಚರಿಸಲು ಸರ್ಕಾರ ಸಿದ್ಧತೆ ನಡೆಸುತ್ತಿದೆ. ಇನ್ನು ಈ ಬಾರಿ ದೀಪಾಲಂಕಾರ 21 ದಿನಗಳ ಕಾಲ ಇರಲಿದೆ. ಜಂಬೂಸವಾರಿ ಮುಗಿದ ಬಳಿಕವೂ 11 ದಿನ ದೀಪಾಲಂಕಾರ ಇರಲಿದೆ. ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚು ಆಕರ್ಷಿತವಾಗಿ ಅಲಂಕಾರ ಮಾಡಲು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಪ್ರವಾಸಿಗರು ಬಂದಾಗ ಮಾರ್ಗದರ್ಶನ ಮಾಡಲು ಸೆಕ್ಯುರಿಟಿ, ಟ್ರಾಫಿಕ್ ಮ್ಯಾನೇಜ್ಮೆಂಟ್ ಮಾಡಲು ಪೊಲೀಸ್ ಇಲಾಖೆಗೆ ಸೂಚನೆ ನೀಡಲಾಗಿದೆ. ಗೋಲ್ಡ್ ಕಾರ್ಡ್ ವ್ಯವಸ್ಥೆ, ಉಚಿತವಾಗಿ ದಸರಾ ನೋಡಲು ಬರುವವರಿಗೆ ವ್ಯವಸ್ಥೆ ಬಗ್ಗೆ ತಯಾರಿ ನಡೆಸಲಾಗುತ್ತಿದೆ. ಇದು ನಾಡಹಬ್ಬ, ಜನಪರ ಉತ್ಸವದಂತೆ ಇರಬೇಕು. ಜನರ ಉತ್ಸವದಂತೆ ಆಚರಣೆ ಮಾಡ್ತೀವಿ. ದಸರಾ ವಿಜೃಂಭಣೆಯಿಂದ ಆಚರಣೆಗೆ ಎಷ್ಟು ಹಣ ಬೇಕೋ ಅಷ್ಟು ಕೊಡ್ತೀವಿ. ಗೋಲ್ಡ್ ಕಾರ್ಡ್ ದುರುಪಯೋಗ ಆಗದಂತೆ ನಾವು ಈ ಬಾರಿ ಕ್ರಮವಹಿಸುತ್ತೇವೆ ಎಂದು ಸಚಿವ ಮಹದೇವಪ್ಪ ತಿಳಿಸಿದ್ದಾರೆ.

# ಮಾರ್ಕ್ಸ್‌ವಾದ ಜೀವನಕ್ಕೂ ದಾರಿ ತೋರುವ ತತ್ವಶಾಸ್ತ್ರ




**ಮೈಸೂರು:** ಮಾರ್ಕ್ಸ್‌ವಾದ ಕೇವಲ ಆರ್ಥಿಕ, ರಾಜಕೀಯ ಸಿದ್ಧಾಂತ ಮಾತ್ರವಲ್ಲದೇ ವೈಯಕ್ತಿಕ ಜೀವನಕ್ಕೂ ದಾರಿ ತೋರಿಸುವ ಸತ್ಯಾಧಾರಿತ ತತ್ವಶಾಸ್ತ್ರವಾಗಿದ್ದು, ವಿಜ್ಞಾನ ಆಧರಿಸಿದೆ ಎಂದು ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಕೇಂದ್ರ ಸಮಿತಿಯ ಪಾಲಿಟ್ ಬ್ಯೂರೋ ಸದಸ್ಯ ಅಮಿತಾಬ್ ಚಟರ್ಜಿ ಹೇಳಿದರು.

ನಗರದ ನಾದಬ್ರಹ್ಮ ಸಭಾಂಗಣದಲ್ಲಿ ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಸಂಸ್ಥಾಪಕ ಕಾಮ್ರೇಡ್ ಶಿವದಾಸ್ ಘೋಷ್ ಅವರ 48ನೇ ಸ್ಮರಣ ವರ್ಷಾಚರಣೆಯ ಅಂಗವಾಗಿ ನಡೆದ ಬೆಂಗಳೂರು, ಮೈಸೂರು, ತುಮಕೂರು, ಚಿತ್ರದುರ್ಗ, ಹಾಸನ ಸೇರಿದಂತೆ ವಲಯ ಮಟ್ಟದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದರು.

ಭಾರತದಲ್ಲಿ ವೇದಾಂತ, ದ್ವೈತ, ಅದ್ವೈತ ಹೀಗೆ ಹಲವಾರು ಸಿದ್ಧಾಂತಗಳನ್ನು ಬಿಟ್ಟು ಶಿವದಾಸ್ ಘೋಷ್ ಅವರು ಮಾರ್ಕ್ಸ್‌ವಾದ ಆಯ್ಕೆ ಮಾಡಿಕೊಂಡರು. ಏಕೆಂದರೆ ಮಾರ್ಕ್ಸ್‌ವಾದ ವಿಜ್ಞಾನ ಆಧರಿಸಿದೆ ಮತ್ತು ಕೇವಲ ಆರ್ಥಿಕ, ರಾಜಕೀಯ ಥಿಯರಿ ಮಾತ್ರವಲ್ಲದೇ ವೈಯಕ್ತಿಕ ಜೀವನಕ್ಕೂ ದಾರಿ ತೋರಿಸುವ ಸತ್ಯಾಧಾರಿತ ತತ್ವಶಾಸ್ತ್ರವಾದ ಕಾರಣ ಇಂದಿನ ಎಲ್ಲಾ ಸಮಸ್ಯೆಗಳ ವಿರುದ್ಧ ಹೋರಾಡುವ ಏಕೈಕ ಅಸ್ತ್ರ ಮಾರ್ಕ್ಸ್‌ವಾದ ಎಂದರು.

ಮಾರ್ಕ್ಸ್‌ವಾದ ತತ್ವಶಾಸ್ತ್ರದ ಅಡಿಯಲ್ಲಿ ಮಾತ್ರವೇ ಬಂಡವಾಳಶಾಹಿ ವಿರೋಧಿ ಸಮಾಜವಾದಿ ಕ್ರಾಂತಿ ನೆರವೇರಿಸಲು ಸಾಧ್ಯ ಎಂದು ಶಿವದಾಸ್ ಘೋಷ್ ತೋರಿಸಿಕೊಟ್ಟರು. ಮಾರ್ಕ್ಸ್‌ವಾದ ಹೇಳುವ ಹಾಗೆ ನಾಯಕತ್ವವನ್ನು ಕುರುಡಾಗಿ ಅನುಸರಿಸಬಾರದು. ಬದಲಾಗಿ ಸೈದ್ಧಾಂತಿಕವಾಗಿ ಗಟ್ಟಿಗೊಳಿಸಿಕೊಳ್ಳುವ ಮೂಲಕ ಪಕ್ಷವನ್ನು ಆಂತರಿಕವಾಗಿ ಬಲಪಡಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕೆಂದು ಕರೆ ನೀಡಿದರು. ಭಾರತ ಸ್ವಾತಂತ್ರ್ಯ ಗಳಿಸುವ ಮುಂಚೆಯಿಂದಲೂ ಎಡಪಕ್ಷಗಳು ಅಸ್ತಿತ್ವದಲ್ಲಿದ್ದವು. ಭಾರತದ ಪರಿಸ್ಥಿತಿಯ ಕುರಿತು ಸ್ವಾತಂತ್ರ್ಯದ ನಂತರವೂ ಅರೆ ಊಳಿಗಮಾನ್ಯ, ಅರೆ ವಸಾಹತುಶಾಹಿ ವ್ಯವಸ್ಥೆ ಅಸ್ತಿತ್ವದಲ್ಲಿದೆ ಎಂದು ತಪ್ಪು ವಿಶ್ಲೇಷಣೆ ನೀಡಿದ್ದಾರೆ. ಆದರೆ ಕಾಮ್ರೇಡ್ ಶಿವದಾಸ್ ಘೋಷ್ ಊಳಿಗಮಾನ್ಯ ಪದ್ಧತಿ ಹೋಗಿ ಹೊಸ ವ್ಯವಸ್ಥೆ ರಚನೆಯಾಗಲಿದೆ ಎಂದು ಪ್ರತಿಪಾದಿಸಿದ್ದರು. ಅದೇ ಈಗ ದೇಶಾದ್ಯಂತ ಬೇರೂರಿರುವ ಬಂಡವಾಳಶಾಹಿ ವ್ಯವಸ್ಥೆ. ಪ್ರಸ್ತುತ ಅದು ಸಾಮ್ರಾಜ್ಯವಾದದ ಹಂತಕ್ಕೆ ಬೆಳೆದಿದೆ ಎಂಬ ಸತ್ಯ ತೋರಿಸಿಕೊಟ್ಟಿದ್ದಾರೆ ಎಂದರು.

ಎಸ್‌ಯುಸಿಐನ ರಾಜ್ಯ ಸೆಕ್ರೆಟೇರಿಯೇಟ್ ಸದಸ್ಯ ಎಂ.ಎನ್.ಶ್ರೀರಾಮ್ ಮಾತನಾಡಿ, 1947ರಲ್ಲಿ ದೇಶಕ್ಕೆ ಸ್ವಾತಂತ್ರ್ಯ ಬಂದಿರುವುದು ಬಂಡವಾಳಶಾಹಿಗಳಿಗೆ ಹೊರತು, ಈ ದೇಶದ ದುಡಿಯುವ ವರ್ಗಕ್ಕಲ್ಲ ಎಂಬುದನ್ನು ಗ್ರಹಿಸಬೇಕು. ಇದರ ಪರಿಣಾಮವೇ ಸಾಮಾನ್ಯ ಜನರು ರೈತ ಕಾರ್ಮಿಕರ ಮೇಲಿನ ಶೋಷಣೆ ಮುಂದುವರೆಯುತ್ತಿದೆ. ಯಾವ ಪಕ್ಷಗಳು ಕೂಡ ಇದರ ವಿರುದ್ಧ ಮಾತನಾಡುತ್ತಿಲ್ಲ, ಹೊರತಾಗಿ, ತಾವೇ ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ರಾಜ್ಯ ಸಮಿತಿ ಸದಸ್ಯರೂ ಆದ ಜಿಲ್ಲಾ ಕಾರ್ಯದರ್ಶಿ ಬಿ.ರವಿ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಸಮಿತಿ ಸದಸ್ಯ ವಿ.ಜ್ಞಾನಮೂರ್ತಿ, ವಿ.ಎನ್.ರಾಜಶೇಖರ್, ಜಿ.ಶಶಿಕುಮಾರ್, ಜಿಲ್ಲಾ ಸಮಿತಿಯ ಪಿ.ಎಸ್.ಸಂಧ್ಯಾ ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಪಾದಯಾತ್ರೆಯಿಂದ ಬಿಜೆಪಿ-ಜೆಡಿಎಸ್ ಪಾಪ ವಿಮೋಚನೆ

**ಮೈಸೂರು:** ಬಿಜೆಪಿ-ಜೆಡಿಎಸ್‌ನವರು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸಿ ಪಾಪ ವಿಮೋಚನೆ ಮಾಡಿಕೊಂಡಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ನಡೆಸಿ ಮಾತನಾಡಿದ ಅವರು, ಬಿಜೆಪಿಯವರ ಪಾಪದ ಯಾತ್ರೆ ಅಂತ್ಯಗೊಂಡಿದೆ. ಬಿಜೆಪಿ-ಜೆಡಿಎಸ್‌ನವರು ಮಾಡಿದ್ದ ಪಾಪ ಕಳೆದುಕೊಂಡಿದ್ದಾರೆ. ಪಾಪ ವಿಮೋಚನಾ ಪಾದಯಾತ್ರೆ ಮುಕ್ತಾಯವಾಗಿದೆ ಎಂದು ಕಿಡಿಕಾರಿದರು.

ಎಲ್ಲರೂ ಐದೈದು ನಿಮಿಷ ಮಾತನಾಡಿದರು. ಆದರೆ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಒಂದು ಕಾಲು ಗಂಟೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ವಿರುದ್ಧ ಬಾಯಿಗೆ ಬಂದಂತೆ ಮಾತನಾಡಿ ದಾಖಲೆ ಇಲ್ಲದ ಭ್ರಷ್ಟಾಚಾರದ ಆರೋಪ ಮಾಡಿದರು. ಆದರೆ, ವೇದಿಕೆಯಲ್ಲಿ ಪರಮ ಭ್ರಷ್ಟರೇ ಕೂತಿದ್ದರು. ಭ್ರಷ್ಟಾಚಾರದಲ್ಲಿ ನಾ ಮುಂದು ತಾ ಮುಂದು ಎನ್ನುವವರೇ ಕುಳಿತಿದ್ದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಜೈಲಿಗೆ ಹೋಗಿದ್ದರು. ಎಚ್.ಡಿ.ದೇವೇಗೌಡ ಅವರ ಕುಟುಂಬದ ಭೂ ಸ್ವಾಧೀನದ ಕುರಿತು ಬಿಜೆಪಿಗರೇ ಜಾಹೀರಾತು ನೀಡಿದ್ದರು. ಸಾವಿರ ಕೋಟಿ ಲೂಟಿ ಮಾಡಿದವರು, ಸುಳ್ಳು ಹೇಳಿ ಪಿಎಚ್.ಡಿ ಪಡೆದವರು ವೇದಿಕೆಯಲ್ಲಿದ್ದರು ಎಂದು ಆಕ್ರೋಶ ವ್ಯಕ್ತಪಡಿಸಿದರು.

ತಮ್ಮ ತಂದೆ ಜೈಲಿಗೆ ಹೋಗಲು ಕಾರಣ ಯಾರು ಎಂಬುದನ್ನು ವಿಜಯೇಂದ್ರ ವೇದಿಕೆಯಲ್ಲಿ ಹೇಳಲಿಲ್ಲ. ಯಡಿಯೂರಪ್ಪ ಸಹಿಯನ್ನು ನಕಲು ಮಾಡಿದ್ದು ಯಾರು ಎಂದು ಪ್ರಶ್ನಿಸಿದರು. ಆರ್.ಅಶೋಕ್ ಮುಖ್ಯಮಂತ್ರಿ ಸಿದ್ದರಾಮಯ್ಯ ನಿವೇಶನದ ಖರೀದಿ ವಿಚಾರ ಪ್ರಸ್ತಾಪಿಸಿ ಮೆದುಳಿಗು-ನಾಲಿಗೆಗು ಸಂಬಂಧವಿಲ್ಲದೆ ಮಾತನಾಡಿದರು. ಅಂದು ಖರೀದಿ ಮಾಡಿದ ಆಸ್ತಿ ಬೆಲೆ ಇಂದು ಹೆಚ್ಚಾಗಿದೆ. ಹಾಗಾದರೆ ನೀವು ಮೊದಲ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಅಫಿಡವಿಟ್‌ನಲ್ಲಿ ಘೋಷಣೆ ಮಾಡಿಕೊಂಡಿರುವ ಆಸ್ತಿ ಎಷ್ಟು. ನಿಮ್ಮ ಬಳಿ ಈಗಿರುವ ಆಸ್ತಿ ಎಷ್ಟು? ವಿಪಕ್ಷ ನಾಯಕ ಸ್ಥಾನ ಉಳಿಸಿಕೊಳ್ಳಲು ಸಿಎಂ ಬಗ್ಗೆ ಬಾಯಿಗೆ ಬಂದಂತೆ ಮಾತನಾಡುತ್ತೀರಾ. ವಿಪಕ್ಷ ನಾಯಕನ ಸ್ಥಾನಕ್ಕೆ ತಕ್ಕಂತೆ ಯಾವತ್ತಾದರೂ ನಡೆದುಕೊಂಡಿದ್ದೀರಾ ಎಂದು ವಾಗ್ದಾಳಿ ನಡೆಸಿದರು. ಬಿಜೆಪಿ ರಾಜ್ಯ ಉಸ್ತುವಾರಿ ರಾಧಾ ಮೋಹನ್ ದಾಸ್ ಬಿಜೆಪಿ ನಾಯಕರು ಹೇಳಿಕೊಟ್ಟಿದ್ದನ್ನು ಹೇಳಿದ್ದಾರೆ. ನಿಮಗೆ ರಾಜ್ಯದ ಬಗ್ಗೆ ಏನಾದರು ಮಾಹಿತಿ ಇದಿಯಾ? ಬಿಜೆಪಿ ಆಡಳಿತದ 4 ವರ್ಷದ ಅವಧಿಯಲ್ಲಿ 25 ಹಗರಣಗಳಲ್ಲಿ 2 ಲಕ್ಷ ಕೋಟಿ ರೂ. ಹಗರಣ ಮಾಡಿರುವುದರ ಬಗ್ಗೆ ನಿಮ್ಮ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರೇ ಹೇಳಿದ್ದಾರೆ. ಟೆಂಪಲ್ ಎಂಟರ್ ಪ್ರೈಸಸ್ ಹೆಸರಿನ ಸಂಸ್ಥೆಯನ್ನು 2013 ನವೆಂಬರ್ ತಿಂಗಳಲ್ಲಿ ಅಮಿತ್ ಶಾ ಪುತ್ರ ಶುರು ಮಾಡಿದಾಗ 6365 ರೂ.ಇತ್ತು ಈಗ ಅದರ ಬ್ಯಾಲೆನ್ಸ್ ಶೀಟ್‌ನಲ್ಲಿ 1,402 ಕೋಟಿ ರೂ.ಆಗಿದೆ. ಇಷ್ಟೊಂದು ಹಣ ಸಂಪಾದಿಸಲು ಯಾವ ವ್ಯವಹಾರ ನಡೆಸಿದರು ಎಂದು ಬಹಿರಂಗ ಪಡಿಸಬೇಕು ಎಂದು ಸವಾಲು ಹಾಕಿದರು. ಎಸ್‌ಸಿಪಿ, ಟಿಎಸ್‌ಪಿ ವಿರೋಧಿಸಿದ್ದ ಬಿಜೆಪಿ: ಭ್ರಷ್ಟಾಚಾರದ ಪಿತಾಮಹ ಬಿಜೆಪಿಯವರೇ. ಪ್ರಹ್ಲಾದ್ ಜೋಶಿ ಸುಳ್ಳು ಹೇಳೋದರಲ್ಲಿ ನಿಸ್ಸೀಮ. ಸುಳ್ಳು ಹೇಳುವುದರಲ್ಲಿ ಪ್ರಹ್ಲಾದ್ ಜೋಷಿ ಎರಡು ಪಿಎಚ್.ಡಿ ಪಡೆದಿದ್ದಾರೆ. ಇನ್ನೂ ಎಸ್‌ಸಿಪಿ, ಟಿಎಸ್‌ಪಿ ಯೋಜನೆಯ ಬಗ್ಗೆ ಕೆಲ ದಲಿತ ಮುಖಂಡರ ಬಗ್ಗೆ ಸಮಾವೇಶದಲ್ಲಿ ಮಾತನಾಡಿದರು. ಎಸ್‌ಸಿಪಿ, ಟಿಎಸ್‌ಟಿ ಕಾಯ್ದೆ ಬಗ್ಗೆ ಇವರಿಗೇನಾದರೂ ತಿಳಿದಿದೀಯಾ? ಈ ಯೋಜನೆ ಮಾಡಿದ್ದು ಸಿದ್ದರಾಮಯ್ಯ ಅವರು. ಇದರ ವಿರುದ್ಧ ನ್ಯಾಯಾಲಯಕ್ಕೆ ಹೋದವರು ಬಿಜೆಪಿಗರು ಈ ಬಗ್ಗೆ ಪ್ರಶ್ನೆ ಮಾಡಿ ಎಂದು ಹೇಳಿದರು.

# ಘಟಕೋತ್ಸವ: ಪ್ರಮಾಣ ಪತ್ರ ವಿತರಣೆ




**ಮೈಸೂರು:** ಟೊಯೋಟಾ ತಾಂತ್ರಿಕ ತರಬೇತಿ ಸಂಸ್ಥೆಯ 15ನೇ ಘಟಕೋತ್ಸವದಲ್ಲಿ ಗ್ರಾಮೀಣ ಹಿನ್ನೆಲೆಯ 58 ಟಿಟಿಟಿಐ ವಿದ್ಯಾರ್ಥಿಗಳು ಮತ್ತು 156 ಟೊಯೋಟಾ ಕೌಶಲ್ಯ ಕೋರ್ಸ್ ವಿದ್ಯಾರ್ಥಿಗಳು ಪ್ರಮಾಣ ಪತ್ರ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಶುಭ ಹಾರೈಸಿದರು. ಟಿಟಿಟಿಐ ಸಂಸ್ಥೆ ಕರ್ನಾಟಕದ ಗ್ರಾಮೀಣ ಭಾಗದ ಯುವಜನತೆಗೆ ಉತ್ತಮ ತರಬೇತಿ ಮತ್ತು ಶಿಕ್ಷಣ ನೀಡಿ ಅವರನ್ನು ಸಬಲರನ್ನಾಗಿ ಮಾಡುತ್ತಿರುವುದು ಖುಷಿಯ ವಿಚಾರ. ಇಂತಹ ಯೋಜನೆಗಳು ಸಮಾಜದ ಬೆಳವಣಿಗೆಯಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಸಾಮೂಹಿಕ ಅಭಿವೃದ್ಧಿಯ ಮೂಲಕ ಸಕಾರಾತ್ಮಕ ಪರಿಣಾಮ ಬೀರುತ್ತವೆ. ವಾಹನೋದ್ಯಮಕ್ಕೆ ಮತ್ತು ಅದಕ್ಕೆ ಸಂಬಂಧಿಸಿದ ವಿಭಾಗಗಳಲ್ಲಿ ಕೆಲಸ ಮಾಡಲು ನುರಿತ ವೃತ್ತಿಪರರನ್ನು ಬೆಳೆಸುವ ಸಂಸ್ಥೆಯ ಬದ್ಧತೆಗೆ ಈ ಯುವ ಪದವೀಧರರು ಪುರಾವೆಯಾಗಿ ನಿಂತಿದ್ದಾರೆ. ನುರಿತ ಸಮರ್ಥ ಉದ್ಯೋಗಿಗಳನ್ನು ಬೆಳೆಸುವ ಟಿಟಿಟಿಐನ ಬದ್ಧತೆ ಶ್ಲಾಘನೀಯ ಎಂದು ಹೇಳಿದರು. 2007ರಲ್ಲಿ ಟಿಟಿಟಿಐ ಪ್ರಾರಂಭವಾಗಿದ್ದು, ಅಂದಿನಿಂದಲೂ ಅತ್ಯಾಧುನಿಕ ತಂತ್ರಜ್ಞಾನಗಳ ಕುರಿತು ಜ್ಞಾನ ಒದಗಿಸಲು ಮತ್ತು ಉದ್ಯಮಗಳ ಅಗತ್ಯಕ್ಕೆ ತಕ್ಕಂತೆ ಉದ್ಯೋಗಿಗಳನ್ನು ಸಿದ್ಧಪಡಿಸಲು ಗ್ರಾಮೀಣ ಭಾಗದ ಯುವಕರ ಕೌಶಲ್ಯ ಅಭಿವೃದ್ಧಿಪಡಿಸುವುದರತ್ತ ಗಮನ ಹರಿಸಿದೆ. ಈ ಕಾರ್ಯಕ್ರಮದ ವಿಶೇಷತೆ ಎಂದರೆ ವಿದ್ಯಾರ್ಥಿಗಳಿಗೆ ಶೇ.100 ಉದ್ಯೋಗ ಖಾತ್ರಿ. ಇಲ್ಲಿ ಕಲಿತ ವಿದ್ಯಾರ್ಥಿಗಳು ಕರ್ನಾಟಕ, ಭಾರತ ವಿದೇಶ ಸೇರಿದಂತೆ ಎಲ್ಲಾ ಕಡೆ ಅತ್ಯುತ್ತಮ ಉದ್ಯೋಗಾವಕಾಶ ಪಡೆದಿದ್ದಾರೆ.

ಇತ್ತೀಚೆಗೆ ಆರಂಭಿಸಿರುವ ಟೊಯೋಟಾ ಕೌಶಲ್ಯ ಕಾರ್ಯಕ್ರಮಕ್ಕೂ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಇದರಡಿ ಕಲಿಯಿರಿ ಮತ್ತು ಗಳಿಸಿರಿ ಎಂಬ ವಿಧಾನದ ಮೂಲಕ ಯುವಜನತೆಗೆ ಉತ್ಪಾದನಾ ಕ್ಷೇತ್ರದ ಉದ್ಯಮ ಕೌಶಲ್ಯಗಳನ್ನು ಕಲಿಯುವ ಅವಕಾಶ ಒದಗಿಸುತ್ತದೆ. ಆನ್-ದಿ-ಜಾಬ್ ಟ್ರೈನಿಂಗ್ ಮೂಲಕ ವೇತನ ಪಡೆಯುತ್ತಲೇ ಪ್ರಾಯೋಗಿಕ ಕಲಿಕೆಯ ಜ್ಞಾನ ಹೊಂದಲು ಅನುವು ಮಾಡಿಕೊಡುತ್ತದೆ. ಜತೆಗೆ ಜಪಾನ್ ಇಂಡಿಯಾ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನುಫ್ಯಾಕ್ಚರಿಂಗ್ (ಜೆಐಎಂ)ನ ಭಾಗವಾಗಿರುವುದರಿಂದ ಟಿಟಿಟಿಐ ಜಪಾನೀ ಶೈಲಿಯ ಉತ್ಪಾದನಾ ಕೌಶಲ್ಯಗಳನ್ನು ಕಲಿಸುತ್ತದೆ. ಭಾರತ ಸರ್ಕಾರದ ಸ್ಕಿಲ್ ಇಂಡಿಯಾ ಯೋಜನೆಗೆ ಪೂರಕವಾಗಿ ಕೆಲಸ ಮಾಡುತ್ತದೆ.

ಕಾರ್ಯನಿರ್ವಾಹಕ ಉಪಾಧ್ಯಕ್ಷ ಜಿ.ಶಂಕರ, ಟಿಕೆಎಂ ಆಡಳಿತ ಮಂಡಳಿ, ಟೊಯೋಟಾ ಸಮೂಹ ಕಂಪನಿಗಳ ಪ್ರತಿನಿಧಿಗಳು, ಪೂರೈಕೆದಾರರು, ಆಟೋಮೋಟಿವ್ ಸ್ಕಿಲ್ಸ್ ಡೆವಲಪ್‌ಮೆಂಟ್ ಕೌನ್ಸಿಲ್ (ಎಎಸ್‌ಡಿಸಿ) ಮತ್ತು ನ್ಯಾಷನಲ್ ಸ್ಕಿಲ್ ಡೆವಲಪ್‌ಮೆಂಟ್ ಕೌನ್ಸಿಲ್ (ಎನ್‌ಎಸ್‌ಡಿಸಿ) ಪ್ರತಿನಿಧಿಗಳು, ಟೊಯೋಟಾ ಟೆಕ್ನಿಕಲ್ ಸ್ಕಿಲ್ ಅಕಾಡೆಮಿ- ಜಪಾನ್, ಟೊಯೋಟಾ ಇಂಡೋನೇಷ್ಯಾ ಅಕಾಡೆಮಿ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ವೇಗ ಪತ್ತೆಗೆ ಲೇಸರ್, ಟ್ರ್ಯಾಕ್ ಗನ್

**ಬೆಂಗಳೂರು:** ನೈಸ್ ರಸ್ತೆಯಲ್ಲಿ ಅತಿವೇಗದ ವಾಹನ ಚಾಲನೆ ಮಾಡುವವರ ಮೇಲೆ ಕಣ್ಣಿಡಲು ನಗರದ ಸಂಚಾರ ಪೊಲೀಸರು ಲೇಸರ್ ಟ್ರ್ಯಾಕ್ ಗನ್ ಅಳವಡಿಸಿದ್ದಾರೆ. ಲೇಸರ್ ಟ್ರ್ಯಾಕ್ ಗನ್ ಮೂಲಕ ಅತಿವೇಗದ ವಾಹನ ಚಲಾಯಿಸುವ ಚಾಲಕರನ್ನು ಪತ್ತೆಹಚ್ಚಿ 1 ಸಾವಿರ ರೂ. ದಂಡ ವಿಧಿಸಲಾಗುತ್ತಿದೆ.

ಲೇಸರ್ ಟ್ರ್ಯಾಕ್ ಗನ್ ವೇಹನಗಳು ಚಲಿಸುತ್ತಿರುವ ವೇಗವನ್ನು ಪತ್ತೆಹಚ್ಚುವ ಒಂದು ಸಾಧನವಾಗಿದೆ. ನೈಸ್ ರಸ್ತೆಯಲ್ಲಿ ಅಲ್ಲಲ್ಲಿ ಪ್ರಯಾಣಿಕರ ಅರಿವಿಗೆ ಬಾರದಂತೆ ಈ ಸಾಧನದೊಂದಿಗೆ ಸಂಚಾರ ಪೊಲೀಸರು ಇರಲಿದ್ದಾರೆ. ನಿಗದಿತ ಮಿತಿಗಿಂತ ವೇಗವಾಗಿ ವಾಹನ ಸಂಚರಿಸಿದರೆ ಲೇಸರ್ ಟ್ರ್ಯಾಕ್ ಗನ್ ಅದನ್ನು ಸೆರೆಹಿಡಿಯಲಿದೆ. ವಾಹನದ ನಂಬರ್ ಅನ್ನು ಈ ಯಂತ್ರ ಪತ್ತೆ ಮಾಡುತ್ತದೆ. ಲೇಸರ್ ಟ್ರ್ಯಾಕ್ ಗನ್ ಇರಿಸಿದ ಜಾಗದಿಂದ ಟೋಲ್ ಬಳಿಗೆ ವಾಹನದ ಮಾಹಿತಿ ಹೋಗುತ್ತದೆ. ವಾಹನದ ಫೋಟೊ ಹಾಗೂ ನಂಬರ್ ವಾಟ್ಸ್‌ಆಪ್ ಮೂಲಕ ಟೋಲ್ ಬಳಿ ಇರುವ ಸಿಬ್ಬಂದಿಗೆ ರವಾನೆಯಾಗುತ್ತದೆ. ಟೋಲ್ ಬಳಿ ವಾಹನದ ವೇಗ ಕಡಿಮೆ ಆದಾಗ ವಾಹನ ತಡೆದು ಸಂಚಾರ ಪೊಲೀಸರು ದಂಡ ಸ್ವೀಕರಿಸಲಿದ್ದಾರೆ. ಕಳೆದ ಒಂದು ವಾರದಿಂದ ಲೇಸರ್ ಟ್ರ್ಯಾಕ್ ಗನ್ ಮೂಲಕ ಅತಿವೇಗದ ಚಾಲನೆ ಪತ್ತೆಹಚ್ಚಿ ದಂಡ ವಸೂಲಿ ಮಾಡಲಾಗುತ್ತಿದೆ. ಒಂದೊಂದು ಮಾದರಿಯ ವಾಹನಕ್ಕೆ ಒಂದೊಂದು ವೇಗದ ಮಿತಿ ನಿಗದಿಪಡಿಸಲಾಗಿದೆ. ಆ ವೇಗದ ಮಿತಿ ಮೀರಿ ಚಾಲನೆ ಮಾಡಿದರೆ ದಂಡ ಬೀಳಲಿದೆ. ಇಷ್ಟೇ ಅಲ್ಲದೆ, ನಿಗದಿತ ಟ್ರ್ಯಾಕ್‌ನಲ್ಲಿಯೇ ವಾಹನಗಳು ಸಂಚರಿಸಬೇಕು. ಟ್ರ್ಯಾಕ್ ದಾಟಿ ಬಂದರೂ ಫೈನ್ ಬೀಳುವುದು ಖಚಿತವಾಗಿದೆ. 8 ಮಂದಿಗಿಂತ ಕಡಿಮೆ ಸಾಮರ್ಥ್ಯ ಹೊಂದಿರುವ ವಾಹನಗಳಿಗೆ 120 ಕಿಮೀ ವೇಗದ ಮಿತಿ ನಿಗದಿಪಡಿಸಲಾಗಿದೆ.

# ನೊಂದವರು, ಹಸಿದವರಿಗೆ ಸಹಾಯ ಮಾಡಿ



**ಕೆ.ಆರ್.ನಗರ:** ಜನ್ಮ ದಿನದ ಹೆಸರಿನಲ್ಲಿ ಉಳ್ಳವರು ಅನಗತ್ಯವಾಗಿ ಹಣ ವೆಚ್ಚ ಮಾಡುವ ಬದಲು ಸಮಾಜದಲ್ಲಿ ನೊಂದವರು ಮತ್ತು ಹಸಿವಿನಿಂದ ಬಳಲುವವರಿಗೆ ಸಹಾಯ ಮಾಡಬೇಕು ಎಂದು ವಿರಾಜಪೇಟೆ ತಾಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಕೆ.ಆರ್.ರಾಜೇಶ್ ಹೇಳಿದರು.

ಕೆ.ಆರ್.ನಗರ ಪಟ್ಟಣದ ವಿದ್ಯಾನಗರದಲ್ಲಿರುವ ಮಾತೃಶ್ರೀ ವೃದ್ಧಾಶ್ರಮದಲ್ಲಿ ತಮ್ಮ ಪುತ್ರಿ ಕೆ.ಆರ್.ಸುಶ್ಮಿತಾಳ ಜನ್ಮದಿನದ ಅಂಗವಾಗಿ ಆಶ್ರಮದ ವೃದ್ಧರಿಗೆ ವಿತರಿಸಿ ಉಡುಗೊರೆ ನೀಡಿ ಆಹಾರ ಊಣ ಬಡಿಸಿ ಮಾತನಾಡಿದ ಅವರು, ನೊಂದವರ ಸೇವೆ ಮಾಡಿದರೆ ದೇವರ ಆಶೀರ್ವಾದ ಪಡೆದಂತೆ ಎಂದರು. ಮುಂದಿನ ದಿನಗಳಲ್ಲಿ ನನ್ನ ಇಬ್ಬರು ಪುತ್ರಿಯರ ಜನ್ಮ ದಿನವನ್ನು ಇಂತಹ ಆಶ್ರಮಗಳಲ್ಲಿ ಆಚರಣೆ ಮಾಡಿ ಸಮಾಜಮುಖಿ ಕೆಲಸ ಮಾಡುವುದಾಗಿ ಘೋಷಣೆ ಮಾಡಿದ ಅವರು, ಇಂತಹ ಕೆಲಸಕ್ಕೆ ಮುಂದಾಗುವವರಿಗೆ ಸರ್ವರೂ ಸಹಕಾರ ನೀಡಬೇಕೆಂದರು. ಮಾತೃಶ್ರೀ ವೃದ್ಧಾಶ್ರಮಕ್ಕೆ ಅಗತ್ಯವಿರುವ ಸಹಕಾರ ನೀಡುವುದಾಗಿ ಭರವಸೆ ನೀಡಿ ಮಕ್ಕಳು ತಮ್ಮ ಪೋಷಕರನ್ನು ಜತನದಿಂದ ನೋಡಿಕೊಂಡು ಅವರ ಪೋಷಣೆ ಮಾಡಿದರೆ ವೃದ್ಧಾಶ್ರಮ ತೆರೆಯುವ ಅವಶ್ಯಕತೆ ಇರುವುದಿಲ್ಲವೆಂದು ಅಭಿಪ್ರಾಯಪಟ್ಟರು. ಕುಪ್ಪೆ ಗ್ರಾಮದ ಮಾಜಿ ಪಟೇಲ್ ಕೆ.ಪಿ.ನಂದೀಶ್ ಮಾತನಾಡಿ, ಕಳೆದ ನಾಲ್ಕು ವರ್ಷಗಳಿಂದ ಕೆ.ಆರ್.ನಗರ ಪಟ್ಟಣದಲ್ಲಿ ಮಾತೃಶ್ರೀ ವೃದ್ಧಾಶ್ರಮ ನಡೆಸಿ ಸಮಾಜದಲ್ಲಿ ನೊಂದವರು ಮತ್ತು ನಿರಾಶ್ರಿತರನ್ನು ಪ್ರೀತಿಯಿಂದ ಪೋಷಣೆ ಮಾಡುತ್ತಿರುವ ಆಶ್ರಮದ ಕಾರ್ಯದರ್ಶಿ ಕುಪ್ಪೆ ಮಂಜುನಾಥ್ ಅವರ ಸೇವಾ ಕಾರ್ಯ ಇತರರಿಗೆ ಮಾದರಿ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ನಾನು ಈ ಆಶ್ರಮಕ್ಕೆ ಎಲ್ಲಾ ರೀತಿಯ ನೆರವು ಒದಗಿಸುವುದಾಗಿ ಭರವಸೆ ನೀಡಿದ ಅವರು, ನಮ್ಮೊಂದಿಗೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

# ಶಿಕ್ಷಕರು ಎರಡನೇ ತಾಯಿ ಇದ್ದಂತೆ



**ಮೈಸೂರು:** ಶಿಕ್ಷಕರು ಎರಡನೇ ತಾಯಿ ಇದ್ದಂತೆ. ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆಯೇ ನೋಡಿಕೊಂಡು ಅವರ ಸಾಧನೆಗೆ ಸಹಕಾರಿಯಾಗುತ್ತಾರೆ ಎಂದು ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ಹೇಳಿದರು.

ಪರೀಕ್ಷಾ ಸ್ಫೂರ್ತಿ ಫೌಂಡೇಶನ್ ವತಿಯಿಂದ ನಗರದ ಜೆಎಸ್‌ಎಸ್ ಆಸ್ಪತ್ರೆ ಆವರಣದ ಶಿವರಾತ್ರಿ ರಾಜೇಂದ್ರ ಭವನದಲ್ಲಿ ಏರ್ಪಡಿಸಿದ್ದ ರಾಜ್ಯಮಟ್ಟದ ಶಿಕ್ಷಕ ಸಾಧಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಿಗೆ ತಾಯಿ ಮೊದಲ ಗುರು, ಮನೆ ಮೊದಲ ಪಾಠಶಾಲೆಯಾದರೆ, ಶಿಕ್ಷಕರು ಎರಡನೇ ತಾಯಿ ಇದ್ದಂತೆ. ಮಕ್ಕಳ ಪಾಲಿಗೆ ಶಾಲೆ ಮನೆ ಇದ್ದಂತೆ. ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆಯೇ ನೋಡಿಕೊಂಡು ಅವರ ಸಾಧನೆಗೆ ಸಹಕಾರಿಯಾಗಿರುತ್ತಾರೆ ಎಂದರು. ಯಾವುದೇ ವ್ಯಕ್ತಿ ಎಷ್ಟೇ ಉನ್ನತ ಹುದ್ದೆ ಅಲಂಕರಿಸಿ, ಏನೇ ಸಾಧನೆ ಮಾಡಿದರೂ, ಆತನ ಯಶಸ್ಸಿನ ಹಿಂದೆ ಶಿಕ್ಷಕರ ಪಾತ್ರ ದೊಡ್ಡದಿರುತ್ತದೆ ಎಂಬುದನ್ನು ಮರೆಯಬಾರದು. ನಾನು ಶಿಕ್ಷಣ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿದ್ದೇನೆ. ಆದ್ದರಿಂದ ಈ ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಗೌರವಿಸುವುದು ಸಂತೋಷದ ಕೆಲಸ. ನಿಮ್ಮ ಪರವಾದ ಹೋರಾಟ ಮತ್ತು ಸಮಸ್ಯೆಗಳಿಗೆ ನಾನು ಸದಾ ಸ್ಪಂದಿಸುವುದಾಗಿ ಹೇಳಿದರು. ರಾಜ್ಯದ ವಿವಿಧ ಶಾಲೆಗಳ 20 ಮಂದಿ ಶಿಕ್ಷಕರಿಗೆ ಸಾಧಕ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿದ್ದರು. ಗೋಪಾಲಗೌಡ ಆಸ್ಪತ್ರೆ ಎಂಡಿ ಡಾ.ಸುಶ್ರುತ್ ಗೌಡ, ಇಫಿಮೆಡ್ ಸಂಸ್ಥೆಯ ಎ.ಸುಧೀಂದ್ರ, ಬಸವರಾಜೇಂದ್ರ ಸ್ವಾಮಿ ಫೌಂಡೇಷನ್ ಅಧ್ಯಕ್ಷ ಯೋಗೇಶ್ ಚುಂಚನಹಳ್ಳಿ ಮೊದಲಾದವರು ಇದ್ದರು.

# ಕೊತ್ತೇಗಾಲ ಗ್ರಾಪಂ ಅಧ್ಯಕ್ಷರಾಗಿ ಚಿಕ್ಕರಾಚಶೆಟ್ಟಿ

**ಸರಗೂರು:** ತಾಲೂಕಿನ ಕೊತ್ತೇಗಾಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಚಿಕ್ಕರಾಚಶೆಟ್ಟಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿ ಚಿಕ್ಕರಾಚಶೆಟ್ಟಿ ಅವರನ್ನು ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅಧ್ಯಕ್ಷರಾಗಿ ಚಿಕ್ಕರಾಚಶೆಟ್ಟಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಸಿ.ಗಣೇಶ್ ಘೋಷಿಸಿದರು.

ನೂತನ ಅಧ್ಯಕ್ಷ ಚಿಕ್ಕರಾಚಶೆಟ್ಟಿ ಮಾತನಾಡಿ, ಕೊತ್ತೆಗಾಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅಭಿವೃದ್ಧಿಗೆ ಮತ್ತು ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳು ದೊರೆಯುವಂತೆ ಎಲ್ಲಾ ಸದಸ್ಯರೊಡಗೂಡಿ ಪ್ರಾಮಾಣಿಕತೆಯಿಂದ ದುಡಿಯುತ್ತೇನೆ ಎಂದರು.

ಪಂಚಾಯಿತಿ ಪಿಡಿಒ ನಾಗೇಂದ್ರ, ಬಿಲ್ ಕಲೆಕ್ಟರ್ ಗುಂಡಣ್ಣ, ಕಂಪ್ಯೂಟರ್ ಆಪರೇಟರ್ ಸಿದ್ದರಾಜು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದರು. ಉಪಾಧ್ಯಕ್ಷೆ ವಿಮಲಾ, ಸದಸ್ಯರಾದ ಚೆಲುವಪ್ಪ,ಜೆರಾಕ್ಸ್ ಮಾದೇವಯ್ಯ, ಕೆ.ಆರ್ ಶೋಭಾ ಸುಂದರ್, ಗೌರಮ್ಮ, ಕೆಂಪಾಲಮ್ಮ, ಮಹೇಶ್,ಟಿ. ಕುಮಾರ್,ಲಕ್ಷ್ಮೀದೇವಿ, ಸವಿತಾ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಪಿ.ರವಿ, ಪುರದಕಟ್ಟೆ ಬಸವರಾಜು, ಮೈಮುಲ್ ನಿರ್ದೇಶಕ ಕೆ.ಈರೇಗೌಡ,ಬೊಪ್ಪನಹಳ್ಳಿ ಭಾಸ್ಕರ್, ಸುಂದರ್, ಬಾಲಾಜಿ, ಶಂಕರಪ್ಪ, ಮಂಜುನಾಥ್, ಪುಟ್ಟೇಗೌಡ, ಕರಿಶೆಟ್ಟಿ, ಮಾದಶೆಟ್ಟಿ, ಚಾಮನಾಯ್ಕ ಇನ್ನಿತರರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.



## ಶ್ರೀಮಂತಿಕೆಗಿಂತ ಹೃದಯವಂತಿಕೆ ಮುಖ್ಯ



**ಮೈಸೂರು:** ದಾನ ಮಾಡಲು ಶ್ರೀಮಂತಿಕೆಗಿಂತ ಹೃದಯವಂತಿಕೆ ಮುಖ್ಯ ದಾನಕ್ಕೆ ವಿರುದ್ಧ ಪದವೇ ಇಲ್ಲ ಎಂದು ಜೆಎಸ್‌ಎಸ್ ವಿದ್ಯಾ ಸಂಸ್ಥೆಯ ಸಂಯೋಜನಾಧಿಕಾರಿ ಜಿ.ಎಲ್.ಪುರಾಂತಕ ಹೇಳಿದರು. ಶರಣ ಸಾಹಿತ್ಯ ಪರಿಷತ್ತು ಏರ್ಪಡಿಸಿದ್ದ ವಚನ ಶ್ರಾವಣ ಕಾರ್ಯಕ್ರಮ ಉದ್ಘಾಟಿಸಿ ಉಪನ್ಯಾಸ ನೀಡಿದ ಅವರು, ದಾನ ಮಾಡಿ ಹೊಟ್ಟೆ ಕಿಚ್ಚುಪಡುವುದಾಗಲಿ, ಆಡಿಕೊಳ್ಳುವುದಾಗಲಿ ಮಾಡಬಾರದು. ಕೊಟ್ಟದ್ದು ಮುಂದೆ ಫಿಕ್ಸೆಡ್ ಡಿಪಾಸಿಟ್ ಇದ್ದ ಹಾಗೆ ಎಂದು ಸರ್ವಜ್ಞನ ವಚನ ಧರಿಸಿ ಹೇಳಿದರು. ಬಲಗೈಯಲ್ಲಿ ಕೊಟ್ಟದ್ದು ಎಡಗೈಗೆ ಗೊತ್ತಾಗಬಾರದು. ದಾನವೆಂಬುದು ವ್ಯಾಪಾರವಲ್ಲ ಸಂಸ್ಕಾರ ಹೊಂದುವುದು. ದಾನಕ್ಕೆ ತಾಯಿ ಹೃದಯ ಇರಬೇಕು. ದಾನವನ್ನು ಹಸಿದವರಿಗೆ ಅಗತ್ಯ ಇರುವವರಿಗೆ ಅಸಹಾಯಕರಿಗೆ ವೃದ್ಧರಿಗೆ ಅಗತ್ಯ ಇರುವಷ್ಟು ದಾನ ಮಾಡಬೇಕು. ಪಡೆಯುವುದಕ್ಕಿಂತ ಕೊಡುವುದರಲ್ಲಿ ಸಂತೋಷ ಪಡಬೇಕು ಎಂದರು.

ಕುದೇರು ಮಠದ ಗುರುಶಾಂತ ಸ್ವಾಮಿ ಸಾನಿಧ್ಯ ವಹಿಸಿದ್ದರು. ಮಗು ಸದಾನಂದ ಅಧ್ಯಕ್ಷತೆ ವಹಿಸಿದ್ದರು. ಶಾರದಾ ಶಿವಲಿಂಗ ಸ್ವಾಮಿ, ಪ್ರಾಯೋಜಕಿ ಶೈಲಾ ನಾಗರಾಜ್ ಉಪಸ್ಥಿತರಿದ್ದರು.

## ಯುಪಿಎಸ್ಸಿ ತರಬೇತಿಗೆ ಅರ್ಜಿ

**ಮೈಸೂರು:** ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಾಸವಿ ಅಕಾಡೆಮಿ ಸೇವಾ ಸಂಸ್ಥೆಯಿಂದ ಎಲ್ಲಾ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತವಾಗಿ ಯುಪಿಎಸ್ಸಿ ತರಬೇತಿ ನೀಡಲಾಗುವುದು ಎಂದು ಮೈಸೂರು ಆರ್ಯವೈಶ್ಯ ಜಿಲ್ಲಾ ಸಮಿತಿ ಅಧ್ಯಕ್ಷ ಲಯನ್ ಕೆ.ಆನಂದ ಕೃಷ್ಣ ತಿಳಿಸಿದ್ದಾರೆ. 8 ತಿಂಗಳ ತರಬೇತಿ ಅವಧಿಯಾಗಿದ್ದು, 2025ರಲ್ಲಿ ಲೋಕ ಸೇವಾ ಆಯೋಗದ ಪರೀಕ್ಷೆಗಳನ್ನು ಬರೆಯಲು ಇಚ್ಛಿಸುವ ವಿದ್ಯಾರ್ಥಿಗಳು ಇದನ್ನು ಸದುಪಯೋಗ ಪಡಿಸಿಕೊಳ್ಳಬಹುದು. ಆಸಕ್ತರು ವಾಸವಿ ಅಕಾಡೆಮಿ ನಡೆಸುವ ಪ್ರವೇಶ ಮತ್ತು ಮೌಖಿಕ ಪರೀಕ್ಷೆಯಲ್ಲಿ ಭಾಗವಹಿಸಿ ಉತ್ತೀರ್ಣರಾದರೆ ತರಬೇತಿಗೆ ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸಲು ಆ.25 ಕೊನೆಯ ದಿನಾಂಕವಾಗಿದ್ದು, ಸೆ.1ರಂದು ಪ್ರವೇಶ ಪರೀಕ್ಷೆ ಮತ್ತು ಮೌಖಿಕ ಪರೀಕ್ಷೆ ನಡೆಯಲಿದೆ. ಮಾಹಿತಿಗಾಗಿ ಮೊ.9241203436 ಅಥವಾ 9844267452ನ್ನು ಸಂಪರ್ಕಿಸಬಹುದು.

## ಮಳೆಗಾಲದಲ್ಲಿ ರೋಗಗಳು ಹೆಚ್ಚಳ

**ಮೈಸೂರು:** ಮಳೆಗಾಲದ ಆರಂಭ ಡೆಂಗ್ಯೂ, ಮಲೇರಿಯಾ ಮತ್ತು ವೈರಲ್ ಜ್ವರಗಳಂತಹ ವಿವಿಧ ರೋಗಗಳ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದು ಗಮನಾರ್ಹವಾದ ಆರೋಗ್ಯ ಅಪಾಯಗಳನ್ನು ಉಂಟುಮಾಡುತ್ತದೆ. ಹೆಚ್ಚುವರಿಯಾಗಿ, ಕರ್ನಾಟಕದಲ್ಲಿ ಹೆಚ್ಚುತ್ತಿರುವ ಡೆಂಗ್ಯೂ ಪ್ರಕರಣಗಳ ಮಧ್ಯೆ, ಜನರು ಹೆಚ್ಚಿನ ಆರೋಗ್ಯ ಅಪಾಯಗಳನ್ನು ಎದುರಿಸುತ್ತಿದ್ದಾರೆ. ಅನೇಕ ಪ್ರದೇಶಗಳಲ್ಲಿ ಆಸ್ಪತ್ರೆಯ ದಾಖಲಾತಿಗಳಲ್ಲಿ ಗಮನಾರ್ಹ ಏರಿಕೆಯನ್ನು ಕಂಡುಬಂದಿದೆ ಮತ್ತು ವೈದ್ಯಕೀಯ ಆರೈಕೆಗಾಗಿ ಹೆಚ್ಚಿನ ಗಮನವನ್ನು ಹೊಂದಿವೆ. ಭಾರತದಲ್ಲಿ ಪ್ರಮುಖ ವಿಮಾ ಸೇವೆ ಒದಗಿಸುವ ಕಂಪೆನಿಯಾಗಿರುವ ಟಾಟಾ ಏಐಜಿ, ಮಾನ್ಸೂನ್-ಸಂಬಂಧಿತ ರೋಗಗಳ ವಿರುದ್ಧ ಕುಟುಂಬಗಳನ್ನು ರಕ್ಷಿಸಲು ಸಮಗ್ರ ಆರೋಗ್ಯ ವಿಮೆ ಪರಿಹಾರಗಳನ್ನು ಒದಗಿಸುತ್ತದೆ. ವಿಶೇಷವಾಗಿ ಮಳೆಗಾಲದಲ್ಲಿ ಡೆಂಗ್ಯೂ ಪ್ರಕರಣಗಳು ಆತಂಕಕಾರಿಯಾಗಿ ಏರಿಕೆ ದಾಖಲಿಸುತ್ತಿವೆ. 2022 ರಲ್ಲಿ 9,889 ಪ್ರಕರಣಗಳು ವರದಿ ಆಗಿದ್ದು 2023 ರಲ್ಲಿ 19,300 ಪ್ರಕರಣಗಳು, ಮತ್ತು ಜುಲೈ 2024 ರ ಅಂತ್ಯದ ವೇಳೆಗೆ 17,227 ಪ್ರಕರಣಗಳು ವರದಿಯಾಗಿವೆ, ಇದು ತೀವ್ರಗೊಂಡ ಸಾರ್ವಜನಿಕ ಆರೋಗ್ಯದ ತುರ್ತು ಕ್ರಮಗಳ ಅಗತ್ಯವನ್ನು ಸೂಚಿಸುತ್ತದೆ.

## ಪವನ ವಿದ್ಯುತ್ ಉತ್ಪಾದನೆ

**ಮೈಸೂರು:** ವಿಂಡರ್ಜಿ ಜೂನ್ ತಿಂಗಳಲ್ಲಿ 46,656 ಮೆಗಾವ್ಯಾಟ್ ಪವನ ವಿದ್ಯುತ್ ಅನುಸ್ಥಾಪನೆ ಮಾಡಿದ್ದು ಇದು ಸ್ಥಳೀಯವಾಗಿ ಮತ್ತು ಜಾಗತಿಕವಾಗಿ ಅತ್ಯಂತ ದೊಡ್ಡ ಪವನ ವಿದ್ಯುತ್ ಉತ್ಪಾದಕರು ಮತ್ತು ಪ್ರತಿಪಾದಕರಲ್ಲಿ ಒಂದಾಗಿದೆ. ತನ್ನ ಆರನೇ ಆವೃತ್ತಿಯಲ್ಲಿ ಶಕ್ತಿ ಹಾಗೂ ಹೊಸ ಮತ್ತು ನವೀಕರಿಸಬಲ್ಲ ಶಕ್ತಿಯ ಸಚಿವಾಲಯದ ಬೆಂಬಲ ಪಡೆದಿದ್ದು, ಈ ಮೂರು ದಿನಗಳ ಪ್ರದರ್ಶನ ಹಾಗೂ ಸಮ್ಮೇಳನವನ್ನು ಮೇಕ್ ಇನ್ ಇಂಡಿಯಾ ಅಡಿಯಲ್ಲಿ ನಡೆಸಲಾಗಿದ್ದು ಕರ್ನಾಟಕ, ಆಂಧ್ರ ಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಗುಜರಾತ್ ಮತ್ತು ರಾಜಾಸ್ಥಾನಗಳಂತಹ ಪವನ ವಿದ್ಯುತ್ ಹೊಂದಿರುವ ರಾಜ್ಯಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಪವನ ವಿದ್ಯುತ್ ಕ್ಷೇತ್ರದಲ್ಲಿ ಮುಂಚೂಣಿಯ ವೇದಿಕೆಯಾಗಿರುವ ವಿಂಡರ್ಜಿ ಇಂಡಿಯಾ 2024 ತಮಿಳುನಾಡಿನ ಚೆನ್ನೈ ಟ್ರೇಡ್ ಸೆಂಟರ್‌ನಲ್ಲಿ ಅಕ್ಟೋಬರ್ 23-25ರಂದು ನಡೆಯಲಿದೆ. ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಕಾರ್ಯಕ್ರಮವಾಗಿದ್ದು ಎಕ್ಸಿಬಿಷನ್ ಎಕ್ಸಲೆನ್ಸ್ ಅವಾರ್ಡ್ಸ್ 2024 ಪವನ ವಿದ್ಯುತ್ ಕ್ಷೇತ್ರದ ಸಂಶೋಧಕರು, ನೀತಿ ನಿರೂಪಕರು, ನಿಯಂತ್ರಕರು ಮತ್ತು ಪ್ರಮುಖರನ್ನು ಒಟ್ಟಿಗೆ ತರುತ್ತದೆ ಎಂದು ವ್ಯವಸ್ಥಾಪಕರು ತಿಳಿಸಿದ್ದಾರೆ.

## ಪ್ರವೇಶದ ಅವಧಿ ವಿಸ್ತರಣೆ

**ಮೈಸೂರು:** ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ(ಸಿಪೆಟ್) 2024-25ನೇ ಸಾಲಿನ ಉದ್ಯೋಗಾಧಾರಿತ ಮತ್ತು ಉದ್ಯೋಗ ಖಚಿತ ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಿಸಲಾಗಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ (ವಿಜ್ಞಾನ), ಐಟಿಐ ಪರೀಕ್ಷೆಯಲ್ಲಿ ಶೇ.35 ಅಂಕ ಪಡೆದು ತೇರ್ಗಡೆಯಾದ ಅಭ್ಯರ್ಥಿಗಳು 3 ವರ್ಷದ ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ, ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ ಕೋರ್ಸ್‌ಗಳಿಗೆ ವೆಬ್‌ಸೈಟ್ ಮೂಲಕ ಸೆ.1ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ 9480253024, 9791431827ನ್ನು ಸಂಪರ್ಕಿಸಬಹುದು.

## ದರಪಟ್ಟಿ ಆಹ್ವಾನ

**ಮೈಸೂರು:** ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ವತಿಯಿಂದ ಪ್ರವಾಸೋದ್ಯಮ ಉತ್ತೇಜಿಸುವ ಸಲುವಾಗಿ ಅನ್‌ಟೋಲ್ಡ್ ಮೈಸೂರು ಮತ್ತು ಸಾಹಸ ಪ್ರವಾಸೋದ್ಯಮ ಡಿಪಿಆರ್ ಅನ್ನು ಸಿದ್ಧಪಡಿಸಲು ಹಾಗೂ ಮೊಬೈಲ್ ಅಪ್ಲಿಕೇಶನ್ ಡೆವಲಪ್‌ಮೆಂಟ್ ಸರ್ವಿಸ್, ವೆಬ್ ಸೈಟ್ ಡೆವಲಪ್‌ಮೆಂಟ್ ಸರ್ವಿಸ್ ಹಾಗೂ ಸೋಶಿಯಲ್ ಮೀಡಿಯಾ ನಿರ್ವಹಣೆಗಾಗಿ ಡಿಜಿಟಲ್ ಡಿಸ್‌ಪ್ಲೇ ಅಂಡ್ ಸ್ಟ್ಯಾಂಡಿಸ್ ಮತ್ತು ಮಾಹಿತಿ ಮುದ್ರಿಕೆಗಳು, ಪ್ರವಾಸಿ ಮಡಿಕೆಗಳು ಹಾಗೂ ಇತರೆ ಪ್ರಚಾರ ಸಾಮಗ್ರಿಗಳ ಸೌಲಭ್ಯವನ್ನು ಪಡೆಯಲು ದರಪಟ್ಟಿ ಆಹ್ವಾನಿಸಲಾಗಿದೆ. ದರಪಟ್ಟಿ ಸಲ್ಲಿಸಲು ಆ.19 ಕೊನೆಯ ದಿನಾಂಕವಾಗಿದ್ದು, ಮಾಹಿತಿಗಾಗಿ ದೂ.ಸಂ: 0821-2422096ನ್ನು ಸಂಪರ್ಕಿಸಬಹುದು.

**ಲೋಕೋಪಯೋಗಿ ಇಲಾಖೆ**
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ,
ಚಾಮರಾಜನಗರ ವಿಭಾಗ, ಚಾಮರಾಜನಗರ-571313
ದೂರವಾಣಿ/ಫ್ಯಾಕ್ಸ್ ಸಂಖ್ಯೆ: 08226-22207
ಇಮೇಲ್: eecnr@kpwd.gov.in / pwdeechngr@gmail.com

**ಟೆಂಡರ್ ಪ್ರಕಟಣೆ**

**ಸಂಖ್ಯೆ/ಕಾ/ಪಾ.ಅ/ಚಾ.ವಿ.ಚಾ/ಟೆಂಡರ್/2024-25**
**ದಿನಾಂಕ:08.08.2044**
**(ಏಕ ಲಕೋಟೆ), ಟೆಂಡರ್ ಅಧಿಸೂಚನೆ ಸಂಖ್ಯೆ 05/2024-25**
**ದಿನಾಂಕ 08.08.2024**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಐಟಂವಾರು ಟೆಂಡರ್‌ಗಳನ್ನು ಕರ್ನಾಟಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು ktpp Act 1999 and ktpp rule 2000 ರಲ್ಲಿ ಅರ್ಹ ದರ್ಜೆಯ ಸಿವಿಲ್ ಗುತ್ತಿಗೆದಾರರುಗಳಿಂದ KW-1 & KW-2 ಲೆಕ್ಕ ಶೀರ್ಷಿಕೆ: 3054-03-337-0-05-200 ರಾಜ್ಯ ಹೆದ್ದಾರಿ ರಸ್ತೆ ನಿರ್ವಹಣೆ ಕಾಮಗಾರಿ ಅಡಿಯಲ್ಲಿ ಕನಿಷ್ಠ ಅಂದಾಜು ಮೊತ್ತ 7.16 ಲಕ್ಷಗಳು ಹಾಗೂ ಗರಿಷ್ಠ ಅಂದಾಜು ಮೊತ್ತ ರೂ. 36.10 ಲಕ್ಷಗಳ ಒಟ್ಟು 12 ಕಾಮಗಾರಿಗಳಿಗೆ ಹಾಗೂ ಲೆಕ್ಕ ಶೀರ್ಷಿಕೆ: 3054- 04-337-1-10-200 ಜಿಲ್ಲಾ ಮತ್ತು ಇತರೆ ರಸ್ತೆಗಳ ನಿರ್ವಹಣೆ ಕಾಮಗಾರಿ ಅಡಿಯಲ್ಲಿ ಕನಿಷ್ಠ ಅಂದಾಜು ಮೊತ್ತ ರೂ. 9.72 ಲಕ್ಷಗಳು ಹಾಗೂ ಗರಿಷ್ಠ ಅಂದಾಜು ಮೊತ್ತ ರೂ. 20.00 ಲಕ್ಷಗಳ ಒಟ್ಟು 24 ಕಾಮಗಾರಿಗಳಿಗೆ, ಹಾಗೂ, ಇ-ಪ್ರಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ, ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಬಹುದಾದ ದಿನಾಂಕ 09.08.2024 ರಿಂದ 19.08.2024 ಸಂಜೆ 16.00 ಗಂಟೆವರೆಗೆ, ಟೆಂಡರ್ ಸಲ್ಲಿಸಲು ಕಡೆಯ ದಿನಾಂಕ 19.08.2024 ಸಂಜೆ 16.00 ಗಂಟೆಯವರೆಗೆ, ಬಿಡ್ ತೆರೆಯುವ ದಿನಾಂಕ 21.08.2024 ಬೆಳ್ಳಿಗೆ 11.00 ಗಂಟೆಯ ನಂತರ, ಹಾಗೂ ಇನ್ನೂ ಮುಂದೆ ಈ ನೋಟಿಫಿಕೇಷನ್‌ಗೆ ಸಂಬಂಧ ಪಟ್ಟ ಬದಲಾವಣೆಗಳನ್ನು ಇ-ಪ್ರಕ್ಯೂರ್ ಮೆಂಟ್ ಮಾತ್ರ ಪ್ರಕಟಿಸಲಾಗುವುದು.

ಹೆಚ್ಚಿನ ಮಾಹಿತಿ/ವಿವರಗಳನ್ನು https://www.Kppp.karnataka.gov.in ಕಛೇರಿಯ ಸಮಯದಲ್ಲಿ ಪಡೆಯಬಹುದಾಗಿದೆ.

**ಸಂ:ವಾಸಾಸಂಇ:ಚಾನಗರ:173:2024-25**

**ಕಾರ್ಯಪಾಲಕ ಅಭಿಯಂತರರು**
**ಲೋಕೋಪಯೋಗಿ ಇಲಾಖೆ ವಿಭಾಗ,**
**ಚಾಮರಾಜನಗರ**

## ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ಅಕ್ಟೋಂಬರ್ 01 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುವ ಸಲುವಾಗಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ ಪ್ರಶಸ್ತಿಗಳನ್ನು ನೀಡಲಾಗುತ್ತಿದ್ದು, ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ನಾಗರಿಕರ ಸಂಸ್ಥೆಗಳ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಾನೂನು, ಪ್ರತಿಭೆ/ ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಸೇರಿದಂತೆ 06 ವೈಯಕ್ತಿಕ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 07 ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ನಿಗಧಿತ ಅರ್ಜಿ ನಮೂನೆಯಲ್ಲಿ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಇದೇ ಆಗಸ್ಟ್ 31 ರೊಳಗೆ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯ ಜಿಲ್ಲಾಡಳಿತ ಭವನ, ನಂ. 03 ನೆಲಮಹಡಿ ಬೀರಸಂದ್ರ, ಗ್ರಾಮ, ಕುಂದಾಣ ಹೋಬಳಿ ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೂರವಾಣಿ ಸಂಖ್ಯೆ: 080-29787441 ಗೆ ಸಂಪರ್ಕಿಸಬಹುದೆಂದು ಅಂಗವಿಕಲರ ಕಲ್ಯಾಣಾಧಿಕಾರಿ ಜಗದೀಶ.ಎನ್.ಎಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಬ್ಬಂದಿ ನೇಮಕಾತಿಗೆ ಅರ್ಜಿ

**ಮಂಡ್ಯ:** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಭಾರತ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ಟೆನೋಗ್ರಾಫರ್ (ಗ್ರೇಡ್ 'ಸಿ' ಮತ್ತು 'ಡಿ') ಹುದ್ದೆಗಳ ನೇಮಕಾತಿಗೆ ಪಿಯುಸಿ ತತ್ಸಮಾನ ವಿದ್ಯಾರ್ಹತೆಗೆ ಅನುಗುಣವಾದ 2006 (ಅಂದಾಜು) ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ 12 ನೇ ತರಗತಿ (ಪಿ.ಯು.ಸಿ) ಅಥವಾ ತತ್ಸಮಾನ ಉತ್ತೀರ್ಣರಾಗಿರಬೇಕು. ಅರ್ಜಿ ಸಲ್ಲಿಸುವವರು ಶೀಘ್ರಲಿಪಿ ಮತ್ತು ಬೆರಳಚ್ಚು ಕೌಶಲ್ಯ ಹೊಂದಿರಬೇಕು. ಆಗಸ್ಟ್ 17 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಅರ್ಜಿಯನ್ನು https://ssc.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು. ಸ್ಟೆನೋಗ್ರಾಫರ್- ಗ್ರೇಡ್ ಸಿ ಹುದ್ದೆಗೆ 18-30 ವರ್ಷದೊಳಗಿನ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮತ್ತು ಸ್ಟೆನೋಗ್ರಾಫರ್- ಗ್ರೇಡ್ ಡಿ ಹುದ್ದೆಗೆ 18-27 ವಯೋಮಿತಿ ಹೊಂದಿರಬೇಕು. ಪರೀಕ್ಷಾ ಶುಲ್ಕ ರೂ.100 ಇದ್ದು, ಪರಿಶಿಷ್ಟಜಾತಿ, ಪಂಗಡ, ಅಂಗವಿಕಲ ಮತ್ತು ಎಲ್ಲಾ ವರ್ಗದ ಮಹಿಳಾ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124, ಪರೀಕ್ಷಾ ವಿಧಾನ ಮತ್ತು ನೇಮಕಾತಿ ಪರಿಪೂರ್ಣ ಮಾಹಿತಿಗಾಗಿ https://ssc.gov.in ವೆಬ್ ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

**ಮಂಡ್ಯ:** ವಿಶ್ವ ಹಿರಿಯ ದಿನಾಚರಣೆಯನ್ನು ಅಕ್ಟೋಬರ್ 1 ರಂದು ರಾಜ್ಯ ಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆಸಲ್ಲಿಸಿರುವವರನ್ನು ಸನ್ಮಾನಿಸಲು ವಿವಿಧ ಕ್ಷೇತ್ರಗಳಾದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ/ ಕ್ರೀಡೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ 06 ಮಂದಿ ಹಿರಿಯ ನಾಗರಿಕರಿಗೆ ವೈಯುಕ್ತಿಕ ಪ್ರಶಸ್ತಿ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆ ಸೇರಿ ಒಟ್ಟು 07 ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ರೊಳಗೆ ಅರ್ಜಿಯನ್ನು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಪಡೆದು ಕನ್ನಡದಲ್ಲಿ ಭರ್ತಿ ಮಾಡಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-231090 ಹಾಗೂ ತಿತಿತಿ. ಜತಿಜಥಿ.ಇಚಿಡಿಟಿಚಿಣಚಿಞಚಿ.ರಠತ.ಟ ವೆಬ್ ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ಮೈಸೂರು ಜಿಲ್ಲೆ ಕೆ.ಆರ್ ನಗರ ತಾಲ್ಲೂಕಿನ ಹೆಚ್.ಸಿ ಮಾದಯ್ಯ (72) ಎಂಬುವವರು ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ, ಬೊಟ್ಟು ಮುಖ, ಎಡಕೈ ಮೇಲೆ ಶಿವಮ್ಮ ಎಂದು ಹಚ್ಚೆ ಇದ್ದು, ಕಾಣೆಯಾದ ದಿನ ಬಿಳಿ ಅಂಗಿ ಮತ್ತು ಬಿಳಿ ಪಂಚೆ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-22488/9480804800 ಅನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಕರ್ನಾಟಕ ಸಾಹಿತ್ಯ ಅಕಾಡೆಮಿಯ ಕನ್ನಡ ಜಾಣ - ಜಾಣೆಯರ ವೇದಿಕೆ ಬೆಂಗಳೂರು ಇವರ ಸಹಯೋಗದಲ್ಲಿ 2024 ರ ಸೆಪ್ಟೆಂಬರ್ ಕೊನೆಯ ವಾರದಲ್ಲಿ ಹಾಸನ ಜಿಲ್ಲೆಯಲ್ಲಿ ರಾಜ್ಯಮಟ್ಟದ ಮೂರು ದಿನಗಳ ಪಿ ಲಂಕೇಶ್ ಕೃತಿಗಳ ಅಧ್ಯಯನ ಶಿಬಿರವನ್ನು ಆಯೋಜಿಸಲಾಗಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸುಳ್ಳ ಜಿಲ್ಲೆಯ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಆಗಸ್ಟ್ 17 ಕೊನೆಯ ದಿನವಾಗಿದ್ದು, ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ http://karnatakasahithyaacademy.org ವೆಬ್ ಸೈಟ್ನಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದು ಎಂದು ರಿಜಿಸ್ಟಾರ್ ಕರಿಯಪ್ಪ ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಿಯ ಹಾಲು ಅಮೃತಕ್ಕೆ ಸಮಾನ

**ತುಮಕೂರು:** ಪ್ರತಿಯೊಬ್ಬ ತಾಯಿಯ ಎದೆಹಾಲಿನಲ್ಲಿ ಶಿಶುವಿನ ಸದೃಢ ಬೆಳವಣಿಗೆಗೆ ಪೂರಕವಾದ ಅಂಶಗಳು ಅಡಕವಾಗಿರುತ್ತವೆ ಹಾಗೂ ತಾಯಿಯ ಎದೆಹಾಲಿನಲ್ಲಿ ಮಗುವಿಗೆ ಬೇಕಾದ ಎಲ್ಲಾ ಅಗತ್ಯ ಪೌಷ್ಟಿಕಾಂಶಗಳು ದೊರೆಯುತ್ತವೆ. ತಾಯಿಯ ಎದೆಹಾಲಿನ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಆರೋಗ್ಯವಂತ ತಾಯಂದಿರು ತಮ್ಮ ಹೆಚ್ಚುವರಿ ಹಾಲನ್ನು ದಾನ ಮಾಡಲು ಪ್ರೋತ್ಸಾಹಿಸಲು ಈ ತರಹದ ಕಾರ್ಯಕ್ರಮದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿಯ ಅರಿವುವನ್ನು ಮೂಡಿಸಬೇಕು ಎಂದು ಬೆಂಗಳೂರಿನ ಹಿರಿಯ ಸಲಹೆಗಾರರು ನಿಯೋನಾಟಾಲಜಿ ಹಾಗೂ ಕಾವೇರಿ ಆಸ್ಪತ್ರೆಯ ಯೋಜನಾ ನಿರ್ದೇಶಕರು, ಆದ್ಯ ರೋಟರಿ ಗುಣಶೀಲ ಸಾರ್ವಜನಿಕ ಹ್ಯೂಮನ್ ಮಿಲ್ಕ್ ಬ್ಯಾಂಕ್‌ನ ಡಾ.ಶ್ರೀನಾಥ್ ಎಸ್ ಮಣಿಕಂಠಿರವರು ತಿಳಿಸಿದರು.

ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಆಗಸ್ಟ್ 7 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಆಸ್ಪತ್ರೆಯ ಆಡಿಟೋರಿಯಂ ಸಭಾಂಗಣದಲ್ಲಿ ಶ್ರೀದೇವಿ ಸಮುದಾಯ ವೈದ್ಯಕೀಯ ವಿಭಾಗ, ಸ್ತ್ರೀರೋಗ ಮತ್ತು ಪ್ರಸ್ತೂತಿ ವಿಭಾಗ, ಮಕ್ಕಳ ಚಿಕಿತ್ಸಾ ವಿಭಾಗ, ಆಹಾರ ವಿಭಾಗದ ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಮಗು ಹುಟ್ಟಿನಿಂದ 2 ವರ್ಷದವರೆಗೆ ಎದೆ ಹಾಲನ್ನು ಉಣಿಸಬೇಕು. ಅವರು ಭಾರತದಲ್ಲಿ ಅವಧಿಗೆ ಮುನ್ನ ಶಿಶು ಜನನ ಮತ್ತು ಕಡಿಮೆ ತೂಕವುಳ್ಳ ಶಿಶು ಮರಣ ಪ್ರಮಾಣವನ್ನು ಹೆಚ್ಚಾಗಲು ಪ್ರಮುಖ ಕಾರಣವಾಗಿದೆ. ಹೀಗಾಗಿ ನವಜಾತ ಶಿಶುಗಳ ರಕ್ಷಣೆಯಲ್ಲಿ ಎದೆಹಾಲು ಪ್ರಮುಖ ಪಾತ್ರ ವಹಿಸಲಾಗಿದೆ ಎಂದು ಆದ್ಯ ಎದೆ ಹಾಲಿನ ಬ್ಯಾಂಕ್‌ನ ನಿರ್ದೇಶಕರಾದ ಡಾ.ಶ್ರೀನಾಥ್ ಮಣಿಕಂಠ ವ್ಯಕ್ತಪಡಿಸಿದ್ದರು.




ಶ್ರೀದೇವಿ ಆಸ್ಪತ್ರೆಯ ಮಕ್ಕಳ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಪಲ್ಲವಿರವರು ಮಾತನಾಡುತ್ತಾ ಮಗುವಿನ ಆರೋಗ್ಯ ಸುಧಾರಣೆಗೆ ತಾಯಿಯ ಎದೆಹಾಲು ತುಂಬಾ ಶ್ರೇಷ್ಠಕರವಾಗಿದ್ದು, ತಾಯಿಯ ಎದೆಹಾಲನ್ನು ಕಡ್ಡಾಯವಾಗಿ ಮಗುವಿಗೆ ಕೊಡುವುದರಿಂದ ಮಗುವಿನಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಾಗುವುದರೊಂದಿಗೆ ಮಾನಸಿಕವಾಗಿ ಸದೃಢತೆ ಪಡೆದು ಭವಿಷ್ಯದ ಸಮಾಜವನ್ನು ನಿರ್ಮಾಣ ಮಾಡಲು ಎಲ್ಲರೂ ಸಹಕರಿಸಬೇಕು. ಪ್ರತಿಯೊಬ್ಬ ತಾಯಿಯೂ ತನ್ನ ಮಗುವಿಗೆ ಎದೆಹಾಲನ್ನು ಉಣಿಸುವ ಮೂಲಕ ಆರೋಗ್ಯವಂತ ಪ್ರಜೆಯನ್ನಾಗಿ ರೂಪಿಸಬೇಕು ಹಾಗೂ ಎದೆಹಾಲಿನ ಮಹತ್ವ ಮತ್ತು ತಾಯಂದಿರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸ್ವವಿಸ್ತಾರವಾಗಿ ತಿಳಿಸಿಕೊಟ್ಟರು.

## ವಿವಿಧ ಯೋಜನೆಗಳಿಗೆ ಅರ್ಜಿ

**ಕೋಲಾರ:** ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಪ್ರಕಸ್ತ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸುವ ಅವಶ್ಯಕವಿರುವುದಿಲ್ಲ. ಕಳೆದ ಸಾಲಿನ ಅರ್ಜಿಯನ್ನೆ ಆಯ್ಕೆಸಮಿತಿಗಳ ಮುಂದೆ ಆಯ್ಕೆಗೆ ಮತ್ತೊಮ್ಮೆ ಮಂಡಿಸಲಾಗುವುದು. ಅರ್ಜಿದಾರರು ಸೇವಾಸಿಂಧು ಪೋರ್ಟಲ್‌ನ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್‌ಗಳ ಮೂಲಕ ಆನ್‌ಲೈನ್‌ನಲ್ಲಿ ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕರ್ನಾಟಕ ತಂತ್ರಾಶದ https://www.kaushalkar.com ದಲ್ಲಿ ಆಗಸ್ಟ್ 30 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://kvcdc.karnataka.gov.in ಅಥವಾ ದೂ.ಸಂ. 080-29904350, 29904268 ಅಥವಾ ಕಛೇರಿಯ ದೂ.ಸಂ. 08152-243566 ಯನ್ನು ಸಂಪರ್ಕಿಸಬಹುದುಯೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀರಂಭಾಪುರಿ ಜಗದ್ಗುರುಗಳ ಸಲಹೆ

# ಗಮನ ಗುರಿಯತ್ತ ಇರಲಿ



**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಕಷ್ಟವು ನಾವು ಹೇಗೆ ಬದುಕಬೇಕೆಂಬುದನ್ನು ಕಲಿಸುತ್ತದೆ. ನಷ್ಟವು ನಾವು ಯಾರನ್ನು ನಂಬಬೇಕು ಎಂದು ಕಲಿಸುತ್ತದೆ. ಮನುಷ್ಯನ ಗಮನ ಗುರಿಯತ್ತ ಇರಬೇಕೇ ಹೊರತು ಸಮಸ್ಯೆ ಅಡೆತಡೆಯ ಮೇಲಲ್ಲ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ರಂಭಾಪುರಿ ಪೀಠದಲ್ಲಿ ಶ್ರಾವಣ ಧರ್ಮ ಸಮಾರಂಭ ಹಾಗೂ ಲಿಂ.ಶ್ರೀ ಜಗದ್ಗುರು ಶಿವಾನಂದ ರಾಜೇಂದ್ರ ಶಿವಾಚಾರ್ಯ ಭಗವತ್ಪಾದರ ಪುಣ್ಯ ಸ್ಮರಣೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕು ಹಣೆಬರಹದ ಮೇಲೆ ನಿಂತಿಲ್ಲ. ಒಂದಿಷ್ಟು ಆತ್ಮಸ್ಥೈರ್ಯ ಮತ್ತು ಕಠಿಣ ಪರಿಶ್ರಮದಿಂದ ಬದುಕನ್ನು ಬದಲಿಸಿಕೊಳ್ಳುವ ಆಯ್ಕೆ ಅವರವರ ಕೈಯಲ್ಲಿಯೇ ಇದೆ. ಮನುಷ್ಯ ಫಲಭರಿತ ಬಾಳೆಯಂತೆ ಬಾಗಬೇಕು. ಬೀಗಬಾರದು. ಒಳ್ಳೆಯತನಕ್ಕೆ ಬೆಲೆಯಿಲ್ಲ ಅನ್ನುವುದು ಎಷ್ಟು ಸತ್ಯವೋ ಆ ಒಳ್ಳೆತನ ನಮ್ಮನ್ನು ಕೈ ಬಿಡುವುದಿಲ್ಲ ಅನ್ನುವುದು ಅಷ್ಟೇ ಸತ್ಯ. ಪೆಟ್ಟು ತಿಂದ ಕಲ್ಲು ಮೂರ್ತಿಯಾಯಿತು. ಆದರೆ ಪೆಟ್ಟು ಕೊಟ್ಟ ಸುತ್ತಿಗೆ ಸುತ್ತಿಗೆಯಾಗಿಯೇ ಉಳಿಯಿತು. ನೋವು ಕೊಡುವವರು ಹಾಗೆಯೇ ಉಳಿಯುತ್ತಾರೆ. ನೋವನ್ನು ಉಂಡವರು ಜ್ಞಾನಿಗಳಾಗುತ್ತಾರೆ. ಲಿಂ.ಶ್ರೀ ಜಗದ್ಗುರು ಶಿವಾನಂದ ರಾಜೇಂದ್ರ ಶಿವಾಚಾರ್ಯ ಭಗವತ್ಪಾದರು ಶ್ರಮ ಮತ್ತು ಸಾಧನೆಯ ಮೂಲಕ ವೀರಶೈವ ಧರ್ಮ ಸಂಸ್ಕೃತಿ ಹಾಗೂ ಗುರು ಪೀಠಗಳ ಪಾವಿತ್ರ್ಯತೆಯನ್ನು ಹೆಚ್ಚಿಸಿದರು. ರಚನಾತ್ಮಕ ಮತ್ತು ಗುಣಾತ್ಮಕ ಸತ್ಕಾರ್ಯಗಳನ್ನು ಮಾಡಿ 'ಶ್ರೀ ರಂಭಾಪುರಿ ಪೀಠದ ನವ ನಿರ್ಮಾಣ ಶಿಲ್ಪಿ' ಎಂದು ಪ್ರಖ್ಯಾತಿಗೊಂಡಿದ್ದನ್ನು ಮರೆಯಲಾಗದೆಂದ ಅವರು ಲಿಂ.ಶಿವಾನಂದ ಜಗದ್ಗುರುಗಳವರ ಹೆಸರಿನಲ್ಲಿ ಬಡ ಮಕ್ಕಳಿಗಾಗಿ ವಿದ್ಯಾರ್ಥಿ ನಿಲಯ ಹಾಗೂ ಯಾತ್ರಿ ನಿವಾಸ ನಿರ್ಮಿಸುವುದರ ಮೂಲಕ ಶ್ರೀ ಪೀಠ ಕೃತಜ್ಞತೆಯನ್ನು ಸಲ್ಲಿಸಿದೆ ಎಂದರು.

ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಅದೃಷ್ಟ ನಮ್ಮ ಕೈಯಲ್ಲಿಲ್ಲದೇ ಇರಬಹುದು. ಆದರ ನಿರ್ಧಾರ ಇದೆ. ಸರಿಯಾದ ನಿರ್ಧಾರ ಕೈಗೊಳ್ಳುವುದರ ಮೂಲಕ ಧರ್ಮಕ್ಕೆ ಮತ್ತು ಗುರು ಪರಂಪರೆಗೆ ಕೀರ್ತಿ ತಂದ ಯಶಸ್ಸು ಲಿಂ.ಶ್ರೀ ಶಿವಾನಂದ ಜಗದ್ಗುರುಗಳಿಗೆ ಸಲ್ಲುತ್ತದೆ ಎಂದರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಸಂಸ್ಕೃತಿಯ ಸಂವರ್ಧನೆಗೆ ಲಿಂ. ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳು, ಲಿಂ.ಪರಮತಪಸ್ವಿ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಹಾಗೂ ನಾಗನೂರು ಕಾಶೀನಾಥ ಶಾಸ್ತ್ರಿಗಳು ಅಪಾರವಾಗಿ ಶ್ರಮಿಸಿದ್ದನ್ನು ಎಂದೆಂದಿಗೂ ಮರೆಯಲಾಗದೆಂದರು.

ಇದೆ ಸಂದರ್ಭದಲ್ಲಿ ಗದಗ ಜಿಲ್ಲೆ ರೋಣ ತಾಲೂಕಿನ ಅಬ್ಬಿಗೇರಿಯಲ್ಲಿ ಜರುಗಲಿರುವ ಶರನ್ನವರಾತ್ರಿ ದಸರಾ ದರ್ಬಾರ ಕಾರ್ಯಕ್ರಮದ ಪ್ರಥಮ ಪ್ರಕಟಣೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು.

ಬೆಳಗೊಳದ ಬಿ.ಎ.ಶಿವಶಂಕರ್, ಬೊಗಸೆ ಬಿ.ಎಂ.ಬೋಜೇಗೌಡರು, ಪರದೇಶಪ್ಪನವರ ಮಠದ ಮಧುಕುಮಾರ್, ಬೊಗಸೆ ರುದ್ರೇಗೌಡರು, ಸಂಕಪ್ಪನವರ, ಸುಜಾತಾ ಅಳವಂಡಿ, ಮಹಾದೇವಿ ಪಾಟೀಲ, ವೀರೇಶ ಕುಲಕರ್ಣಿ, ಮಠದ ರೇಣುಕ, ಶಿವಪ್ರಕಾಶ ಶಾಸ್ತ್ರಿ, ಸಿದ್ಧಲಿಂಗಯ್ಯ ಹಿರೇಮಠ ಮೊದಲಾದವರು ಉಪಸ್ಥಿತರಿದ್ದರು.

ಸ್ಮರಣೋತ್ಸವ ಸಮಾರಂಭದ ನಿಮಿತ್ಯ ಪರಮ ಪೂಜ್ಯ ಲಿಂ. ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳವರ ಕರ್ತೃ ಗದ್ದಿಗೆಗೆ ರುದ್ರಾಭಿಷೇಕ, ಅಷ್ಟೋತ್ತರ, ಮಹಾಪೂಜೆ ಜರುಗಿತು. ಶ್ರೀ ಶಿವಾನಂದ ವಿದ್ಯಾರ್ಥಿ ನಿಲಯದಲ್ಲಿ ಶಿವಾನಂದ ಜಗದ್ಗುರುಗಳವರ ಭಾವಚಿತ್ರಕ್ಕೆ ಪುಷ್ಪಗುಚ್ಛ ಸಮರ್ಪಿಸಿ ಗೌರವ ಸಲ್ಲಿಸಿದರು. ಬೆಳಗಿನ ಜಾವ ಶ್ರೀ ಜಗದ್ಗುರು ರೇಣುಕಾಚಾರ್ಯರು, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ, ಶ್ರೀ ಸೋಮೇಶ್ವರ ಮಹಾಲಿಂಗಕ್ಕೆ ಅಭಿಷೇಕ, ಶಕ್ತಿತ್ರಯ ಮೂರ್ತಿಗಳಾದ ಚೌಡೇಶ್ವರಿ, ಭದ್ರಕಾಳಿ ಮತ್ತು ಪಾರ್ವತಿ ಮಂಗಲ ಮೂರ್ತಿಗೆ ಕುಂಕುಮಾರ್ಚನೆ ಜರುಗಿತು. ಖಾಂಡ್ಯ ಮತ್ತು ಜಾಗರ ಹೋಬಳಿ ಮುಖ್ಯಸ್ಥರು ಪಾಲ್ಗೊಂಡಿದ್ದರು.

ಸಮಾರಂಭದ ನಂತರ ಆಗಮಿಸಿದ ಎಲ್ಲ ಸದ್ಭಕ್ತರಿಗೆ ಅನ್ನ ದಾಸೋಹ ಜರುಗಿತು.

# ನಾಳೆ ಸ್ವಾತಂತ್ರ್ಯೋತ್ಸವ

## ಅಧಿಕಾರಿಗಳ ಸಭೆ ನಡೆಸಿದ ಶಾಸಕ ಡಿ.ರವಿಶಂಕರ್

**ಕೆ.ಆರ್.ನಗರ:** ಇದೇ ಆ,15 ರಂದು ಗುರುವಾರ ನಡೆಯಲಿರುವ 78ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ ಮತ್ತು ಸಡಗರದಿಂದ ಆಚರಿಸಲು ತೀರ್ಮಾನ ಮಾಡಲಾಯಿತು.

ಪಟ್ಟಣದ ತಾಲೂಕು ಕಛೇರಿಯ ಸಭಾಂಗಣದಲ್ಲಿ ಶಾಸಕ ಡಿ.ರವಿಶಂಕರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರ ಸಲಹೆ ಪಡೆದು ಅಂತಿಮವಾಗಿ ಈ ನಿರ್ಧಾರ ಕೈಗೊಳ್ಳಲಾಯಿತು.

ಶಾಸಕ ಡಿ.ರವಿಶಂಕರ್ ಮಾತನಾಡಿ, ಅಂದು ಬೆಳಿಗ್ಗೆ 7.30ಕ್ಕೆ ಪಟ್ಟಣದ ಜೂನಿಯರ್ ಕಾಲೇಜು ಬಳಿಯಿಂದ ಪಟ್ಟಣದ ಎಲ್ಲಾ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ದೇಶಾಭಿಮಾನಿಗಳ ಸಮ್ಮುಖದಲ್ಲಿ ಪಥಸಂಚಲನ ಆರಂಭಿಸಿ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಮುಂಭಾಗ ತೆರಳಿ ಹಾಸನ-ಮೈಸೂರು ರಸ್ತೆ ಮೂಲಕ ಪುರಸಭೆ ಬಯಲು ರಂಗ ಮಂದಿರಕ್ಕೆ ಸಾಗಿ ಬರಬೇಕೆಂದು ಸೂಚನೆ ನೀಡಿದರು.

ಬೆಳಿಗ್ಗೆ 9 ಗಂಟೆಗೆ ಕಾರ್ಯಕ್ರಮ ನಡೆಯುವ ಬಯಲು ರಂಗ ಮಂದಿರದ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಲಿದ್ದು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ನಿರ್ವಹಿಸಿ ರಾಷ್ಟ್ರೀಯ ಹಬ್ಬದ ಯಶಸ್ಸಿಗೆ ಹೆಗಲು ಕೊಟ್ಟು ದುಡಿಯಬೇಕೆಂದು ಆದೇಶಿಸಿದರು. ಪಥ ಸಂಚನಲದಲ್ಲಿ ಭಾಗವಹಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ಬಯಲು ರಂಗ ಮಂದಿರದ ಆವರಣದಲ್ಲಿ ಧ್ವಜಾರೋಹಣಕ್ಕಿಂತ ಮುಂಚಿತವಾಗಿ ಉಪಹಾರ ನೀಡಬೇಕೆಂದು ತಿಳಿಸಿದ ಶಾಸಕರು ಪ್ರತಿಯೊಬ್ಬ ಸರ್ಕಾರಿ ನೌಕರರು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ತಾಕೀತು ಮಾಡಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಹತ್ತು ಮಂದಿ ಸಾಧಕರಿಗೆ ಕಾರ್ಯಕ್ರಮದಲ್ಲಿ ಸನ್ಮಾನ ಮಾಡುವುದರ ಜತೆಗೆ ಪಟ್ಟಣದ ಎಲ್ಲಾ ಸರ್ಕಾರಿ ಕಛೇರಿಗಳಿಗೂ ದೀಪಾಲಂಕಾರ ಮಾಡಬೇಕೆಂದು ಹೇಳಿದ ಶಾಸಕ ಡಿ.ರವಿಶಂಕರ್ ಮೆರವಣಿಗೆ ತೆರಳುವ ರಸ್ತೆಯ ಅಂಗಡಿ ಮುಗ್ಗಟ್ಟುಗಳ ಮಾಲೀಕರು ಸ್ವಯಂ ಪ್ರೇರಿತವಾಗಿ ತಮ್ಮ ಕಟ್ಟಡಗಳಿಗೆ ದೀಪಾಲಂಕಾರ ಮಾಡಿ ರಾಷ್ಟ್ರೀಯ ಹಬ್ಬದ ಮೆರಗನ್ನು ಹೆಚ್ಚಿಸಬೇಕೆಂದು ಕೋರಿದರು.

ಸಾಲಿಗ್ರಾಮ ತಹಶೀಲ್ದಾರ್ ಎಸ್.ಎನ್.ನರಗುಂದ ಮಾತನಾಡಿ ಸಾಲಿಗ್ರಾಮ ತಾಲೂಕಿನಲ್ಲಿಯೂ ವೈಭವದಿಂದ ಸ್ವಾತಂತ್ರ್ಯ ದಿನಾಚರಣೆ ಆಚರಣೆ ಮಾಡಲು ನಿರ್ಧಾರ ಮಾಡಲಾಗಿದ್ದು ಸರ್ವರ ಸಹಕಾರದಿಂದ ಕಾರ್ಯಕ್ರಮ ನಡೆಸುವುದಾಗಿ ಸಭೆಗೆ ಮಾಹಿತಿ ನೀಡಿದರು.

ಕೆ.ಆರ್.ನಗರ ತಹಶೀಲ್ದಾರ್ ಜಿ.ಸುರೇಂದ್ರಮೂರ್ತಿ ಮಾತನಾಡಿ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದನ್ನು ವಿಶಿಷ್ಟ ಮತ್ತು ವಿಭಿನ್ನವಾಗಿ ಆಚರಣೆ ಮಾಡಲು ನಿರ್ಧಾರ ಮಾಡಿದ್ದು ಮುಂದಿನ ಮೂರು ದಿನಗಳೊಳ್ಗೆ ಮತ್ತೊಮ್ಮೆ ಅಧಿಕಾರಿಗಳ ಸಭೆ ಕರೆದು ರೂಪು ರೇಷೆ ಸಿದ್ದಪಡಿಸುವುದಾಗಿ ತಿಳಿಸಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಗಡ್ಡಮಹೇಶ್, ನಿರ್ದೇಶಕರಾದ ಸರಿತಾಜವರಪ್ಪ, ಪುರಸಭೆ ಸದಸ್ಯ ಕೋಳಿಪ್ರಕಾಶ್, ಮಾಜಿ ಸದಸ್ಯ ಕೆ.ವಿನಯ್, ಕಾಂಗ್ರೆಸ್ ಮುಖಂಡರಾದ ನಂದೀಶ್, ಕಂಠಿಕುಮಾರ್, ರಾಜಯ್ಯ, ಬಿ.ಎಂ.ಗಿರೀಶ್, ಕಳ್ಳಿಮುದ್ದನಹಳ್ಳಿಚಂದ್ರು, ಹೆಚ್.ಎಸ್. ಸ್ವಾಮಿ, ವ್ಯಾನ್‌ಸುರೇಶ್, ತಿಮ್ಮಶೆಟ್ಟಿ, ರೈತ ಮುಖಂಡರಾದ ಎಂ.ಜೆ.ಕುಮಾರ್, ಎ.ತಿಮ್ಮೇಗೌಡ, ಬಿಇಒ ಆರ್. ಕೃಷ್ಣಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಎಲ್.ವಿನೀತ್, ಅರ್ಕೇಶ್ವರಮೂರ್ತಿ, ಗುರುರಾಜ್, ವಿ.ಸುಮಿತ, ಎಡಿಎಲ್‌ಆರ್ ಶ್ರೀಕಂಠಶರ್ಮ, ಸಾಮಾಜಿಕ ಅರಣ್ಯಾಧಿಕಾರಿ ಟಿ.ವಿ.ಹರಿಪ್ರಸಾದ್, ಸಿಡಿಪಿಒ ಸಿ.ಎಂ. ಅಣ್ಣಯ್ಯ ಇದ್ದರು.





**ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಮಂಗಳ ಅವರು ತಿಳಿಸಿದರು. ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದು ಬ್ರಹ್ಮ ಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಆಗಸ್ಟ್ 20 ರಂದು ನಾರಾಯಣಗುರು ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ, ಸಮುದಾಯದ ಮುಖಂಡರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.**

# ಮನುಷ್ಯನ ನೋವಿನ ನಿವಾರಣೆಗೆ ಸಾಹಿತ್ಯ ಮುಖ್ಯ

**ಮೈಸೂರು:** ಮನುಷ್ಯನ ನೋವಿನ ನಿವಾರಣೆಗೆ ಸಾಹಿತ್ಯ ಮುಖ್ಯವಾಗಿದ್ದು, ಕ್ರೌರ್ಯ ತಡೆಯುವ ಅಸ್ತ್ರವಾಗಿದೆ ಎಂದು ಮಹಾರಾಣಿ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ.ವಸಂತಕುಮಾರ್ ಅಭಿಪ್ರಾಯಪಟ್ಟರು.



ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಗುರುವಾರ ಅಯೋಜಿಸಿದ್ದ ಕಾರ್ಯಕ್ರಮದಲ್ಲಿ ಶ್ರೀಮತಿ ಸರೋಜ ರಾವ್ ಅವರ ಅಂತರಂಗದ ಅಲೆಗಳು (ಕವನ ಸಂಗ್ರಹ) ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಪ್ರತಿಯೊಂದು ಕೃತಿಯೂ ಮನಸ್ಸಿನ ನೋವಿಗೆ ಔಷಧಗಳಾಗಿದ್ದು, ಚಂಚಲ ಮನಸ್ಸುಗಳ ಪರಿವರ್ತನೆ ಮಾಡುತ್ತವೆ. ಇದು ಪುಸ್ತಕ ಓದುವುದರಲ್ಲಿ ತಲ್ಲೀನರಾದರೆ ಮಾತ್ರ ಸಾಧ್ಯವಾಗುತ್ತದೆ. ಸಂಕಟಗಳನ್ನು ಅನುಭವಿಸುವ ತಲ್ಲಣಗಳನ್ನು ದಾಖಲಿಸಲು ಕಾವ್ಯ ಹುಟ್ಟಿಕೊಳ್ಳುತ್ತದೆ. ಸರೋಜ ರಾವ್ ಅವರು ಸಹ ಹೇಗೆ ಸಂದರ್ಭದಿಂದ ಎಲ್ಲಾ ರೀತಿಯ ದುಃಖ ಖಿನ್ನತೆಯನ್ನು ಸವಿಸ್ತಾರವಾಗಿ ಬರೆದಿದ್ದಾರೆ ಎಂದರು. ರಾಜಕಾರಣಿಗಳಿಗಿಂತ ಹೆಚ್ಚಿನ ಜವಾಬ್ದಾರಿ ಸಾಹಿತಿಗಳಿಗೆ ಇರುತ್ತದೆ. ಪ್ರಸ್ತುತ ದಿನದಲ್ಲಿ ಪ್ರಕೃತಿಯ ಮಡಿಲನ್ನು ಬಳಸಿಕೊಂಡು ನಿರ್ಲಕ್ಷ್ಯ ಮಾಡಿಕೊಂಡು ಎಲ್ಲಾ ವಿಷಯದಲ್ಲಿಯೂ ಯೂಸ್ ಅಂಡ್ ಥ್ರೋ ರೀತಿ ನಡೆಯುತ್ತಿದೆ. ಇಂತಹ ಸಂದರ್ಭದಲ್ಲಿ ಸಾಹಿತಿಗಳು ತಮ್ಮ ಜವಾಬ್ದಾರಿ ನಿಬಾಯಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಸರೋಜ ರಾವ್ ತಮ್ಮ ಕೃತಿ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ನೀಡುವಂತಹ ಕೆಲಸ ಆಗಿದೆ. ಎಲ್ಲರೂ ಅಕ್ಷರವನ್ನು ಪೋಣಿಸುವ ಅಭ್ಯಾಸ ರೂಢಿಸಿಕೊಂಡರೆ ಉತ್ತಮ ಸಾಹಿತಿಗಳಾಗಬಹುದು ಎಂದರು.

ಕಾರ್ಯಕ್ರಮದಲ್ಲಿ ಶಾರದಾ ವಿಲಾಸ ಕಾಲೇಜಿನ ವಾಣಿಜ್ಯ ವಿಭಾಗದ ಡೀನ್ ಪ್ರೊ.ಸತ್ಯನಾರಾಯಣ, ಸಹಾಯಕ ಪ್ರಾಧ್ಯಾಪಕ ಡಾ.ಜಿ.ಆನಂದ, ಕವಯಿತ್ರಿ ಸರೋಜರಾವ್, ಕಸಾಪ ಕಾರ್ಯದರ್ಶಿ ಲತಾಮೋಹನ್, ಕೋಶಾಧ್ಯಕ್ಷ ಜಿ.ಪ್ರಕಾಶ್, ಜಂಟಿ ಕಾರ್ಯದರ್ಶಿ ಕೆಂಪಣ್ಣ, ಶಾರದಾ ವಿಲಾಸ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಜಿ.ಆನಂದ್, ಸಂಘಟನಾ ಕಾರ್ಯದರ್ಶಿ ಮೈನಾ ಲೋಕೇಶ್, ಗಾಯಕರಾದ ಡಾ.ಆರ್.ನಿಂಗರಾಜು, ಡಾ.ಐ.ಡಿ.ಲೋಕೇಶ್, ಮಂಜುಳಾ, ಹಾಗೂ ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಉಪಸ್ಥಿತರಿದ್ದರು.

## ವಿವಿಧ ಯೋಜನೆಗಳಿಗೆ ಅರ್ಜಿ

**ಕೋಲಾರ:** ಕರ್ನಾಟಕ ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಪ್ರಕಸ್ತ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬಹುದು. ನಿಗಮದ ವೆಬ್‌ಸೈಟ್ www.kaad.karnataka.gov.in ಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂ. 080-22374832 ಮತ್ತು 8050770004, 8050770005 ಅಥವಾ ಜಿಲ್ಲಾ ಕಚೇರಿಯ ದೂ.ಸಂ. 08152-243566 ಯನ್ನು ಸಂಪರ್ಕಿಸಬಹುದುಯೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾಕ್ಟರ್ ಪ್ರೋಸ್ಟ್ ನಾರಾಯಣಸ್ವಾಮಿಗೆ ಬೀಳ್ಕೊಡುಗೆ

**ಕೋಲಾರ:** ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಶಿಕ್ಷಣ ಕ್ಷೇತ್ರದಲ್ಲಿ ಸೇವೆಯನ್ನು ಸಲ್ಲಿಸುವ ಪ್ರತಿಯೊಬ್ಬ ಶಿಕ್ಷಕರು ವಿದ್ಯಾರ್ಥಿಗಳಿಗೆ ಉತ್ತಮ ನಡೆ ನುಡಿ ಸಂಸ್ಕಾರ ಸಂಸ್ಕೃತಿ ಮತ್ತು ಪಾಠ ಪ್ರವಚನಗಳನ್ನು ಹೇಳಿ ಅವರನ್ನು ಸಮಾಜದ ಉತ್ತಮ ವ್ಯಕ್ತಿಗಳಾಗಿ ಗುರುತಿಸುವಂತೆ ಮಾಡಬೇಕಾಗಿದೆ ಎಂದು ಮಾನವ ಅಭಿವೃದ್ಧಿ ಯೋಗ ಟ್ರಸ್ಟ್ (ರಿ) ಜಿಲ್ಲಾಧ್ಯಕ್ಷರಾದ ಡಾ. ಪೋಸ್ಟ್ ನಾರಾಯಣಸ್ವಾಮಿ ಹೇಳಿದರು.



ನಗರದ ಕಾರಂಜಿ ಕಟ್ಟೆಯ ಸ್ವಗೃಹದಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿ?ದ್ ಮತ್ತು ಮಾನವ ಅಭಿವೃದ್ಧಿ ಯೋಗ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸುಭಾಷ್ ವಿದ್ಯಾ ಸಂಸ್ಥೆಯಲ್ಲಿಯಲ್ಲಿ ಸುಧೀರ್ಘವಾಗಿ 29 ವರ್ಷಗಳ ಕಾಲ ಸೇವೆ ಸಲ್ಲಿಸಿ ಶಿಕ್ಷಕ ವೃತ್ತಿಯಿಂದ ನಿವೃತ್ತರಾದ ಕೆ.ಎಂ. ಕೃ?ಣ್ಣರೆಡ್ಡಿ ದಂಪತಿಗಳ ನಿವೃತ್ತಿ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಮುಂದುವರೆದು ಅವರ ಸರಳತೆ ಸಜ್ಜನಿಕೆ ಉತ್ತಮ ನಡೆ ನುಡಿಯನ್ನು ಅನುಸರಿಸಿ ವಿದ್ಯೆಯನ್ನು ಕಲಿತ ಅನೇಕ ವಿದ್ಯಾರ್ಥಿಗಳು ಒಳ್ಳೆ ಒಳ್ಳೆಯ ಉದ್ಯೋಗಗಳಲ್ಲಿ ಇರುವುದನ್ನು ಪ್ರಶಂಸಿಸಿದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕೋಲಾರ ಜಿಲ್ಲಾ ಸಮಿತಿಯ ಅಧ್ಯಕ್ಷರಾದ ಟಿ ಸುಬ್ಬರಾಮಯ್ಯ, ಮಾತನಾಡಿ ಶಿಕ್ಷಣ ನೀಡುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಪ್ರಮುಖವಾದದ್ದು. ಶಿಕ್ಷಕರಾದವರು ಮಕ್ಕಳಿಗೆ ನಿರ್ದಿಷ್ಟ ಜ್ಞಾನ, ಕೌಶಲ್ಯ, ಜೀವನದ ಮೌಲ್ಯಗಳನ್ನು, ಸಜ್ಜುಗೊಳಿಸಿ ಉತ್ತಮ ಮನುಷ್ಯ ರಾಗಲು ಅನುವು ಮಾಡಿಕೊಡಬೇಕೆಂದು ತಿಳಿಸುತ್ತಾ, ಶಿಕ್ಷಕ ಮತ್ತು ವಿದ್ಯಾರ್ಥಿಯ ನಡುವಿನ ಬಾಂಧವ್ಯ ಕಲಿಕೆಯ ವಾತಾವರಣದಲ್ಲಿ ಅತ್ಯಂತ ಪ್ರಭಾವಶಾಲಿ ಹಾಗೂ ಪ್ರಮುಖ ಅಂಶಗಳಲ್ಲಿ ಒಂದಾಗಿದೆ. ನಿವೃತ್ತರಾದ ಕೃಷ್ಣಾರೆಡ್ಡಿ ರವರು ವಿದ್ಯಾರ್ಥಿಗಳ ನಡುವೆ ಒಳ್ಳೆಯ ಅವಿನಾಭಾವ ಸಂಬಂಧ ಹೊಂದಿದ್ದು ಯಾವುದೇ ಆರೋಪಗಳು ಇಲ್ಲದೆ ನಿವೃತ್ತ ರಾಗಿರುವುದು ಹೆಗ್ಗಳಿಕೆ ಎಂದು ಅವರನ್ನು ಅಭಿನಂದಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕರ ಕೆಎಂ ಕೃಷ್ಣಾರೆಡ್ಡಿ ಅವರು ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳನ್ನು ನೀಡುವುದಕ್ಕಿಂತ ಹೆಚ್ಚಾಗಿ ಅವರ ಚಲನವಲನಗಳನ್ನು ಗಮನಿಸುತ್ತಾ ಮಾರ್ಗದರ್ಶಕರಾಗಿ ಅಥವಾ ಗೈಡ್ ಆಗಿ ಕೆಲಸ ಮಾಡಬೇಕು. ಆಗ ವಿದ್ಯಾರ್ಥಿಗಳು ಒಳ್ಳೆಯ ಮಾರ್ಗದಲ್ಲಿ ನಡೆಯುತ್ತಾರೆ ಎಂದು ತಿಳಿಸಿದರು.

ಸ್ವರ್ಣ ಭೂಮಿ ಪೌಂಡೇಶನ್ ನ ಸಂಸ್ಥಾಪಕರಾದ ಬಿ. ಶಿವಕುಮಾರ್, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪಿ ನಾರಾಯಣಪ್ಪ ಮಾತನಾಡಿದರು. ?ರ್ಯಕ್ರಮದಲ್ಲಿ ನಿವೃತ್ತ ಎ.ಎಸ್.ಐ. ಹಾಗೂ ಸಾಮಾಜಿಕ ಕಾರ್ಯಕರ್ತ ಕೆ.ಎನ್. ರವೀಂದ್ರನಾಥ್ ಗೌರಿಪೇಟೆಯ ರಮೇಶ್ ಮತ್ತು ಸಿವಿಲ್ ಇಂಜಿನಿಯರ್ ಆಕಾಶ್ ಪ್ರಭು ಹಾಜರಿದ್ದು, ಸಾಹಿತಿಗಳಾದ ಶರಣಪ್ಪ ಗಬ್ಬೂರ್ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು. ಈ ನೆಲ ಈ ಜಲ ವೆಂಕಟಾಚಲಪತಿ ರವರು ಗುರುಗಳಿಗೆ ಸಂಬಂಧಿಸಿದ ಜಾನಪದ ಗೀತೆಯನ್ನು ಸುಶ್ರಾವ್ಯವಾಗಿ ಹಾಡಿದರು.

## ಫಸಲ್ ಬಿಮಾ ಯೋಜನೆ ನೋಂದಾಣಿಗೆ ಆ.16 ಕೊನೆ ದಿನ

**ಬೆಂಗಳೂರು ಗ್ರಾಮಾಂತರ:** 2024 ನೇ ಸಾಲಿನ ಮುಂಗಾರು ಹಂಗಾಮಿಗೆ ರಾಜ್ಯ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆಯಡಿ ಪ್ರೀಮಿಯಂ ಪಾವತಿಸಿ ನೋಂದಾಯಿಸಿಕೊಳ್ಳುವಂತೆ ರೈತರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೃಷಿ ಇಲಾಖೆಯಿಂದ ಸಲಹೆ ನೀಡಿದ್ದಾರೆ. ಬೆಳೆ ನಷ್ಟ ಸಂಭವಿಸಿದರೆ ವಿಮೆಗೆ ನೋಂದಾಯಿಸಿದ್ದಲ್ಲಿ ಮಾತ್ರ 253 ವಿಮೆ ಪರಿಹಾರ ಪಡೆಯಲು ಅನುಕೂಲವಾಗಲಿದೆ. ರಾಗಿ ಎಕರೆಗೆ (ಮಳೆಯಾಶ್ರಿತ) 340 ರೂ, ರಾಗಿ ಎಕರೆಗೆ (ನೀರಾವರಿ) 406 ರೂ., ಭತ್ತ (ನೀರಾವರಿ) ಎಕರೆಗೆ 746 ರೂ., ಮುಸುಕಿನ ಜೋಳ ಎಕರೆಗೆ (ಮಳೆಯಾಶ್ರಿತ) 452 ರೂ., ಮುಸುಕಿನ ಜೋಳ ಎಕರೆಗೆ (ನೀರಾವರಿ) ಎಕರೆಗೆ 516 ರೂ., ಹುರುಳಿ (ಮಳೆಯಾಶ್ರಿತ) ಎಕರೆಗೆ 164 ರೂ. ನಂತೆ ವಿಮಾ ಕಂತು ಪಾವತಿಸಿ. ವಿಮೆ ಪಾವತಿಸಲು ಆಗಸ್ಟ್ 16 ಕೊನೆಯ ದಿನವಾಗಿದ್ದು, ಹತ್ತಿರದ ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರ, ಕರ್ನಾಟಕ ಒನ್ ಅಥವಾ ಬ್ಯಾಂಕ್ ಗಳಲ್ಲಿ ನಿಗದಿತ ಪ್ರೀಮಿಯಂ ಪಾವತಿಸಿ ನೋಂದಾಯಿಸಿಕೊಳ್ಳಬಹುದು. ಬೆಳೆ ವಿಮೆ ನೋಂದಣಿಗೆ 'ಫ್ರೂಟ್ಸ್' ಐಡಿ, ಗುರುತಿನ ಸಂಖ್ಯೆ ಕಡ್ಡಾಯವಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಬಿಬಿಎಂಪಿ ವ್ಯಾಪ್ತಿಯ ಪಿಜಿಗಳ ಪರವಾನಗಿಗೆ ಮಾರ್ಗಸೂಚಿ ಕಡ್ಡಾಯ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆ-2020ರ ಸೆಕ್ಷನ್ 305ರ ಪ್ರಕಾರ ಪಾಲಿಕೆ ವ್ಯಾಪ್ತಿಯಲ್ಲಿರುವ ಎಲ್ಲಾ ಪೇಯಿಂಗ್ ಗೆಸ್ಟ್‌ಗಳಿಗೆ ಉದ್ದಿಮೆ ಪರವಾನಗಿಯನ್ನು ನೀಡುವಾಗ ಮಾರ್ಗಸೂಚಿ ಪಾಲನೆಯ ಆದೇಶ ಜಾರಿ ಮಾಡಿ ಮುಖ್ಯ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ-2020ರ ಕಾಯ್ದೆಯಡಿ, ಪಾಲಿಕೆ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಪೇಯಿಂಗ್ ಗೆಸ್ಟ್‌ಗಳಿಗೆ ಪರವಾನಿಗೆ ಮಂಜೂರಾತಿ ನವೀಕರಣ ಹಾಗೂ ಈಗಾಗಲೇ ಪರವಾನಿಗೆ ಪಡೆದು ಅಸ್ತಿತ್ವದಲ್ಲಿರುವ ಪೇಯಿಂಗ್ ಗೆಸ್ಟ್‌ಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.



ಪೇಯಿಂಗ್ ಗೆಸ್ಟ್‌ಗಳಲ್ಲಿನ ಎಲ್ಲಾ ಪ್ರವೇಶ, ನಿರ್ಗಮನ ದ್ವಾರ, ಮತ್ತು ಆವರಣದ ಸುತ್ತಮುತ್ತಲಿನ ಘಟನಾವಳಿಗಳನ್ನು ಚಿತ್ರೀಕರಿಸಲು ಸಿ.ಸಿ. ಟಿ.ವಿ. ಕ್ಯಾಮೆರಾಗಳನ್ನು ಅಳವಡಿಸಿರತಕ್ಕದ್ದು. ಪ್ರತಿಯೊಂದು ಸಿ.ಸಿ. ಟಿ.ವಿ. ಕ್ಯಾಮರಾದ ವೀಡಿಯೋ ಮತ್ತು ಫೋಟೇಜ್‌ಗಳನ್ನು 90 ದಿನಗಳವರೆಗೆ ಹಾರ್ಡ್ ವೇರ್ ಅಂಡ್ ಸಾಫ್ಟ್‌ವೇರ್ ಬ್ಯಾಕಪ್ ಸ್ಟೋರೇಜ್‌ನ ಸಂರಕ್ಷಿಸತಕ್ಕದ್ದು. ವಸತಿ ಸಂಬಂಧಿತ ಕಟ್ಟಡ ನಿಯಮಗಳ ಪ್ರಕಾರ, ಪೇಯಿಂಗ್ ಗೆಸ್ಟ್‌ಗಳಲ್ಲಿ ಪ್ರತಿಯೊಬ್ಬ ನಿವಾಸಿಗೆ ವಾಸಕ್ಕೆ ತಲಾ 70 ಚದರ ಅಡಿಗಳ ಕನಿಷ್ಠ ಜಾಗವಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಕಟ್ಟಡದಲ್ಲಿ ಒದಗಿಸಲಾದ, ಲಭ್ಯವಿರುವ ಸೌಕರ್ಯಕ್ಕನುಗುಣವಾಗಿ ನಿರ್ದಿಷ್ಟ ಸಂಖ್ಯೆಯ ನಿವಾಸಿಗಳ ವಾಸಕ್ಕೆ ಮಾತ್ರ ಪರವಾನಗಿಯನ್ನು ನೀಡತಕ್ಕದ್ದು.

ಪೇಯಿಂಗ್ ಗೆಸ್ಟ್‌ಗಳಲ್ಲಿ ವಾಸಿಸುವ ನಿವಾಸಿಗಳಿಗೆ ಸ್ವಚ್ಛ ಹಾಗೂ ನೈರ್ಮಲ್ಯತೆ ಹೊಂದಿರುವ ಸ್ನಾನಗೃಹಗಳು ಮತ್ತು ಶೌಚಾಲಯಗಳ ಸೇವೆಯನ್ನು ಒದಗಿಸಿರತಕ್ಕದ್ದು. ಪೇಯಿಂಗ್ ಗೆಸ್ಟ್‌ಗಳಲ್ಲಿ ಕಡ್ಡಾಯವಾಗಿ ಶುದ್ಧ ಕುಡಿಯುವ ನೀರಿನ ಸೌಲಭ್ಯವಿರತಕ್ಕದ್ದು. ಪ್ರತಿಯೊಬ್ಬ 135 ಎಲ್‌ಪಿಸಿಡಿ ನೀರಿನ ಲಭ್ಯತೆ ಇರುವುದನ್ನು ಮಾಲೀಕರು, ಉದ್ದಿಮೆದಾರರು ಖಚಿತಪಡಿಸಿಕೊಳ್ಳತಕ್ಕದ್ದು.

ಪೇಯಿಂಗ್ ಗೆಸ್ಟ್‌ಗಳಲ್ಲಿ ಉದ್ದಿಮೆದಾರರು ತಮ್ಮದೇ ಆದ ಅಡುಗೆಮನೆ ಹೊಂದಿದ್ದಲ್ಲಿ, ಪಾಲಿಕೆಯಿಂದ ಉದ್ದಿಮೆ ಪರವಾನಗಿ ನೀಡಿದ 03 ತಿಂಗಳ ಅವಧಿಯೊಳಗೆ ಕಡ್ಡಾಯವಾಗಿ ಈಖಖಂಖ ಇಲಾಖೆಯಿಂದ ಲೈಸನ್ಸ್‌ನ್ನು ಪಡೆದುಕೊಳ್ಳತಕ್ಕದ್ದು. ಉದ್ದಿಮೆದಾರರು, ಮಾಲೀಕರು ಪೇಯಿಂಗ್ ಗೆಸ್ಟ್‌ಗಳಲ್ಲಿ ವಾಸಿಸುವ ನಿವಾಸಿಗಳ ಸುರಕ್ಷತಾ ದೃಷ್ಟಿಯಿಂದ ಕನಿಷ್ಟ ಪಕ್ಷ 01 ಸಿಬ್ಬಂದಿಯನ್ನಾದರೂ ಕಡ್ಡಾಯವಾಗಿ 24★7 ಸೇವೆಯಡಿಯಲ್ಲಿ ನಿಯೋಜಿಸಿರತಕ್ಕದ್ದು. ಪೇಯಿಂಗ್ ಗೆಸ್ಟ್ ಉದ್ದಿಮೆಗಳಿಗೆ ಪಾಲಿಕೆಯಿಂದ ವಾಣಿಜ್ಯ ಪರವಾನಿಗೆ ಪತ್ರ ವಿತರಿಸುವ ಮುನ್ನ ಉದ್ದೇಶಿತ ಕಟ್ಟಡದಲ್ಲಿ ಮಾಲೀಕರು ಅಗ್ನಿ ಸುರಕ್ಷತಾ ಕ್ರಮಗಳನ್ನು ಆಳವಡಿಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಅಧಿಕೃತ ಪ್ರಮಾಣ ಪತ್ರವನ್ನು ಪಡೆದುಕೊಂಡಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ತುರ್ತು ಸೇವೆಗಳಿಗೆ ಸಂಬಂಧಿಸಿದಂತೆ, ಪೇಯಿಂಗ್ ಗೆಸ್ಟ್ ಕಟ್ಟಡದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಹಾಯವಾಣಿ ಸಂಖ್ಯೆ-1533 ಮತ್ತು ಪೋಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ:101 ಅನ್ನು ಪ್ರದರ್ಶಿಸುವ ಫಲಕವನ್ನು ಅಳವಡಿಸಿರುವುದನ್ನು ಖಚಿತಪಡಿಸಿಕೊಳ್ಳಟ್ಟಿದ್ದು. ಪೇಯಿಂಗ್ ಗೆಸ್ಟ್‌ಗಳಲ್ಲಿ ಪ್ರಥಮ ಚಿಕಿತ್ಸಾ ಪೆಟ್ಟಿಗೆಗಳನ್ನು ಆಳವಡಿಸಿರತಕ್ಕದ್ದು.

ಪೇಯಿಂಗ್ ಗೆಸ್ಟ್ನ ಮಾಲೀಕರು ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಂಗಡಿಸಿ, ವಿಲೇವಾರಿಗೊಳಸಲು ಕ್ರಮವಹಿಸತಕ್ಕದ್ದು.

ವಲಯ ಆರೋಗ್ಯಾಧಿಕಾರಿಯವರು, ಆರೋಗ್ಯ ವೈದ್ಯಾಧಿಕಾರಿಗಳು ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕರು ತಮ್ಮ-ತಮ್ಮ ಕಾರ್ಯಕ್ಷೇತ್ರದ ವ್ಯಾಪ್ತಿಯಲ್ಲಿ ಮೇಲ್ಕಂಡ ಮಾರ್ಗಸೂಚಿಗಳ ಪಾಲನೆಯಾಗುತ್ತಿರುವ ಕುರಿತು ಪ್ರತೀ ಆರು ತಿಂಗಳಿಗೊಮ್ಮೆ ಖಚಿತಪಡಿಸಿಕೊಳ್ಳತಕ್ಕದ್ದು.

ಎಲ್ಲಾ ವಲಯ ಆಯುಕ್ತರುಗಳು ಮೇಲ್ಕಂಡ ಮಾರ್ಗಸೂಚಿಗಳ ಪಾಲನೆಯಾಗುತ್ತಿರುವುದರ ಕುರಿತು ಪರಿಶೀಲಿಸಿ ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಮಾರ್ಗಸೂಚಿಗಳನ್ನು ಉಲ್ಲಂಘನೆ ಮಾಡುವ ಉದ್ದಿಮೆದಾರರ ವಿರುದ್ಧ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ-2020ರ ಕಾಯ್ದೆ ಸೆಕ್ಷನ್ 307 ಅಮಡ್ 308ರಂತೆ ಅಗತ್ಯ ಕ್ರಮ ಜರುಗಿಸಲು ಮುಖ್ಯ ಆಯುಕ್ತರು ಸೂಚಿಸಿದ್ದಾರೆ

## ದೇವೇಗೌಡರ ಭೂ ಕಬಳಿಕೆ ಫ್ಲೆಕ್ಸ್: ಪ್ರತಿಭಟನೆ

**ಮೈಸೂರು:** ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಭೂ ಕಬಳಿಕೆ ಪಕ್ಷಿ ನೋಟದ ಫ್ಲೆಕ್ಸ್ ಅಳವಡಿಸಿದ ಕಾಂಗ್ರೆಸ್ ನಡೆ ಖಂಡಿಸಿ ಮಾಜಿ ಸಚಿವ ಸಾ.ರಾ. ಮಹೇಶ್ ನೇತೃತ್ವದಲ್ಲಿ ಜೆಡಿಎಸ್‌ನ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.



ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಭಾಗವಾಗಿ ನಗರದ ಪ್ರಮುಖ ವೃತ್ತಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಭೂ ಕಬಳಿಕೆ ಪಕ್ಷಿ ನೋಟದ ಫ್ಲೆಕ್ಸ್ ಎಂದು ಮೈಸೂರಿನ ವಿವಿಧೆಡೆ 25 ಫ್ಲೆಕ್ಸ್‌ಗಳನ್ನು ಹಾಕಿದ್ದರು. ಮಾಜಿ ಪ್ರಧಾನಿ ದೇವೇಗೌಡ, ಮಾಜಿ ಸಿಎಂ ಎಚ್ .ಡಿ.ಕುಮಾರಸ್ವಾಮಿ, ಮಾಜಿ ಸಚಿವ ಎಚ್ .ಡಿ.ರೇವಣ್ಣನವರು ತಮ್ಮ ಆಡಳಿತಾವಧಿಯಲ್ಲಿ ನಡೆಸಿದ ಭೂ ಹಗರಣ ಎಂದು ಫ್ಲೆಕ್ಸ್ ಹಾಕಲಾಗಿತ್ತು. ಇದರ ಜತೆಗೆ, 9 ಡಿನೋಟಿಫಿಕೇಶನ್ ವರಗಳು ಎಂದು, ಮುಡಾ ಸರ್ವೇ ನಂಬರ್ ಸೇರಿ ಎಲ್ಲಾ ನಿವೇಶನದ ಮಾಹಿತಿಗಳನ್ನು ಫ್ಲೆಕ್ಸ್‌ನಲ್ಲಿ ಹಾಕಲಾಗಿತ್ತು. ಈ ವಿಚಾರ ತಿಳಿಯುತ್ತಿದ್ದಂತೆ ಕೆಂಡಾಮಂಡಲರಾದ ಜೆಡಿಎಸ್‌ನ ಕಾರ್ಯಾಧ್ಯಕ್ಷ ಸಾ.ರಾ.ಮಹೇಶ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರೊಂದಿಗೆ ಮೆಟ್ರೋಪೋಲ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಕೂಡಲೇ ಎಚ್.ಡಿ.ದೇವೇಗೌಡರ ಕುಟುಂಬದ ವಿರುದ್ಧ ಅಳವಡಿಸಿರುವ ಫ್ಲೆಕ್ಸ್‌ಗಳನ್ನು ತೆರವು ಮಾಡಬೇಕು. ಇದನ್ನು ಹಾಕಿದವರ ವಿರುದ್ಧ ತಕ್ಷಣವೇ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಕೊನೆಗೆ ಪೊಲೀಸರು ಸಾ.ರಾ.ಮಹೇಶ್ ಹಾಗೂ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು ಸಿಎಆರ್ ಮೈದಾನಕ್ಕೆ ಕರೆದೊಯ್ದರು. ನಾವು ಪ್ರತಿಭಟಿಸಿಲ್ಲ ಅಥವಾ ಅಳವಡಿಸಿದ್ದ ಫ್ಲೆಕ್ಸ್ ತೆರವುಗೊಳಿಸಲೂ ಮುಂದಾಗಿಲ್ಲ. ಆದರೂ ನಮ್ಮನ್ನು ಏಕೆ ಬಂಧಿಸಿದ್ದೀರಿ ಎಂದು ಸಾ.ರಾ. ಮಹೇಶ್ ಪ್ರಶ್ನಿಸಿದ್ದಾರೆ. ಬಳಿಕ ಪೊಲೀಸರ ಕ್ರಮ ಖಂಡಿಸಿ ಸಾ.ರಾ.ಮಹೇಶ್ ಮತ್ತು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಮಾಜಿ ಶಾಸಕ ಆರ್. ಆಶ್ವಿನ್ ಕುಮಾರ್ ಧರಣಿ ನಡೆಸಿದರು.

# ದುಶ್ಚಟ ಸಾಮಾಜಿಕ ಶಾಪ

## ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಸ್.ಸುಂದರರಾಜ್ ಅಭಿಪ್ರಾಯ

**ಮಡಿಕೇರಿ :** ಪ್ರಾಕೃತಿಕ ವಿಕೋಪದಿಂದ ಸಂಭವಿಸುವ ಸಾವಿಗಿಂತ, ಸ್ವಯಂಕೃತ ತಪ್ಪುಗಳಿಂದ ಉಂಟಾಗುವ ಸಾವಿನ ಸಂಖ್ಯೆ ಹೆಚ್ಚಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಸ್.ಸುಂದರರಾಜ್ ಅಭಿಪ್ರಾಯಪಟ್ಟಿದ್ದಾರೆ.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವೈದ್ಯಕೀಯ ಶಿಕ್ಷಣ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಹಕಾರದಲ್ಲಿ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಗುರುವಾರ ಡಾ.ಮಹಾಂತ ಶಿವಯೋಗಿ ಅವರ ಜನ್ಮ ದಿನಾಚರಣೆ ಪ್ರಯುಕ್ತ ನಡೆದ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಪ್ರಾಕೃತಿಕ ವಿಕೋಪದ ಬಗ್ಗೆ ಮುನ್ನೆಚ್ಚರ ವಹಿಸಿದರೂ ಸಹ ಅಲ್ಲಲ್ಲಿ ವಿಕೋಪಗಳು ಸಂಭವಿಸಿ ಸಾವು ನೋವುಗಳು ಉಂಟಾಗುತ್ತದೆ. ಆದರೆ ಸ್ವಯಂಕೃತದಿಂದ ಪ್ರತೀನಿತ್ಯ ಒಂದಲ್ಲ ಒಂದು ರೀತಿಯ ಸಾವು ನೋವುಗಳು ಸಂಭವಿಸುತ್ತಿರುವುದು ದುರಂತ ಎಂದು ಸುಂದರ್ ರಾಜ್ ಹೇಳಿದರು.

ಕಳೆದ ನಾಲ್ಕು ವರ್ಷದಲ್ಲಿ ಕೊಡಗು ಜಿಲ್ಲೆಯಲ್ಲಿ ಮದ್ಯ ಹಾಗೂ ಮಾದಕ ವಸ್ತುಗಳಿಗೆ ತುತ್ತಾಗಿ ಸುಮಾರು 144 ಮಂದಿ ಮೃತಪಟ್ಟಿದ್ದಾರೆ. 2021 ರಲ್ಲಿ 15 ಮಂದಿ, 2022 ರಲ್ಲಿ 50, 2023 ರಲ್ಲಿ 47, 2024 ರ ಜುಲೈ ಅಂತ್ಯದವರೆಗೆ 34 ಮಂದಿ ಮೃತಪಟ್ಟಿರುವುದು ವರದಿಯಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅವರು ತಿಳಿಸಿದರು.

ಕಾಣೆಯಾದ ಹೆಣ್ಣು ಮಕ್ಕಳ ಪ್ರಕರಣ ಸೇರಿದಂತೆ, ಅಪ್ರಾಪ್ತೆ ಹೆಣ್ಣು ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು ವರದಿಯಾಗಿದ್ದು, ಕಳೆದ ನಾಲ್ಕು ವರ್ಷದಲ್ಲಿ 125 ಪ್ರಕರಣ ದಾಖಲಾಗಿದೆ. ಇದರಲ್ಲಿ 61 ಪ್ರಕರಣಗಳು ಪೋಕ್ಸೋ ಪ್ರಕರಣಗಳಾಗಿ ಪರಿವರ್ತನೆಗೊಂಡಿದೆ. 2021 ರಲ್ಲಿ 29 ಇದರಲ್ಲಿ 13 ಪೋಕ್ಸೋ, 2022 ರಲ್ಲಿ 36 ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ 17 ಪೋಕ್ಸೋ, 2023 ರಲ್ಲಿ 33 ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ 12 ಪೋಕ್ಸೋ, 2024 ರ ಜುಲೈ ಅಂತ್ಯದವರೆಗೆ 27 ಪ್ರಕರಣಗಳಲ್ಲಿ 19 ಪೋಕ್ಸೋ ಪ್ರಕರಣಗಳು ವರದಿಯಾಗಿದೆ ಎಂದು ಮಾಹಿತಿ ನೀಡಿದರು.

ಮಾದಕ ವಸ್ತುಗಳ ಸಾಗಾಣಿಕೆ ಮತ್ತು ಮಾರಾಟ ಪ್ರಕರಣಗಳನ್ನು ಪೊಲೀಸರು ಪತ್ತೆಹಚ್ಚಿದ ಪರಿಣಾಮ ಮೂವರಿಗೆ 10 ವರ್ಷಗಳ ಕಾಲ ಕಠಿಣ ಶಿಕ್ಷೆ ಆಗಿದೆ. ಜೊತೆಗೆ ತಲಾ 1 ಲಕ್ಷ ರೂ ವರೆಗೆ ದಂಡ ವಿಧಿಸಲಾಗಿದೆ. ಹಾಗೆಯೇ ಮದ್ಯಪಾನ ಮಾಡಿ ವಾಹನ ಚಲಾಯಿಸಿದರೆ 10 ಸಾವಿರ ರೂ. ದಂಡ ವಿಧಿಸಲಾಗುತ್ತದೆ. ಆದ್ದರಿಂದ ದುಶ್ಚಟಗಳಿಂದ ದೂರವಿರಬೇಕು ಎಂದು ಸಲಹೆ ಮಾಡಿದರು.

ಅಫೀಮು, ಹೆರಾಯಿನ್, ಕೋಕೇನ್, ಚರಸ್ ಮತ್ತಿತರ ಮಾದಕ ವಸ್ತುಗಳ ವ್ಯಸನಕ್ಕೆ ತುತ್ತಾಗಬಾರದು. ಪ್ರತಿಯೊಬ್ಬರೂ ಸತ್ಪ್ರಜೆಯಾಗಿ ಬದುಕಬೇಕು. ಪೋಷಕರು ಸೇರಿದಂತೆ ಎಲ್ಲರೂ ಯುವಜನರಿಗೆ ಮಾಹಿತಿ, ಮಾರ್ಗದರ್ಶನ ನೀಡಬೇಕು ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮನೋವೈದ್ಯರಾದ ಡಾ.ಡೆವಿನ್ ಕರ್ಕಡ ಮಾತನಾಡಿ ಮದ್ಯ ಹಾಗೂ ಮಾದಕ ವಸ್ತುಗಳ ಅವಲಂಬನೆಗೆ ಒಳಗಾಗುವುದು ವ್ಯಸನವಾಗಿದೆ. ಇದು ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಅಂಶಗಳ ಮೇಲೆ ಕೆಟ್ಟ ಪರಿಣಾಮ ಬೀರಲಿದೆ ಎಂದು ಹೇಳಿದರು.

ವ್ಯಸನದಿಂದ ದೂರವಾಗಲು ಹಲವು ಮಾರ್ಗೋಪಾಯಗಳು ಇದ್ದು, ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ಅಥವಾ ಸಹಾಯವಾಣಿ ಸಂಖ್ಯೆ 14416 ಇದಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಅನೇಕರಲ್ಲಿ ಪುಸ್ತಕ ಓದುವುದಕ್ಕಿಂತ, ಮೊಬೈಲ್ ನೋಡುವುದು ಚಟವಾಗಿದೆ. ಇದು ಆರೋಗ್ಯಯುತ ಬೆಳವಣಿಗೆಯಲ್ಲ ಎಂದು ಡಾ.ಡೆವಿನ್ ಕರ್ಕಡ ಹೇಳಿದರು.'

ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಬೋಧಕ ಆಸ್ಪತ್ರೆಯ ಮಾನಸಿಕ ಆರೋಗ್ಯ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಸತೀಶ್ ಕುಮಾರ್ ಎಸ್.ವಿ. ಅವರು ಮಾತನಾಡಿ ಮಾದಕ ವಸ್ತುಗಳ ಚಟಕ್ಕೆ ತುತ್ತಾದಲ್ಲಿ ಕುಟುಂಬ ಸಂಕಷ್ಟ ಎದುರಿಸಲಿದೆ. ಇದರಿಂದಾಗಿ ಸಮಾಜದ ಅಭಿವೃದ್ಧಿ ಕುಂಠಿತವಾಗಲಿದೆ ಎಂದರು.

ಕ್ಲಿನಿಕಲ್ ಸೈಕಾಲಜಿಸ್ಟ್ ಸಿ.ರಮೇಶ್ ಮಾತನಾಡಿದರು. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ವಿಜಯ್ ಅವರು ಮಾತನಾಡಿ ಜೀವ ಇದ್ದಲ್ಲಿ ಮಾತ್ರ ಜೀವನ ಎಂಬುದನ್ನು ಅರಿತುಕೊಳ್ಳಬೇಕು. ಒಳ್ಳೆಯ ಅಭ್ಯಾಸ ರೂಢಿಸಿಕೊಳ್ಳಬೇಕು. ಕೆಲವರು ತಾವು ಕೆಡುವುದರ ಜೊತೆಗೆ ಇತರರನ್ನು ಕೆಡಿಸಲು ಮುಂದಾಗುತ್ತಾರೆ. ಆದ್ದರಿಂದ ಈ ಬಗ್ಗೆ ಎಚ್ಚರವಹಿಸಬೇಕು. ಯಾವುದೇ ಕಾರಣಕ್ಕೂ ಹಾದಿ ತಪ್ಪಬಾರದು ಎಂದು ಕಿವಿ ಮಾತು ಹೇಳಿದರು. ವಾರ್ತಾಧಿಕಾರಿ ಚಿನ್ನಸ್ವಾಮಿ ಮಾತನಾಡಿ ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಅವಿರತವಾಗಿ ಶ್ರಮಿಸಿದ್ದಾರೆ. ಇವರ ಜನ್ಮ ದಿನವನ್ನು ಆಗಸ್ಟ್ ತಿಂಗಳಲ್ಲಿ ವ್ಯಸನಮುಕ್ತ ದಿನಾಚರಣೆಯನ್ನಾಗಿ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ ಎಂದರು.

# ಹಲ್ಲುಗಳ ರಕ್ಷಣೆಗೆ ಆದ್ಯತೆ ನೀಡಿ

**ಪಿರಿಯಾಪಟ್ಟಣ:** ಹಲ್ಲು ಮತ್ತು ಬಾಯಿಯ ಆರೋಗ್ಯವು ಮನುಷ್ಯನ ಜೀವನದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ರೋಟರಿ ಮಿಡ್ ಟೌನ್ ಸಂಸ್ಥೆ ಅಧ್ಯಕ್ಷ ಎಂ.ಎಂ.ರಾಜೇಗೌಡ ತಿಳಿಸಿದರು .

ಪಟ್ಟಣದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ರೋಟರಿ ಮಿಡ್ ಟೌನ್ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ದಂತ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.

ಹಲ್ಲುಗಳ ಸ್ವಚ್ಛತೆ ಕಾಪಾಡಿಕೊಳ್ಳುವ ಜತೆಗೆ ಸೊಪ್ಪು, ತರಕಾರಿ, ಹಣ್ಣು, ರಾಗಿ ಮುದ್ದೆಯಂತಹ ಖನಿಜಯುಕ್ತ ಆಹಾರ ಸೇವಿಸುವುದರಿಂದ ಹಲ್ಲುಗಳ ರಕ್ಷಣೆ ಆಗುತ್ತದೆ. ಮಕ್ಕಳಿಗೆ, ಪೌಷ್ಟಿಕ ಆಹಾರ ಸೇವನೆ, ರಕ್ತಹೀನತೆ ನಿಯಂತ್ರಣ, ದುಶ್ಚಟಗಳ ನಿಯಂತ್ರಣ, ವೈಯಕ್ತಿಕ ಸ್ವಚ್ಛತೆ, ಆರೋಗ್ಯ ಕಾಪಾಡಿಕೊಳ್ಳುವುದು ಒಳಗೊಂಡ ವಿಷಯದ ಬಗ್ಗೆ ಮಕ್ಕಳಿಗೆ ಸಲಹೆ ಕೊಡಲಾಯಿತು. ಪ್ರತಿಯೊಬ್ಬರು ಪ್ರತ್ಯೇಕ ಬ್ರಷ್ನಲ್ಲಿ ಹಲ್ಲು ಉಜ್ಜುವ ಅಭ್ಯಾಸ ಇಟ್ಟುಕೊಳ್ಳಬೇಕು. ಯಾವುದೇ ಆಹಾರ ಪದಾರ್ಥ ಸೇವಿಸಿದ ಮೇಲೆ ನೀರಿನಲ್ಲಿ ಬಾಯಿ ಮುಕ್ಕಳಿಸಬೇಕು. ಹಲ್ಲು ಉಜ್ಜುವಾಗ ವಸಡಿನಲ್ಲಿ ರಕ್ತಸ್ರಾವವಾಗುತ್ತಿದ್ದರೆ ವೈದ್ಯರ ಸಲಹೆ ಪಡೆದುಕೊಳ್ಳಬೇಕು. ಬೆಳಿಗ್ಗೆ ಮತ್ತು ರಾತ್ರಿ ತಪ್ಪದೆ ಬ್ರಷ್ ಮಾಡಬೇಕು ಎಂದರು. ಹಿರಿಯ ರೋಟೇರಿಯನ್ ಬಿ.ವಿ.ಜವರೇಗೌಡ ಮಾತನಾಡಿ ಹಲ್ಲುಗಳು ಮುಖದ ಸೌಂದರ್ಯವನ್ನು ಹೆಚ್ಚಿಸುತ್ತದೆ ಆದ್ದರಿಂದ ಹಲ್ಲಿನ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು, ಕುಡಿತ ಹಾಗೂ ದೂಮಪಾನ ಚಟ ಸೇರಿದಂತೆ ಅನೇಕ ಚೀಟಿಗಳನ್ನು ಹೊಂದಿರುವ ಜನರು ವೈದ್ಯರ ಬಳಿ ತಪಾಸಣೆಗೆ ಬರುತ್ತಾರೆ ಅಂತಹ ಸಂದರ್ಭದಲ್ಲಿ ವೈದ್ಯರು ಇವರು ಮದ್ಯ ವ್ಯಸನಿ ಎಂದು ದೂರದೆ ಅವರಿಗೆ ಚಿಕಿತ್ಸೆ ನೀಡಿ ಗುಣಪಡಿಸುವ ಕೆಲಸ ಮಾಡುತ್ತಾರೆ ಎಂದರು.

# ಕೊಟ್ಟು ಖುಷಿ ಪಡುವ ಸಂಸ್ಕೃತಿ ನಮ್ಮದು : ಬನ್ನೂರು ಕೆ.ರಾಜು

**ಮೈಸೂರು:** ಮತ್ತೊಬ್ಬರ ಕಷ್ಟ- ನಷ್ಟಗಳಿಗೆ,ದುಃಖ- ದುಮ್ಮಾನಗಳಿಗೆ ಮಾನವೀಯತೆಯಿಂದ ಸ್ಪಂದಿಸಿ ಕೊಟ್ಟು ಖುಷಿ ಪಡುವ ಸುಸಂಸ್ಕೃತಿ ನಮ್ಮದಾಗಿದ್ದು ಇದನ್ನು ಪ್ರತಿಯೊಬ್ಬರೂ ಅನುಕ ರಿಸಿ ಅನುಸರಿಸಬೇಕೆಂದು ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ಅವರು ಹೇಳಿದರು.

ನಗರದ ಅಗ್ರಹಾರದ ತ್ಯಾಗ ರಾಜ ರಸ್ತೆಯಲ್ಲಿರುವ ಶ್ರೀ ಕೃಷ್ಣ ಲಲಿತಕಲಾ ಮಂದಿರದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಲೀಲಾ ಮನೋಹರ್ ದಂಪತಿ ಪುತ್ರಿ ಕು.ಧೃತಿ ಹುಟ್ಟು ಹಬ್ಬದ ಅಂಗವಾಗಿ ಇಂದು ನಡೆದ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಕ್ಕಳು ವಿದ್ಯಾರ್ಥಿ ದಿಶೆಯಲ್ಲೇ ಓದುವುದರ ಜೊತೆಗೆ ಜೀವನದಲ್ಲಿ ಕಲೆ, ಸಾಹಿತ್ಯ , ಸಂಗೀತ ,ಸಂಸ್ಕೃತಿ, ಸಮಾಜ ಸೇವೆ ಸೇರಿದಂತೆ ಒಟ್ಟಾರೆ ಉತ್ತಮ ಚಿಂತನೆಯ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿ ಕೊಂಡು ಜತೆ ಜತೆಗೆ ಕಲಿಕೆಯ ಹಂತದಲ್ಲೇ ಜೀವನ ಮೌಲ್ಯ ಗಳನ್ನು ರೂಢಿಸಿಕೊಂಡಾಗ ಮಾತ್ರ ಪರಿಪೂರ್ಣ ಮನುಷ್ಯರಾಗಿ ಬೆಳೆಯಲು ಸಾಧ್ಯವೆಂದರು.

ಇವತ್ತು ಕಾಲ ಹಿಂದಿನಂತಿಲ್ಲ. ಓದುವ ಮಕ್ಕಳಿಗೆ ಇಂದು ನಮ್ಮ ಸಮಾಜದಲ್ಲಿ ಸಹಾಯ ಹಸ್ತಗ ಳು, ನೆರವಿನ ಮನಸ್ಸುಗಳು, ಉದಾರತೆಯ ಹೃದಯಗಳು ಬೇಕಾದಷ್ಟಿವೆ. ಜೊತೆಗೆ ಸರ್ಕಾರ ಕೂಡ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಅದರಲ್ಲೂ ವಿಶೇಷವಾಗಿ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಸವಲತ್ತು -ಸೌಲಭ್ಯ ನೀಡುತ್ತಿದ್ದು ಇದನ್ನೆಲ್ಲಾ ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಂಡು ಶಿಕ್ಷಣದಲ್ಲಿ ಹೆಚ್ಚಿನದನ್ನು ಸಾಧಿಸಬೇಕೆಂದ ಅವರು, ಎಲ್ಲರೂ ತಮ್ಮ ಹುಟ್ಟು ಹಬ್ಬವನ್ನು ಕು. ಧೃತಿ ಮನೋಹರ್ ರೀತಿ ಇತರರಿಗೆ ನೆರವಾಗುವುದರ ಮೂಲಕ ಸಮಾಜೋಪಯೋಗಿಯಾಗಿ ಸಾರ್ಥಕವಾಗಿ ಆಚರಿಸಿಕೊಳ್ಳಬೇಕೆಂದು ಹೇಳಿದರು.

ಲೀಲಾ ಮನೋಹರ್ ಮತ್ತು ಕು.ಧೃತಿ ಹಾಗು ಕು.ರಿಷಿಕಾ ಅವರು ವಿದ್ಯಾರ್ಥಿಗಳೆಲ್ಲರಿಗೂ ಉಚಿತವಾಗಿ ಸಮವಸ್ತ್ರ ವಿತರಣೆ ಮಾಡಿ ಎಲ್ಲರನ್ನೂ ಖುಷಿಪಡಿಸಿ ತಾವೂ ಖುಷಿಪಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಬಿ. ಎಂ. ಪರಮೇಶ್ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಸ್ವಾಗತಿಸಿದರು. ಶಿಕ್ಷಕಿಯರಾದ ಮಹೇಶ್ವರಿ, ರೂಪಾ, ಕಲ್ಪನಾ, ದಾಕ್ಷಾಯಿಣಿ, ಅನಿತಾ, ವಿದ್ಯಾ, ಹಂಸಿಣಿ ಹಾಗು ಪತ್ರಕರ್ತ ಕಿಶೋರ್ ಮುಂತಾದವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಮವಸ್ತ್ರಗಳನ್ನು ಕೊಡಿಸಿದ ಲೀಲಾಮನೋಹರ್ ಮತ್ತು ಕು.ಧೃತಿ ಅವರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

## 15ರಂದು ಸ್ವಾತಂತ್ರ್ಯ ದಿನಾಚರಣೆ

**ಮಂಡ್ಯ:** ಮಂಡ್ಯ ಜಿಲ್ಲಾಡಳಿತದ ವತಿಯಿಂದ 78 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ಸರ್ ಎಂ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರು



ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದ ಹೆಚ್ ಡಿ ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ವಹಿಸಲಿದ್ದಾರೆ. ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಧ್ವಜಾರೋಹಣ ಹಾಗೂ ಸ್ವಾತಂತ್ರ್ಯೋತ್ಸವ ಸಂದೇಶ ನೀಡಲಿದ್ದಾರೆ. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ಶಾಸಕ ಎ.ಬಿ. ರಮೇಶ್ ಬಂಡಿಸಿದ್ದೇಗೌಡ ಅವರ ಗೌರವ ಉಪಸ್ಥಿತಿಯಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಕೆ. ವಿವೇಕಾನಂದ, ವಿಧಾನ ಸಭಾ ಕ್ಷೇತ್ರದ ಶಾಸಕರುಗಳಾದ ಪಿ.ಎಂ. ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ ಭಾಗವಹಿಸಲಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ;** ಬಾಹ್ಯಮೂಲ ಸಂಸ್ಥೆಯ ಮುಖಾಂತರ ಪ್ಯಾರಾಲೀಗಲ್ ಪರ್ಸನಲ್/ಲಾಯರ್ 2 ಹುದ್ದೆಗಳಿಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ಯಾರಾಲೀಗಲ್ ಪರ್ಸನಲ್/ ಲಾಯರ್: ಮಹಿಳಾ ಅಭ್ಯರ್ಥಿಗೆ ಮೀಸಲು:- ಹುದ್ದೆಗಳ ಸಂಖ್ಯೆ: 2, ವಿದ್ಯಾರ್ಹತೆ: Degree in Law (With 2-3 Yrs Experience) ಸರ್ಕಾರಿ /ಸರ್ಕಾರೇತರ ಯೋಜನೆ/ಕಾರ್ಯಕ್ರಮಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಗೆ ಸಂಬಂಧಿಸಿದಂತೆ ಕನಿಷ್ಠ 2-3 ವರ್ಷ ಕೆಲಸ ಮಾಡಿದ ಅನುಭವ ಹೊಂದಿರಬೇಕು. ಕಂಪ್ಯೂಟರ್ ತರಬೇತಿ ಕಡ್ಡಾಯ. ಮಾಸಿಕ ಗೌರವಧನ ರೂ.25,000/- ಹಾಗೂ ವಯೋಮಿತಿ 45 ವರ್ಷದೊಳಗಿರಬೇಕು. ಸಖಿ ಒನ್ ಸ್ಟಾಪ್ ಸೆಂಟರ್ ಗಳಲ್ಲಿ ನೇಮಕವಾಗುವ ಸಿಬ್ಬಂದಿಗಳು 24★7 ಕಾರ್ಯನಿರ್ವಹಿಸಲು ಅನುವಾಗುವಂತೆ ವಿವಿಧ ಪಾಳಿಗಳಲ್ಲಿ (ಶಿಫ್ಟ್‌ಗಳಲ್ಲಿ) ಕಟ್ಟಾಯವಾಗಿ ಕಾರ್ಯನಿರ್ವಹಿಸಬೇಕಾಗಿರುತ್ತದೆ. ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿಗಳನ್ನು ಆಗಸ್ಟ್ 26 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08152-222753 ಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದುಯೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ವೃಂದದ ವೈದ್ಯ, ವೈದ್ಯೇತರ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಕೋಲಾರ ಜಿಲ್ಲೆಯ ಎಸ್.ಎನ್.ಆರ್ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಪ್ರಾರಂಭಿಸಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಅಗತ್ಯವಾದ ವಿವಿಧ ವೃಂದದ ವೈದ್ಯ, ವೈದ್ಯೇತರ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ ಕೇಂದ್ರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಹೊಸದಾಗಿ ನೇಮಕಾತಿ ಮಾಡಲು ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಹೆಚ್ಚುವರಿಯಾಗಿ ಬೇಕಾಗಿರುವ ರೇಡಿಯಾಲಜಿಸ್ಟ್, ಕಿರಿಯ ಫಾರ್ಮಸಿ ಅಧಿಕಾರಿ, ಶುಶ್ರೂಷಣಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇರ ಸಂದರ್ಶನ ಮೂಲಕ ಆಯ್ಕೆ ಮಾಡಲು ಆಹ್ವಾನಿಸಲಾಗಿದ್ದು, ಈ ಹುದ್ದೆಗಳ ವಿವಿರ, ವಿದ್ಯಾರ್ಹತೆ, ವೇತನದ ಸಂಪೂರ್ಣ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್ https://kolar.nic.in/ ಅಥವಾ https://kolarhfwd.karnataka.gov.in ನಲ್ಲಿ ಪಡೆಯಬಹುದುಯೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರಿಗೆ ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯವರು ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2024ರ ಪ್ರಯುಕ್ತ ವಿವಿಧ ಕ್ಷೇತ್ರದಲ್ಲಿ ಅತ್ಯುತ್ತಮ್ಮ ಸೇವೆ ಸಲ್ಲಿಸಿರುವ ವೈಯಕ್ತಿಕ, ಸಂಸ್ಥೆಯ ವತಿಯಿಂದ ಹಿರಿಯ ನಾಗರಿಕರಿಗೆ ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ವಿವಿಧ ಕ್ಷೇತ್ರದಲ್ಲಿ ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಲೆ, ಕಾನೂನು, ಪ್ರತಿಭೆ, ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಸಲ್ಲಿಸಿದರುವ ಉತ್ತಮ ಸಂಸ್ಥೆಗೆ ಅರ್ಜಿಗಳನ್ನು 31 ರೊಳಗೆ ಇಲಾಖೆಯವರಿಂದ ಅರ್ಜಿ ನಮೂನೆಯನ್ನು ಪಡೆದು ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.dwdsc.karnataka.gov.in ಮತ್ತು ಕಛೇರಿ ದೂ.ಸಂ. 08152-200010ಯನ್ನು ಸಂಪರ್ಕಿಸಬಹುದುಯೆಂದು ಜಿಲ್ಲಾ ಕಛೇರಿಯ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ

**ಕೋಲಾರ:** ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಪ್ರಕಸ್ತ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಹಾಗೂ ಹೊಲಿಗೆ ಯಂತ್ರ ವಿತರಣೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬಹುದು. ನಿಗಮದ ವೆಬ್‌ಸೈಟ್ www.dbcdc.karnataka.gov.in ಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂ. 080-22374832 ಮತ್ತು 8050770004, 8050770005 ಯನ್ನು ಸಂಪರ್ಕಿಸಬಹುದುಯೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾದಯಾತ್ರೆ ಮಾಡುವ ಅರ್ಹತೆ ಇದೆಯೆ?

**ಮೈಸೂರು:** ಮುಡಾ ಹಗರಣ, ವಾಲ್ಮೀಕಿ ಹಗರಣ ನೆಪವಾಗಿರಿಸಿಕೊಂಡು ಪಾದಯಾತ್ರೆ ಕೈಗೊಂಡಿರುವ ಬಿಜೆಪಿ-ಜೆಡಿಎಸ್ ಮುಖಂಡರು ಮೊದಲು ಯಾಕೆ ಪಾದಯಾತ್ರೆ ಕೈಗೊಳ್ಳಲಾಗುತ್ತಿದೆ, ನಿಜಕ್ಕೂ ಭ್ರಷ್ಟಾಚಾರಿಗಳಾದ ತಮಗೆ ಅದನ್ನು ಕೈಗೊಳ್ಳುವ ಅರ್ಹತೆ ಇದೆಯೇ ಎಂದು ತಮ್ಮನ್ನು ತಾವು ಪ್ರಶ್ನಿಸಿಕೊಳ್ಳಲಿ ಎಂದು ಮಾಜಿ ಮೇಯರ್ ಪುರುಷೋತ್ತಮ್ ಕಿಡಿಕಾರಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗ ಪಾದಯಾತ್ರೆ ಕೈಗೊಂಡಿರುವವರು ಆಡಳಿತದಲ್ಲಿದ್ದ ವೇಳೆ ಇಡೀ ದೇಶ ತಲೆ ತಗ್ಗಿಸುವ ಘಟನೆಗಳು ನಡೆದಿವೆ. ಸಿದ್ದರಾಮಯ್ಯ ಅವರು ಅಧಿಕಾರದಲ್ಲಿ ಇರುವಾಗಲೆಲ್ಲ ಶೋಷಿತರೂ ಸೇರಿದಂತೆ ಸುಮಾರು ಶೇ.80ರಷ್ಟು ಜನತೆಯನ್ನು ರಕ್ಷಿಸುವ ಕೆಲಸ ಮಾಡಿದ್ದಾರೆ. ಬಡ ಜನರಿಗೆ ಅನುಕೂಲವಾಗುವ ಕಾರ್ಯಕ್ರಮ ಜಾರಿಗೊಳಿಸಿದ್ದಾರೆ. ಹೀಗಾಗಿ ನಗರದಲ್ಲಿ ಆ.9ರಂದು ಹಮ್ಮಿಕೊಂಡಿರುವ ಜನಾಂದೋಲನ ಸಮಾವೇಶದಲ್ಲಿ ಅಶೋಕಪುರಂನಿಂದ ಸಾವಿರಾರು ಜನರು ಪಾಲ್ಗೊಳ್ಳಲಿದ್ದಾರೆ. ಈ ಸಮಾವೇಶಕ್ಕೆ ಬಹುತೇಕ ಎಲ್ಲ ದಲಿತ ಸಂಘಟನೆಗಳ ಬೆಂಬಲವಿದೆ ಎಂದರು.

ರಾಜ್ಯದಲ್ಲಿ ಬಿಜೆಪಿ ಆಡಳಿತದಲ್ಲಿದ್ದ ಅವಧಿಯಲ್ಲಿ ಎಷ್ಟು ಭ್ರಷ್ಟಾಚಾರ ಇತ್ತು, ಎಷ್ಟು ಲೈಂಗಿಕ ಹಗರಣ ನಡೆದವರು, ಲೈಂಗಿಕ ದೌರ್ಜನ್ಯ ಎಷ್ಟಿತ್ತು, ಸಿದ್ದರಾಮಯ್ಯ ಅಧಿಕಾರಕ್ಕೆ ಬಂದ ಮೇಲೆ ಪರಿಸ್ಥಿತಿ ಹೇಗಿದೆ ಎಂಬ ಬಗ್ಗೆ ಜನತೆ ಚಿಂತಿಸಬೇಕು. ಸಿದ್ದರಾಮಯ್ಯ ಅವರನ್ನು ಪ್ರಶ್ನಿಸುವ ನೈತಿಕತೆ ಈಗ ಪಾದಯಾತ್ರೆ ಕೈಗೊಂಡಿರುವವರಿಗೆ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಗೋಷ್ಠಿಯಲ್ಲಿ ಭುವನೇಶ್ವರಿ, ಮಹೇಶ್, ಶ್ರೀಧರ್, ನಟರಾಜ್, ಮಂಜು ಹಾಜರಿದ್ದರು.

## ನೋಟಿಸ್ ನೀಡಿರುವುದು ಸರಿಯಲ್ಲ

**ಮೈಸೂರು:** ಆರ್‌ಟಿಐ ಕಾರ್ಯಕರ್ತ ಟಿ.ಜೆ.ಅಬ್ರಹಾಂ ನೀಡಿರುವ ದೂರಿನಲ್ಲಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮಾಡಿರುವ ಆರೋಪ ಸುಳ್ಳಾಗಿದ್ದರೂ, ರಾಜ್ಯಪಾಲರು ಸಿಎಂಗೆ ಶೋಕಾಸ್ ನೋಟಿಸ್ ನೀಡಿರುವುದು ಸರಿಯಲ್ಲ ಎಂದು ಡಾ.ಬಿ.ಆರ್. ಅಂಬೇಡ್ಕರ್ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಶ್ರೀಧರ ಕಲಿವೀರ ಬೇಸರ ವ್ಯಕ್ತಪಡಿಸಿದರು. ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಪತ್ನಿಗೆ ಬಂದಿರುವ ಜಮೀನನ್ನು ಪರಿಶಿಷ್ಟ ಜಾತಿಗೆ ಸೇರಿದವರು ಖರೀದಿ ಮಾಡಿದ್ದರು. ಆದ್ದರಿಂದ ಅದು ಪಿಟಿಸಿಎಲ್ ಕಾಯ್ದೆ ವ್ಯಾಪ್ತಿಗೆ ಬರುವುದಿಲ್ಲ. ಜತೆಗೆ ಮುಡಾ ಸಹಾ ಕಾನೂನು ಬಾಹಿರವಾಗಿ ಅದನ್ನು ಸ್ವಾಧೀನ ಪಡಿಸಿಕೊಂಡು ಪರಿಹಾರವಾಗಿ ನಿವೇಶನ ನೀಡಿರುವಾಗ ವಿವಾದ ಎಲ್ಲಿದೆ ಎಂದು ಪ್ರಶ್ನಿಸಿದರು. ಪೋಸ್ಕೋ ಕಾಯ್ದೆ ಅಡಿಯಲ್ಲಿ ಚಾರ್ಜ್‌ಸೀಟ್ ಸಲ್ಲಿಕೆ ಆಗಿರುವ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಿದ್ದರಾಮಯ್ಯ ಅವರ ವಿರುದ್ಧ ಮಾತನಾಡುವ ನೈತಿಕ ಹಕ್ಕಿಲ್ಲ. ಜತೆಗೆ, ಮಾಜಿ ಸಿಎಂ ಎಚ್ .ಡಿ.ಕುಮಾರಸ್ವಾಮಿ ಅವರಿಗೂ ಸಹಾ ಕೇತಗಾನಹಳ್ಳಿಯಲ್ಲಿ ಕಾನೂನು ಬಾಹಿರವಾಗಿ ಭೂಮಿ ಮಂಜೂರಾಗಿದೆ. ಹೀಗಿದ್ದರೂ ಇವರು ಹೇಗೆ ತಾನೇ ಸಿದ್ದರಾಮಯ್ಯ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು. ಪರಿಶಿಷ್ಟರ ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ರಾಜ್ಯ ಸರ್ಕಾರಗಳಿಗಿದೆ ಎಂದು ಸುಪ್ರೀಂಕೋರ್ಟ್ ನೀಡಿರುವ ತೀರ್ಪು ಸ್ವಾಗತಾರ್ಹ. ಆದರೆ ಅದರಲ್ಲಿನ ಕೆನೆಪದರು ಎಂಬ ಮಿತಿ ಕೈಬಿಟ್ಟು ರಾಜ್ಯ ಸರ್ಕಾರ ಜಾರಿಗೊಳಿಸಬೇಕೆಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ಎಂ.ಗೋವಿಂದರಾಜು, ಮಂಜುನಾಥ ಅಣ್ಣಯ್ಯ, ಎ. ಗೋಪಾಲ್, ನಾಗೇಶ್, ಕಾಂತರಾಜ್ ಹಾಗೂ ತಿಮ್ಮಯ್ಯ ಹಾಜರಿದ್ದರು.

# ಕಾರ್ಪೊರೇಟ್ ಕಂಪನಿಗಳೇ ದೇಶ ಬಿಟ್ಟು ತೊಲಗಿ

**ಮೈಸೂರು:** ಕ್ವಿಟ್ ಇಂಡಿಯಾ ಚಳವಳಿ ನೆನಪಿನ ಅಂಗವಾಗಿ ದೇಶವನ್ನು ಲೂಟಿ ಹೊಡೆಯುತ್ತಿರುವ ಕಾರ್ಪೊರೇಟ್ ಕಂಪನಿಗಳೇ ದೇಶ ಬಿಟ್ಟು ತೊಲಗಿ ಎನ್ನುವ ಘೋಷಣೆಯೊಂದಿಗೆ ಭೂತ ದಹನ ಮಾಡಿ ಸಂಯುಕ್ತ ಕರ್ನಾಟಕ ಹೋರಾಟ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.



ನಗರದ ಗಾಂಧಿ ವೃತ್ತದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ವ್ಯಾಪಾರಕ್ಕಾಗಿ ಭಾರತಕ್ಕೆ ಕಾಲಿಟ್ಟ ಬ್ರಿಟಿಷ್ ಉದ್ದಿಮೆ ಈಸ್ಟ್ ಇಂಡಿಯಾ ಕಂಪನಿ ಸ್ಥಳೀಯ ಉದ್ಯಮಿಗಳನ್ನು ನಾಶಗೊಳಿಸಿದ್ದಲ್ಲದೆ ನಮ್ಮ ಸಂಪತ್ತನ್ನು ದೋಚಿ 200 ವರ್ಷಕ್ಕೂ ಹೆಚ್ಚು ಕಾಲ ದಾಸ್ಯದಲ್ಲಿರಿಸಿಕೊಂಡಿತು. ನಂತರ ಸಂವಿಧಾನ ಹಾಗೂ ಜನ ಹೋರಾಟಗಳ ಒತ್ತಡಗಳಿಂದಾಗಿ ರೂಪುಗೊಂಡ ಕಾನೂನುಗಳು ದೊಡ್ಡ ಕಂಪನಿಗಳ ಮೇಲೆ ಹಲವು ನಿಯಂತ್ರಣ ಹೇರಿದವು. ಸಾರ್ವಜನಿಕ ಉದ್ದಿಮೆಗಳಿಗೆ ಹಾಗೂ ಸಣ್ಣ ಉದ್ದಿಮೆಗಳಿಗೆ ಒಂದು ಮಟ್ಟದ ಆದ್ಯತೆ ಸಿಕ್ಕಿತು. ಜಾಗತೀಕರಣದಿಂದಾಗಿ ದೇಶದ ಮತ್ತು ವಿದೇಶದ ಕಂಪನಿಗಳಿಗೆ ದೇಶದ ಸಂಪತ್ತು ಉದ್ದಿಮೆ ಮತ್ತು ಬದುಕಿನ ಮೇಲೆ ಸಂಪೂರ್ಣ ಹಿಡಿತ ನೀಡಲಾಗಿದೆ. ಮೋದಿ ಸರ್ಕಾರ ರಚನೆಯಾದ ಮೇಲೆ ಇಡೀ ದೇಶವನ್ನು ಅವರ ಪಾದ ತಳಕ್ಕೆ ಅರ್ಪಿಸಲಾಗಿದೆ ಎಂದು ಕಿಡಿ ಕಾರಿದರು.

ಅಭಿವೃದ್ಧಿಯ ಹೆಸರಿನಲ್ಲಿ ರೈತರ ಲಕ್ಷಾಂತರ ಎಕ್ಕರೆ ಭೂಮಿ ವಶಪಡಿಸಿಕೊಂಡು ಕಂಪನಿಗಳಿಗೆ ನೀಡಲಾಗಿದೆ. ಖಾಸಗೀಕರಣದ ಹೆಸರಿನಲ್ಲಿ ನೂರಾರು ಸಾರ್ವಜನಿಕ ಉದ್ದಿಮೆಗಳನ್ನು ಕಡಿಮೆ ಬೆಲೆಗೆ ಕಂಪನಿಗಳಿಗೆ ನೀಡಲಾಗಿದೆ. ಮಾಲ್‌ಗಳ ಮೂಲಕ ಚಿಲ್ಲರೆ ವ್ಯಾಪಾರಕ್ಕೂ ಕಂಪನಿಗಳಿಗೆ ಕಾಲಿಡಲು ಅವಕಾಶ ಕೊಟ್ಟು ಸಣ್ಣ ವ್ಯಾಪಾರಸ್ಥರನ್ನು ಮುಳುಗಿಸಲಾಗುತ್ತಿದೆ. ಭೂ ಕಾಯ್ದೆ ತಿದ್ದುಪಡಿಯ ಮೂಲಕ ರೈತರ ಭೂಮಿಯನ್ನು ಬಾಚಲು ಹೊರಟಿದ್ದಾರೆ. ಎಪಿಎಂಸಿ ಕಾಯಿದೆಗೆ ತಿದ್ದುಪಡಿ ತರುವ ಮೂಲಕ ರೈತರ ಬೆಳೆಯ ಮೇಲೆ ಸಂಪೂರ್ಣ ಹಿಡಿತ ಸಾಧಿಸಲು ಹೊರಟಿದ್ದಾರೆ. ಐತಿಹಾಸಿಕ ರೈತ ಹೋರಾಟದಲ್ಲಿ 780 ರೈತರ ವೀರ ರೈತ ವೀರರ ಆತ್ಮಹತ್ಯೆಗೆ ಈ ಕಾಯ್ದೆಗಳೇ ಕಾರಣವಾಗಿವೆ. ಕಾರ್ಪೊರೇಟ್ ಕಂಪನಿಗಳ ಮೇಲಿನ ಶುಲ್ಕವನ್ನು ಶೇ.33 ರಿಂದ ಶೇ.22ಕ್ಕೆ ಇಳಿಸಲಾಗಿದೆ. ಆದರೆ ಜಿಎಸ್‌ಟಿ ರೂಪಗಳಲ್ಲಿ ಜನಸಾಮಾನ್ಯರನ್ನು ಸುಲಿಗೆ ಮಾಡಲಾಗುತ್ತಿದೆ. ಇದರಿಂದ ಜನ ಸಾಮಾನ್ಯರ ಬದುಕು ಕುಸಿಯುತ್ತಿದೆ ಎಂದು ದೂರಿದರು.

ಹಕ್ಕೊತ್ತಾಯಗಳು: ಕೃಷಿ ಮೇಲಿನ ಕಾರ್ಪೊರೇಟ್ ಆಕ್ರಮಣ ನಿಲ್ಲಿಸಿ, ರೈತರ ಬೆಳೆಗಳಿಗೆ ಎಂಎಸ್‌ಪಿ ಖಾತ್ರಿಯಾಗಬೇಕು. ವಿದ್ಯುತ್ ಖಾಸಗೀಕರಣ ರದ್ದಾಗಬೇಕು. ಕಾರ್ಮಿಕ ವಿರೋಧಿ ನಾಲ್ಕು ಕೋಡ್ ಗಳನ್ನು ರದ್ದು ಮಾಡಬೇಕು. ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಜಾರಿಯಾಗಬೇಕು. ಕಾರ್ಪೊರೇಟ್ ಸಂಸ್ಕೃತಿ ನಾಶವಾಗಬೇಕು. ಸಣ್ಣ-ಮಧ್ಯಮ ಉದ್ದಿಮೆಗಳನ್ನು ಸರ್ವನಾಶಗೊಳಿಸಿ ಯುವಜನರನ್ನು ನಿರುದ್ಯೋಗದ ಕೂಪಕ್ಕೆ ತಳ್ಳಿರುವ ಕಾರ್ಪೊರೇಟ್‌ಗಳಿಗೆ ಕಡಿವಾಣ ಹಾಕಬೇಕು. ವೈನಾಡು ಭೂಕುಸಿತದಂತಹ ಪ್ರಾಕೃತಿಕ ವಿಕೋಪಗಳಿಗೆ ದೇಶವನ್ನು ತಳ್ಳುತ್ತಿರುವ ಕಾರ್ಪೊರೇಟ್ ಮಾದರಿಯ ಅಭಿವೃದ್ಧಿ ಕೊನೆಗೊಳ್ಳಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಜಿಲ್ಲಾಧ್ಯಕ್ಷ ಹೊಸೂರು ಕುಮಾರ್, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಗದೀಶ್ ಸೂರ್ಯ, ಜಿಲ್ಲಾಧ್ಯಕ್ಷ ಚಿಕ್ಕಣ್ಣೇಗೌಡ, ಜೆಸಿಟಿಯು ಸಂಚಾಲಕ ದೇವದಾಸ್, ಎಐಟಿಯುಸಿ ರಾಜ್ಯ ಕಾರ್ಯದರ್ಶಿ ರಾಮಕೃಷ್ಣ, ಸಿಐಟಿಯು ಜಿಲ್ಲಾಧ್ಯಕ್ಷ ಜಿ.ಜಯರಾಂ, ಪ್ರಧಾನ ಕಾರ್ಯದರ್ಶಿ ಬಾಲಾಜಿ ರಾವ್, ಕೆ.ಬಸವರಾಜ್, ವಿಜಯ್ ಕುಮಾರ್, ಎಐಕೆಕೆಎಂಎಸ್ ನ ಬಸವರಾಜ್, ಎಸ್‌ಎಫ್‌ಐನ ಟಿ.ಎಸ್.ವಿಜಯ್‌ಕುಮಾರ್, ಕಂದೇಗಾಲ ಶ್ರೀನಿವಾಸ್, ಚೌಡಳ್ಳಿ ಜವರಯ್ಯ, ಉಗ್ರ ನರಸಿಂಹೇಗೌಡ, ಲ.ಜಗನ್ನಾಥ್ ನ.ದಿವಾಕರ್, ಸೋಮರಾಜೇ ಅರಸು, ರಾಜೇಂದ್ರ, ಬೊಕ್ಕಳಿ ನಂಜುಡಸ್ವಾಮಿ, ಮೆಹಬೂಬ್, ಅಣ್ಣಪ್ಪ, ಬಲರಾಂ, ಸುಬ್ರಹ್ಮಣ್ಯ, ಎಂ.ಬಿ.ಕೃಷ್ಣಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಸಂಜೆ ಟಿಪ್ಸ್



## ಮತ್ತೆ ಏರಿದ ಚಿನ್ನದ ಬೆಲೆ; ಬೆಳ್ಳಿಯೂ ದುಬಾರಿ

**ಬೆಂಗಳೂರು:** ಆಗಸ್ಟ್ 14: ಚಿನ್ನ ಮತ್ತು ಬೆಳ್ಳಿ ಬೆಲೆ ಎರಡೂ ಇಂದು ಏರಿಕೆ ಆಗಿದೆ. ನಿನ್ನೆ ಗ್ರಾಮ್?ಗೆ 25 ರೂನಷ್ಟು ಏರಿದ್ದ ಚಿನ್ನದ ಬೆಲೆ ಇಂದು 95 ರೂ ಹೆಚ್ಚಳ ಆಗಿದೆ. ಬೆಳ್ಳಿ ಬೆಲೆಯೂ ಗ್ರಾಮ್?ಗೆ 1 ರೂನಷ್ಟು ಹೆಚ್ಚಾಗಿದೆ. ಈ ವಾರ ಬೆಲೆ ಹೆಚ್ಚಳವೇ ಅಧಿಕ ಆಗಿರುವ ಸಾಧ್ಯತೆ ಇದೆ. ಭಾರತದಲ್ಲಿ ಸದ್ಯ 10 ಗ್ರಾಮ್‌ನ 22 ಕ್ಯಾರಟ್ ಚಿನ್ನದ ಬೆಲೆ 65,650 ರುಪಾಯಿ ಇದೆ. 24 ಕ್ಯಾರಟ್‌ನ ಅಪರಂಜಿ ಚಿನ್ನದ ಬೆಲೆ 71,620 ರುಪಾಯಿ ಆಗಿದೆ. 100 ಗ್ರಾಮ್ ಬೆಳ್ಳಿ ಬೆಲೆ 8,350 ರುಪಾಯಿ ಇದೆ. ಬೆಂಗಳೂರಿನಲ್ಲಿ ಚಿನ್ನದ ಬೆಲೆ 10 ಗ್ರಾಮ್‌ಗೆ 65,650 ರುಪಾಯಿ ಆಗಿದೆ, ಬೆಳ್ಳಿ ಬೆಲೆ 100 ಗ್ರಾಮ್?ಗೆ 8,000 ರುಪಾಯಿಯಲ್ಲಿ ಇದೆ.

**ಬೆಂಗಳೂರಿನಲ್ಲಿ ಚಿನ್ನ, ಬೆಳ್ಳಿ ಬೆಲೆ:** 22 ಕ್ಯಾರಟ್?ನ 10 ಗ್ರಾಂ ಚಿನ್ನದ ಬೆಲೆ: 65,650 ರೂ., 24 ಕ್ಯಾರಟ್?ನ 10 ಗ್ರಾಂ ಚಿನ್ನದ ಬೆಲೆ: 71,620 ರೂ, ಬೆಳ್ಳಿ ಬೆಲೆ 10 ಗ್ರಾಂಗೆ: 800 ರೂ, ಬೆಂಗಳೂರು: 65,650 ರೂ, ಚೆನ್ನೈ: 65,650 ರೂ, ಮುಂಬೈ: 65,650 ರೂ, ದೆಹಲಿ: 65,800 ರೂ , ಕೋಲ್ಕತಾ: 65,650 ರೂ, ಕೇರಳ: 65,650 ರೂ, ಅಹ್ಮದಾಬಾದ್: 65,700 ರೂ, ಜೈಪುರ್: 65,800 ರೂ. ಲಕ್ನೋ: 65,800 ರೂ, ಭುವನೇಶ್ವರ್: 65,650 ರೂ,

**ವಿದೇಶಗಳಲ್ಲಿ 22 ಕ್ಯಾರಟ್ ಚಿನ್ನದ ಬೆಲೆ (10 ಗ್ರಾಮ್‌ಗೆ):** ಮಲೇಷ್ಯಾ: 3,470 ರಿಂಗಿಟ್ (65,560 ರುಪಾಯಿ), ದುಬೈ: 2,760 ಡಿರಾಮ್ (63,030 ರುಪಾಯಿ), ಅಮೆರಿಕ: 750 ಡಾಲರ್ (62,970 ರುಪಾಯಿ), ಸಿಂಗಾಪುರ: 1020 ಸಿಂಗಾಪುರ್ ಡಾಲರ್ (64,550 ರುಪಾಯಿ), ಕತಾರ್: 2,800 ಕತಾರಿ ರಿಯಾಲ್ (64,310 ರೂ), ಸೌದಿ ಅರೇಬಿಯಾ: 2,810 ಸೌದಿ ರಿಯಾಲ್ (62,840 ರುಪಾಯಿ), ಓಮನ್: 300 ಒಮಾನಿ ರಿಯಾಲ್ (64,770 ರುಪಾಯಿ), ಕುವೇತ್: 220 ಕುವೇತಿ ದಿನಾರ್ (61,540 ರುಪಾಯಿ), ವಿವಿಧ ನಗರಗಳಲ್ಲಿರುವ ಬೆಳ್ಳಿ ಬೆಲೆ (100 ಗ್ರಾಮ್?ಗೆ), ಬೆಂಗಳೂರು: 8,000 ರೂ, ಚೆನ್ನೈ: 8,850 ರೂ, ಮುಂಬೈ: 8,350 ರೂ, ದೆಹಲಿ: 8,350 ರೂ, ಕೋಲ್ಕತಾ: 8,350 ರೂ, ಕೇರಳ: 8,850 ರೂ, ಅಹ್ಮದಾಬಾದ್: 8,350 ರೂ, ಜೈಪುರ್: 8,350 ರೂ ಇದೆ.

# ಕ್ಯಾಪ್ಸಿಕಂ ಚಟ್ನಿ

ಪಾಕ ಶಾಲೆ



## ಮಾಡುವ ವಿಧಾನ

ಕ್ಯಾಪ್ಸಿಕಂ ಮತ್ತು ಹಸಿರು ಮೆಣಸಿನಕಾಯಿಗಳನ್ನು ಸಣ್ಣದಾಗಿ ಕತ್ತರಿಸಿ. ಬಾಣಲೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಿ. ಕತ್ತರಿಸಿದ ಹಸಿರು ಮೆಣಸಿನಕಾಯಿಗಳನ್ನು ಸೇರಿಸಿ. ಕತ್ತರಿಸಿದ ಕ್ಯಾಪ್ಸಿಕಂ ಜೊತೆಗೆ ಸೇರಿಸಿ. ಕ್ಯಾಪ್ಸಿಕಂ ಮೃದುವಾಗುವವರೆಗೆ ಫ್ರೈ ಮಾಡಿ. ಕೆಲವು ನಿಮಿಷಗಳ ಕಾಲ ಫ್ರೈ ಮಾಡಿ, ತಣ್ಣಗಾದ ನಂತರ ಅದನ್ನು ಮಿಕ್ಸಿ ಜಾರ್ಗೆ ವರ್ಗಾಯಿಸಿ. ರುಚಿಗೆ ತಕ್ಕಷ್ಟು ಉಪ್ಪು ಮತ್ತು ಹುಣಸೆಹಣ್ಣು ಸೇರಿಸಿ. ಅಗತ್ಯವಾದ ನೀರನ್ನು ಸೇರಿಸಿ ನುಣ್ಣಗೆ ಪೇಸ್ಟ್ ಆಗಿ ರುಬ್ಬಿಕೊಳ್ಳಿ. ಎಣ್ಣೆ, ಸಾಸಿವೆ ಮತ್ತು ಕೆಂಪು ಮೆಣಸಿನಕಾಯಿ ಕಾಯಿ ಒಗ್ಗರಣೆ ತಯಾರಿಸಿ. ರುಬ್ಬಿದ ಪೇಸ್ಟ್ ಅನ್ನು ಅದಕ್ಕೆ ಸೇರಿಸಿ ಮತ್ತು ಕುದಿಯಲು ಇರಿಸಿ. ಕೆಲ ಕಾಲ ಬೇಯಿಸಿ ನಂತರ ಸ್ಟವ್ ಆಫ್ ಮಾಡಿ. ಬಳಿಕ ಬಿಸಿ ಬಿಸಿ ಅನ್ನದೊಂದಿಗೆ ಬಡಿಸಿ.

## ಬೇಕಾದ ಪದಾರ್ಥಗಳು

★ ಎರಡು ಕ್ಯಾಪ್ಸಿಕಂ ★ ಎರಡು ಹಸಿರು ಮೆಣಸಿನಕಾಯಿಗಳು ★ ಹುಣಸೆಹಣ್ಣು ರುಚಿಗೆ ತಕ್ಕಂತೆ ★ ಒಂದು ಚಮಚ ಅಡುಗೆ ಎಣ್ಣೆ ★ ನಿಮ್ಮ ರುಚಿಗೆ ತಕ್ಕಂತೆ ಉಪ್ಪು ★ ಅರ್ಧ ಚಮಚ ಸಾಸಿವೆ ಕಾಳು ★ ಒಂದು ಕೆಂಪು ಮೆಣಸಿನಕಾಯಿ ★ ದೊಡ್ಡ ಚಿಟಿಕೆ ಇಂಗು ★ ಒಗ್ಗರಣೆಗೆ ಕರಿಬೇವಿನ ಎಲೆಗಳು ★ ಒಂದು ಚಮಚ ಅಡುಗೆ ಎಣ್ಣೆ

# ಫೀನಿಕ್ಸ್ ಮಾರ್ಕೆಟ್ಸಿಟಿಯಿಂದ ಭಾರತದ ಅತಿದೊಡ್ಡ ಎಲೆಕ್ಟ್ರಾನಿಕ್ಸ್ ಉತ್ಸವಕ್ಕೆ ಚಾಲನೆ




ವೈಟ್ಫೀಲ್ಡ್ನ ಲೈಫ್‌ಸ್ಟೈಲ್ ತಾಣವಾಗಿರುವ ಫೀನಿಕ್ಸ್ ಮಾರ್ಕೆಟ್ಸಿಟಿ ಫೀನಿಕ್ಸ್ ''ಎಲೆಕ್ಟ್ರಾನಿಕ್ಸ್ ಉತ್ಸವ'' ವನ್ನು ಆಚರಿಸುತ್ತಿದೆ. ಆಗಸ್ಟ್ 1 ರಂದು ಆರಂಭವಾಗಿರುವ ಈ ಎಲೆಕ್ಟ್ರಾನಿಕ್ಸ್ ಉತ್ಸವವು ಆಗಸ್ಟ್ 19 ರಂದು ಅಂತ್ಯಗೊಳ್ಳಲಿದೆ. ಈ ಅದ್ದೂರಿ ಮಹೋತ್ಸವದಲ್ಲಿ ಗ್ರಾಹಕರಿಗೆ ಸರಿಸಾಟಿಯಿಲ್ಲದ ಡೀಲ್ಗಳು ಮತ್ತು ವಿಶೇಷ ಕೊಡುಗೆಗಳನ್ನು ನೀಡಲಾಗುತ್ತಿದೆ. 13 ಕ್ಕೂ ಹೆಚ್ಚು ಟಾಪ್ ಬ್ರಾ?ಯಂಡ್ಗಳ ಎಲೆಕ್ಟ್ರಾನಿಕ್ ಉತ್ಪನ್ನಗಳಿಗೆ ಈ ಕೊಡುಗೆಗಳು ಲಭ್ಯವಿದ್ದು, ಟೆಕ್ ಉತ್ಸಾಹಿಗಳು ಮತ್ತು ಶಾಪರ್ಸ್ ಸ್ನೇಹಿ ತಾಣವಾಗಿ ಹೊರಹೊಮ್ಮಿದೆ.

ಈ ಫೀನಿಕ್ಸ್ ಎಲೆಕ್ಟ್ರಾನಿಕ್ಸ್ ಉತ್ಸವದಲ್ಲಿ ರಿಲಾಯನ್ಸ್ ಡಿಜಿಟಲ್, ಕ್ರೋಮಾ, ಡೈಸನ್, ಅಪ್ಟ್ರೋನಿಕ್ಸ್, ಎಚ್ಪಿ, ಬೋಸ್, ವಿವೊ, ಎಂಐ, ಸ್ಯಾಮ್ಸಂಗ್, ಲೆನೋವಾ, ಒಪ್ಪೋ, ಸಿಇಎಕ್ಸ್ ಮತ್ತು ಮೊಬಿಕಿನ್ನಂತಹ ಬ್ರಾ?ಯಂಡ್ಗಳ ಉತ್ಪನ್ನಗಳಿಗೆ ಅತ್ಯದ್ಭುತವಾದ ರಿಯಾಯಿತಿಗಳನ್ನು ನೀಡಲಾಗುತ್ತಿದೆ. ಗ್ರಾಹಕರಿಗೆ ಅತ್ಯುತ್ತಮ ಮೌಲ್ಯವನ್ನು ತಲುಪಿಸಲು ಬದ್ಧವಾಗಿರುವ ಫೀನಿಕ್ಸ್ ಮಾರ್ಕೆಟ್ಸಿಟಿ, ಎಲೆಕ್ಟ್ರಾನಿಕ್ ಉತ್ಪನ್ನಗಳಿಗೆ ಶಾಪಿಂಗ್ ಅನುಭವವನ್ನು ಪರಿವರ್ತಿಸುವ ಗುರಿಯನ್ನು ಹೊಂದಿದೆ.

ಈ ಉತ್ಸವದಲ್ಲಿ 10,000 ರೂಪಾಯಿಗಿಂತ ಹೆಚ್ಚಿನ ಮೌಲ್ಯದ ಎಲೆಕ್ಟ್ರಾನಿಕ್ ಉತ್ಪನ್ನವನ್ನು ಖರೀದಿಸುವ ಗ್ರಾಹಕರಿಗೆ ಒಂದು ಬೆಳ್ಳಿ ನಾಣ್ಯ ಉಚಿತವಾಗಿ ದೊರೆಯಲಿದೆ. ಈ ಸೀಮಿತ ಅವಧಿಯ ಕೊಡುಗೆಯು ಶಾಪಿಂಗ್ ಅನುಭವವನ್ನು ಇನ್ನಷ್ಟು ಕುತೂಹಲವಾಗುವಂತೆ ಮಾಡಲಿದೆ. ಈ ಮೂಲಕ ಪ್ರತಿಯೊಂದು ಖರೀದಿಯೂ ಹೆಚ್ಚು ಲಾಭದಾಯಕವಾಗಿರಲಿದೆ ಎಂಬುದನ್ನು ಖಚಿತಪಡಿಸುತ್ತದೆ.

ಫೀನಿಕ್ಸ್ ಎಲೆಕ್ಟ್ರಾನಿಕ್ಸ್ ಹಬ್ಬದಲ್ಲಿ ಟಿವಿಗಳು, ರೆಫ್ರಿಜರೇಟರ್ಗಳು, ಮೊಬೈಲ್ ಫೋನ್ಗಳು ಮತ್ತು ಇನ್ನೂ ಹೆಚ್ಚಿನ ಉತ್ಪನ್ನಗಳು ಸೇರಿದಂತೆ ಪ್ರೀಮಿಯಂ ಎಲೆಕ್ಟ್ರಾನಿಕ್ಸ್ಗಳ ಶ್ರೇಣಿಗಳನ್ನು ಗೆಲ್ಲುವ ಅವಕಾಶವನ್ನು ಗ್ರಾಹಕರಿಗೆ ನೀಡಲಾಗುತ್ತಿದೆ. ಈ ಉತ್ಸವದುದ್ದಕ್ಕೂ ಬಹು ಲಕ್ಕಿ ಡ್ರಾಗಳಲ್ಲಿ ವಿಜೇತರಾಗುವ ಗ್ರಾಹಕರಿಗೆ ಉನ್ನತ ದರ್ಜೆಯ ಟೆಕ್ ಬಹುಮಾನಗಳನ್ನು ಲಭ್ಯವಾಗುವ ಎಲ್ಲಾ ಅವಕಾಶಗಳಿವೆ.ವಿಶೇಷ ರಿಯಾಯಿತಿಗಳು ಮತ್ತು ಕೊಡುಗೆಗಳು: ಗ್ರಾಹಕರು ಟಾಪ್ ಬ್ರಾ?ಯಂಡ್ಗಳ ವಿಸ್ತಾರವಾದ ಶ್ರೇಣಿಯ ಉತ್ಪನ್ನಗಳ ಮೇಲೆ ಅತ್ಯದ್ಭುತವಾದ ರಿಯಾಯಿತಿಗಳು ಮತ್ತು ಕೊಡುಗೆಗಳನ್ನು ಪಡೆದುಕೊಳ್ಳಬಹುದು.

ಹೈ-ಎಂಡ್ ಎಲೆಕ್ಟ್ರಾನಿಕ್ಸ್ ಗೆಲ್ಲುವ ಅವಕಾಶ: ಲಕ್ಕಿ ಡ್ರಾದಲ್ಲಿ ಪಾಲ್ಗೊಳ್ಳುವ ಶಾಪರ್ಗಳು ಪ್ರೀಮಿಯಂ ಎಲೆಕ್ಟ್ರಾನಿಕ್ ಉತ್ಪನ್ನಗಳನ್ನು ಗೆಲ್ಲುವ ಅವಕಾಶ ಪಡೆಯಲಿದ್ದಾರೆ.

ಟಾಪ್ ಟೆಕ್ನಾಲಾಜಿ ಬ್ರಾ?ಯಂಡ್ಸ್ ಮೇಲೆ ಕೇಂದ್ರೀಕೃತ: ಈ ಉತ್ಸವವು ಮುಂಚೂಣಿಯಲ್ಲಿರುವ ಟೆಕ್ನಾಲಾಜಿ ಬ್ರಾ?ಯಂಡ್ಗಳನ್ನು ಪ್ರದರ್ಶಿಸುತ್ತಿದ್ದು, ಗ್ರಾಹಕರಿಗೆ ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿನ ಇತ್ತೀಚಿನ ಉತ್ಪನ್ನಗಳು ಮತ್ತು ಆವಿಷ್ಕಾರಗಳನ್ನು ನೀಡಲಾಗುತ್ತಿದೆ.

# ಪಿಸ್ತಾದಿಂದ ಆರೋಗ್ಯಕ್ಕಾಗುವ ಪ್ರಯೋಜನಗಳೇನು?



ಹೆಲ್ತ್ ಟಿಪ್ಸ್

ಪಿಸ್ತಾಗಳು ಕ್ಯಾಲ್ಸಿಯಂ ಮತ್ತು ಮೆಗ್ನೀಸಿಯಮ್ ಸೇರಿದಂತೆ ಆರೋಗ್ಯಕರ ರಕ್ತದೊತ್ತಡವನ್ನು ಬೆಂಬಲಿಸುವ ಪೋಷಕಾಂಶಗಳನ್ನು ಹೊಂದಿರುತ್ತವೆ. ಅವು ಪೊಟ್ಯಾಸಿಯಮ್ನ ನೈಸರ್ಗಿಕ ಮೂಲವಾಗಿದೆ. ಇದು ದೇಹದಲ್ಲಿನ ಸೋಡಿಯಂನ ಪರಿಣಾಮಗಳನ್ನು ಎದುರಿಸಲು ಸಹಾಯ ಮಾಡುವ ಖನಿಜವಾಗಿದೆ.

ಅಲ್ಲದೇ ಉತ್ತಮ ರಕ್ತನಾಳಗಳ ಕಾರ್ಯವನ್ನು ಬೆಂಬಲಿಸುತ್ತವೆ. ಪಿಸ್ತಾಗಳಲ್ಲಿರುವ ಕ್ಯಾರೊಟಿನಾಯ್ಡ್ಗಳು ಪಿಸ್ತಾಗಳನ್ನು ವರ್ಣರಂಜಿತವಾಗಿ ಕಾಣುವಂತೆ ಮಾಡುವುದಲ್ಲದೆ, ನಮ್ಮ ಕಣ್ಣುಗಳನ್ನು ರಕ್ಷಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಇವು ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಮತ್ತು ಕಣ್ಣಿನ ಪೊರೆಗಳಂತಹ ದೃಷ್ಟಿ ನಷ್ಟಕ್ಕೆ ಕಾರಣವಾಗುವ ಕಣ್ಣಿನ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ಪಿಸ್ತಾ ತಿನ್ನುವುದು ನಿಮ್ಮ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ನೀವು ಮಧುಮೇಹ ಅಥವಾ ಪ್ರಿಡಿಯಾಬಿಟಿಸ್ ಹೊಂದಿದ್ದರೆ ಅವುಗಳು ಹೆಚ್ಚು ಪ್ರಯೋಜನಕಾರಿಯಾಗಿವೆ. ಪಿಸ್ತಾಗಳಲ್ಲಿರುವ ಆರೋಗ್ಯಕರ ಕೊಬ್ಬು, ಪ್ರೋಟೀನ್ ಮತ್ತು ಫೈಬರ್ ಸಂಯೋಜನೆಯು ರಕ್ತಪ್ರವಾಹಕ್ಕೆ ಸಕ್ಕರೆಯ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಗ್ಲೂಕೋಸ್ ಸ್ಥಿರಗೊಳಿಸಲು ಸಹಾಯ ಮಾಡುತ್ತದೆ.

ಪಿಸ್ತಾ ತಿನ್ನುವುದು ಕರುಳಿನ ಆರೋಗ್ಯವನ್ನು ಹೆಚ್ಚಿಸುತ್ತದೆ. ಅವುಗಳ ಫೈಬರ್ ಜೊತೆಗೆ, ನೀವು ನಿಯಮಿತವಾಗಿರಲು ಸಹಾಯ ಮಾಡುತ್ತದೆ.

ನಿಮ್ಮ ಕರುಳಿನ ಆರೋಗ್ಯವನ್ನು ಕಾಳಜಿ ವಹಿಸುವುದು ನಿಮ್ಮ ಜೀರ್ಣಕ್ರಿಯೆ, ತೂಕ, ಪ್ರತಿರಕ್ಷಣಾ ವ್ಯವಸ್ಥೆ ಮತ್ತು ಹೆಚ್ಚಿನವುಗಳಿಗೆ ಮುಖ್ಯವಾಗಿದೆ.ಹಾಗಾಗಿ ಪಿಸ್ತಾಗಳು ಕರುಳಿನ ಆರೋಗ್ಯಕರ ಆಹಾರದ ಭಾಗವಾಗಿರಬಹುದು.

# ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣಗೂ ಅವಮಾನಿಸಿದ್ರಂತೆ



ನಟಿ ರಶ್ಮಿಕಾ ಮಂದಣ್ಣ ಕೊನೆಯದಾಗಿ ರಣಬೀರ್ ಕಪೂರ್ ಅಭಿನಯದ 'ಅನಿಮಲ್' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಸದ್ಯ ಪುಷ್ಪ 2: ದಿ ರೂಲ್, ಕುಬೇರ, ರೈನ್ಬೋ, ದಿ ಗರ್ಲ್‌ಫ್ರೆಂಡ್, ಚಾವ ಮತ್ತು ಸಿಕಂದರ್ ಸಿನಿಮಾ ತೆರೆಗೆ ಬರಲು ಸಜ್ಜಾಗಿದೆ.

2016 ರಲ್ಲಿ ಕನ್ನಡದ ರೊಮ್ಯಾಂಟಿಕ್ ಕಾಮಿಡಿ ಕಿರಿಕ್ ಪಾರ್ಟಿ?ಯೊಂದಿಗೆ ಸಿನಿಜಗತ್ತಿಗೆ ಪಾದಾರ್ಪಣೆ ಮಾಡಿದ ರಶ್ಮಿಕಾ ಇದೀಗ ಬಹುಭಾಷಾ ನಟಿಯಾಗಿ ಮಿಂಚುತ್ತಿದ್ದಾರೆ.

ಆದರೆ, ಸಿನಿರಂಗದ ಪ್ರವೇಶ ಆಕೆಗೆ ಸುಲಭವಾಗಿರಲಿಲ್ಲ. ಇತ್ತೀಚೆಗೆ ಯೂಟ್ಯೂಬ್ ಚಾನೆಲ್‌ಗೆ ಇತ್ತೀಚೆಗೆ ನೀಡಿದ ಸಂದರ್ಶನದಲ್ಲಿ, ಮಾತನಾಡಿದ್ದ ರಶ್ಮಿಕಾ ಮಂದಣ್ಣ ಚಿತ್ರರಂಗದಲ್ಲಿ ಆಡೀಷನ್ ನೀಡುವ ಸಂದರ್ಭದಲ್ಲಿ ಆಕೆ ಅನುಭವಿಸಿದ ನೋವುಗಳ ಬಗ್ಗೆ ಮಾತನಾಡಿದ್ದಾರೆ.

ತನ್ನ ಹೋರಾಟದ ದಿನಗಳನ್ನು ನೆನಪಿಸಿಕೊಂಡ ರಶ್ಮಿಕಾ, ವೃತ್ತಿಜೀವನದ ಆರಂಭದಲ್ಲಿ ಹಲವಾರು ಅವಮಾನಗಳನ್ನು ಎದುರಿಸಿದ್ದೆ. ದಿನಾ ಕಣ್ಣೀರಿಡುತ್ತಾ ಮನೆಗೆ ಬರುತ್ತಿದೆ. ಇದು ನಟನೆಗೆ ಸರಿಯಾದ ಮುಖವೇ... ಎಂದೆಲ್ಲಾ ಅವಮಾನಿಸುತ್ತಿದ್ದರು, ತಿರಸ್ಕರಿಸುತ್ತಿದ್ದರು ಎಂದು ನೋವಿನ ಸಂಗತಿ ಬಿಚ್ಚಿಟ್ಟಿದ್ದಾರೆ.ಸಾಕಷ್ಟು ಹೋರಾಟ ಮತ್ತು ತಾಳ್ಮೆಯ ನಂತರ ಕೊನೆಗೂ ಆಡಿಷನ್‌ನಲ್ಲಿ ಸೆಲೆಕ್ಟ್ ಆದೆ. ಆ ಪಾತ್ರಕ್ಕೆ ಆಯ್ಕೆ ಮಾಡುವ ಮೊದಲು ಅನೇಕ ಸುತ್ತಿನ ಆಡಿಷನ್ ಮಾಡಿದ್ರು. ಆದರೆ ಅವರಿಗೆ ಹಿಡಿಸಲಿಲ್ಲ. ಇನ್ನು ಈ ಪ್ರಾಜೆಕ್ಟ್‌ಗಾಗಿ 2-3 ತಿಂಗಳು ತರಬೇತಿ ಪಡೆದೆ. ಕೊನೆಗೆ ಆ ಪ್ರಾಜೆಕ್ಟ್ ಕ್ಯಾನ್ಸಲ್ ಅಂದರು ಎಂದು ಹೋರಾಟದ ದಿನಗಳ ಬಗ್ಗೆ ಮಾತನಾಡಿದ್ದಾರೆ. ಇನ್ನು ಈ ಎಲ್ಲಾ ಅವಮಾನಗಳು, ಕಿರಿಕ್ ಪಾರ್ಟಿ ಸಿನಿಮಾದ ನಟನೆಯ ನಂತರ ಮುಕ್ತಾಯಗೊಂಡಿತು ಎಂದೇ ಹೇಳಬಹುದು. ಈ ಸಿನಿಮಾದ ಬಳಿಕ ರಶ್ಮಿಕಾ ಸಿನಿಬದುಕಲ್ಲಿ ನಡೆದಿದ್ದೆಲ್ಲಾ ಇತಿಹಾಸವೇ...

# ಹೊಸ ವಿದ್ಯುತ್ಚಾಲಿತ ವಾಹನ ನಿಯೋಜನೆಗೆ ಜೆಂತಾರಿ ಜೊತೆ ಅಮೆಜಾನ್ ಪಾಲುದಾರಿಕೆ



ಭಾರತದಲ್ಲಿ ಶೂನ್ಯ ಪ್ರಮಾಣದಲ್ಲಿ ಹೊಗೆ ಹೊರಸೂಸುವ ವಿದ್ಯುತ್ಚಾಲಿತ ವಾಹನಗಳ (ಇವಿ) ಬಳಕೆಯನ್ನು ಗಮನಾರ್ಹವಾಗಿ ವಿಸ್ತರಿಸುವುದಕ್ಕೆ ಜಂಟಿಯಾಗಿ ಕಾರ್ಯನಿರ್ವಹಿಸಲು ಅಮೆಜಾನ್ ಇಂಡಿಯಾ ಮತ್ತು ಜೆಂತಾರಿ ಗ್ರೀನ್ ಮೊಬಿಲಿಟಿ ಬಿಸಿನೆಸ್ (ಜೆಂತಾರಿ) ಪಾಲುದಾರಿಕೆ ಮಾಡಿಕೊಂಡಿರುವುದಾಗಿ ಇಂದು ಇಲ್ಲಿ ಪ್ರಕಟಿಸಿವೆ.

ಸ್ಥಳೀಯವಾಗಿ ಗ್ರಾಹಕರ ಮನೆ ಬಾಗಿಲಿಗೆ ಸರಕುಗಳನ್ನು ತಲುಪಿಸಲು ಮಾಲಿನ್ಯರಹಿತ ವಿದ್ಯುತ್ಚಾಲಿತ ವಾಹನಗಳನ್ನು ಬಳಸುವ ಅಮೆಜಾನ್ನ ಉದ್ದೇಶ ಸಾಕಾರಗೊಳಿಸಲು ಈ ಪಾಲುದಾರಿಕೆ ನೆರವಾಗಲಿದೆ. ಅಮೆಜಾನ್ನ ಸರಕುಗಳನ್ನು ವಿತರಿಸುವ ವಿತರಣಾ ಸೇವಾ ಪಾಲುದಾರರಿಗೆ (ಡಿಎಸ್ಪಿ) ವಿದ್ಯುತ್ಚಾಲಿತ ವಾಹನಗಳನ್ನು (ಇವಿ) ಹೆಚ್ಚಿನ ಸಂಖ್ಯೆಯಲ್ಲಿ ಒದಗಿಸಲು ಈ ಕಾರ್ಯಕ್ರಮ ನೆರವಾಗಲಿದೆ.

ಹಿಂದಿನ ಹತ್ತು ವರ್ಷಗಳಲ್ಲಿ ಅಮೆಜಾನ್, ಭಾರತದ 400 ಕ್ಕೂ ಹೆಚ್ಚು ನಗರಗಳಲ್ಲಿನ ತನ್ನ ಕಾರ್ಯಾಚರಣೆಗಳಲ್ಲಿ ವಿದ್ಯುತ್ಚಾಲಿತ ವಾಹನಗಳ (ಇವಿ) ಅಳವಡಿಕೆ ಹೆಚ್ಚಿಸಲು ಸರಕುಗಳ ತಯಾರಕರು, ವಿತರಣಾ ಸೇವಾ ಪೂರೈಕೆದಾರರು, ಚಾರ್ಜಿಂಗ್ ಪಾಯಿಂಟ್ ಆಪರೇಟರ್ಗಳು ಮತ್ತು ದೊಡ್ಡ ಹಾಗೂ ಸಣ್ಣ ಹಣಕಾಸು ಕಂಪನಿಗಳ ಜೊತೆಗೆ ಹೆಚ್ಚಿನ ಸಮನ್ವಯತೆಯಿಂದ ಕಾರ್ಯನಿರ್ವಹಿಸಿದೆ.

2023ರಲ್ಲಿ 7,200ಕ್ಕೂ ಹೆಚ್ಚು ವಿದ್ಯುತ್ಚಾಲಿತ ವಾಹನಗಳನ್ನು (ಇವಿ) ನಿಯೋಜಿಸಲಾಗಿದ್ದು, 2025ರ ವೇಳೆಗೆ ಅಮೆಜಾನ್, ಭಾರತದಲ್ಲಿನ ತನ್ನ ಸರಕು ವಿತರಣಾ ಸೇವೆಗಳಲ್ಲಿ 10,000 ?ಇವಿ?ಗಳನ್ನು ನಿಯೋಜಿಸುವ ಗುರಿ ಸಾಧಿಸುವ ಹಾದಿಯಲ್ಲಿ ದಾಪುಗಾಲು ಹಾಕುತ್ತಿದೆ.

ಈ ಪಾಲುದಾರಿಕೆಯ ಭಾಗವಾಗಿ, ಮುಂದಿನ ಮೂರು ವರ್ಷಗಳಲ್ಲಿ ಜೆಂತಾರಿ ನೂರಾರು ವಿದ್ಯುತ್ಚಾಲಿತ ವಾಹನಗಳನ್ನು ಖರೀದಿಸಲು ಮತ್ತು ಬಳಕೆಗೆ ನಿಯೋಜಿಸಲು ಉದ್ದೇಶಿಸಿದೆ. ಈ ಇವಿಗಳನ್ನು ಭಾರತದ ವಿವಿಧ ನಗರಗಳಲ್ಲಿ ಬಳಸಲಾಗುವುದು. ಸರಕು ವಿತರಿಸುವ ಪಾಲುದಾರರಿಗೆ (ಡಿಎಸ್ಪಿ) ಜೆಂತಾರಿಯು ಸರಕು ಸಾಗಣೆಗೆ ಸಂಬಂಧಿಸಿದಂತೆ ಸಮಗ್ರ ಸ್ವರೂಪದ ನಿರ್ವಹಣಾ ಸೇವೆಗಳನ್ನು ಸಹ ಒದಗಿಸಲಿದೆ. ಇದರಿಂದ ಇವಿಗಳ ಪರಿಪೂರ್ಣ ಕಾರ್ಯಾಚರಣೆ ಮತ್ತು ನಿರ್ವಹಣೆ ಖಚಿತಪಡಿಸಿಕೊಳ್ಳಲು ನೆರವಾಗಲಿದೆ. ಇದರ ಪರಿಣಾಮವಾಗಿ ಅಮೆಜಾನ್ನ ಸರಕು ವಿತರಣಾ ಸೇವೆಗಳ ವಿಶ್ವಾಸಾರ್ಹತೆಯು ಹೆಚ್ಚಳಗೊಳ್ಳಲಿದೆ.

ಈ ಪಾಲುದಾರಿಕೆ ಬಗ್ಗೆ ಮಾತನಾಡಿರುವ ಜೆಂತಾರಿ ಗ್ರೀನ್ ಮೊಬಿಲಿಟಿ ಇಂಡಿಯಾದ ಸಿಇಒ ನಿಖಿಲ್ ಥಾಮಸ್ ಅವರು, ''ಹೆಚ್ಚು ಸುಸ್ಥಿರ ಸ್ವರೂಪದ ಸಂಚಾರ ವ್ಯವಸ್ಥೆ ಅಳವಡಿಸುವುದಕ್ಕೆ ಸಂಬಂಧಿಸಿದ ಅಮೆಜಾನ್ ಪಯಣದಲ್ಲಿ ಕೈಜೋಡಿಸಲು ನಾವು ಪುಳಕಿತರಾಗಿದ್ದೇವೆ. ಅತ್ಯಾಧುನಿಕ ಇವಿಗಳ ಬಳಕೆ ಮತ್ತು ಕಾರ್ಯಾಚರಣೆಗಳಿಗೆ ಸಂಬಂಧಿಸಿದ ಜೆಂತಾರಿಯ ಸಮರ್ಪಣಾಭಾವಕ್ಕೆ ಉತ್ತಮ ನಿದರ್ಶನವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಇವಿಗಳನ್ನು ನಿಯೋಜಿಸಲು ಮತ್ತು ಭಾರತದ ನಿವ್ವಳ ಶೂನ್ಯ ಮಾಲಿನ್ಯ ಗುರಿ ಸಾಧಿಸಲು ನಾವು ಒಟ್ಟಾಗಿ ಕೆಲಸ ಮಾಡುತ್ತಿರುವಾಗ, ಈ ಸಹಯೋಗವು ಭಾರತದ ಸರಕು ಸಾರಿಗೆ ಕ್ಷೇತ್ರದ ಸ್ವಚ್ಛ ಇಂಧನದ ಭವಿಷ್ಯಕ್ಕೆ ದಾರಿ ಮಾಡಿಕೊಡಲಿರುವುದರ ಬಗ್ಗೆ ನನಗೆ ದೃಢ ವಿಶ್ವಾಸ ಇದೆ ಎಂದು ಹೇಳಿದ್ದಾರೆ.

# ಹೊಳೆಯುವ ತ್ವಚೆಗೆ ಸಲಹೆ...

ಬ್ಯೂಟಿ ಟಿಪ್ಸ್



ಹೊರಗಡೆ ಕೆಲಸಕ್ಕೆ ಹೋಗುವವರಿಗೆ ಸಮಯವಿರದ ಕಾರಣ ತ್ವಚೆಯ ಆರೈಕೆ ಸರಿಯಾಗಿ ಮಾಡಲು ಆಗುವುದಿಲ್ಲ. ಇದರಿಂದ ಅವರ ಚರ್ಮ ಕಳೆಗುಂದಿರುತ್ತದೆ. ಹಾಗಾಗಿ ಭಾನುವಾರ ರಜೆ ಇರುವುದರಿಂದ ಈ ರೀತಿಯಲ್ಲಿ ಚರ್ಮದ ಆರೈಕೆ ಮಾಡಿದರೆ ನಿಮ್ಮ ತ್ವಚೆ ಆರೋಗ್ಯವಾಗಿ ಕಾಂತಿಯುತವಾಗಿರುತ್ತದೆ.

★ ಮೊದಲನೇಯದಾಗಿ ತ್ವಚೆಯನ್ನು ಸ್ವಚ್ಛಗೊಳಿಸಿ : ಅದಕ್ಕಾಗಿ ಕೆಲವು ಹನಿ ಬಾದಾಮಿ ಎಣ್ಣೆಯನ್ನು ತೆಗೆದುಕೊಂಡು ಮುಖಕ್ಕೆ ಹಚ್ಚಿ 4 ನಿಮಿಷ ಮಸಾಜ್ ಮಾಡಿ. ಬಳಿಕ ಹತ್ತಿಯ ಸಹಾಯದಿಂದ ಸ್ವಚ್ಛಗೊಳಿಸಿ. ★ ಎರಡನೇಯದಾಗಿ ಫೇಸ್ ವಾಶ್ ಮಾಡಿ : ಮುಖಕ್ಕೆ ಜೇನುತುಪ್ಪ ಹಚ್ಚಿ 10 ನಿಮಿಷ ಬಿಟ್ಟು ಮುಖವನ್ನು ವಾಶ್ ಮಾಡಿ. ★ ಮೂರನೇಯದಾಗಿ ಮುಖಕ್ಕೆ ಸ್ಟೀಮ್ ನೀಡಿ : ಬಿಸಿ ನೀರಿಗೆ 2 ಹನಿ ಲ್ಯಾವೆಂಡರ್ ಎಸೆನ್ಷಿಯಲ್ ಆಯಿಲ್ ಸೇರಿಸಿ 10 ನಿಮಿಷಗಳ ಕಾಲ ಸ್ಟೀಮ್ ತೆಗೆದುಕೊಳ್ಳಿ. ★ನಾಲ್ಕನೇಯದಾಗಿ ಫೇಸ್ ಸ್ಕಬಿಂಗ್ : ಬಾದಾಮಿ ಎಣ್ಣೆ ಸ್ವಲ್ಪ ಸಕ್ಕರೆ, ಹಾಲಿನ ಪುಡಿ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ 3 ನಿಮಿಷಗಳ ಕಾಲ ಸ್ಕಬ್ ಮಾಡಿ 5 ನಿಮಿಷ ಬಿಟ್ಟು ವಾಶ್ ಮಾಡಿ. ★ ಐದನೇಯದಾಗಿ ಫೇಸ್ ಪ್ಯಾಕ್ ಹಚ್ಚಿ: ಪುದೀನ ಪುಡಿ, ರೋಸ್ ವಾಟರ್, ಅರಶಿನ, ಜೇನುತುಪ್ಪ, ಕಡಲೆಹಿಟ್ಟು ಬೆರೆಸಿ ಪೇಸ್ಟ್ ತಯಾರಿಸಿ ಅದನ್ನು ಮುಖಕ್ಕೆ ಹಚ್ಚಿ 15 ನಿಮಿಷ ಬಿಟ್ಟು ವಾಶ್ ಮಾಡಿ. ★ ಆರನೇಯದಾಗಿ ಮಾಯಿಶ್ಚರೈಸರ್ ಹಚ್ಚಿ : ಅಲೊವೆರಾ ಜೆಲ್ ನ್ನು ತೆಗೆದುಕೊಂಡು ಮುಖಕ್ಕೆ ಹಚ್ಚಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಹಣ ಬಂದರೂ ಉಳಿಯುವುದಿಲ್ಲ, ಮಿತ್ರರಿಂದ ಸಹಾಯ, ಅನಾವಶ್ಯಕ ವಿಷಯಗಳಿಂದ ದೂರವಿರಿ, ಸಾಧಾರಣ ಫಲ.

**ವೃಷಭ:** ಸಾಲ ಮಾಡುವಿರಿ, ವಾಹನ ಅಪಘಾತ, ನಿಂದನೆ, ಕಾಲು ನೋವು, ಅನಾವಶ್ಯಕ ಖರ್ಚಿಗೆ ನೂರಾರು ದಾರಿ.

**ಮಿಥುನ:**ವಿಪರೀತ ತಿರುಗಾಟ, ಪಾಪ ಬುದ್ಧಿ, ಪ್ರಭಾವಿ ವ್ಯಕ್ತಿಗಳ ಭೇಟಿ. ಕಾರ್ಯಗಳಲ್ಲಿ ಭಾಗಿ, ನೌಕರಿಯಲ್ಲಿ ಹೆಚ್ಚಿನ ಜವಾಬ್ದಾರಿ.

**ಕಟಕ:** ಗುರು ಹಿರಿಯರ ಭೇಟಿ, ರೋಗಭಾದೆ, ಪರರಿಂದ ಮೋಸ, ಅನಿರೀಕ್ಷಿತ ಖರ್ಚು, ಅನಾರೋಗ್ಯ.

**ಸಿಂಹ:** ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ಹಣ ಬಂದರೂ ಉಳಿಯುವುದಿಲ್ಲ, ಭೂ ಲಾಭ.

**ಕನ್ಯಾ:** ಕ್ರಯ ವಿಕ್ರಗಳಿಂದ ಅಲ್ಪ ಲಾಭ, ಗೌರವ ಪ್ರಾಪ್ತಿ, ಮನಶಾಂತಿ, ಮಾತಿನ ಚಕಮಕಿ, ಬಾಕಿ ವಸೂಲಿ.

**ತುಲಾ:** ದೃಷ್ಟಿ ದೋಷದಿಂದ ತೊಂದರೆ, ಮಾನಸಿಕ ನೆಮ್ಮದಿ, ಋಣಭಾದೆ, ಮಹಿಳೆಯರಿಗೆ ಅಪರಿಚಿತರಿಂದ ತೊಂದರೆ.

**ವೃಶ್ಚಿಕ:** ಸಂಕಷ್ಟಗಳು ಹೆಚ್ಚಾಗುವುದು, ತಾಳ್ಮೆ ಕಳೆದುಕೊಳ್ಳಬೇಡಿ, ಶತ್ರು ಭಾದೆ, ಚಂಚಲ ಮನಸ್ಸು.

**ಧನಸ್ಸು:** ಮನೆಯಲ್ಲಿ ಸಂತಸ, ಸುಖ ಭೋಜನ, ಅನಾವಶ್ಯಕ ಖರ್ಚು, ಕಾರ್ಯಸಿದ್ಧಿ, ತೀರ್ಥಯಾತ್ರೆ ದರ್ಶನ, ಮನಶಾಂತಿ.

**ಮಕರ:** ಷೇರು ವ್ಯವಹಾರಗಳಲ್ಲಿ ನಷ್ಟ, ವಿದ್ಯಾರ್ಥಿಗಳಲ್ಲಿ ಪ್ರಗತಿ, ಪರಸ್ಥಳವಾಸ, ಅತಿಯಾದ ನೋವು.

**ಕುಂಭ:** ತಾಯಿಯಿಂದ ಸಹಾಯ, ವಾಹನ ರಿಪೇರಿ, ದುಷ್ಟ ಜನರ ಸಹವಾಸ, ಗುಪ್ತ ಹಿತ ಶತ್ರುಗಳ ಬಾಧೆ.

**ಮೀನ:** ಕುಟುಂಬದಲ್ಲಿ ಕಲಹ, ಅಲ್ಪ ಕಾರ್ಯ ಸಿದ್ಧಿ, ಅನ್ಯರಲ್ಲಿ ಕಲಹ, ಸ್ವಯಂಕೃತ ಅಪರಾಧ.

# ವಿಶ್ವ ಹಲ್ಲಿ ದಿನ




ಪ್ರತಿ ವರ್ಷ ಆಗಸ್ಟ್ 14 ರಂದು ವಿಶ್ವ ಹಲ್ಲಿ ದಿನವನ್ನು ಆಚರಿಸಲಾಗುತ್ತದೆ. ದಿನವು ಪ್ರಸಿದ್ಧವಾಗಿಲ್ಲದಿರಬಹುದು, ಆದರೆ ಶಾಲೆಗಳು, ಉದ್ಯಾನವನಗಳು ಮತ್ತು ಸರೀಸೃಪ ಉತ್ಸಾಹಿಗಳು ಈ ಸಂದರ್ಭವನ್ನು ಆಚರಿಸುವ ಪ್ರಮುಖ ಗುಂಪುಗಳೊಂದಿಗೆ ಸ್ಥಳೀಯ ಮಟ್ಟದಲ್ಲಿ ಇದನ್ನು ಇನ್ನೂ ಆಚರಿಸಲಾಗುತ್ತದೆ. ಶೈಕ್ಷಣಿಕ ಮತ್ತು ಮೋಜಿನ ಘಟನೆಗಳು ರಜೆಯ ಪ್ರಧಾನ ಅಂಶವಾಗಿ ಉಳಿದಿವೆ. ಸರೀಸೃಪ ಉತ್ಸಾಹಿಗಳು ಸ್ಕೇಲಿ ಕ್ರಿಟ್ಟರ್ಗಳಿಗೆ ತಮ್ಮ ಪ್ರೀತಿಯ ಬಗ್ಗೆ ಮಾಹಿತಿಯನ್ನು ಹರಡಲು ಇಂಟರ್ನೆಟ್ ಅನ್ನು ಬಳಸುತ್ತಾರೆ. ವಿಶ್ವ ವನ್ಯಜೀವಿ ನಿಧಿ (ಫ.ಫ.ಈ.)ನಂತಹ ಉನ್ನತ ಮಟ್ಟದ ಸಂರಕ್ಷಣಾ ಸಂಸ್ಥೆಗಳು ಈ ದಿನವನ್ನು ಅಳವಡಿಸಿಕೊಂಡಿಲ್ಲ. ಬದಲಿಗೆ, ಇದು ಮುಖ್ಯವಾಗಿ ಸರೀಸೃಪಗಳನ್ನು ಸಾಕುಪ್ರಾಣಿಗಳ ಬಗ್ಗೆ ಅರಿವಿನ ಮೇಲೆ ಕೇಂದ್ರೀಕರಿಸಿದೆ.

ಅನೇಕ ಬೆಸ ರಜಾದಿನಗಳಂತೆ, ವಿಶ್ವ ಹಲ್ಲಿ ದಿನದ ಮೂಲವು ಅಸ್ಪಷ್ಟವಾಗಿದೆ. ಅದರ ಮರ್ಕಿ ಆರಂಭವು ಈ ಆರೋಗ್ಯಕರ ದಿನವನ್ನು ಆಚರಿಸುವುದರಿಂದ ನಿಮ್ಮನ್ನು ತಡೆಯಲು ಬಿಡಬೇಡಿ. ಅಜ್ಞಾನ ಮತ್ತು ಗಮನದ ಕೊರತೆಯಿಂದಾಗಿ ಪ್ರಪಂಚದಾದ್ಯಂತ ಜಾತಿಗಳು ಸಾಯುತ್ತಿವೆ. ದಿನವು ಹಲ್ಲಿಗಳ ಬಗ್ಗೆ ಇರಬಹುದು, ಆದರೆ ಸಾಮಾನ್ಯವಾಗಿ ಸರೀಸೃಪಗಳ ಬಗ್ಗೆ ನಿಮಗೆ ಹೆಚ್ಚು ಹೇಳಲು ನಾವು ಅವಕಾಶವನ್ನು ಕಳೆದುಕೊಳ್ಳುವುದಿಲ್ಲ. ಎಲ್ಲಾ ನಂತರ ಇದು ದಿನದ ಆತ್ಮವಾಗಿದೆ!

ಎಲ್ಲಾ ಸರೀಸೃಪಗಳು ಗಾಳಿ-ಉಸಿರಾಟದ ಕಶೇರುಕಗಳು ಮಾಪಕಗಳು, ಮೂಳೆಯ ಫಲಕಗಳು ಅಥವಾ ಎರಡರ ಸಂಯೋಜನೆಯಿಂದ ಮುಚ್ಚಲ್ಪಟ್ಟಿವೆ. ಈ ಕುಟುಂಬದ ಜಾತಿಗಳಲ್ಲಿ ಹಾವುಗಳು, ಹಲ್ಲಿಗಳು, ಮೊಸಳೆಗಳು ಮತ್ತು ಆಮೆಗಳು ಸೇರಿವೆ. ಇವೆಲ್ಲವೂ ತಮ್ಮ ಚರ್ಮವನ್ನು ಚೆಲ್ಲುತ್ತವೆ ಮತ್ತು ತಮ್ಮ ದೇಹದ ಉಷ್ಣತೆಯನ್ನು ನಿಯಂತ್ರಿಸಲು ಪರಿಸರವನ್ನು ಅವಲಂಬಿಸಿವೆ. ಹೊರಗಿನ ಅಂಶಗಳ ಮೇಲಿನ ಅವಲಂಬನೆಯು ಅವುಗಳ ಮುಖ್ಯ ದೇಹದ ಉಷ್ಣತೆಯನ್ನು ನಿಯಂತ್ರಿಸಲು ಬಂದಾಗ ಸರೀಸೃಪಗಳು ಬೆಚ್ಚಗಾಗಲು ಅಥವಾ ತಣ್ಣಗಾಗಲು ಸೂರ್ಯ ಮತ್ತು ನೆರಳನ್ನು ಕಂಡುಹಿಡಿಯಬೇಕು ಎಂದರ್ಥ. ತಂಪಾದ ಚಳಿಗಾಲವನ್ನು ಹೊಂದಿರುವ ಪ್ರದೇಶಗಳಲ್ಲಿ, ಹವಾಮಾನವು ಮತ್ತೆ ಬೆಚ್ಚಗಾಗುವವರೆಗೆ ಸರೀಸೃಪಗಳು ಸಾಮಾನ್ಯವಾಗಿ ನಿಷ್ಕ್ರಿಯತೆಯ ಅವಧಿಯನ್ನು ಅನುಭವಿಸುತ್ತವೆ.

ಹಲ್ಲಿಗಳು ಭಿನ್ನವಾಗಿರುವುದಿಲ್ಲ, ಅದಕ್ಕಾಗಿಯೇ ಅವರು ನಿಮ್ಮ ಬೆಚ್ಚಗಿನ ಉದ್ಯಾನದಲ್ಲಿ ಅಥವಾ ದಿನವಿಡೀ ಸೂರ್ಯನನ್ನು ನೆನೆಸುವ ಇಟ್ಟಿಗೆಗಳ ಮೇಲೆ ತಮ್ಮನ್ನು ತಾವು ಸೂರ್ಯನನ್ನು ನೋಡುತ್ತೀರಿ. ಸಾಕು ಹಲ್ಲಿಗಳಿಗೆ, ಬೆಚ್ಚಗಿರುತ್ತದೆ ಅಥವಾ ತಂಪಾಗಿರುವುದು ಸಂಪೂರ್ಣವಾಗಿ ವಿಭಿನ್ನ ವಿಷಯವಾಗಿದೆ. ಸಾಕುಪ್ರಾಣಿಗಳಾಗಿ ಹಲ್ಲಿಗಳನ್ನು ಹೊಂದಿರುವ ಜನರು ತಮ್ಮ ಟ್ಯಾಂಕ್ಗಳನ್ನು ತಾಪನ ದೀಪಗಳು ಅಥವಾ ಪ್ಯಾಡ್ಗಳೊಂದಿಗೆ ಜಾಗವನ್ನು ಹೆಚ್ಚು ಬಿಸಿಯಾಗದಂತೆ ಬಿಸಿ ಮಾಡಬೇಕಾಗುತ್ತದೆ. ವಾಸ್ತವವಾಗಿ, ಹಲ್ಲಿ ಅಥವಾ ಯಾವುದೇ ಸರೀಸೃಪಕ್ಕಾಗಿ ಟ್ಯಾಂಕ್ ಅನ್ನು ಸಿದ್ಧಪಡಿಸುವುದು ಮತ್ತು ನಿರ್ವಹಿಸುವುದು ಆರಂಭಿಕ ಮತ್ತು ನಿರಂತರ ಪ್ರಯತ್ನದ ಅಗತ್ಯವಿರುತ್ತದೆ. ಸರೀಸೃಪಗಳ ಪ್ರತಿಯೊಂದು ಉಪಜಾತಿಯು ನಿರ್ದಿಷ್ಟ ಅಗತ್ಯತೆಗಳು ಮತ್ತು ಆದ್ಯತೆಗಳನ್ನು ಹೊಂದಿದೆ.

# ಮಂಗಳ ಗ್ರಹದಲ್ಲಿ ನೀರಿನ ಅಂಶ ಪತ್ತೆ : ನಾಸಾ ವರದಿ




**ನ್ಯೂಯಾರ್ಕ್:** ಮಂಗಳ ಗ್ರಹದಲ್ಲಿ ದ್ರವ ರೂಪದ ನೀರಿನ ಅಂಶವೂ ಇದೆ ಎಂದು ಅಮೆರಿಕದ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ನಾಸಾದ ಅಧ್ಯಯನ ವರದಿ ಹೇಳಿದೆ.

ನಾಸಾ ಮಂಗಳ ಗ್ರಹಕ್ಕೆ ರವಾನಿಸಿದ್ದ ಇನ್ ಸೈಟ್ಸ್ ಲ್ಯಾಂಡರ್ ಮಂಗಳ ಗ್ರಹದ ಮೇಲ್ಮೈಯ ಅಡಿಯಲ್ಲಿ ಅತ್ಯಂತ ಆಳದಲ್ಲಿ ದ್ರವ ರೂಪದ ಬೃಹತ್ ಸಂಗ್ರಹವನ್ನು ಪತ್ತೆಹಚ್ಚಿದೆ.

ಈ ಹಿಂದಿನ ಅಧ್ಯಯನಗಳು ಮಂಗಳದ ಧ್ರುವಗಳಲ್ಲಿ ಹೆಪ್ಪುಗಟ್ಟಿದ ರೂಪದಲ್ಲಿ ನೀರಿನ ಸಂಗ್ರಹವಿರುವುದನ್ನು ಮತ್ತು ಅದರ ವಾತಾವರಣದಲ್ಲಿ ನೀರಿನ ಆವಿ ಅಸ್ತಿತ್ವದಲ್ಲಿರುವುದನ್ನು ದೃಢಪಡಿಸಿತ್ತು. ಆದರೆ ಇದೇ ಮೊದಲ ಬಾರಿಗೆ ದ್ರವರೂಪದ ನೀರು ಪತ್ತೆಯಾಗಿದೆ. 'ನೀರು ಗ್ರಹದ ವಿಕಾಸವನ್ನು ರೂಪಿಸುವಲ್ಲಿ ಪ್ರಮುಖ ಕಣಗಳಾಗಿವೆ. ಈ ಸಂಶೋಧನೆಯು ಮಂಗಳನ ಎಲ್ಲಾ ನೀರು ಎಲ್ಲಿಗೆ ಹೋಯಿತು ಎಂಬ ಪ್ರಶ್ನೆಗೆ ಉತ್ತರಿಸಲಿದೆ' ಎಂದು ಕ್ಯಾಲಿಫೋರ್ನಿಯಾ ವಿವಿಯ ಪ್ರೊ. ಮೈಕೆಲ್ ಮಾಂಗ್ ಹೇಳಿದ್ದಾರೆ.

ಪ್ರಾಚೀನ ಕಾಲದಲ್ಲಿ ಮಂಗಳನಲ್ಲಿ ನದಿಗಳು ಮತ್ತು ಸರೋವರಗಳು ಅಸ್ತಿತ್ವದಲ್ಲಿತ್ತು ಎಂಬುದನ್ನು ಸಾಬೀತುಪಡಿಸುವ ನೀರಿನ ಕಾಲುವೆಗಳು ಮತ್ತು ತರಂಗಗಳ ಪುರಾವೆಗಳನ್ನು ಅಧ್ಯಯನಗಳು ಕಂಡುಕೊಂಡಿವೆ. ಆದರೆ ಗ್ರಹವು ಮೂರು ಶತಕೋಟಿ ವರ್ಷಗಳಿಂದ ಮರುಭೂಮಿಯಾಗಿದೆ. ಯಾಕೆಂದರೆ ತನ್ನ ವಾಯುಮಂಡಲವನ್ನು ಕಳೆದುಕೊಂಡ ಬಳಿಕ ಎಲ್ಲಾ ನೀರೂ ಸೂರ್ಯನಿಂದಾಗಿ ಕಳೆದು ಹೋಗಿದೆ ಎಂದು ವರದಿ ಹೇಳಿದೆ.

ಭೂಮಿಯ ಬಹುತೇಕ ನೀರು ನೆಲದಡಿಯಲ್ಲಿ ಅಸ್ತಿತ್ವದಲ್ಲಿದೆ. ಮಂಗಳನಲ್ಲೂ ಇದೇ ಸಾಧ್ಯತೆ ಇರಬಹುದು. ನೀರಿಲ್ಲದೆ ಜೀವನ ಸಾಧ್ಯವಿಲ್ಲದ ಕಾರಣ ಮಂಗಳನಲ್ಲಿ ಭೂಗತ ಆಳವಾದ ವಾಸಯೋಗ್ಯ ಪರಿಸರವನ್ನು ಕಂಡುಹಿಡಿಯುವ ಸಾಧ್ಯತೆಯನ್ನು ಸಂಶೋಧನೆಯು ಸೂಚಿಸುತ್ತದೆ.

# ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ರಾಷ್ಟ್ರಧ್ವಜ ಮಾರಾಟ ಅಂಗಡಿ ಮೇಲೆ ಗ್ರೆನೇಡ್ ದಾಳಿ: 3 ಸಾವು




**ಕ್ವೆಟ್ಟಾ:** ಪಾಕಿಸ್ತಾನದ 77 ನೇ ಸ್ವಾತಂತ್ರ್ಯ ದಿನಾಚರಣೆಗೆ ಮುನ್ನ ಶಂಕಿತ ಉಗ್ರರು ಪಾಕಿಸ್ತಾನದ ನೈಋತ್ಯ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ರಾಷ್ಟ್ರೀಯ ಧ್ವಜಗಳನ್ನು ಮಾರಾಟ ಮಾಡುತ್ತಿದ್ದ ಮನೆ ಮತ್ತು ಅಂಗಡಿಯ ಮೇಲೆ ಹ್ಯಾಂಡ್ ಗ್ರೆನೇಡ್ಗಳನ್ನು ಎಸೆದಿದ್ದು, ಮೂವರು ಸಾವನ್ನಪ್ಪಿದ್ದಾರೆ.

ಆರು ಮಂದಿ ಗಾಯಗೊಂಡಿದ್ದಾರೆ. ಪ್ರತ್ಯೇಕತಾವಾದಿ ಬಲೂಚ್ ಲಿಬರೇಶನ್ ಆರ್ಮಿ ಗುಂಪು ಕ್ವೆಟ್ಟಾದ ಪ್ರಾಂತೀಯ ರಾಜಧಾನಿಯಲ್ಲಿ ಮಂಗಳವಾರ ನಡೆದ ದಾಳಿಯ ಹೊಣೆಗಾರಿಕೆಯನ್ನು ಹೊತ್ತುಕೊಂಡಿದೆ. ಧ್ವಜಗಳನ್ನು ಮಾರಾಟ ಮಾಡದಂತೆ ಅಂಗಡಿ ಮಾಲೀಕರಿಗೆ ಹೇಳಿತ್ತು. ಬ್ರಿಟೀಷ್ ವಸಾಹತುಶಾಹಿ ಆಳ್ವಿಕೆಯಿಂದ ಆಗಸ್ಟ್ 14, 1947 ರಂದು ಪಾಕಿಸ್ತಾನದ ಸ್ವಾತಂತ್ರ್ಯ ಪಡೆಯಿತು. ಇದೇ ಆ. 14 ಬುಧವಾರದಂದು ರಜಾದಿನವನ್ನು ಆಚರಿಸದಂತೆ ಜನರಿಗೆ ಎಚ್ಚರಿಕೆ ನೀಡಿದೆ.

ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರು ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನದಂದು ದೇಶದ ಈಶಾನ್ಯದಲ್ಲಿರುವ ಮಿಲಿಟರಿ ಅಕಾಡೆಮಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಗ್ರವಾದ ನಿರ್ಮೂಲನೆ ಮಾಡುವುದಾಗಿ ಪ್ರತಿಜ್ಞೆ ಮಾಡಿದ್ದಾರೆ.

# ಅಮೆರಿಕದಿಂದ ಇಸ್ರೇಲ್ ಗೆ 20 ಬಿಲಿಯನ್ ಡಾಲರ್ ಶಸ್ತ್ರಾಸ್ತ್ರ

**ಜೆರುಸಲೇಮ್:** ಇಸ್ರೇಲ್ಗೆ 20 ಬಿಲಿಯನ್ ಡಾಲರ್ಗಳ ಮೊತ್ತದ ಶಸ್ತ್ರಾಸ್ತ್ರ ಮಾರಾಟಕ್ಕೆ ಅಮೆರಿಕ ಅನುಮೋದಿಸಿದೆ, ಇದರಲ್ಲಿ ಹಲವಾರು ಯುದ್ಧ ವಿಮಾನಗಳು ಮತ್ತು ಸುಧಾರಿತ ಕ್ಷಿಪಣಿಗಳು ಸೇರಿವೆ ಎಂದು ವಿದೇಶಾಂಗ ಇಲಾಖೆ ಮಂಗಳವಾರ ಪ್ರಕಟಿಸಿದೆ. ಇಸ್ರೇಲ್ ನೊಂದಿಗೆ ಮಧ್ಯಪ್ರಾಚ್ಯ ರಾಷ್ಟ್ರಗಳ ನಡುವೆ ತೀವ್ರವಾದ ಯುದ್ಧದ ಕಾರ್ಮೋಡ ಕವಿದಿರುವ ವೇಳೆ ಈ ಬೆಳವಣಿಗೆ ನಡೆದಿದೆ. 50 ಕ್ಕೂ ಹೆಚ್ಚು ಈ-15 ಫೈಟರ್ ಜೆಟ್ಗಳು, ಸುಧಾರಿತ ಮಧ್ಯಮ ಶ್ರೇಣಿಯ ಏರ್-ಟು-ಏರ್ ಕ್ಷಿಪಣಿಗಳು ೦ಬಖ೦೦ಬ ಗಳು, 120 ಟಟ ಟ್ಯಾಂಕ್ ಮದ್ದುಗುಂಡುಗಳು ಮತ್ತು ಹೆಚ್ಚಿನ ಸ್ಫೋಟಕ ಮಾರ್ಟರ್ಗಳು ಮತ್ತು ಯುದ್ಧತಂತ್ರದ ವಾಹನಗಳನ್ನು ಒಳಗೊಂಡಿವೆ ಎಂದು ಅಮೆರಿಕ ಕಾಂಗ್ರೆಸ್ ಗೆ ಸೂಚನೆ ನೀಡಲಾಗಿದೆ. ಶಸ್ತ್ರಾಸ್ತ್ರಗಳು ಶೀಘ್ರದಲ್ಲೇ ಇಸ್ರೇಲ್ಗೆ ಸಿಗುವ ನಿರೀಕ್ಷೆಯಿಲ್ಲ, ಅವುಗಳನ್ನು ಪೂರೈಸಲು ವರ್ಷಗಳನ್ನು ತೆಗೆದುಕೊಳ್ಳುವ ಒಪ್ಪಂದವಾಗಿದೆ. ಇಸ್ರೇಲ್ ತನ್ನ ಮಿಲಿಟರಿ ಸಾಮರ್ಥ್ಯವನ್ನು ದೀರ್ಘಾವಧಿಯಲ್ಲಿ ಹೆಚ್ಚಿಸಲು ಸಹಾಯ ಮಾಡಲು ಮಾರಾಟ ಮಾಡಲಾಗುತ್ತಿದೆ ಎಂದು ತಿಳಿದು ಬಂದಿದೆ.

# ಮಂಗಳ ಗ್ರಹದ 20 ಕಿ.ಮೀ. ಆಳದಲ್ಲಿ ನೀರಿರುವ ಶಂಕೆ

**ನ್ಯೂಯಾರ್ಕ್:** ಮಂಗಳ ಗ್ರಹದಲ್ಲಿ ನೀರಿರುವ ಬಗ್ಗೆ ದಶಕಗಳಿಂದ ಸಂಶೋ ಧನೆ ನಡೆಸುತ್ತಿರುವ ವಿಜ್ಞಾನಿಗಳು, ಈ ಬಗ್ಗೆ ಹೊಸ ಮಾಹಿತಿಯನ್ನು ಬಿಡುಗಡೆ ಮಾಡಿದ್ದಾರೆ. ಮಂಗಳ ಗ್ರಹದ ಸುಮಾರು 20 ಕಿ.ಮೀ. ಆಳದಲ್ಲಿ ಈಗಲೂ ನೀರು ಇರಬಹುದು ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. 2018ರಿಂದಲೂ ಮಂಗಳ ಮೇಲ್ಮೈ ನಲ್ಲಿ ಕಾರ್ಯನಿರ್ವಹಿಸುತ್ತಿರುವ ನಾಸಾದ ಇನ್ಸೈಟ್ ಲ್ಯಾಂಡರ್ ಒದಗಿಸಿರುವ ಮಾಹಿತಿಯನ್ನು ಆಧರಿಸಿ ಈ ಅನುಮಾನ ವ್ಯಕ್ತಪಡಿಸಲಾಗಿದೆ. ಈ ಲ್ಯಾಂಡರ್ ಸುಮಾರು 4 ವರ್ಷಗಳ ಮಂಗಳನ ನೆಲದಲ್ಲಾಗುವ ಕಂಪನದ ಮಾಪನವನ್ನು ಅಧ್ಯಯನ ಮಾಡುತ್ತಿದೆ. ಈ ಅಧ್ಯಯನಗಳಿಂದ ಸುಮಾರು 3 ಶತಕೋಟಿ ವರ್ಷಗಳ ಹಿಂದೆ ಮಂಗಳನ ನೆಲದಲ್ಲಿ ನದಿಗಳು, ಸರೋವರಗಳು ಮತ್ತು ಸಮುದ್ರಗಳು ಇದ್ದವು ಎಂಬುದು ದೃಢಪಟ್ಟಿದೆ. ಇದೀಗ ಮಂಗಳನ ಗರ್ಭ ದಲ್ಲೂ ನೀರು ಹರಿದಿರುವ ಜಾಗಗಳಿಗೆ ಎಂಬ ಮಾಹಿತಿ ಸಿಕ್ಕಿರುವ ಕಾರಣ, ಲ್ಯಾಂಡರ್ ತಲುಪಲಾಗದಷ್ಟು ಆಳದಲ್ಲಿ ಇನ್ನೂ ನೀರಿರಬಹುದು ಎಂದು ವಿಜ್ಞಾನಿ ಗಳು ಹೇಳಿದ್ದಾರೆ. ಮಂಗಳ ಗ್ರಹದಲ್ಲಿ ನೀರು ಇರುವುದು ಖಚಿತವಾದರೆ, ಇಲ್ಲಿ ಜೀವಿಗಳು ಇದ್ದವು ಎಂಬುದಕ್ಕೆ ಹೆಚ್ಚಿನ ಪುಷ್ಠಿ ದೊರಕಿದಂತಾಗುತ್ತದೆ.



# ಗ್ರೀಸ್‌ನಲ್ಲಿ ತೀವ್ರಗೊಂಡ ಕಾಡ್ಗಿಚ್ಚು

**ಅಥೆನ್ಸ್:** ಗ್ರೀಸ್‌ನಲ್ಲಿ ತೀವ್ರಗತಿಯಲ್ಲಿ ಹರಡುತ್ತಿರುವ ಕಾಡ್ಗಿಚ್ಚು ಮಂಗಳವಾರ ಐತಿಹಾಸಿಕ ನಗರ ಅಥೆನ್ಸ್ ಹೊರವಲಯದ ಹೆಚ್ಚಿನ ಅರಣ್ಯಪ್ರದೇಶ ಹಾಗೂ ಜನವಸತಿ ಪ್ರದೇಶಗಳನ್ನು ಸುಟ್ಟುಹಾಕಿದ್ದು ವಾಯುಮಾಲಿನ್ಯದಿಂದಾಗಿ ಜನತೆ ಉಸಿರಾಟದ ಸಮಸ್ಯೆಗೆ ಒಳಗಾಗಿದ್ದಾರೆ ಎಂದು ವರದಿಯಾಗಿದೆ.

ಈ ವರ್ಷ ಗ್ರೀಸ್ನಲ್ಲಿ ಸಂಭವಿಸಿರುವ ಅತ್ಯಂತ ವಿನಾಶಕಾರಿ ಕಾಡ್ಗಿಚ್ಚು ಸುಮಾರು 22,600 ಎಕರೆ ಪ್ರದೇಶವನ್ನು ಸುಟ್ಟುಹಾಕಿರುವುದನ್ನು ಆಗಸ್ಟ್ 12ರಂದು ಉಪಗ್ರಹ ಚಿತ್ರಗಳು ತೋರಿಸಿವೆ. ನಂತರದ ಎರಡು ದಿನಗಳಲ್ಲಿ ಇನ್ನಷ್ಟು ಪ್ರದೇಶಗಳು ಬೆಂಕಿಗೆ ಆಹುತಿಯಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಅಥೆನ್ಸ್‌ನಿಂದ ಈಶಾನ್ಯಕ್ಕೆ ಸುಮಾರು 35 ಕಿ.ಮೀ ದೂರದಲ್ಲಿರುವ ಮ್ಯಾರಥಾನ್ ಸರೋವರದ ಬಳಿ ರವಿವಾರ ಕಾಣಿಸಿಕೊಂಡಿದ್ದ ಕಾಡ್ಗಿಚ್ಚು ಪೆಂಡೆಲಿ ಪರ್ವತ ಪ್ರದೇಶದ ಮೂಲಕ ಸಾಗಿ ಅಥೆನ್ಸ್ನ ಉತ್ತರದಲ್ಲಿರುವ ನಗರಗಳತ್ತ ಮುಂದುವರಿದಿದ್ದು ಹಲವು ಮನೆಗಳು, ಅಂಗಡಿ, ಸಂಸ್ಥೆಗಳನ್ನು ಸುಟ್ಟುಹಾಕಿದೆ. ಹೆಲಿಕಾಪ್ಟರ್ಗಳ ನೆರವಿನಿಂದ ಬೆಂಕಿಯನ್ನು ನಿಯಂತ್ರಿಸಲು ನೂರಾರು ಅಗ್ನಿಶಾಮಕ ದಳದ ಸದಸ್ಯರು ಕಾರ್ಯಾಚರಣೆ ಮುಂದುವರಿಸಿದ್ದಾರೆ.

ಅಥೆನ್ಸ್ ನಗರ ನಿವಾಸಿಗಳು ಹೊಗೆಯ ಕಾರ್ಮೋಡ ಮತ್ತು ಬೂದಿಯಿಂದ ಉಸಿರಾಟದ ಸಮಸ್ಯೆಗೆ ಒಳಗಾಗಿದ್ದಾರೆ. ಅಥೆನ್ಸ್ ಸಮೀಪದ ವ್ರಿಲಿಸಿಯಾ ನಗರದಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ.



# ಉಗ್ರನ ಜತೆ ಕಾಣಿಸಿಕೊಂಡ ಅರ್ಷದ್!

## ಒಲಿಂಪಿಕ್ಸ್‌ನ ಜಾವೆಲಿನ್ ಥ್ರೋ ಚಿನ್ನದ ಪದಕ ವಿಜೇತ



**ಪ್ಯಾರಿಸ್:** ಒಲಿಂಪಿಕ್ಸ್ನಲ್ಲಿ ಜಾವೆಲಿನ್ ಥ್ರೋ ಫೈನಲ್ನಲ್ಲಿ ಚಿನ್ನದ ಪದಕವನ್ನು ಗೆದ್ದ ಪಾಕಿಸ್ತಾನದ ಅರ್ಷದ್ ನದೀಮ್ ಭಯೋತ್ಪಾದಕ ಸಂಘಟನೆ ಲಷ್ಕರ್-ಎ-ತೈಬಾದ ನಾಯಕ ಹ್ಯಾರಿಸ್ ಧರ್ ಜತೆ ಕಾಣಿಸಿಕೊಂಡಿದ್ದಾರೆ.ಈ ಬಗ್ಗೆ ಅಸಮಾಧಾನ ವ್ಯಕ್ತವಾಗುತ್ತಿದೆ.

ನದೀಮ್ ಅವರು ಒಲಿಂಪಿಕ್ಸ್ನಲ್ಲಿ ಚಿನ್ನದ ಪದಕ ಗೆದ್ದು ತನ್ನ ದೇಶದ 32 ವರ್ಷಗಳ ಚಿನ್ನದ ಪದಕ ಬರಗಾಲವನ್ನು ಕೊನೆಗೊಳಿಸಿದ್ದರು. ಆದಾಗ್ಯೂ, ವಿಶ್ವ ಸಂಸ್ಥೆಯೇ ಭಯೋತ್ಪಾದಕ ಸಂಘಟನೆ ಎಂದು ಕರೆದಿರುವ ಲಷ್ಕರ್-ಎ-ತೈಬಾದ ನಾಯಕನ ಜತೆ ಕಾಣಿಸಿಕೊಂಡಿರುವುದು ಅಸಮಾಧಾನಕ್ಕೆ ಕಾರಣವಾಗಿದೆ.

ಪ್ಯಾರಿಸ್ನಿಂದ ಲಾಹೋರ್ ವಿಮಾನ ನಿಲ್ದಾಣಕ್ಕೆ ಬಂದಿಳಿದ ನದೀಮ್ ಅವರಿಗೆ ಭವ್ಯ ಸ್ವಾಗತ ದೊರಕಿದೆ. ಅಲ್ಲಿನ ಸರ್ಕಾರವು ಅವರಿಗೆ ವಿಜಯ ಮೆರವಣಿಗೆಯನ್ನು ಸಹ ಆಯೋಜಿಸಿತ್ತು. ಇದಲ್ಲದೆ, ನದೀಮ್ ಅವರು ಪಾಕಿಸ್ತಾನದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾಯನ್ನೂ ಪಡೆದಿದ್ದಾರೆ. ದೊಡ್ಡ ಪ್ರಮಾಣದ ಬಹುಮಾನಗಳು ಅವರ ಕಡೆಗೆ ಬರುತ್ತಿದೆ. ಕಾರು, ಹಣ,ಪ್ರಶಸ್ತಿಗಳು ಅವರನ್ನು ಸುತ್ತುವರಿಯುತ್ತಿವೆ. ಆದರೆ ಅವರು ಲಷ್ಕರ್ ನಾಯಕನೊಂದಿಗೆ ಕಾಣಿಸಿಕೊಂಡಿರುವುದು ವಿವಾದಕ್ಕೆ ಕಾರಣವಾಗಿದೆ.

ಎಕ್ಸ್ನಲ್ಲಿನ ಒಎಸ್ಐಎನ್ಟಿ (ಓಪನ್ ಸೋರ್ಸ್ ಇಂಟೆಲಿಜೆನ್ಸ್) ಖಾತೆಯು ನದೀಮ್ ಮತ್ತು ದಾರ್ ಸಂಭಾಷಣೆಯ ವೀಡಿಯೊವನ್ನು ಹಂಚಿಕೊಂಡಿದೆ. ವೀಡಿಯೊದಲ್ಲಿ, ದಾರ್ ನದೀಮ್ ಅವರ ಒಲಿಂಪಿಕ್ ಯಶಸ್ಸಿಗೆ ಅಭಿನಂದನೆ ಸಲ್ಲಿಸಿದ್ದಾನೆ. ಅಲ್ಲದೆ, ನದೀಮ್ ಸಾಧನೆಯು ಮುಸ್ಲಿಂಮರನ್ನು ಹೆಮ್ಮೆಪಡುವಂತೆ ಮಾಡಿದೆ ಎಂದು ಹೇಳಿದ್ದಾನೆ. ದಾರ್ ಅವರ ಹೊಗಳಿಕೆ ಮತ್ತು ಇಬ್ಬರನ್ನು ಒಟ್ಟಿಗೆ ಕಾಣಿಸಿಕೊಂಡಿರುವುದು ನದೀಮ್ ಅವರ ಜಾಗತಿಕ ಮನ್ನಣೆಗೆ ಹಾನಿ ಮಾಡಲಿದೆ.

# ಪಾಕ್ನಲ್ಲಿ ಮನೆ ಬಾಡಿಗೆಗಿಂತ ವಿದ್ಯುತ್ ಶುಲ್ಕವೇ ಹೆಚ್ಚು!

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ಇದೀಗ ಮನೆ ಬಾಡಿಗೆಗಿಂತ ವಿದ್ಯುತ್ ಶುಲ್ಕವೇ ಹೆಚ್ಚಾಗಿದೆ ಎನ್ನಲಾಗುತ್ತಿದೆ.

ಪಾಕಿಸ್ತಾನವು ಅತಿದೊಡ್ಡ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿದೆ. ಕಳೆದ ಒಂದು ವರ್ಷದಲ್ಲಿ 14ನೇ ಬಾರಿಗೆ ಪಾಕಿಸ್ತಾನದಲ್ಲಿ ವಿದ್ಯುತ್ ಬೆಲೆ ಹೆಚ್ಚಾಗಿದೆ.

ಈ ಏರುತ್ತಿರುವ ವಿದ್ಯುತ್ ಬೆಲೆಗಳಿಂದಾಗಿ ಪಾಕಿಸ್ತಾನಿ ನಾಗರಿಕರ ಮೇಲಿನ ಹೊರೆ ಹೆಚ್ಚಾಗಿದೆ. ಜುಲೈ 2023 ರಿಂದ ಆಗಸ್ಟ್ 2024 ರವರೆಗೆ 14 ಬಾರಿ ವಿದ್ಯುತ್ ಬೆಲೆಗಳನ್ನು ಪರಿಷ್ಕರಿಸಲಾಗಿದೆ. ಈ ಏರುತ್ತಿರುವ ವಿದ್ಯುತ್ ಬೆಲೆಗಳು ಗ್ರಾಹಕರಿಗೆ 455 ಶತಕೋಟಿ ರೂಪಾಯಿಗಳ ಹೆಚ್ಚುವರಿ ವೆಚ್ಚವನ್ನು ಉಂಟುಮಾಡುತ್ತದೆ.

ಈ ಹೊಂದಾಣಿಕೆಗಳು ವಿದ್ಯುಚ್ಛಕ್ತಿಯ ಬೆಲೆಗಳಲ್ಲಿ ಗಮನಾರ್ಹ ಹೆಚ್ಚಳಕ್ಕೆ ಕಾರಣವಾಗಿವೆ. ಮಾರ್ಚ್ 2024ರಲ್ಲಿ ಪ್ರತಿ ಯೂನಿಟ್ಗೆ ಗರಿಷ್ಠ 7.06 ರೂ. ಇದೆ. ವಿದ್ಯುತ್ ಬೆಲೆಗಳಲ್ಲಿ ಆಗಾಗ ಬದಲಾವಣೆಗಳಿಂದಾಗಿ ನಾಗರಿಕರಿಗೆ ತಮ್ಮ ವೆಚ್ಚಗಳನ್ನು ನಿರ್ವಹಿಸುವುದು ಸವಾಲಾಗಿದೆ. ಸಾರ್ವಜನಿಕರಿಗೆ ಪರಿಹಾರ ಒದಗಿಸಲು ಇಂಧನ ಹೊಂದಾಣಿಕೆ ಕಾರ್ಯವಿಧಾನವನ್ನು ಪರಿಶೀಲಿಸುವಂತೆ ಜನರು ಪಾಕಿಸ್ತಾನ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಜುಲೈನಲ್ಲಿ ಪಾಕಿಸ್ತಾನವು ಖಒಈ ನಿಂದ 7 ಶತಕೋಟಿ ಡಾಲರ್ ಸಾಲವನ್ನು ಪಡೆದುಕೊಂಡಿತ್ತು. ಈ ವೇಳೆ ವಸತಿ ಬಳಕೆದಾರರಿಗೆ ಸರಾಸರಿ ಪ್ರತಿ-ಯೂನಿಟ್ ವಿದ್ಯುತ್ ಬೆಲೆಯು 18% ರಷ್ಟು ಏರಿಕೆಯಾಗಿದೆ. ಇದರಿಂದಾಗಿ ತಿಂಗಳಿಗೆ 100 ಡಾಲರ್ರಿಂದ 700 ಡಾಲರ್ರವರೆಗಿನ ಸಾಮಾನ್ಯ ಮನೆಯ ಬಾಡಿಗೆಯನ್ನು ಮೀರಿಸುತ್ತಿದೆ ಎಂದು ಪಾಕಿಸ್ತಾನ್ ಕುವೈತ್ ಇನ್ವೆಸ್ಟ್ಮೆಂಟ್ ಕಂಪನಿಯ ಸಂಶೋಧನಾ ಮುಖ್ಯಸ್ಥ ಸಮೀವುಲ್ಲಾ ತಾರಿಕ್ ಹೇಳಿದ್ದಾರೆ.



# ಕಮಲಾ ಹ್ಯಾರಿಸ್ಗೆ ಮತಿಭ್ರಮಣೆ: ಟ್ರಂಪ್

**ನ್ಯೂಯಾರ್ಕ್:** ಅಮೆರಿಕ ಅಧ್ಯಕ್ಷ ಜೋ ಬೈಡೆನ್ಗೆ ಸ್ವಲ್ಪವೂ ಬುದ್ಧಿವಂತಿಕೆ (ಐಕ್ಯೂ) ಇಲ್ಲ, ಕಮಲಾ ಹ್ಯಾರಿಸ್ ಎಡ ಪಂಥೀಯ ತೀವ್ರಗಾಮಿತ್ವವನ್ನು ಹೊಂದಿದ್ದು, ಅವರಿಗೆ ಮತಿಭ್ರಮಣೆಯಾಗಿದೆ ಎಂದು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಸ್ಪೇಸ್ ಎಕ್ಸ್ ಸಂಸ್ಥಾಪಕ ಎಲಾನ್ ಮಸ್ಕ್ ಜತೆ ನಡೆಸಿದ ಸಂವಾದದಲ್ಲಿ ಅವರು, ಸರಕಾರದ ವಿರುದ್ಧ ಅಸಮಾಧಾನ ಹೊರಹಾಕಿದ್ದಲ್ಲದೇ, ವೈಯಕ್ತಿಕ ವಾಗಿ ಡೆಮಾಕ್ರಟಿಕ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ಹೋದರು. ಈಗ ಬೈಡೆನ್ ಜಾಗವನ್ನು ಕಮಲಾ ತುಂಬುತ್ತಿದ್ದಾರೆ, ಆದರೆ ಅವರು ಈವರೆಗೂ ಒಂದೇ ಒಂದು ಸಂದರ್ಶನ ನೀಡಿಲ್ಲ. ಅವರಿಗೆ ಎಡಪಂಥೀಯ ವಿಚಾರಗಳಿಂದ ಮತಿಭ್ರಮಣೆಯಾಗಿದೆ ಎಂದರು.?ನಿಂದಲೇ ಓಡಿಸಿದ ದಾಳಿಗೆ ಹೆದರಿ ಅವರು ರೇಸ್ ಅಧ್ಯಕ್ಷ ಬೈಡೆನ್ರನ್ನು ಹಲವು ಬಾರಿ ಸಂವಾದಗಳಲ್ಲಿ ಸೋಲಿಸಿದ್ದೇನೆ. ನಾನು ಚರ್ಚೆ ವೇಳೆ ಅವರ ಮೇಲೆ ನಡೆ

# ಇಸ್ರೇಲಿ ಮಿಲಿಟರಿ ಸೈಟ್ಗಳ ಮೇಲೆ ಇರಾನ್ ವೈಮಾನಿಕ ದಾಳಿ

**ಇಸ್ರೇಲ್:** ಇರಾನ್ ಬೆಂಬಲಿತ ಗುಂಪುಗಳ ಸಂಘಟಿತ ದಾಳಿಯ ಪ್ರದರ್ಶನದಲ್ಲಿ ಹಿಜ್ಬುಲ್ಲಾ ಇಂದು ಸೂಕ್ಷ್ಮ ಇಸ್ರೇಲಿ ಮಿಲಿಟರಿ ಸೈಟ್ಗಳ ವಿರುದ್ಧ ಸರಣಿ ದಾಳಿಗಳನ್ನು ಪ್ರಾರಂಭಿಸಿದೆ. ಅದರ ಒಂದು ಕ್ಷಿಪಣಿಯು ಇಸ್ರೇಲಿ ಪಡೆಗಳ ಗುಂಪನ್ನು ಹೊಡೆದಿದೆ. ಒಂದು ಸೈಟ್, ಟೆಲ್ ಅವಿವ್ ಮೇಲೆ ಹಮಾಸ್ನ ಒ90 ರಾಕೆಟ್ ದಾಳಿಯ ಕ್ಷಣಗಳ ನಂತರ ಪ್ರಭಾವ ಬೀರಲು ವಿಫಲವಾಯಿತು. ಇರಾನಿನ ರಾಜ್ಯ ಮಾಧ್ಯಮಗಳ ಪ್ರಕಾರ, ಅಲ್-ಸಮಾಕಾ, ರಮಿಯಾ ಮತ್ತು ಮಿಸ್ಗಾವ್ ಆಮ್ ಸೈಟ್ಗಳಲ್ಲಿ ಇಸ್ರೇಲಿ ಸೇನೆಯ ತಾಂತ್ರಿಕ ಮತ್ತು ಬೇಹುಗಾರಿಕೆ ಸಾಧನಗಳನ್ನು ಗುರಿಯಾಗಿಸಿಕೊಂಡಿದೆ ಎಂದು ಹೆಜ್ಬೊಲ್ಲಾ ಹೇಳಿಕೊಂಡಿದೆ. ಹಮಾಸ್ ಗಾಜಾದಿಂದ ಟೆಲ್ ಅವೀವ್ ಕಡೆಗೆ ಎರಡು ಒ90 ರಾಕೆಟ್ಗಳನ್ನು ಉಡಾಯಿಸಿದ ನಂತರ ಇದು ಸಂಭವಿಸಿದೆ. ಅವುಗಳಲ್ಲಿ ಒಂದು ಸಮುದ್ರದಲ್ಲಿ ಬಿದ್ದಿತು ಮತ್ತು ಇನ್ನೊಂದು ಇಸ್ರೇಲ್ ಪ್ರದೇಶವನ್ನು ತಲುಪಲು ವಿಫಲವಾಯಿತು. ಹಮಾಸ್ ನಾಯಕ ಇಸ್ಮಾಯಿಲ್ ಹನಿಯೆಹ್ ಮತ್ತು ಹಿಜ್ಬುಲ್ಲಾ ಕಮಾಂಡರ್ ಫುವಾದ್ ಶುಕ್ರ್ ಹತ್ಯೆಯ ನಂತರ ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಹೆಚ್ಚಾಗಿದೆ.

# ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಯ ಮೇಲೆ 750 ಮೀಟರ್ ಉದ್ದದ ತ್ರಿವರ್ಣ ಧ್ವಜದೊಂದಿಗೆ 'ತಿರಂಗಾ ಯಾಲಿ'



**ನವದೆಹಲಿ:** ಭಾರತವು ತನ್ನ ಸ್ವಾತಂತ್ರ್ಯ ದಿನವನ್ನು ಸಮೀಪಿಸುತ್ತಿದ್ದಂತೆ, ವಿವಿಧ ಪ್ರದೇಶಗಳಲ್ಲಿ ತಿರಂಗಾ ಯಾಲಿಗಳು ನಡೆಯುವುದರೊಂದಿಗೆ ದೇಶಾದ್ಯಂತ ದೇಶಭಕ್ತಿಯ ಉತ್ಸಾಹವು ಹರಡುತ್ತಿದೆ.

ಜಮ್ಮು ಮತ್ತು ಕಾಶ್ಮೀರದ ರಿಯಾಸಿಯಲ್ಲಿ ಮಹತ್ವದ ಘಟನೆ ನಡೆದಿದ್ದು, ಅಲ್ಲಿ ಬೃಹತ್ ತಿರಂಗಾ ಯಾಲಿಯನ್ನು ಆಯೋಜಿಸಲಾಗಿತ್ತು.

ಯಾಲಿಯಲ್ಲಿ 750 ಮೀಟರ್ ಉದ್ದದ ತ್ರಿವರ್ಣ ಧ್ವಜವನ್ನು ಚೆನಾಬ್ ನದಿಗೆ ಅಡ್ಡಲಾಗಿ ನಿರ್ಮಿಸಲಾದ ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಯ ಮೇಲೆ ವಿದ್ಯಾರ್ಥಿಗಳು ಹೊತ್ತೊಯ್ದರು. ಭಾಗವಹಿಸುವವರು, ಮುಖ್ಯವಾಗಿ ವಿದ್ಯಾರ್ಥಿಗಳು, ಹೆಮ್ಮೆಯಿಂದ ತ್ರಿವರ್ಣ ಧ್ವಜವನ್ನು ತಲೆಯ ಮೇಲೆ ಹಿಡಿದುಕೊಂಡು ವಂದೇ ಮಾತರಂ ಮತ್ತು ಭಾರತ್ ಮಾತಾ ಕಿ ಜೈ ನಂತಹ ದೇಶಭಕ್ತಿ ಘೋಷಣೆಗಳನ್ನು ಕೂಗಿದರು. ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಇಡೀ ಮೆರವಣಿಗೆಯನ್ನು ಪೊಲೀಸ್ ಸಿಬ್ಬಂದಿ ನಿಕಟವಾಗಿ ಮೇಲ್ವಿಚಾರಣೆ ಮಾಡಿದರು.

# ಮೋದಿ ಸರ್ಕಾರ ತಕ್ಷಣವೇ ಸೆಬಿ ಮುಖ್ಯಸ್ಥರ ರಾಜೀನಾಮೆ ಕೇಳಬೇಕು- ಖರ್ಗೆ



**ನವದೆಹಲಿ:** ಚುನಾವಣೆ ದೃಷ್ಟಿಯಿಂದ ಪಕ್ಷದ ಸಂಘಟನೆ ಹಾಗೂ ದೇಶಕ್ಕೆ ಸಂಬಂಧಿಸಿದ ಪ್ರಮುಖ ಸಮಸ್ಯೆಗಳ ಕುರಿತು ಇಂದು ಕಾಂಗ್ರೆಸ್ ಸಭೆಯಲ್ಲಿ ಚರ್ಚಿಸಲಾಯಿತು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ನೇತೃತ್ವದ ಈ ಸಭೆಯಲ್ಲಿ ಪಕ್ಷದ ಪ್ರಧಾನ ಕಾರ್ಯದರ್ಶಿಗಳು, ರಾಜ್ಯ ಘಟಕಗಳ ಮುಖ್ಯಸ್ಥರು ಮತ್ತು ಎಐಸಿಸಿ ರಾಜ್ಯ ಉಸ್ತುವಾರಿಗಳು ಪಾಲ್ಗೊಂಡಿದ್ದರು.

ಬಳಿಕ ಮಾತನಾಡಿದ ಖರ್ಗೆ, ಸೆಬಿ ಮತ್ತು ಅದಾನಿ ನಡುವಿನ ಸಂಬಂಧದ ಕುರಿತು ಕೂಲಂಕುಷ ತನಿಖೆ ನಡೆಸಬೇಕು ಎಂದು ಇದೇ ವೇಳೆ ಆಗ್ರಹಿಸಿದ ಅವರು. ಸಣ್ಣ ಮಟ್ಟದ ಹೂಡಿಕೆದಾರರ ಹಣಕ್ಕೆ ಹಾನಿ ಮಾಡುವಂತಿಲ್ಲ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಕೂಡಲೇ ಸೆಬಿ ಮುಖ್ಯಸ್ಥರ ರಾಜೀನಾಮೆ ಪಡೆಯಬೇಕು. ಈ ನಿಟ್ಟಿನಲ್ಲಿ ಜಂಟಿ ಸಂಸದೀಯ ಸಮಿತಿ ರಚಿಸಬೇಕು ಎಂದು ಆಗ್ರಹಿಸಿದರು.

ಬಡ ಮತ್ತು ಮಧ್ಯಮ ವರ್ಗದವರಿಗೆ ಕೇಂದ್ರ ದ್ರೋಹ ಬಗೆದಿದೆ. ನಿಯಂತ್ರಣಕ್ಕೆ ಬಾರದ ನಿರುದ್ಯೋಗ ಮತ್ತು ನಿಯಂತ್ರಣ ಮೀರಿದ ಹಣದುಬ್ಬರದಂಥ ಸಮಸ್ಯೆಗಳಿಗೆ ಕಾಂಗ್ರೆಸ್ ಹೆಚ್ಚಿನ ಮಹತ್ವ ನೀಡುತ್ತದೆ. ಈ ಸಮಸ್ಯೆಗಳ ಕುರಿತು ರಾಷ್ಟ್ರವ್ಯಾಪಿ ಅಭಿಯಾನ ರೂಪಿಸಲಿದ್ದೇವೆ ಎಂದು ಹೇಳಿದರು.

# ಬಾಂಗ್ಲಾದಿಂದ ಹೊರಬಂದ ಬಳಿಕ ಮೊದಲ ಬಾರಿಗೆ ಹೇಳಿಕೆ ನೀಡಿದ ಮಾಜಿ ಪ್ರಧಾನಿ ಶೇಖ್ ಹಸೀನಾ!

**ಬಾಂಗ್ಲಾದೇಶ:** ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿ ಅಲ್ಲಿಂದ ಪರಾರಿಯಾಗಿ ಭಾರತಕ್ಕೆ ಬಂದಿರುವ ಮಾಜಿ ಪ್ರಧಾನಿ ಶೇಖ್ ಹಸೀನಾ ಮಂಗಳವಾರ ತಮ್ಮ ಮೊದಲ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಅವಾಮಿ ಲೀಗ್ ವಿರುದ್ಧದ ದಂಗೆಯನ್ನು ತನ್ನ ತಂದೆ, ಬಾಂಗ್ಲಾದೇಶದ ಸ್ಥಾಪಕ ಅಧ್ಯಕ್ಷ ಬಂಗಬಂಧು ಶೇಖ್ ಮುಜಿಬುರ್ ರಹಮಾನ್ ಮತ್ತು ರಾಷ್ಟ್ರಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಅನೇಕ ಹುತಾತ್ಮರಿಗೆ ಮಾಡಿದ ಗಂಭೀರ ಅವಮಾನ ಎಂದು ಹೇಳಿದ್ದಾರೆ . ರಾಷ್ಟ್ರಪಿತ ಬಂಗಬಂಧು ಶೇಖ್ ಮುಜಿಬುರ್ ರಹಮಾನ್ ಅವರ ನಾಯಕತ್ವದಲ್ಲಿ ನಾವು ಸ್ವತಂತ್ರ ರಾಷ್ಟ್ರವಾಗಿ ಸ್ವಾಭಿಮಾನವನ್ನು ಗಳಿಸಿದ್ದೆವು. ಸ್ವಯಂ ಗುರುತನ್ನು ಪಡೆದುಕೊಂಡಿದ್ದೆವು. ಸ್ವತಂತ್ರ ದೇಶವನ್ನು ಪಡೆದಿದ್ದೇವೆ. ಈಗ ಅವರನ್ನು ತೀವ್ರವಾಗಿ ಅವಮಾನಿಸಲಾಗಿದೆ ಎಂದು ಹಸೀನಾ ತಮ್ಮ ಮಗ ಸಜೀಬ್ ವಾಜೇದ್ ಮೂಲಕ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಲಕ್ಷಾಂತರ ಹುತಾತ್ಮರ ತ್ಯಾಗವನ್ನು ಅವಮಾನಿಸಿದ್ದಾರೆ. ನಾನು ದೇಶವಾಸಿಗಳಿಂದ ನ್ಯಾಯವನ್ನು ಬಯಸುತ್ತೇನೆ, ಶೇಖ್ ಮುಜಿಬುರ್ ರಹಮಾನ್ ಅವರ ಹತ್ಯೆಯಾದ ದಿನದ ವಾರ್ಷಿಕೋತ್ಸವದ ನೆನಪಿಗಾಗಿ ಆಗಸ್ಟ್ 15 ರಂದು ರಾಷ್ಟ್ರೀಯ ಶೋಕಾಚರಣೆ ದಿನ ಆಚರಿಸುವಂತೆ ಅವಾಮಿ ಲೀಗ್ ಮುಖ್ಯಸ್ಥರು ಬಾಂಗ್ಲಾದೇಶದ ಪ್ರಜೆಗಳನ್ನು ಒತ್ತಾಯಿಸಿದ್ದಾರೆ.

# ತ್ರಿಪುರಾದ ಪಂಚಾಯತ್ ಚುನಾವಣೆಯಲ್ಲಿ ಬಿಜೆಪಿಗೆ ಜಯ



**ಅಗರ್ತಲಾ:** ಆಗಸ್ಟ್ 8 ರಂದು ನಡೆದ ಮೂರು ಹಂತದ ಪಂಚಾಯತ್ ಚುನಾವಣೆಯಲ್ಲಿ ಆಡಳಿತಾರೂಢ ಬಿಜೆಪಿ ರಾಜ್ಯದ ಬಹು ಕ್ಷೇತ್ರಗಳಲ್ಲಿ ನಿರ್ಣಾಯಕ ಗೆಲುವು ಸಾಧಿಸಿದೆ. ಹಲವು ವಾರ್ಡ್ಗಳಲ್ಲಿ ಬಿಜೆಪಿ ಜಯಭೇರಿ ಬಾರಿಸಿದೆ.

ಪಶ್ಚಿಮ ತ್ರಿಪುರಾ ಜಿಲ್ಲೆಯ ಎಲ್ಲಾ ಸ್ಥಾನಗಳನ್ನು ಬಿಜೆಪಿ ಗೆದ್ದಿದೆ.

ಡುಕ್ಲಿ ಗ್ರಾಮೀಣಾಭಿವೃದ್ಧಿ ಬ್ಲಾಕ್ನ ಒಂದು ಅಥವಾ ಎರಡು ಸ್ಥಾನಗಳಲ್ಲಿ ಟಿಪ್ರಾ ಮೋಥಾ ಪಾರ್ಟಿ (ಟಿಎಂಪಿ) ವಿಜಯಶಾಲಿಯಾಗಿದೆ. ಎಲ್ಲಾ 17 ಜಿಲ್ಲಾ ಪರಿಷತ್ತುಗಳು, ಪಂಚಾಯತ್ ಸಮಿತಿಗಳು ಮತ್ತು ಪಂಚಾಯತ್ ಸ್ಥಾನಗಳ ಫಲಿತಾಂಶಗಳು ಬಿಜೆಪಿಯ ಪ್ರಬಲ ಸಾಧನೆಯನ್ನು ಎತ್ತಿ ತೋರಿಸಿದೆ.

ಈ ಸಂಬಂಧ ಪಶ್ಚಿಮ ತ್ರಿಪುರಾದ ಜಿಲ್ಲಾ ಚುನಾವಣಾಧಿಕಾರಿ ಡಾ.ವಿಶಾಲ್ ಕುಮಾರ್ ಸುದ್ದಿಗೋಷ್ಠಿ ನಡೆಸಿ, ಚುನಾವಣೆಯ ಫಲಿತಾಂಶಗಳನ್ನು ಇಂದು ಪ್ರಕಟಿಸಲಾಗಿದೆ. ಇದುವರೆಗೆ, ಪಶ್ಚಿಮ ತ್ರಿಪುರಾ ಜಿಲ್ಲೆಯ ಎಲ್ಲಾ ಸ್ಥಾನಗಳ ಫಲಿತಾಂಶಗಳು ಮತ್ತು ಎಲ್ಲಾ 17 ಜಿಲ್ಲಾ ಪರಿಷತ್ತುಗಳು, ಪಂಚಾಯತ್ ಸಮಿತಿಗಳು ಮತ್ತು ಪಂಚಾಯತ್ಗಳ ಫಲಿತಾಂಶಗಳು ಪ್ರಕಟವಾಗಿವೆ. ತ್ರಿಪಾ ಮೋಥಾ ಪಕ್ಷವು ಗೆದ್ದಿರುವ ದುಕ್ಲಿ ಗ್ರಾಮೀಣಾಭಿವೃದ್ಧಿ ಬ್ಲಾಕ್ನ ಒಂದು ಅಥವಾ ಎರಡು ಸ್ಥಾನಗಳನ್ನು ಹೊರತುಪಡಿಸಿ ಬಿಜೆಪಿ ಅಭ್ಯರ್ಥಿಗಳು ಗೆದ್ದಿದ್ದಾರೆ ಎಂದರು.

# ಪ್ರಧಾನಿ ಮೋದಿ ನೇತೃತ್ವದಲ್ಲಿ ಭಾರತದ ಸಾಧನೆ ಇಡೀ ಜಗತ್ತನ್ನು ಅಚ್ಚರಿಗೊಳಿಸಿದೆ; ಅಮಿತ್ ಶಾ



**ಅಹಮದಾಬಾದ್:** ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಅಹಮದಾಬಾದ್‌ನಲ್ಲಿ 'ತಿರಂಗಾ ಯಾತ್ರೆ'ಗೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಯುವಕರು ಮುಂದೆ ಬರಲು ಕರೆ ನೀಡಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಸರ್ಕಾರದ ಸಾಧನೆಗಳು ಇಡೀ ಜಗತ್ತಿನ ಜನರನ್ನು ಆಶ್ಚರ್ಯಗೊಳಿಸಿದೆ ಎಂದು ಅವರು ಹೇಳಿದರು.

''ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಹರ್ ಘರ್ ತಿರಂಗ ಅಭಿಯಾನವು ದೇಶಭಕ್ತಿಯ ಅಭಿವ್ಯಕ್ತಿಯಾಗಿದೆ ಮತ್ತು 2047ರ ವೇಳೆಗೆ ವಿಕ್ಷಿತ್ ಭಾರತವನ್ನು ರಚಿಸುವ ಸಂಕಲ್ಪವಾಗಿದೆ. ಈ ಅಭಿಯಾನವು ಗುಜರಾತ್‌ನಲ್ಲಿ ಮಾತ್ರವಲ್ಲದೆ ಇಡೀ ದೇಶದಲ್ಲಿ ಹೊಸ ಶಕ್ತಿಯನ್ನು ತುಂಬುತ್ತಿದೆ'' ಎಂದು ಅವರು ಹೇಳಿದರು.

''ದೇಶದ ಪ್ರತಿಯೊಬ್ಬ ಮಗು, ಯುವಕರು ಮತ್ತು ನಾಗರಿಕರಿಗೆ ಸ್ವಾತಂತ್ರ್ಯ ಹೋರಾಟದ ಸಂಪೂರ್ಣ ಇತಿಹಾಸವನ್ನು ನೆನಪಿಸುವುದು ಈ ಅಭಿಯಾನದ ಮೊದಲ ಗುರಿಯಾಗಿದೆ. ಸ್ವಾತಂತ್ರ್ಯ ಲಭಿಸಿ ಈ 75 ವರ್ಷಗಳಲ್ಲಿ ದೇಶವು ಮಾಡಿದ ಸಾಧನೆಗಳ ಬಗ್ಗೆ ಎಲ್ಲಾ ನಾಗರಿಕರಿಗೆ, ವಿಶೇಷವಾಗಿ ಯುವ ಪೀಳಿಗೆಗೆ ತಿಳಿಸುವುದು ಎರಡನೆಯ ಗುರಿಯಾಗಿದೆ. ಭಾರತದ ಸ್ವಾತಂತ್ರ್ಯದ ಶತಮಾನೋತ್ಸವದವರೆಗೆ 'ಅಮೃತ ಕಾಲ'ದ ಮುಂದಿನ 25 ವರ್ಷಗಳ ಕಾಲ ದೇಶದ ಅಭಿವೃದ್ಧಿಗೆ ಶ್ರಮಿಸುವ ಮೂಲಕ ವಿಶ್ವದ ಎಲ್ಲಾ ಕ್ಷೇತ್ರಗಳಲ್ಲಿ ಭಾರತವನ್ನು ವಿಜೇತರನ್ನಾಗಿ ಮಾಡಲು ದೇಶದ 140 ಕೋಟಿ ನಾಗರಿಕರನ್ನು ಪ್ರತಿಜ್ಞೆ ಮಾಡುವುದು ಮೂರನೇ ಉದ್ದೇಶವಾಗಿದೆ ಎಂದು ಅಮಿತ್ ಶಾ ಹೇಳಿದ್ದಾರೆ.

ಭಾರತವು ದಶಕಗಳಿಂದ ಭಯೋತ್ಪಾದನೆ ಮತ್ತು ನಕ್ಸಲಿಸಂನಿಂದ ಪೀಡಿತವಾಗಿತ್ತು. ಆದರೆ ಮೋದಿ ಅವರು ಸರ್ಜಿಕಲ್ ಸ್ಟ್ರೈಕ್ ಮತ್ತು ವೈಮಾನಿಕ ದಾಳಿ ನಡೆಸುವ ಮೂಲಕ ದೇಶದ ಶತ್ರುಗಳಿಗೆ ತಕ್ಕ ಉತ್ತರವನ್ನು ನೀಡಿದ್ದಾರೆ. ಇದರೊಂದಿಗೆ ತಂತ್ರಜ್ಞಾನವನ್ನು ಬಳಸಿಕೊಂಡು ಲಸಿಕೆಯ ಎರಡೂ ಡೋಸ್‌ಗಳನ್ನು ಉಚಿತವಾಗಿ ನೀಡುವ ಮೂಲಕ ಮೋದಿಯವರು 130 ಕೋಟಿ ದೇಶವಾಸಿಗಳನ್ನು ಕೋವಿಡ್ -19ನಿಂದ ರಕ್ಷಿಸಿದ್ದಾರೆ ''ಎಂದು ಅಮಿತ್ ಶಾ ಹೇಳಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಗಸ್ಟ್ 15ರಂದು ದೆಹಲಿಯ ಕೆಂಪು ಕೋಟೆಯಲ್ಲಿ ರಾಷ್ಟ್ರಧ್ವಜಾರೋಹಣ ಮಾಡಲಿದ್ದಾರೆ ಮತ್ತು 11ನೇ ಬಾರಿಗೆ ಸ್ಮಾರಕದ ಕೋಟೆಯಿಂದ ರಾಷ್ಟ್ರವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಜೈಲಿನಲ್ಲಿರುವ ಪವಿತ್ರಾ ನೆನೆದು ಮಗಳು ಭಾವುಕ ಪೋಸ್ಟ್



ಕೊಲೆ ಪ್ರಕರಣದ ಸಂಬಂಧ ನಟ ದರ್ಶನ್ ಮತ್ತು ಪವಿತ್ರಾ ಗೌಡ ಸೇರಿ ಒಟ್ಟು 17 ಮಂದಿ ನ್ಯಾಯಾಂಗ ಬಂಧನದಲ್ಲಿದ್ದಾರೆ. ಆಗಾಗ ಅಮ್ಮನನ್ನು ನೋಡಲು ಪವಿತ್ರಾ ಪುತ್ರಿ ಖುಷಿ ಗೌಡ ಕೂಡ ಪರಪ್ಪನ ಅಗ್ರಹಾರಕ್ಕೆ ಭೇಟಿ ನೀಡುತ್ತಾ ಇರುತ್ತಾರೆ. ಇದೀಗ ಅಮ್ಮನನ್ನು ನೆನೆದು ಖುಷಿ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ.

ಪವಿತ್ರಾ ಗೌಡರ ಮಗಳು ಇನ್ಸ್ಟಾಗ್ರಾಂ ಖಾತೆಯಲ್ಲಿ ಪೋಸ್ಟ್ ಒಂದನ್ನು ಶೇರ್ ಮಾಡಿಕೊಂಡಿದ್ದು, ಅಮ್ಮನ ಬಗ್ಗೆ ಕೊಂಡಾಡಿದ್ದಾರೆ. ಅಮ್ಮ ನನ್ನ ಪ್ರೇರಣೆ, ಪರಿಸ್ಥಿತಿ ಎಷ್ಟೇ ಇದ್ದರೂ ಹೇಗೆ ಗಟ್ಟಿಯಾಗಿರಬೇಕೆಂದು ಕಲಿಸುತ್ತಾರೆ. ಅವರು ಯಾವಾಗಲೂ ತುಂಬಾ ಮುಕ್ತ ಮತ್ತು ಬೆಂಬಲ ನೀಡುತ್ತಾರೆ. ಅವರು ಶತಕೋಟಿಯಲ್ಲಿ ಒಬ್ಬರು. ಅವರಂತಹ ತಾಯಿಯನ್ನು ಪಡೆಯಲು ನಾನು ನಿಜವಾಗಿಯೂ ತುಂಬಾ ಕೃತಜ್ಞನಾಗಿದ್ದೇನೆ ಮತ್ತು ಅದೃಷ್ಟಶಾಲಿಯಾಗಿದ್ದೇನೆ. ನಾನು ನಿಮ್ಮನ್ನು ತುಂಬಾ ಪ್ರೀತಿಸುತ್ತೇನೆ ಅಮ್ಮ ಅಂತ ಬರೆದುಕೊಂಡಿದ್ದಾರೆ.

ಸದ್ಯ ತಾಯಿ ನಡೆಸಿಕೊಂಡು ಹೋಗುತ್ತಿದ್ದ 'ಫ್ಯಾಷನ್ ಬೋಟಿಕ್' ಅನ್ನು ಖುಷಿ ನಡೆಸಿಕೊಂಡು ಹೋಗುತ್ತಿದ್ದಾರೆ.

# ಟ್ರೈನಿ ವೈದ್ಯೆ ಹತ್ಯೆ ಪ್ರಕರಣ ಆರೋಪಿಗೆ ತಕ್ಕ ಶಿಕ್ಷೆಯಾಗಬೇಕು ಎಂದ ಆಶಿಕಾ ರಂಗನಾಥ್



ಕೊಲ್ಕತ್ತಾದ ಆರ್‌ಜಿ ಕರ್ ಮೆಡಿಕಲ್ ಕಾಲೇಜಿನಲ್ಲಿ ನಡೆದ ಅತ್ಯಾಚಾರ ಮತ್ತು ಕೊಲೆ ಪ್ರಕರಣ ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದೆ. ಈ ಬೆನ್ನಲ್ಲೇ ಹಲವು ನಟ– ನಟಿಯರು ಈ ಕುರಿತು ಧ್ವನಿಯೆತ್ತಿದ್ದಾರೆ. ನೈಟ್ ಡ್ಯೂಟಿ ಟ್ರೈನಿ ವೈದ್ಯೆಗೆ ರೇಪ್ ಆದರೆ ಇನ್ನೆಲಿ ರಕ್ಷಣೆ ಎಂದು ನಟಿ ಆಶಿಕಾ ರಂಗನಾಥ್ ಆಕ್ರೋಶ ಹೊರಹಾಕಿದ್ದಾರೆ.

ಕೊಲ್ಕತ್ತಾದ ಬರ್ಬರತೆಯ ಕುರಿತು ತಮ್ಮ ಇನ್ಸ್ಟಾಗ್ರಾಂ ಬರೆದುಕೊಂಡಿರುವ ಆಶಿಕಾ ರಂಗನಾಥ್, ಆರ್‌ಜಿ ಕರ್ ಮೆಡಿಕಲ್ ಕಾಲೇಜ್‌ನಲ್ಲಿ ನಡೆದ ಘಟನೆ ಕೇವಲ ವೈದ್ಯರಿಗೆ ಸಂಬಂಧಿಸಿದ ಸಮಸ್ಯೆಯಲ್ಲ, ಎಲ್ಲ ವೈದ್ಯಕೀಯೇತರ ವೃತ್ತಿಯಲ್ಲಿರುವವರೇ ಇದನ್ನು ದಯವಿಟ್ಟು ಅರ್ಥ ಮಾಡಿಕೊಳ್ಳಿ, ಆ ಮಹಿಳೆ ಕೆಲಸ ಮಾಡುವ ಜಾಗದಲ್ಲಿಯೇ ಸುರಕ್ಷಿತವಾಗಿಲ್ಲ ಅಂದ್ರೆ, ಮತ್ತೆಲ್ಲಿ? ಇದು ನಿರ್ಭಯಾ ಪ್ರಕರಣಕ್ಕಿಂತ ಏನು ಕಡಿಮೆಯಿಲ್ಲ ಎಂದಿದ್ದಾರೆ ಆಶಿಕಾ.

ಕೆಲವು ನಾಯಕರು ಹೇಳುವ ಪ್ರಕಾರ, ಮಧ್ಯರಾತ್ರಿ ಹೆಣ್ಣು ಮಕ್ಕಳು ರಸ್ತೆಯಲ್ಲಿ ಓಡಾಡಬಾರದು ಅಂತೆ. ಆದ್ರೆ ಅವಳು ಹೋಗಿದ್ದು ನೈಟ್ ಡ್ಯೂಟಿಗೆ, ಅತ್ಯಂತ ನೆಮ್ಮದಿಯ ವಲಯದಲ್ಲಿ ಇದ್ದಂತವಳು. ಅವಳಿಗೆ ಅಲ್ಲಾದರೂ ರಕ್ಷಣೆ ಸಿಕ್ಕಿದ್ಯಾ. ಈ ತರಹದ್ದು ಯಾರಿಗೆ ಬೇಕಾದರೂ, ಎಲ್ಲಿ ಬೇಕಾದರೂ, ಯಾವ ಸಮಯದಲ್ಲಿ ಬೇಕಾದರೂ ಕೂಡ ಆಗಬಹುದು. ಇದನ್ನೂ ಆದಷ್ಟು ಗಂಭೀರವಾಗಿ ಪರಿಗಣಿಸಬೇಕು. ಆರೋಪಿಗೆ ತಕ್ಕ ಶಿಕ್ಷೆಯಾಗಬೇಕು. ಆ ಶಿಕ್ಷೆ ಇಂತಹ ಸೈಕೋಪಾತ್‌ಗಳಿಗೆ ಎಚ್ಚರಿಕೆಯ ಘಂಟೆಯಾಗಬೇಕು ಎಂದು ಆಶಿಕಾ ರಂಗನಾಥ್ ಆಗ್ರಹಿಸಿದ್ದಾರೆ.

ಅಂದಹಾಗೆ, ಮೆಗಾಸ್ಟಾರ್ ಚಿರಂಜೀವಿ ಜೊತೆ ತೆಲುಗಿನ 'ವಿಶ್ವಾಂಭರ', ತಮಿಳಿನ ನಟ ಕಾರ್ತಿ ಜೊತೆ 'ಸರ್ದಾರ್ 2' ಸಿನಿಮಾದಲ್ಲಿ ಕನ್ನಡದ ನಟಿ ಆಶಿಕಾ ರಂಗನಾಥ್ ಬ್ಯುಸಿಯಾಗಿದ್ದಾರೆ.



# ಕಮಲ್ ಹಾಸನ್ ಚಿತ್ರರಂಗಕ್ಕೆ ಕಾಲಿಟ್ಟು ಬರೋಬ್ಬರಿ 64 ವರ್ಷ

ಚಿತ್ರರಂಗದಲ್ಲಿ 10 ವರ್ಷ ಕಳೆಯಬೇಕು ಎಂದಾಗ ಸಾಕಷ್ಟು ಚಾಲೆಂಜ್ ಗಳು ಎದುರಾಗುತ್ತವೆ. ಇದಕ್ಕೆ ಸಾಕಷ್ಟು ಶ್ರಮ ಹಾಕಬೇಕಾಗುತ್ತದೆ. ಕಮಲ್ ಹಾಸನ್ ಅವರು ಬಣ್ಣದ ಲೋಕಕ್ಕೆ ಕಾಲಿಟ್ಟು ಬರೋಬ್ಬರಿ 64 ವರ್ಷಗಳು ಕಳೆದಿವೆ. ಅವರ ಫ್ಯಾನ್ಸ್ ಇದನ್ನು ಸೆಲೆಬ್ರೇಟ್ ಮಾಡುತ್ತಿದ್ದಾರೆ. ಅಪರೂಪದ ಸಾಧನೆ ಮಾಡಿದ ಅವರನ್ನು ಎಲ್ಲರೂ ಮೆಚ್ಚುತ್ತಿದ್ದಾರೆ. ಇತ್ತೀಚೆಗೆ ಅವರು ತಮ್ಮ ನಟನೆಯ 'ಥಗ್ ಲೈಫ್ ' ಸಿನಿಮಾ ಸೆಟ್ ಗೆ ಬಂದಾಗ ತಂಡದವರು ಇದನ್ನು ನೆನಪಿಸಿಕೊಂಡು ಮೆಚ್ಚುಗೆ ಸೂಚಿಸಿದರು.





ಕಮಲ್ ಹಾಸನ್ ಅವರು ಬಾಲ ಕಲಾವಿದನಾಗಿ ಚಿತ್ರರಂಗಕ್ಕೆ ಕಾಲಿಟ್ಟರು. ಅವರು ನಟಿಸಿದ ಮೊದಲ ಸಿನಿಮಾ 'ಕಲಾಥುರ್ ಕಣ್ಣಮ್ಮ'. ಇದು ತಮಿಳು ಸಿನಿಮಾ. ಈ ಸಿನಿಮಾ ರಿಲೀಸ್ ಆಗಿದ್ದು 1960ರ ಆಗಸ್ಟ್ 12ರಂದು. ಜೆಮಿನಿ ಗಣೇಶನ್, ಸಾವಿತ್ರಿ ಗಣೇಶ್ ಮೊದಲಾದವರು ಈ ಚಿತ್ರದಲ್ಲಿ ನಟಿಸಿದ್ದರು. ಈ ಸಿನಿಮಾದಲ್ಲಿ ಬಾಲ ಕಲಾವಿದನ ಪಾತ್ರ ಮಾಡಿದ್ದರು ಕಮಲ್ ಹಾಸನ್. ಅಲ್ಲಿಂದ ಅವರ ಚಿತ್ರರಂಗದ ಜರ್ನಿ ಆರಂಭ ಆಯಿತು. ಈಗ ಅವರು ಚಿತ್ರರಂಗದಲ್ಲಿ 65ನೇ ವರ್ಷದ ಜರ್ನಿ ಆರಂಭಿಸಿದ್ದಾರೆ. ಈ ಸಾಧನೆ ಮಾಡಿದ ಕೆಲವೇ ಕೆಲವು ಹಿರೋಗಳಲ್ಲಿ ಕಮಲ್ ಹಾಸನ್ ಕೂಡ ಒಬ್ಬರು.

ಕಮಲ್ ಹಾಸನ್ ಅವರು 'ಥಗ್ ಲೈಫ್' ಸಿನಿಮಾ ಶೂಟ್ ನಲ್ಲಿ ಬ್ಯುಸಿ ಆಗಿದ್ದಾರೆ. ಈ ಚಿತ್ರವನ್ನು ಮಣಿರತ್ನಂ ಅವರು ನಿರ್ದೇಶನ ಮಾಡುತ್ತಿದ್ದಾರೆ. 'ನಾಯಕನ್' (1987) ಬಳಿಕ ಮಣಿರತ್ನಂ ಹಾಗೂ ಕಮಲ್ ಹಾಸನ್ ಮತ್ತೆ ತೆರೆಮೇಲೆ ಒಂದಾಗಿದ್ದಾರೆ. ಈ ಚಿತ್ರದ ಸೆಟ್ ನಲ್ಲಿ ಕಮಲ್ ಹಾಸನ್ ಅವರಿಗೆ ಅದ್ದೂರಿ ಸ್ವಾಗತ ಸಿಕ್ಕಿದೆ. ಕಮಲ್ ಹಾಸನ್ ಕೈಯಲ್ಲಿ ಹಲವು ಸಿನಿಮಾಗಳು ಇವೆ. ಅವರು 'ಕಲ್ಕಿ 2898 ಎಡಿ' ಸಿನಿಮಾದಲ್ಲಿ ಪ್ರಮುಖ ಪಾತ್ರ ಮಾಡಬೇಕಿದೆ. ಇಷ್ಟು ವರ್ಷ ಅವರು ಬಿಗ್ ಬಾಸ್ ನಡೆಸಿಕೊಡುತ್ತಿದ್ದರು. ಈಗ ಅದಕ್ಕೆ ಅವರು ಬ್ರೇಕ್ ಕೊಟ್ಟಿದ್ದಾರೆ.

# ವಿನೇಶ್ ಫೋಗಟ್ ಬೆಳ್ಳಿ ತೀರ್ಪು ಆ.16ಕ್ಕೆ ಮುಂದೂಡಿಕೆ

ಭಾರತೀಯ ಕುಸ್ತಿಪಟು ವಿನೇಶ್ ಫೋಗಟ್ ಅವರು ಸಲ್ಲಿಸಿರುವ ಮೇಲ್ಮನವಿ ಮೇಲಿನ ತೀರ್ಪನ್ನು ಕ್ರೀಡಾ ಮಧ್ಯಸ್ಥಿಕೆ ನ್ಯಾಯ ಮಂಡಳಿ ಮತ್ತೆ ಮುಂದಕ್ಕೆ ಹಾಕಿದೆ. ಭಾರತೀಯ ಕಾಲಮಾನ ಮಂಗಳವಾರ ರಾತ್ರಿ ತೀರ್ಪು ಪ್ರಕಟವಾಗಬೇಕಿತ್ತು. ಆದರೆ ಈಗ ಆ.16 ರಂದು ತೀರ್ಪು ನೀಡುವುದಾಗಿ ಪ್ರಕಟಿಸಿದೆ.

ನಿಗದಿಗಿಂತ 100 ಗ್ರಾಂ ಅಧಿಕ ತೂಕ ಹೊಂದಿದ್ದಕ್ಕೆ ಫೋಗಟ್ ಅವರನ್ನು ಪ್ಯಾರಿಸ್ ಒಲಿಂಪಿಕ್ಸ್ ಮಹಿಳೆಯರ ಕುಸ್ತಿ ಸ್ಪರ್ಧೆಯ 50 ಕೆ.ಜಿ. ವಿಭಾಗದ ಫೈನಲ್‌ನಿಂದ ಅನರ್ಹಗೊಳಿಸಲಾಗಿತ್ತು. ಕ್ರೀಡಾಕೂಟದ ಸಂದರ್ಭದಲ್ಲಿ ವಿವಾದ ಪರಿಹಾರಕ್ಕಾಗಿ ವಿಶೇಷವಾಗಿ ಸ್ಥಾಪಿಸಲಾಗಿರುವ ಸಿಎಎಸ್‌ನ ತಾತ್ಕಾಲಿಕ ವಿಭಾಗಕ್ಕೆ ತಮ್ಮ ವಿರುದ್ಧದ ಕ್ರಮ ಪ್ರಶ್ನಿಸಿ ವಿನೇಶ್ ಆ.9 ರಂದು ಮೇಲ್ಮನವಿ ಸಲ್ಲಿಸಿದ್ದರು.

ಮನವಿಯನ್ನು ಆಲಿಸಿದ ಸಿಎಎಸ್ ಆರಂಭದಲ್ಲಿ ಆ.10 ರಂದು ತೀರ್ಪು ಪ್ರಕಟಿಸುವುದಾಗಿ ಹೇಳಿತ್ತು. ನಂತರ ಆ.13 ರಂದು ಪ್ರಕಟಿಸಲಾಗುವುದು ಎಂದಿತ್ತು. ಆದರೆ ಈಗ ಮೂರನೇ ಬಾರಿ ಮುಂದೂಡಿದ್ದು, ಆ.16 ರಂದು ಪ್ರಕಟಿಸುವುದಾಗಿ ಹೇಳಿದೆ.

ಫೈನಲ್ ಪಂದ್ಯದ ಮುನ್ನಾದಿನ ನಾನು ಮೂರು ಪಂದ್ಯವನ್ನು ಆಡಿದ್ದೇನೆ. ಆ ದಿನ ನಿಗದಿತ 50 ಕೆಜಿ ತೂಕದ ಮಿತಿಯಲ್ಲಿ ಇದ್ದ ಕಾರಣ ಜಂಟಿಯಾಗಿ ಬೆಳ್ಳಿ ಪದಕದ ಗೌರವ ನೀಡಬೇಕೆಂದು ಮನವಿ ಮಾಡಿದ್ದರು.

ವಿನೇಶ್ ಫೋಗಟ್ ಪರವಾಗಿ ಖ್ಯಾತ ವಕೀಲ ಹರೀಶ್ ಸಾಳ್ವೆ ಮತ್ತು ವಿದುಷ್ಪತ್ ಸಿಂಘಾನಿಯಾ ಅವರು ಕ್ರೀಡಾ ಮಧ್ಯಸ್ಥಿಕೆ ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು.



# ಸ್ವಾತಂತ್ರ್ಯ ಸಮಾರಂಭಕ್ಕೆ ಪೊಲೀಸ್ ಬಿಗಿ ಭದ್ರತೆ

**ಬೆಂಗಳೂರು:** ಸ್ವಾತಂತ್ರ್ಯೋತ್ಸವ ಸಮಾರಂಭ ಆಚರಣೆಗೆ ಬೆಂಗಳೂರು ನಗರದಲ್ಲಿ ಸಕಲ ಸಿದ್ಧತೆ ನಡೆಯುತ್ತಿದೆ. ಭದ್ರತೆ ಸಂಬಂಧಿಸಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ ದಯಾನಂದ ಮಹತ್ವದ ಮಾಹಿತಿ ನೀಡಿದ್ದಾರೆ. ಸಿದ್ಧತೆ ಮತ್ತು ಭದ್ರತೆಗೆ ಸಂಬಂಧಿಸಿದ ಮಾಹಿತಿ ನೀಡಿದ ಅವರು, ಮಾಣೆಕ್ ಷಾ ಪರೇಡ್ ಗ್ರೌಂಡ್‌ನಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ರಿಹರ್ಸಲ್ ಕಾರ್ಯಕ್ರಮ ಮಾಡಲಾಗಿದೆ. ಕಾರ್ಯಕ್ರಮ ಹಿನ್ನೆಲೆ 15ದಿನಗಳಿಂದ ಕಟ್ಟೆಚ್ಚರವಹಿಸಲಾಗಿದೆ ಎಂದರು.

**ಪರೇಡ್ ಮೈದಾನದ ಸುತ್ತ ಕಟ್ಟೆಚ್ಚರ:** 15ನೇ ತಾರೀಖಿನಂದು ನಡೆಯಲಿರುವ ಕಾರ್ಯಕ್ರಮಕ್ಕೆ ಬಿಗಿ ಭದ್ರತೆ ವಹಿಸಲಾಗಿದೆ. 10 ಡಿಸಿಪಿ, 17 ಎಸಿಪಿ, 42 ಇನ್ಸ್‌ಪೆಕ್ಟರ್, 112 ಪಿಎಸ್‌ಐ, 62 ಎಎಸ್‌ಐ, 511 ಕಾನ್ಸ್‌ಟೇಬಲ್‌ಗಳು, 72 ಮಹಿಳಾ ಸಿಬ್ಬಂದಿ ನೇಮಕ ಮಾಡಲಾಗಿದೆ. 129 ಮಂದಿ ಮಫ್ತಿಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಬಿ ದಯಾನಂದ ಮಾಹಿತಿ ನೀಡಿದ್ದಾರೆ.

ಸಿಸಿಟಿವಿ ಪರಿಶೀಲನೆ ಮಾಡುವುದಕ್ಕೆಂದೇ 27 ಸಿಬ್ಬಂದಿಯ ನೇಮಕ ಮಾಡಲಾಗಿದೆ. ಹೆಚ್ಚುವರಿಯಾಗಿ ಹತ್ತು ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದೆ. ಸಂಚಾರ ನಿರ್ವಹಣೆ ವಿಚಾರವಾಗಿಯೂ ಪೊಲೀಸ್ ಅಧಿಕಾರಿಗಳ ನೇಮಕ ಮಾಡಲಾಗಿದೆ ಎಂದು ಅವರು ಹೇಳಿದರು.



3 ಜನ ಡಿಸಿಪಿ, 6 ಜನ ಎಸಿಪಿ, 19 ಜನ ಇನ್ಸ್‌ಪೆಕ್ಟರ್, 32 ಪಿಎಸ್‌ಐ, 111 ಎಎಸ್‌ಐ ಹಾಗೂ 430 ಕಾನ್ಸಟೇಬಲ್‌ಗಳು ಸೇರಿದಂತೆ ನೂರಾರು ಸಿಬ್ಬಂದಿಯನ್ನು ಮೈದಾನದ ಸುತ್ತಮುತ್ತ ಟ್ರಾಫಿಕ್ ಕಂಟ್ರೋಲ್‌ಗೆ ನೇಮಕ ಮಾಡಲಾಗಿದೆ. ಪ್ರತಿ ಗೇಟ್‌ನಲ್ಲೂ ಪೊಲೀಸ್ ಅಧಿಕಾರಿಗಳು ತಪಾಸಣೆ ನಡೆಸುತ್ತಾರೆ. ಅನುಮಾನ ಬಂದರೆ ಅಂತಹ ವ್ಯಕ್ತಿಗಳನ್ನು ವಶಪಡೆಯಲಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**ಯಾವೆಲ್ಲ ವಸ್ತುಗಳಿಗೆ ನಿಷೇಧ?:** ಸಿಗರೇಟ್, ಬೆಂಕಿಪೊಟ್ಟಣ, ಕಪ್ಪು ಕರ ವಸ್ತುಗಳು, ಚೂಪಾದ ವಸ್ತುಗಳು, ಕ್ಯಾಮರಾಗಳಿಗೆ ಅವಕಾಶ ಇಲ್ಲ. ಮೈದಾನದ ಒಳಗೆ ಬಿಡುವ ಮುನ್ನ ಎಲ್ಲವನ್ನೂ ಪರಿಶೀಲನೆ ಮಾಡಲಾಗುತ್ತದೆ ಎಂದು ದಯಾನಂದ ಹೇಳಿದರು.

# ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ ಜಾರ್ಜ್ ವರ್ಕರ್

ನ್ಯೂಝಿಲೆಂಡ್ ಆಟಗಾರ ಜಾರ್ಜ್ ವರ್ಕರ್ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಅದು ಸಹ ತಮ್ಮ 34ನೇ ವಯಸ್ಸಿನಲ್ಲಿ ಎಂಬುದು ವಿಶೇಷ. ಕಿವೀಸ್ ಪರ 2015 ರಲ್ಲಿ ಪಾದಾರ್ಪಣೆ ಮಾಡಿದ್ದ ವರ್ಕರ್ ಇದೀಗ ಹೊಸ ಇನಿಂಗ್ಸ್ ಆರಂಭಿಸಲು ಕ್ರಿಕೆಟ್ ಬದುಕಿಗೆ ವಿದಾಯ ಹೇಳಿದ್ದಾರೆ.

ವೃತ್ತಿಪರ ಕ್ರಿಕೆಟ್‌ನಲ್ಲಿ 17 ವರ್ಷಗಳ ಪೂರ್ಣ ಪ್ರಯಾಣದ ನಂತರ, ನಾನು ಈ ಕ್ರೀಡೆಯಿಂದ ನಿವೃತ್ತಿ ಘೋಷಿಸುತ್ತಿದ್ದೇನೆ. ಈ ನಿರ್ಧಾರವು ನನ್ನ ಜೀವನದ ನಂಬಲಾಗದ ಅಧ್ಯಾಯದ ಅಂತ್ಯವನ್ನು ಮತ್ತು ಹೊಸ ಸಾಹಸದ ಆರಂಭವನ್ನು ಸೂಚಿಸುತ್ತದೆ ಎಂದು ವರ್ಕರ್ ತಿಳಿಸಿದ್ದಾರೆ. ಈ ಮೂಲಕ ಸುದೀರ್ಘಾವಧಿಯ ಕ್ರಿಕೆಟ್ ಬದುಕಿಗೆ ಗುಡ್ ಬೈ ಹೇಳಲು ನ್ಯೂಝಿಲೆಂಡ್‌ನ ಎಡಗೈ ದಾಂಡಿಗ ನಿರ್ಧರಿಸಿದ್ದಾರೆ.

ಜಾರ್ಜ್ ವರ್ಕರ್ ನ್ಯೂಝಿಲೆಂಡ್ ಪರ 10 ಏಕದಿನ ಪಂದ್ಯಗಳಲ್ಲಿ ಕಣಕ್ಕಿಳಿದಿದ್ದರು. ಈ ವೇಳೆ ಮೂರು ಅರ್ಧಶತಕಗಳೊಂದಿಗೆ ಒಟ್ಟು 272 ರನ್ ಕಲೆಹಾಕಿದ್ದಾರೆ. ಇನ್ನು 2 ಟಿ20 ಪಂದ್ಯಗಳನ್ನಾಡಿರುವ ವರ್ಕರ್ 1 ಅರ್ಧಶತಕದೊಂದಿಗೆ 90 ರನ್ ಬಾರಿಸಿದ್ದಾರೆ.



ಇದಾಗ್ಯೂ ಅವರಿಗೆ ನ್ಯೂಝಿಲೆಂಡ್ ತಂಡದಲ್ಲಿ ಖಾಯಂ ಸ್ಥಾನ ಲಭಿಸಿರಲಿಲ್ಲ.

ಅದಾಗ್ಯೂ ನ್ಯೂಝಿಲೆಂಡ್‌ನ ಫಸ್ಟ್ ಕ್ಲಾಸ್ ಕ್ರಿಕೆಟ್‌ನಲ್ಲಿ ಮುಂದುವರೆದಿದ್ದ ಜಾರ್ಜ್ ವರ್ಕರ್ 169 ಪಂದ್ಯಗಳಲ್ಲಿ 43.64 ಸರಾಸರಿಯಲ್ಲಿ 6721 ರನ್ ಕಲೆಹಾಕಿದ್ದರು. ಈ ವೇಳೆ 18 ಶತಕಗಳು ಮತ್ತು 37 ಅರ್ಧಶತಕಗಳನ್ನು ಬಾರಿಸಿದ್ದಾರೆ.

ಹಾಗೆಯೇ 154 ಟಿ20 ಪಂದ್ಯಗಳನ್ನಾಡಿರುವ ಜಾರ್ಜ್ ವರ್ಕರ್, 123.57 ಸ್ಟ್ರೈಕ್ ರೇಟ್‌ನಲ್ಲಿ ಬ್ಯಾಟ್ ಬೀಸಿ 3480 ರನ್ ಬಾರಿಸಿದ್ದಾರೆ. ಈ ವೇಳೆ ಒಂದು ಶತಕ ಮತ್ತು 18 ಅರ್ಧ ಶತಕಗಳನ್ನು ಸಿಡಿಸಿದ್ದರು. ಇದರ ಜೊತೆಗೆ 34 ವರ್ಷದ ವರ್ಕರ್ ಅವರು ತಮ್ಮ ಆಟದ ವೃತ್ತಿಜೀವನದಲ್ಲಿ 58 ಪ್ರಥಮ ದರ್ಜೆ, 60 ಲಿಸ್ಟ್ ಎ ಮತ್ತು 42 ಟಿ20 ವಿಕೆಟ್ ಗಳನ್ನು ಸಹ ಪಡೆದಿದ್ದಾರೆ.

ಅಂದರೆ ನ್ಯೂಝಿಲೆಂಡ್ ದೇಶೀಯ ಕ್ರಿಕೆಟ್‌ನಲ್ಲಿ ಆಲ್‌ರೌಂಡರ್ ಆಗಿ ಗಮನ ಸೆಳೆದಿದ್ದ ಜಾರ್ಜ್ ವರ್ಕರ್‌ಗೆ ರಾಷ್ಟ್ರೀಯ ತಂಡದಲ್ಲಿ ಹೆಚ್ಚಿನ ಅವಕಾಶ ಸಿಕ್ಕಿರಲಿಲ್ಲ. ಇದೀಗ 34 ವರ್ಷದ ವರ್ಕರ್ ಹೂಡಿಕೆ ಸಂಸ್ಥೆಯೊಂದರಲ್ಲಿ ಕೆಲಸ ಗಿಟ್ಟಿಸಿಕೊಂಡಿದ್ದು, ಹೀಗಾಗಿ ಕ್ರಿಕೆಟ್ ವೃತ್ತಿಜೀವನಕ್ಕೆ ವಿದಾಯ ಹೇಳಲು ನಿರ್ಧರಿಸಿದ್ದಾರೆ.

# ಮುಡಾ ಹಗರಣ: ಸಿಎಂ ವಿರುದ್ಧ ರಾಜ್ಯಪಾಲರಿಗೆ ಮತ್ತೊಂದು ದೂರು

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾದಲ್ಲಿ ನಡೆದಿದೆ ಎನ್ನಲಾದ ಹಗರಣಕ್ಕೆ ಸಂಬಂಧಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಮತ್ತೊಂದು ದೂರು ಸಲ್ಲಿಕೆಯಾಗಿದೆ. ಸಾಮಾಜಿಕ ಕಾರ್ಯಕರ್ತ ಸ್ನೇಹಮಹಿ ಕೃಷ್ಣ ಎಂಬವರು ದೂರು ಸಲ್ಲಿಕೆ ಮಾಡಿದ್ದು, ರಾಜ್ಯಪಾಲರ ಹೆಸರಿನಲ್ಲಿ ಅಕ್ರಮ ಪರಿತ್ಯಾಜನ ಪತ್ರ ನೋಂದಣಿ ಮಾಡಿಕೊಳ್ಳಲಾಗಿದೆ ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಪ್ರಥಮ ದರ್ಜೆ ಸಹಾಯಕ ಕೆಸಿ ಉಮೇಶ್ ಎಂಬವರು ಪರಿತ್ಯಾಜನ ಪತ್ರ ನೋಂದಣಿ ಮಾಡಿಸಿಕೊಂಡಿದ್ದಾರೆ. ಕೆಸರೆ ಗ್ರಾಮದ ಸರ್ವೆ ನಂ. 464ರ 3.16 ಎಕರೆ ಜಮೀನು ಸಂಬಂಧ ಪರಿತ್ಯಾಜನ ಪತ್ರ ನೋಂದಣಿ ಮಾಡಲಾಗಿದೆ. 25-11-2021ರಲ್ಲಿ ಅಕ್ರಮವಾಗಿ ನಿಮ್ಮ ಹೆಸರಿನಲ್ಲಿ ಪರಿತ್ಯಾಜನ ಪತ್ರ ನೋಂದಣಿಯಾಗಿದೆ. ಪಾರ್ವತಿಯವರು ನಿಮ್ಮ ಹೆಸರಿನಲ್ಲಿ ಪರಿತ್ಯಾಜನ ಪತ್ರ ಮಾಡಿಕೊಟ್ಟಿದ್ದಾರೆ. ಕೂಡಲೇ ಉಮೇಶ್ ಮತ್ತು ಇತರೆ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕೆಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.



ಸದ್ಯ ಸ್ನೇಹಮಹಿ ಕೃಷ್ಣ ನೀಡಿರುವ ದೂರನ್ನು ರಾಜ್ಯಪಾಲರ ಕಚೇರಿ ಸ್ವೀಕರಿಸಿದೆ. ರಾಜ್ಯಪಾಲರ ಮುಂದಿನ ನಡೆ ಏನೆಂಬ ಬಗ್ಗೆ ಕುತೂಹಲ ಮೂಡಿದೆ.

ಸ್ನೇಹಮಹಿ ಕೃಷ್ಣ ಈಗಾಗಲೇ ಸಿದ್ದರಾಮಯ್ಯ ವಿರುದ್ಧ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಖಾಸಗಿ ದೂರು ಸಲ್ಲಿಸಿದ್ದು ಸಾಲು ಸಾಲು ಆರೋಪ ಮಾಡಿದ್ದಾರೆ. ಖಾಸಗಿ ದೂರನ್ನು ವಿಚಾರಣೆಗೆ ಸ್ವೀಕರಿಸಬೇಕೇ ಎಂಬ ಬಗ್ಗೆ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಯಾಧೀಶ ಸಂತೋ? ಗಜಾನನ ಭಟ್ ಇನ್ನಷ್ಟೇ ಆದೇಶ ಪ್ರಕಟಿಸಬೇಕಿದೆ.

ಈ ಮಧ್ಯೆ, ಮೊದಲ ಬಾರಿ ಶಾಸಕರಾಗಿದ್ದಾಗಲೇ ಸಿದ್ದರಾಮಯ್ಯ ಮುಡಾದಿಂದ ಬದಲಿ ನಿವೇಶನ ಪಡೆದಿದ್ದರು ಎಂಬ ಆರೋಪ ಕೇಳಿ ಬಂದಿದೆ. ಮೊದಲ ಬಾರಿ ಶಾಸಕರಾಗಿದ್ದಾಗಲೇ ಸಿಎಂ ಸಿದ್ದರಾಮಯ್ಯ ಬದಲಿ ನಿವೇಶನ ಪಡೆದಿದ್ದರು. ಅದಕ್ಕಾಗಿ ಮನವಿ ಮಾಡಿದ್ದರು ಎನ್ನಲಾದ ಪತ್ರವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com